ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 1 ಗುರುವಾರ 2024

₹4

ಸಂಪುಟ: 45 | ಸಂಚಿಕೆ: 107 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೈಸೂರು ಮಿತ್ರ

ರಾಜ್ಯದ ಜನತೆ ಪ್ರಶ್ನಿಸಬೇಕಿರುವುದು ದಲಿತ ವಿರೋಧಿ ಕೇಂದ್ರವನ್ನ; ದಲಿತ ಪರ ರಾಜ್ಯ ಸರ್ಕಾರವನ್ನಲ್ಲ

● ನಿರ್ಮಲಾ ಸೀತಾರಾಮನ್ ಹೇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎದಿರೇಟು ● ದಲಿತರ ಬಗ್ಗೆ ಅಷ್ಟು ಕಾಳಜಿ ಇದ್ದರೆ ಶೇ.25ರಷ್ಟು ಅನುದಾನ ಆ ಸಮುದಾಯಕ್ಕೆ ಮೀಸಲಿರಿಸಲು ಸವಾಲು



ಬೆಂಗಳೂರು, ಜು.31(ಕೆಎಂಶಿ)– ರಾಜ್ಯದ ಜನತೆ ಪ್ರಶ್ನಿಸಬೇಕಿರುವುದು ದಲಿತ ವಿರೋಧಿ ಕೇಂದ್ರ ಸರ್ಕಾರವನ್ನು, ದಲಿತ ಪರ ರಾಜ್ಯ ಸರ್ಕಾರವನ್ನು ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಎಸ್‌ಸಿ/ಎಸ್‌ಟಿ ಕಲ್ಯಾಣದ ಬಗ್ಗೆ ಕರ್ನಾಟಕ ಸರ್ಕಾರವನ್ನು ಪ್ರಶ್ನಿಸಲು ಕರೆ ಕೊಟ್ಟಿದ್ದಾರೆ. ದಲಿತರ ಬಗ್ಗೆ ಅಷ್ಟೊಂದು ಕಾಳಜಿ ಇದ್ದರೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯನ್ನು ಜಾರಿಗೆ ತಂದು ಕೇಂದ್ರ ಬಜೆಟ್‌ನಲ್ಲಿ ದಲಿತರ ಜನ ಸಂಖ್ಯೆಗೆ ಅನುಗುಣವಾಗಿ ಶೇಕಡಾ 25ರಷ್ಟು ಅನುದಾನ ಮೀಸಲಿಡಲಿ ಎಂದು ಸವಾಲು ಹಾಕಿದ್ದಾರೆ.

ನಮ್ಮ ಸರ್ಕಾರದ ಬಜೆಟ್‌ನಲ್ಲಿ 39,121 ಕೋಟಿ ರೂ.ಗಳನ್ನು ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಗೆ ಮೀಸಲಿಟ್ಟಿದೆ, ಕೇಂದ್ರದ ಬಜೆಟ್‌ನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ ನೀಡಿರುವ ಅನುದಾನ 2,90,401 ಕೋಟಿ ರೂ. ಮಾತ್ರ. ದೇಶದ ಶೇಕಡಾ 75ರಷ್ಟು ಮಂದಿಯನ್ನು ಉಪವಾಸ ಬೀಳಿಸಿ, ಶೇಕಡಾ 25 ಮಂದಿಗೆ ಹಲ್ವಾ ತಿನ್ನಿಸುತ್ತಿದ್ದೀರಿ. ಈ ದಲಿತ ವಿರೋಧಿ ನೀತಿ ಬಯಲಾಗುವ ಭಯದಿಂದಲೇ ಜಾತಿ ಗಣತಿ ವಿರೋಧಿಸುತ್ತಿರುವುದು. ರಾಜ್ಯದ ರೀತಿಯಲ್ಲಿಯೇ ಎಸ್‌ಸಿಎಸ್‌ಪಿ /ಟಿಎಸ್‌ಪಿ ಕಾಯ್ದೆಯನ್ನು ರಾಷ್ಟ್ರಮಟ್ಟದಲ್ಲಿ ಜಾರಿಗೆ ತರುವಂತೆ ಕಳೆದ ಹತ್ತು ವರ್ಷಗಳಿಂದ ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತಿದ್ದೇವೆ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ದಲಿತರಿಗೆ ಅನ್ಯಾಯ ಮಾಡುತ್ತಿದೆ ಎಂದು ಕಣ್ಣೀರು ಹಾಕುತ್ತಿರುವುದು ಹಾಸ್ಯದಂತೆ ಕಾಣುತ್ತಿದೆ.

ನಮ್ಮ ಸರ್ಕಾರ ನ್ಯಾ. ಹೆಚ್.ಎನ್. ನಾಗಮೋಹನ್ ದಾಸ್ ಸಮಿತಿ ಶಿಫಾರಸಿನ ಅನ್ವಯ ಪರಿಶಿಷ್ಟ ಜಾತಿ ಮೀಸಲಾತಿಯನ್ನು ಶೇಕಡಾ 15ರಿಂದ 17ಕ್ಕೆ ಮತ್ತು ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇಕಡಾ 3ರಿಂದ 7ಕ್ಕೆ ಹೆಚ್ಚಿಸಿದೆ.

ಎಸ್‌ಸಿ/ಎಸ್‌ಟಿ ಕುಟುಂಬಗಳಿಗೆ ಸರ್ಕಾರ ಮಂಜೂರು ಮಾಡಿದ ಜಮೀನುಗಳ ಅನಧಿಕೃತ ಪರಭಾರೆಯನ್ನು ತಡೆಯಲು ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಯಮಿಗಳಿಗೆ ಹಂಚಿಕೆಯಾಗುವ ಕೈಗಾರಿಕಾ ನಿವೇಶನಕ್ಕೆ ಶೇ.75 ರಷ್ಟು ಸಹಾಯಧನ ನೀಡಲಾಗುತ್ತಿದೆ. ಇದು ಕರ್ನಾಟಕದಲ್ಲಿ ಮಾತ್ರ ಎಂದು ಮುಖ್ಯಮಂತ್ರಿ ಸಮರ್ಥಿಸಿಕೊಂಡಿದ್ದಾರೆ.

ರಾಜ್ಯದಲ್ಲಿ ವಾಹನಗಳು, ವೈಮಾನಿಕ ಬಿಡಿ ಭಾಗ ತಯಾರಿಕಾ ಸನ್ಸೇರಾ ಕಂಪನಿ 2100 ಕೋಟಿ ಬಂಡವಾಳ ಹೂಡಿಕೆ

ಬೆಂಗಳೂರು, ಜು.31(ಕೆಎಂಶಿ)–



ಎಂ.ಬಿ. ಪಾಟೀಲ್

ವಾಹನಗಳ ಮತ್ತು ವೈಮಾನಿಕ ಬಿಡಿಭಾಗ ತಯಾರಿಸುವ ಸನ್ಸೇರಾ ಕಂಪನಿ ರಾಜ್ಯದಲ್ಲಿ 2,100 ಕೋಟಿ ರೂ. ಬಂಡವಾಳ ಹೂಡಲಿದೆ ಎಂದು ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಇಂದಿಲ್ಲಿ ತಿಳಿಸಿದ್ದಾರೆ.

ಬಂಡವಾಳ ಹೂಡಿಕೆ ಸಂಬಂಧದ ಒಡಂಬಡಿಕೆಗೆ ಸಹಿ ನಂತರ ಮಾತನಾಡಿದ ಸಚಿವರು, ಸನ್ಸೇರಾ ಎಂಜಿನಿಯರಿಂಗ್ ಸಂಸ್ಥೆ ಮುಂದಿನ ಐದು ವರ್ಷಗಳಲ್ಲಿ ಹಂತ ಹಂತವಾಗಿ ಈ ಹೂಡಿಕೆ ಮಾಡಲಿದೆ. ಇದರಿಂದ 3,500 ಉದ್ಯೋಗಗಳು ಸೃಷ್ಟಿ ಆಗಲಿವೆ ಎಂದರು.


ರಾಮನಗರ ಜಿಲ್ಲೆ ಹಾರೋಹಳ್ಳಿಯಲ್ಲಿ 55 ಎಕರೆ ಪ್ರದೇಶದಲ್ಲಿ ಕಂಪನಿ ಉತ್ಪಾದನಾ ಘಟಕ ಆರಂಭಿಸಲಿದೆ. ಇದರಿಂದ ರಾಜ್ಯದ ರಫ್ತು ವಹಿವಾಟಿಗೂ ಅನುಕೂಲ ಆಗಲಿದೆ.

ಕೈಗಾರಿಕಾ ಪ್ರದೇಶದಲ್ಲಿ ತರಬೇತಿ ಕೇಂದ್ರ ಆರಂಭಿಸಲಿದ್ದು, ಸ್ಥಳೀಯರ ಕೌಶಲ ವೃದ್ಧಿಯಾಗಲಿದೆ, ದೇಶದಲ್ಲಿ ಕಂಪನಿ 16 ತಯಾರಿಕಾ ಘಟಕಗಳಿದ್ದು, ಅವುಗಳಲ್ಲಿ 12 ಘಟಕಗಳು ರಾಜ್ಯದಲ್ಲೇ ಇವೆ ಎಂದರು. ಎಲಿವೇಟರ್ ತಯಾರಿಸುವ ಓಟಿಸ್ ಕಂಪನಿ ಸಹಾ ರಾಜ್ಯದಲ್ಲಿ 135 ಕೋಟಿ ರೂ. ಹೂಡಲು ಒಲವು ವ್ಯಕ್ತಪಡಿಸಿದೆ, ಕಂಪನಿಯು ಹಾರೋಹಳ್ಳಿಯಲ್ಲಿ 12 ಎಕರೆ ಭೂಮಿ ಕೇಳಿದ್ದು, ಒದಗಿಸಲಾಗುವುದು. ಇದರಿಂದ 200ಕ್ಕೂ ಹೆಚ್ಚು ಉದ್ಯೋಗ ಸೃಷ್ಟಿ ಆಗಲಿದೆ ಎಂದರು.

ಆ.3, 4ರಂದು ರಾಗ ಮ್ಯೂಸಿಕ್ ಅಕಾಡೆಮಿಯಿಂದ ಗಾಯನ ಕಾರ್ಯಕ್ರಮ



ಅರ್ಚನಾ ರಾವ್



ಅದಿತಿ ಕೃಷ್ಣಪ್ರಕಾಶ್



ಬಿ.ರವಿಶಂಕರ್



ನಾರಾಯಣಮೂರ್ತಿ




ವೀಣಾ



ಆರ್.ಕುಮರೇಶ್



ಜಯಚಂದ್ರರಾವ್



ತ್ರಿಚಿ ಕೃಷ್ಣಸ್ವಾಮಿ

ಮೈಸೂರು, ಜು. 31– ಮೈಸೂರಿನ ರಾಗ ಮ್ಯೂಸಿಕ್ ಅಕಾಡೆಮಿಯ 10ನೇ ವಾರ್ಷಿಕೋತ್ಸವದ ಅಂಗವಾಗಿ ಆ.3 ಮತ್ತು 4ರಂದು ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಮೈಸೂರು ವಾಸುದೇವಾಚಾರ್ಯ ಭವನ, ಶ್ರೀ ನಾದಬ್ರಹ್ಮ ಸಂಗೀತ ಸಭಾದಲ್ಲಿ 99ನೇ ಗಾಯನ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಆ.3ರಂದು ಸಂಜೆ 5.30ಕ್ಕೆ ವಿದುಷಿ ಅರ್ಚನ ಎಲ್.ರಾವ್ (ಕೋವಿಲಡಿ ಅರ್ಚನಾ) ಅವರಿಂದ ಗಾಯನವಿದೆ. ಪಕ್ಕವಾದ್ಯದಲ್ಲಿ ವಿದುಷಿ ಅದಿತಿ ಕೃಷ್ಣ ಪ್ರಕಾಶ್–ವಯೋಲಿನ್, ವಿದ್ವಾನ್ ತುಮಕೂರು ಬಿ.ರವಿಶಂಕರ್– ಮೃದಂಗ, ವಿದ್ವಾನ್ ಎಸ್. ನಾರಾಯಣಮೂರ್ತಿ –ಘಟಂನಲ್ಲಿ ಸಹಕಾರ ನೀಡಲಿದ್ದಾರೆ.

ಆ.4ರಂದು ಸಂಜೆ 5.30ಕ್ಕೆ ವಿದುಷಿ ಜಯಂತಿ ಕುಮರೇಶ್ ವೀಣಾ, ವಿದ್ವಾನ್ ಆರ್.ಕುಮರೇಶ್ ವಯೋಲಿನ್ ಅವರಿಂದ ದ್ವಂದ್ವ ವೀಣಾ–ವಯೋಲಿನ್ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪಕ್ಕವಾದ್ಯದಲ್ಲಿ ವಿದ್ವಾನ್ ಕೆ.ಯು. ಜಯಚಂದ್ರ ರಾವ್–ಮೃದಂಗ, ವಿದ್ವಾನ್ ತ್ರಿಚಿ ಕೃಷ್ಣಸ್ವಾಮಿ–ಘಟಂನಲ್ಲಿ ಸಹಕಾರ ನೀಡಲಿದ್ದಾರೆ.

ನಿಧನ

ಅನುಸೂಯಮ್ಮ



ಮೈಸೂರು, ಜು. 31– ಮೈಸೂರಿನ ಯಾದವಗಿರಿ ನಿವಾಸಿ ಹಾಗೂ ನಿವೃತ್ತ ಡಿಸ್ಟ್ರಿಕ್ಟ್ ಸರ್ಜನ್ ದಿವಂಗತ ಡಾ.ಬಿ.ಕೆ.ಜಯರಾಜ್ ಅವರ ಪತ್ನಿ ಅನುಸೂಯಮ್ಮ (85) ಬುಧವಾರ ಬೆಳಗ್ಗೆ ನಿಧನರಾದರು. ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬನ್ನಿಮಂಟಪದ ಜೋಡಿ ತೆಂಗಿನಮರ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಂಜಮ್ಮ



ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ಸಂಘದ ಅಧ್ಯಕ್ಷ ವಾಸುದೇವ ಅವರ ತಾಯಿ ನಂಜಮ್ಮ ಜು.29ರಂದು ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮರಾಜನಗರ ಜಿಲ್ಲೆಯ ಮಸಣಾಪುರ ಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಆ.3ರಂದು ಅಹಿಂದ ಸಂಘಟನೆಗಳಿಂದ ಮೈಸೂರು ಬಿಜೆಪಿ ಕಚೇರಿಗೆ ಮುತ್ತಿಗೆ

ಮೈಸೂರು, ಜು.31(ಬಿಎಲ್‌ಯು)– ಮುಡಾ ಹಾಗೂ ವಾಲ್ಮೀಕಿ ನಿಗಮ ಹಗರಣ ವಿರೋಧಿಸಿ ಬಿಜೆಪಿ ಹಾಗೂ ಜೆಡಿಎಸ್ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ನಡೆಸಲು ಉದ್ದೇಶಿರುವುದಕ್ಕೆ ಪ್ರತ್ಯುತ್ತರವಾಗಿ ಅಹಿಂದ ಸಂಘಟನೆಗಳು ಆ.3ರಂದು ಮೈಸೂರಿನ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಉದ್ದೇಶಿಸಿವೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ಅಹಿಂದ ಸಂಘಟನೆಗಳ ಮುಖಂಡರ ಸಭೆಯಲ್ಲಿ ಈ ಸಂಬಂಧ ತೀರ್ಮಾನ ಮಾಡಲಾಯಿತು. ಬಿಜೆಪಿ ಹಾಗೂ ಜೆಡಿಎಸ್ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಆರಂಭಿಸಲು ಉದ್ದೇಶಿಸಿರುವ ಆಗಸ್ಟ್ 3ರಂದು ನಗರದ ಚಾಮರಾಜಪುರಂನಲ್ಲಿರುವ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಶಿವರಾಮು ಹೇಳಿದರು.



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಬುಧವಾರ ನಡೆದ ಅಹಿಂದ ಸಂಘಟನೆಗಳ ಮುಖಂಡರ ಸಭೆಯಲ್ಲಿ ಆಗಸ್ಟ್ 3ರಂದು ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ತೀರ್ಮಾನಿಸಲಾಯಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವುದೇ ತಪ್ಪು ಮಾಡದಿದ್ದರೂ ಆಧಾರರಹಿತ ಆರೋಪ ಮಾಡುತ್ತಾ ಹಗರಣದಲ್ಲಿ ಸಿಲುಕಿಸಲು ಬಿಜೆಪಿ ಕುತಂತ್ರ ಮಾಡುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ರಾಜ್ಯ ನಾಯಕರಿಗೆ ಈ ಸಂಬಂಧ ಸುಫಾರಿ ನೀಡಿದ್ದಾರೆ ಎಂದು ಆರೋಪಿಸಿದರು.

ಸಿದ್ದರಾಮಯ್ಯ ಜಾತಿ ಗಣತಿ ವರದಿ ಸ್ವೀಕರಿಸಿರುವ ಕಾರಣ ಅದನ್ನು ಜಾರಿಗೊಳಿಸದಂತೆ ಹಗರಣದಲ್ಲಿ ಸಿಲುಕಿಸುವುದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಮತ್ತೊಂದು ಷಡ್ಯಂತ್ರ ಎಂದು ಸಭೆಯಲ್ಲಿ ಭಾಗವಹಿಸಿದ್ದವರು ಆಪಾದಿಸಿದರು.

ಈ ಹಿನ್ನೆಲೆಯಲ್ಲಿ ಅಹಿಂದ ವರ್ಗದ ನಾಯಕರಾಗಿರುವ ಸಿದ್ದರಾಮಯ್ಯ ಅವರ ಬೆನ್ನೆಲುಬಾಗಿ ನಿಲ್ಲಲು ಅಂದು ಸಾವಿರಾರು ಸಂಖ್ಯೆಯಲ್ಲಿ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಿ ತಮ್ಮ ಪ್ರತಿರೋಧವನ್ನು ವ್ಯಕ್ತಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಅಹಿಂದ ಒಕ್ಕೂಟದ ರಾಜ್ಯ ಉಪಾಧ್ಯಕ್ಷ ಶಿವಣ್ಣ, ಮೈಸೂರು ಜಿಲ್ಲಾಧ್ಯಕ್ಷ ಸ್ವಾಮಿಗೌಡ, ಜಿಲ್ಲಾ ಉಪ್ಪಾರ ಸಂಘದ ಅಧ್ಯಕ್ಷ ಯೋಗೇಶ್ ಉಪ್ಪಾರ್, ಜಿಲ್ಲಾ ಕುಂಬಾರ ಸಂಘದ ಅಧ್ಯಕ್ಷ ಹೆಚ್.ಎಸ್.ಪ್ರಕಾಶ್, ದಸಂಸ ಸಂಚಾಲಕ ಮಣಿಯಯ್ಯ ಸೇರಿದಂತೆ ಇತರರು ಸಭೆಯಲ್ಲಿ ಭಾಗವಹಿಸಿದ್ದರು.

ಶೇ.50 ರಿಯಾಯಿತಿ ದರಗಳಲ್ಲಿ ಕನ್ನಡ ಪುಸ್ತಕ ಮಾರಾಟ

ಮೈಸೂರು, ಜು.31– ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಗಸ್ಟ್ ತಿಂಗಳ ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುತ್ತಿದೆ. ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ, ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಕನ್ನಡ ಪುಸ್ತಕ ಪ್ರಾಧಿಕಾರದ https://kpp.karnataka.gov.in ವೆಬ್‌ಸೈಟ್‌ನಲ್ಲಿಯೂ ಶೇ.50 ರಿಯಾಯಿತಿಯಲ್ಲಿ ಲಭ್ಯವಿದ್ದು, ಆಸಕ್ತರು ಪುಸ್ತಕವನ್ನು ಖರೀದಿ ಮಾಡಬಹುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ. ಕಿರಣ್ ಸಿಂಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೀವ, ವೈದ್ಯಕೀಯ ವಿಮೆ ಮೇಲಿನ ಜಿಎಸ್‌ಟಿ ತೆಗೆದು ಹಾಕಿ

ನಿರ್ಮಲಾ ಸೀತಾರಾಮನ್‌ಗೆ ನಿತಿನ್ ಗಡ್ಕರಿ ಪತ್ರ

ನವದೆಹಲಿ,ಜು.31–ಜೀವ ಮತ್ತು ವೈದ್ಯಕೀಯ ವಿಮೆ ಪ್ರೀಮಿಯಂ ಮೇಲಿನ ಶೇ.18ರಷ್ಟು ಜಿಎಸ್‌ಟಿಯನ್ನು ತೆಗೆದುಹಾಕುವಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಮನವಿ ಮಾಡಿದ್ದಾರೆ.



ಈ ಸಂಬಂಧ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದಿರುವ ಗಡ್ಕರಿ, ವಿಮೆ ಉದ್ಯಮ ವಿಚಾರಕ್ಕೆ ಸಂಬಂಧಿಸಿದಂತೆ ನಾಗಪುರ ವಿಭಾಗೀಯದ ಜೀವ ವಿಮಾ ನಿಗಮ ನೌಕರರ ಒಕ್ಕೂಟ ಸಲ್ಲಿಸಿರುವ ಮನವಿ ಪತ್ರದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಜೀವ ವಿಮೆ ಮತ್ತು ವೈದ್ಯಕೀಯ ವಿಮಾ ಯೋಜನೆಗಳ ಪ್ರೀಮಿಯಂ ಮೇಲೆ ಜಿಎಸ್‌ಟಿ ಹೇರುವುದು ಜೀವನದ ಅನಿಶ್ಚಿತತೆಗಳ ಮೇಲೆ ತೆರಿಗೆ ವಿಧಿಸಿದಂತೆ ಆಗುತ್ತದೆ. ತನ್ನ ಕುಟುಂಬಕ್ಕೆ ಭದ್ರತೆ ಒದಗಿಸುವ ಸಲುವಾಗಿ ಜೀವನದ ಅನಿಶ್ಚಿತತೆಯ ಅಪಾಯದ ವಿರುದ್ಧ ವಿಮೆ ಮಾಡಿಸುವ ಪ್ರೀಮಿಯಂಗೆ ತೆರಿಗೆ ವಿಧಿಸಬಾರದು ಎಂದು ಒಕ್ಕೂಟ ಭಾವಿಸುತ್ತದೆ ಎಂದು ನಿತಿನ್ ಗಡ್ಕರಿ ಪತ್ರದಲ್ಲಿ ಹೇಳಿದ್ದಾರೆ.

ಜೀವ ವಿಮೆ ಮೂಲಕ ಉಳಿತಾಯದ ವಿಭಿನ್ನ ಚಿಕಿತ್ಸೆ, ಆರೋಗ್ಯ ವಿಮಾ ಕಂತುಗಳಿಗೆ ಆದಾಯ ತೆರಿಗೆ ವಿನಾಯಿತಿ ಮರು ಪರಿಚಯ ಮತ್ತು ಸಾರ್ವಜನಿಕ, ಪ್ರಾದೇಶಿಕ ಸಾಮಾನ್ಯ ವಿಮಾ ಕಂಪನಿಗಳ ಬಲವರ್ಧನೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಒಕ್ಕೂಟದ ಪತ್ರದಲ್ಲಿ ಪ್ರಸ್ತಾಪಿಸಿದೆ. ಇದೇ ರೀತಿ ವೈದ್ಯಕೀಯ ವಿಮಾ ಕಂತುಗಳ ಮೇಲಿನ ಶೇ.18ರಷ್ಟು ಜಿಎಸ್‌ಟಿಯು ಸಾಮಾಜಿಕವಾಗಿ ಅಗತ್ಯವಾಗಿರುವ ಈ ವಿಭಾಗದ ಬೆಳವಣಿಗೆಗೆ ಅಡ್ಡಿಯಾಗುತ್ತಿದೆ. ಇವೆಲ್ಲಾ ಕಾರಣದಿಂದ ಜೀವ ಮತ್ತು ವೈದ್ಯಕೀಯ ವಿಮಾ ಪ್ರೀಮಿಯಂ ಮೇಲಿನ ಜಿಎಸ್‌ಟಿ ಹಿಂಪಡೆಯುವ ಸಲಹೆಯನ್ನು ಆದ್ಯತೆಯ ಮೇರೆಗೆ ಪರಿಗಣಿಸಬೇಕೆಂದು ನಿತಿನ್ ಗಡ್ಕರಿ, ನಿರ್ಮಲಾ ಸೀತಾರಾಮನ್ ಬಳಿ ಮನವಿ ಮಾಡಿಕೊಂಡಿದ್ದಾರೆ.

ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉನ್ನತಶ್ರೇಣಿ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನೆ



ಬೋಗಾದಿ ಬಸವ ಬಳಗ ಸೇವಾ ಟ್ರಸ್ಟ್ ವತಿಯಿಂದ ಮೈಸೂರು ಬೋಗಾದಿಯ ಬಸವೇಶ್ವರ ಸಮುದಾಯ ಭವನದಲ್ಲಿ ನಡೆದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಉನ್ನತ ಶ್ರೇಣಿ ಪಡೆದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ, ನಗದು ಬಹುಮಾನ ನೀಡಿ ಅಭಿನಂದಿಸಲಾಯಿತು. ಮಾಜಿ ಶಾಸಕ ತೋಂಟದಾರ್ಯ, ಮೈಸೂರು ಜಿಲ್ಲಾ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಹಿನಕಲ್ ಬಸವರಾಜ್, ನಿಕಟಪೂರ್ವ ಅಧ್ಯಕ್ಷ ಕಾನ್ಯ ಶಿವಮೂರ್ತಿ, ಬೋಗಾದಿ ಬಸವ ಬಳಗ ಸೇವಾ ಟ್ರಸ್ಟ್ ಅಧ್ಯಕ್ಷ ಬಸವರಾಜು, ಕಾರ್ಯದರ್ಶಿ ಬಸವರಾಜು, ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕ ವಚನ ಕುಮಾರಸ್ವಾಮಿ ಕೇಂದ್ರೀಯ ಸಂಚಾಲಕ ವಿ.ಲಿಂಗಣ್ಣ, ಪದಾಧಿಕಾರಿಗಳಾದ ಸೋಮಣ್ಣ, ನಂದೀಶ್, ಪ್ರತಿಧ್ವನಿ ಪ್ರಸಾದ್, ಮೂಗೂರು ನಟರಾಜು ಇನ್ನಿತರರು ಉಪಸ್ಥಿತರಿದ್ದರು.



ಕರಾಟೆಯಲ್ಲಿ ತೃತೀಯ ಸ್ಥಾನ

ದಕ್ಷಿಣ ಭಾರತ ಮಟ್ಟದ ಮುಕ್ತ ಕರಾಟೆ ಪಂದ್ಯಾವಳಿ 2024 ಇತ್ತೀಚೆಗೆ ಮಂಡ್ಯದಲ್ಲಿ ನಡೆಯಿತು. ಇದರಲ್ಲಿ ಶಾರದಾವಿಲಾಸ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿ ಅರುಣ್ ಕುಮಾರ್ ಕಥಾ ವಿಭಾಗದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಈತ ತಿ.ನರಸೀಪುರ ತಾಲೂಕು, ಟಿ.ದೊಡ್ಡಪುರದ ಮಹಾದೇವ ಹಾಗೂ ನಾಗರತ್ನ ದಂಪತಿ ಪುತ್ರ. ಶಿಕ್ಷಕರಾದ ಸಂದೇಶ್, ಡ್ಯಾನಿಯಲ್ (ಮೋಹನ್) ಅವರಲ್ಲಿ ತರಬೇತಿ ಪಡೆಯುತ್ತಿದ್ದಾರೆ.

ಭಾವಸಾರ ಕ್ಷತ್ರಿಯ ಯುವಕ ಸಂಘದಿಂದ ಚಾಮುಂಡೇಶ್ವರಿ ಪೂಜಾ ಮಹೋತ್ಸವ

ಮೈಸೂರು, ಜು. 31– ಮೈಸೂರಿನ ಕಲ್ಯಾಣಗಿರಿ ನಾಲ್ಕನೇ ಹಂತದಲ್ಲಿರುವ ಭಾವಸಾರ ಕ್ಷತ್ರಿಯ ಯುವಕರ ಸಂಘದಿಂದ 24ನೇ ವರ್ಷದ ಶ್ರೀ ಚಾಮುಂಡೇಶ್ವರಿ ಅಮ್ಮನವರ ಪೂಜಾ ಮಹೋತ್ಸವ ಅದ್ದೂರಿಯಾಗಿ ಜರುಗಿತು.

ತುಂತುರು ಮಳೆಯ ನಡುವೆ ಸಮುದಾಯದ ಮುಖಂಡರು, ಯುವಕರು ಮತ್ತು ಮಹಿಳೆಯರು ರಾಘವೇಂದ್ರ ನಗರದಲ್ಲಿರುವ ಮಾರಮ್ಮನ ದೇವಾಲಯಕ್ಕೆ ತೆರಳಿ ವಾದ್ಯಗೋಷ್ಠಿ ಸಮೇತ ಮೆರವಣಿಗೆ ಮೂಲಕ ದೇವಿಯ ಮೂರ್ತಿ ಉತ್ಸವ ನಡೆಸಿದರು.



ಮೈಸೂರಿನ ಭಾವಸಾರ ಕ್ಷತ್ರಿಯ ಯುವಕರ ಸಂಘದಿಂದ ಚಾಮುಂಡೇಶ್ವರಿ ಅಮ್ಮನವರ ಪೂಜಾ ಮಹೋತ್ಸವ ಅದ್ದೂರಿಯಾಗಿ ಜರುಗಿತು.

ಈ ವೇಳೆ ಸಂಘದ ಅಧ್ಯಕ್ಷ ಮಂಜುನಾಥ್ ಲಾಲೆ ಮಾತನಾಡಿ, ಕಳೆದ 24 ವರ್ಷದಿಂದ ನಾವು ಚಾಮುಂಡೇಶ್ವರಿ ಉತ್ಸವವನ್ನು ನಡೆಸುತ್ತಿದ್ದೇವೆ. ಮೈಸೂರಿನಲ್ಲಿರುವ ಭಾವಸಾರ ಕ್ಷತ್ರಿಯ ಸಮುದಾಯದ ಎಲ್ಲ ಮುಖಂಡರು ಮತ್ತು ಮಹಿಳೆಯರು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ. ಮೊದಲ ದಿನ ದೇವಿಯ ಪ್ರತಿಷ್ಠಾಪನೆ, ಎರಡನೇ ದಿನ ಮಕ್ಕಳಿಗೆ ರಂಗೋಲಿ ಸ್ಪರ್ಧೆ, ಸಾಂಸ್ಕೃತಿಕ ಕಾರ್ಯಕ್ರಮ, ಫ್ಯಾಷನ್ ಶೋ ಸೇರಿದಂತೆ ವಿವಿಧ ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಿ ಮಕ್ಕಳಿಗೆ ಬಹುಮಾನ ನೀಡಲಾಗುವುದು. ಮೂರನೇ ದಿನ ಮಧ್ಯಾಹ್ನ ಮಹಾ ಮಂಗಳಾರತಿ ಬಳಿಕ ಅನ್ನಸಂತರ್ಪಣೆ ನಡೆಸಲಾಗುವುದು. ಬಳಿಕ, ಪ್ರತಿಷ್ಠಾಪಿಸಿದ ಮೂರ್ತಿಗಳನ್ನು ಶ್ರೀರಂಗಪಟ್ಟಣ ಬಳಿ ಕಾವೇರಿ ನದಿಯಲ್ಲಿ ವಿಸರ್ಜಿಸಲಾಗುವುದು ಎಂದರು.

ಸಂಘದ ಗೌರವ ಕಾರ್ಯಾಧ್ಯಕ್ಷ ಗಣೇಶ್ ನಾಝುರೆ, ಉಪಾಧ್ಯಕ್ಷ ರಾಘು ಕೆ.ಖಾಟೋಕರ್, ಗೌರವ ಕಾರ್ಯದರ್ಶಿ ರಾಕೇಶ್ ಹಲಾಲೆ, ಖಜಾಂಚಿ ಗಣೇಶ್ ಲಾಲೆ, ನಿರ್ದೇಶಕರಾದ ಕಿಶೋರಿ ಕುತ್ನೀಕರ್, ಸುಬ್ರಮಣಿ ಹಲಾಲೆ, ಚಂದ್ರಶೇಖರ್ ಮಹೇಂದ್ರಕರ್, ಪ್ರದೀಪ ವಾಳೋದೆ, ಮಂಜುನಾಥ್ ಕಾಂಗೋಕರ್, ರಾಜೇಶ್ ಇಜಾಫ್ಷರ್, ಸಂಜಯ್ ರಾಂಪೋರೆ, ಕಿರಣ್ ವೊಸಳೆ, ಲೋಕೇಶ್ ಸಿಂತ್ರೆ, ಭಾವಸಾರ ಕ್ಷತ್ರಿಯ ಮಹಿಳಾ ಸಂಘದ ಅಧ್ಯಕ್ಷರಾದ ಚೇತನ ಸಿಂತ್ರೆ, ಗೌರವ ಕಾರ್ಯದರ್ಶಿ ಶೃತಿ ಕೆ.ಹಲಾಲೆ, ಖಜಾಂಚಿ ಪೂಜಾ ಆರ್.ಕಾಂಗೋಕರ್, ಸಂಚಾಲಕರಾದ ಲಕ್ಷ್ಮಿ ಎಸ್.ಜಿ.ಬಾಟೋಕರ್, ನಿರ್ದೇಶಕರಾದ ಲಕ್ಷ್ಮಿ ಇಜಾಫರ್, ಸೋನಿ ನಾಝುರೆ, ಶೋಭಾ ಹಲಾಲೆ, ದಾಕ್ಷಾಯಿಣಿ ನಾಯಕ್, ರೇಣುಕ ಲಾಲೆ, ಆಶಾ ಬಿಕರೆ, ಭವಾನಿ ಲಾಲೆ, ಲತಾ ಇಜಾಫರ್, ಅರುಣಾ ಕುತ್ನೀಕರ್, ಪಲ್ಲವಿ ರಾಂಪೋರೆ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

1.08.2024 ಗುರುವಾರ, ಮಳೆ ನಕ್ಷತ್ರ: ಪುಷ್ಯ, 20.07.2024ರಿಂದ 02.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ದ್ವಾದಶಿ, ನಕ್ಷತ್ರ: ಮೃಗಶಿರ, ರಾಹುಕಾಲ: ಮಧ್ಯಾಹ್ನ 1.30ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 9ರಿಂದ ಕರ್ಕಾಟಕ ಚಿಕಿತ್ಸಾ (ಮಾನ್‌ಸೂನ್) ವರ್ಷ ಋತುವಿನ ಕಾಲದ ವಿಶೇಷ ಚಿಕಿತ್ಸಾ ಶಿಬಿರ, ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ.

■ **ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕೆಎಸ್‌ಆರ್‌ಟಿಸಿ ಗೆಳೆಯರ ಬಳಗ:** ಬೆಳಗ್ಗೆ 10ಕ್ಕೆ ಸಾರಿಗೆ ನೌಕರರ ರಾಜ್ಯಮಟ್ಟದ ಇಂಡೋರ್ ಶಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿ, ಉದ್ಘಾಟನೆ: ಶಾಸಕ ಜಿ.ಟಿ.ದೇವೇಗೌಡ, ಅಧ್ಯಕ್ಷತೆ: ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ, ಮುಖ್ಯ ಅತಿಥಿಗಳು: ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಬ್ಯಾಂಕ್ ನೌಕರರ ಬಡಾವಣೆ ಅಧ್ಯಕ್ಷ ಎನ್.ಎಸ್.ಸೋಮನಾಥ್, ಸಂಜೆ 4.30ಕ್ಕೆ ಬಹುಮಾನ ವಿತರಣೆ, ಸನ್ಮಾನ ಸಮಾರಂಭ, ಬಹುಮಾನ ವಿತರಣೆ: ಶಾಸಕ ಟಿ.ಎಸ್.ಶ್ರೀವತ್ಸ, ಸ್ಥಳ: ಸಮೃದ್ಧಿ ಸ್ಪೋರ್ಟ್ಸ್ ಅಕಾಡೆಮಿ ಒಳಾಂಗಣ ಕ್ರೀಡಾಂಗಣ, ಬ್ಯಾಂಕ್ ನೌಕರರ ಬಡಾವಣೆ, ಬೋಗಾದಿ.

■ **ಪ್ರೀತಿ ಕ್ಯಾನ್ಸರ್ ಸೆಂಟರ್ :** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಆಸ್ಪತ್ರೆ, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.


■ **ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ವಿದ್ಯಾವಿಕಾಸ ಇಂಜಿನಿಯರಿಂಗ್ ಕಾಲೇಜು:** ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯ ಪ್ರಯುಕ್ತ 'ವ್ಯಸನ ಮುಕ್ತ ದಿನಾಚರಣೆ', ಉದ್ಘಾಟನೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮುಖ್ಯ ಅತಿಥಿಗಳು: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಅಧ್ಯಕ್ಷತೆ: ಶಾಸಕ ಜಿ.ಟಿ.ದೇವೇಗೌಡ, ಉಪಸ್ಥಿತರು: ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರಧಾಮಗಳ ನಿಗಮದ ಅಧ್ಯಕ್ಷ ಸಿ.ಅನಿಲ್‌ಕುಮಾರ್ ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದ ಸುನಿಲ್ ಬೋಸ್, ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್‌ಗೌಡ, ಡಿ.ರವಿಶಂಕರ್, ಟಿ.ಎಸ್.ಶ್ರೀವತ್ಸ, ಜಿ.ಡಿ.ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ವಿಧಾನಪರಿಷತ್ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಡಾ.ಯತಿಂದ್ರ, ಮಧು ಜಿ.ಮಾದೇಗೌಡ ಹಾಗೂ ವಿವೇಕಾನಂದ, ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಮರಿಗೌಡ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ವಿದ್ಯಾವಿಕಾಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕವೀಶ್‌ಗೌಡ ವಿ. ಹಾಗೂ ಹಿರಿಯ ಪತ್ರಕರ್ತ ಕೆ.ಶಿವಕುಮಾರ್, ಸ್ಥಳ: ವಿದ್ಯಾವಿಕಾಸ ಇಂಜಿನಿಯರಿಂಗ್ ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಪದವಿಪೂರ್ವ ಕಾಲೇಜು :** ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಉದ್ಘಾಟನೆ, ಅಧ್ಯಕ್ಷತೆ : ಶಾಲಾ ಶಿಕ್ಷಣ ವಿಭಾಗದ ಸಹ ನಿರ್ದೇಶಕ ಎಂ. ಶಿವಮಾದಪ್ಪ, ಉದ್ಘಾಟನೆ : ಹಿಮಾಲಯ ಪರ್ವತಾರೋಹಿ ಶ್ರೀಮತಿ ಡಾ. ಉಷಾ ಹೆಗ್ಡೆ, ಮುಖ್ಯ ಅತಿಥಿಗಳು : ಅಂತಾರಾಷ್ಟ್ರೀಯ ಕ್ರೀಡಾಪಟು ಕು. ಎಲ್. ಮೋನಿಕ, ಸ್ಥಳ: ಕಾಲೇಜು ಆವರಣ, ಜೆ.ಪಿ.ನಗರ, ಮಧ್ಯಾಹ್ನ 2.30ಕ್ಕೆ.

■ **ಶ್ರೀ ವ್ಯಾಸರಾಜ ಮಠ ಚಾತುರ್ಮಾಸ್ಯ ಸೇವಾ ಸಮಿತಿ, ಸೋಸಲೆ :** 8ನೇ ಚಾತುರ್ಮಾಸ್ಯದ ಪ್ರಯುಕ್ತ ಶ್ರೀ ಶ್ರೀ ವಿದ್ಯಾಶ್ರೀಶತೀರ್ಥ ಶ್ರೀಪಾದರ ಪುರಪ್ರವೇಶ, ಬನ್ನೂರು ವೃತ್ತದಿಂದ, ಸಂಜೆ 4.30ಕ್ಕೆ.

■ **ಹೂಟಗಳ್ಳಿ ಬಡಾವಣೆ:** 17ನೇ ವರ್ಷದ ಶ್ರೀ ಚಾಮುಂಡೇಶ್ವರಿ ಅಮ್ಮನವರ ವರ್ಧಂತಿ ಹಾಗೂ ಉತ್ಸವ, ಮುಖ್ಯ ಅತಿಥಿಗಳು: ಮೇಘಾಲಯದ ನೂತನ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್, ಶಾಸಕರಾದ ಜಿ.ಟಿ.ದೇವೇಗೌಡ, ಜಿ.ಡಿ.ಹರೀಶ್‌ಗೌಡ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಬಿಜೆಪಿ ಮುಖಂಡ ಎಂ.ಶಿವಣ್ಣ, ಮಾಜಿ ಸಂಸದ ಪ್ರತಾಪ್‌ಸಿಂಹ, ಸ್ಥಳ: ಹೂಟಗಳ್ಳಿ ಕೆಹೆಚ್‌ಬಿ ಬಡಾವಣೆ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 'ಸಂವಹನ ಸಮಾಚಾರ', ಬಾನುಲಿ ಸರಣಿ, ಪ್ರಸ್ತುತಿ :ಅಲಕಾ ಕಟ್ಟೆಮನೆ, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಹಸಿರು ಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಸರ್ವೇಶ್ ವಿಲಾಸ್–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ – ಕಾಡಿನಲ್ಲಿನ ಕಥೆಗಳು. ಭಾಗವಹಿಸುವವರು : ಎ.ಟಿ. ಪೂವಯ್ಯ, ನಿವೃತ್ತ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಪ್ರಸ್ತುತಿ:ಜಿ. ಶಾಂತಕುಮಾರ್

ಮಧ್ಯಾಹ್ನ: 12.30 ದೇವರನಾಮ, 12.45 ಚಟ್‌ಪಟ್ ಚುರುಮುರಿ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್ ಹಾಗೂ ಕೆ. ಬಿ. ವೀಣಾ, 1.20 ಭಾವಗೀತೆಗಳು, 4.00 ಜನಪದ ಸಂಗೀತ, 4.30 ಸಂಧ್ಯಾರಾಗ, 6.10 'ಸಂವಹನ ಸಮಾಚಾರ' ಬಾನುಲಿ ಸರಣಿ. ಪ್ರಸ್ತುತಿ: ಅಲಕಾ ಕಟ್ಟೆಮನೆ, 6.50 ಕೃಷಿರಂಗ– ಕಿಸಾನ್ ವಾಣಿ, ಪ್ರಾಯೋಜಕರು : ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ನಮ್ ಕಂಪನಿ –ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ. ಸಮಗ್ರ ಕೃಷಿ ಹಾಗೂ ಕಲ್ಪರಸ ಉತ್ಪಾದನೆ ಕುರಿತು ಸಂವಾದ. ಭಾಗವಹಿಸುತ್ತಾರೆ : ಆತಗೂರು ರಾಗಿ ರೈತ ಉತ್ಪಾದಕ ಕಂಪನಿಯ ಅಧ್ಯಕ್ಷರಾದ ಶಿವರಾಮೇಗೌಡ ಮತ್ತು ನಿರ್ದೇಶಕರಾದ ಧರ್ಮಲಿಂಗು. ಪ್ರಸ್ತುತಿ: ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಸಂಸತ್ತಿನ ಉಭಯ ಕಲಾಪಗಳ ಸಮೀಕ್ಷೆ, 8.15 ಯುವವಾಣಿ– ರಾಷ್ಟ್ರೀಯ ಬಾಹ್ಯಾಕಾಶ ದಿನ ಅಂದರೆ ನ್ಯಾಷನಲ್ ಸ್ಪೇಸ್ ಡೇ ಸಂಬಂಧವಾಗಿ 'ಬಾಹ್ಯಾಕಾಶದಲ್ಲಿ ಭಾರತದ ಸಾಧನೆ' ಕುರಿತು ಮಾತುಕತೆ. ಭಾಗವಹಿಸುತ್ತಾರೆ : ಕಾವ್ಯಶ್ರೀ. ಆರ್.ರಾವ್, ಎ. ಆರ್. ಕೌಸಲ್ಯಾ ರಘುರಾಂ ಮತ್ತು ಚರಣ್. ಎಚ್. ಎನ್ ನಡೆಸಿಕೊಡುತ್ತಾರೆ : ಅಮೋಘವರ್ಷ. ಎನ್, 10.00 ನಾಟಕ, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 1 ಗುರುವಾರ 2024

ಸಂಪುಟ: 45 | ಸಂಚಿಕೆ: 107 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮುಡಾ ಹಗರಣ

ರಾಜ್ಯಪಾಲರ ನಡೆ ನಿಗೂಢ

ಕಾಂಗ್ರೆಸ್ ವಲಯದಲ್ಲಿ ತಲ್ಲಣ

● ರಾಜ್ಯಪಾಲರ ನಡೆ ರಾಜಕೀಯ ಪ್ರೇರಿತ: ಡಾ.ಪರಮೇಶ್ವರ್ ● ರಾಜ್ಯಪಾಲರ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ: ಪ್ರಿಯಾಂಕ್ ಖರ್ಗೆ ● ಸರ್ಕಾರ ಅಸ್ಥಿರಗೊಳಿಸುವ ಯತ್ನ; ಸುಪ್ರೀಂಕೋರ್ಟ್‌ಗೆ ಹೋಗ್ತೇವೆ: ಕೃಷ್ಣ ಭೈರೇಗೌಡ ● ರಾಜ್ಯಪಾಲ ಗೆಹ್ಲೋಟ್ ಈ ರೀತಿ ತೀರ್ಮಾನ ಕೈಗೊಳ್ತಾರೆ ಅಂತ ನಿರೀಕ್ಷಿಸಿರಲಿಲ್ಲ; ದಿನೇಶ್ ಗುಂಡೂರಾವ್ ● ಇಂದು ಸಂಪುಟ ಸಭೆಯಲ್ಲಿ ಮಹತ್ವದ ನಿರ್ಣಯ ಸಾಧ್ಯತೆ ● ದೆಹಲಿ ಪ್ರವಾಸ ಮುಗಿಸಿ ಬಂದಿರುವ ಸಿಎಂ ಸಿದ್ದರಾಮಯ್ಯ ನಿವಾಸದಲ್ಲಿ ಇಂದು ಉಪಾಹಾರ ಕೂಟ


ಥಾವರ್‌ಚಂದ್ ಗೆಹ್ಲೋಟ್



ಮುಡಾ ಕಚೇರಿ


ಸಿದ್ದರಾಮಯ್ಯ

ಬೆಂಗಳೂರು, ಜು.31–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಶೇ.50:50 ಅನುಪಾತದಡಿ ಪತ್ನಿ ಪಾರ್ವತಿ ಅವರಿಗೆ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ರಾಜ್ಯಪಾಲರಿಗೆ ಖಾಸಗಿ ದೂರು ಸಲ್ಲಿಕೆ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನಲ್ಲಿ ಕ್ಷಿಪ್ರ ಬೆಳವಣಿಗೆಗಳಾಗುತ್ತಿವೆ.

ಎರಡು ದಿನಗಳ ದೆಹಲಿ ಪ್ರವಾಸದಿಂದ ವಾಪಸ್ಸಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಈ ವಿಚಾರವನ್ನು ಪ್ರಸ್ತಾಪಿಸಿ,

> “ಮುಡಾ ಹಗರಣದ ಬಗ್ಗೆ ನಾನೂ ಕೂಡ ರಾಜ್ಯಪಾಲರಿಗೆ ದೂರು ಸಲ್ಲಿಸಿದ್ದೆ. ಒಂದು ವೇಳೆ ಮುಖ್ಯಮಂತ್ರಿಗಳ ವಿರುದ್ಧ ತನಿಖೆಗೆ ರಾಜ್ಯಪಾಲರು ಅನುಮತಿ ನೀಡಿದರೆ ಅದನ್ನು ಸ್ವಾಗತಿಸುತ್ತೇನೆ. – ಟಿ.ಎಸ್.ಶ್ರೀವತ್ಸ, ಕೆ.ಆರ್.ಕ್ಷೇತ್ರದ ಬಿಜೆಪಿ ಶಾಸಕ

ಮಹತ್ವದ ಚರ್ಚೆ ನಡೆಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

ಖಾಸಗಿ ವ್ಯಕ್ತಿ ದೂರು ಸಲ್ಲಿಕೆ ಆಧರಿಸಿ ರಾಜ್ಯಪಾಲರು ಏಕಾಏಕಿ ನಿರ್ಧಾರಕ್ಕೆ ಬರಲು ಸಾಧ್ಯವಿಲ್ಲವಾದರೂ ಈ ಸಂಬಂಧ ವಿವರಣೆ ಬಯಸಿ ಮುಖ್ಯಮಂತ್ರಿಗಳಿಗೆ ನೋಟಿಸ್ ನೀಡುವ ಸಾಧ್ಯತೆ ಇರುತ್ತದೆ. ಆ ವಿವರಣೆ ಆಧರಿಸಿ, ನಂತರವಷ್ಟೇ ಅವರು ನಿರ್ಧಾರ ಕೈಗೊಳ್ಳಬಹುದಾಗಿರುತ್ತದೆ. ಈ ಮಧ್ಯೆ ಮೂರು ದಿನದ ಹಿಂದೆಯೇ ರಾಜ್ಯಪಾಲರು ಮುಖ್ಯಮಂತ್ರಿಗಳಿಗೆ ಈ ಸಂಬಂಧ ವಿವರಣೆ ಬಯಸಿ ನೋಟಿಸ್ ನೀಡಿದ್ದಾರೆಂದು ಹೇಳಲಾಗುತ್ತಿದೆ.

ಸಿದ್ದರಾಮಯ್ಯ ಸಂಪುಟ ಸಹೋದ್ಯೋಗಿಗಳು ಸಾರ್ವಜನಿಕವಾಗಿ ರಾಜ್ಯಪಾಲರ ವಿಚಾರದಲ್ಲಿ ಕಿಡಿಕಾರಲಾರಂಭಿಸಿರುವುದು ಇದಕ್ಕೆ ಪುಷ್ಟಿ ನೀಡುತ್ತದೆ. ಮುಖ್ಯಮಂತ್ರಿಗಳ ವಿರುದ್ಧ ತನಿಖೆಗೆ ಅನುಮತಿ ನೀಡಬಾರದೆಂದು ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳುವುದಾಗಿ ಓರ್ವ ಸಚಿವರು ಹೇಳಿದರೆ, ಮತ್ತೋರ್ವರು ಸುಪ್ರೀಂಕೋರ್ಟ್ ಮೊರೆ ಹೋಗುವುದಾಗಿ ತಿಳಿಸಿದ್ದಾರೆ. ಇನ್ನೊಬ್ಬರು ರಾಜ್ಯಪಾಲರ ವರ್ತನೆ ರಾಜಕೀಯ ಪ್ರೇರಿತ ಎಂದು ಪರಿಗಣಿಸಬೇಕಾಗುತ್ತದೆ ಎಂದಿದ್ದಾರೆ. ಸಿದ್ದರಾಮಯ್ಯ ಸಂಪುಟ ಸಹೋದ್ಯೋಗಿಗಳ ಈ ಹೇಳಿಕೆಗಳನ್ನು ಗಮನಿಸಿದರೆ ರಾಜ್ಯಪಾಲರು ಮುಖ್ಯಮಂತ್ರಿಗಳ ವಿರುದ್ಧದ ಖಾಸಗಿ ವ್ಯಕ್ತಿ ದೂರಿನ ಸಂಬಂಧ ಮಹತ್ವದ ನಿರ್ಧಾರ ಕೈಗೊಳ್ಳಬಹುದಾದ ಸಾಧ್ಯತೆಗಳಿವೆ ಎಂಬ ಭಾವನೆ ಮೂಡುವುದು ಸಹಜ. ಮುಡಾ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯಪಾಲರು, ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಪಡೆದುಕೊಂಡಿದ್ದಾರೆ. ಈ ನಡುವೆ ಕಾನೂನು ತಜ್ಞರ ಅಭಿಪ್ರಾಯ ಪಡೆದಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಜಕೀಯ ಪ್ರೇರಿತ: ರಾಜ್ಯಪಾಲರ ನಡೆಯನ್ನು ಉಲ್ಲೇಖಿಸಿ ಮಾತನಾಡಿದ ಗೃಹ ಸಚಿವ ಡಾ.ಪರಮೇಶ್ವರ್, ರಾಜ್ಯಪಾಲರ ನಡೆ ■ 5ನೇ ಪುಟಕ್ಕೆ

ಕೆಬಿಜಿಯವರ ಭೂಮಂತ್ರ...




ಕಂದಾಯ ಭೂಮಿ ಲೂಟಿಯಾದ 29 ವರ್ಷದ ನಂತರ ‘ಟಿ.ಎಂ.ವಿಜಯಭಾಸ್ಕರ್ ವರದಿ’ ಮರು ಶೋಧ!

■ ಪುಟ–4

ವಯನಾಡಿನಲ್ಲಿ ಸರಣಿ ಭೂಕುಸಿತ

ಸಾವಿನ ಸಂಖ್ಯೆ 254ಕ್ಕೆ ಏರಿಕೆ

■ 300ಕ್ಕೂ ಅಧಿಕ ನಾಪತ್ತೆ ■ ಕರ್ನಾಟಕದ 7 ಮಂದಿ ಸಾವು



ವಯನಾಡು, ಜು.31–ಕೇರಳದ ವಯನಾಡಿನಲ್ಲಿ ಸಂಭವಿಸಿದ ಸರಣಿ ಭೂಕುಸಿತದಲ್ಲಿ ಮೃತಪಟ್ಟವರ ಸಂಖ್ಯೆ ಕರ್ನಾಟಕದ 7 ಮಂದಿ ಸೇರಿ 254ಕ್ಕೆ ಏರಿಕೆಯಾಗಿದೆ. ಈಗ ಪತ್ತೆಯಾಗಿರುವ ಶವಗಳನ್ನಾಧರಿಸಿ ಈ ಅಂಕಿ–ಅಂಶವನ್ನು ಕೇರಳ ಸರ್ಕಾರ ದಿಂದ ನೀಡಲಾಗಿದ್ದು, ಸಾವಿನ ಸಂಖ್ಯೆ ಇನ್ನೂ ಹೆಚ್ಚಾಗುವ ಸಾಧ್ಯತೆ ಇದೆ.

ಮಂಗಳವಾರ ನಡೆದ ರಕ್ಷಣಾ ಕಾರ್ಯಾಚರಣೆಯಲ್ಲಿ ಚಾಮರಾಜನಗರದ ಪುಟ್ಟಸಿದ್ದಿ(62), ಅವರ ಮಗಳು ರಾಣಿ, ರಾಜೇಂದ್ರ, ಅವರ ಪತ್ನಿ ರತ್ನಮ್ಮ


ಲೀಲಾವತಿ


ನಿಹಾಲ್

ಎಂಬುವರ ಮೃತದೇಹಗಳು ಪತ್ತೆಯಾಗಿದ್ದವು. ಇಂದಿನ ಕಾರ್ಯಾಚರಣೆಯಲ್ಲಿ ಕೆ.ಆರ್.ಪೇಟೆ ತಾಲೂಕು ಕತ್ತರಘಟ್ಟ ಗ್ರಾಮದ ಲೀಲಾವತಿ(55) ಮತ್ತು ಅವರ ಮೊಮ್ಮಗ ಎರಡೂವರೆ ವರ್ಷದ ನಿಹಾಲ್ ದೇಹಗಳು ಪತ್ತೆಯಾಗಿದ್ದು, ಲೀಲಾವತಿ ಪತಿ ದೇವರಾಜ್, ಪುತ್ರಿ ಝಾನ್ಸಿರಾಣಿ ಮತ್ತು ಅಳಿಯ ಅನಿಲ್‌ಕುಮಾರ್ ಅವರನ್ನು ರಕ್ಷಣಾ ಪಡೆಗಳು ರಕ್ಷಿಸಿ, ಆಸ್ಪತ್ರೆಗೆ ದಾಖಲಿಸಲಾಗಿದೆ. ಮತ್ತೊಂದೆಡೆ ಮೇಪ್ಪಾಡಿಯ ಸಂಬಂಧಿಕರ ಮನೆಗೆ ಹೋಗಿದ್ದ ಸಿದ್ದಾಪುರದ ಗುಯ್ಯ ಗ್ರಾಮದ 9 ವರ್ಷದ ಬಾಲಕ ರೋಹಿತ್ ದೇಹ ಪತ್ತೆಯಾಗಿದ್ದು, ಆತನ ತಾಯಿ ಕವಿತಾ ನಾಪತ್ತೆಯಾಗಿದ್ದಾರೆ. ಮಳೆಯ ನಡುವೆಯೂ ■ 5ನೇ ಪುಟಕ್ಕೆ


ರೋಹಿತ್

ವಯನಾಡಿಗೆ ಇಂದು ರಾಹುಲ್, ಪ್ರಿಯಾಂಕಾ ಗಾಂಧಿ



ವಯನಾಡು, ಜು.31– ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಅವರು ಗುರುವಾರ ಭೂಕುಸಿತವಾಗಿರುವ ವಯನಾಡ್‌ಗೆ ಭೇಟಿ ನೀಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಅವರು ಬುಧವಾರ ಬೆಳಿಗ್ಗೆ ವಯನಾಡ್‌ಗೆ ಭೇಟಿ ನೀಡಬೇಕಿತ್ತು. ಆದರೆ ನಿರಂತರ ಮಳೆ ಮತ್ತು ಪ್ರತಿಕೂಲ ಹವಾಮಾನದಿಂದಾಗಿ ಬರುವುದು ಬೇಡ ಎಂದು ಅಧಿಕಾರಿಗಳು ತಿಳಿಸಿದ್ದರಿಂದ ಅವರು ಭೇಟಿಯನ್ನು ನಾಳೆಗೆ ಮುಂದೂಡಿದ್ದಾರೆ. ಇವರಿಬ್ಬರೂ ನಾಳೆ ಮೇಪ್ಪಾಡಿಯ ಸರ್ಕಾರಿ ಪ್ರೌಢ ಶಾಲೆ ಮತ್ತು ಸೇಂಟ್ ಜೋಸೆಫ್ ಶಾಲೆಯಲ್ಲಿರುವ ಪರಿಹಾರ ಶಿಬಿರಗಳಿಗೆ ಭೇಟಿ ನೀಡಲಿದ್ದಾರೆ ಎಂದು ಕೇರಳ ಕಾಂಗ್ರೆಸ್ ಮೂಲಗಳು ತಿಳಿಸಿವೆ.

ರಾಷ್ಟ್ರೀಯ, ರಾಜ್ಯ ಹೆದ್ದಾರಿಯಲ್ಲಿ ಅತೀ ವೇಗದ ವಾಹನ ಚಾಲನೆ ಮಾಡಿದರೆ ಇಂದಿನಿಂದ FIR ದಾಖಲು

ಸುಪ್ರೀಂಕೋರ್ಟ್ ರಸ್ತೆ ಸುರಕ್ಷತಾ ಸಮಿತಿ ಶಿಫಾರಸ್ಸಿನನ್ವಯ ರಾಜ್ಯ ಸರ್ಕಾರದ ಆದೇಶ

ಮೈಸೂರು, ಜು.31–ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಬೆಂಗಳೂರಿನ ನೈಸ್ ರಸ್ತೆಯಲ್ಲಿ 130 ಕಿ.ಮೀ.ಗಿಂತ ಹೆಚ್ಚಿನ ವೇಗದಲ್ಲಿ ವಾಹನ ಚಾಲನೆ ಮಾಡುವ ಚಾಲಕರ ವಿರುದ್ಧ ನಾಳೆ (ಆ.1)ಯಿಂದ ಪೊಲೀಸರು ಸ್ವಯಂಪ್ರೇರಿತವಾಗಿ ಎಫ್‌ಐಆರ್ ದಾಖಲಿಸಿ, ಕ್ರಮ ಕೈಗೊಳ್ಳಲಿದ್ದಾರೆ.

ಸುಪ್ರೀಂಕೋರ್ಟ್‌ನ ರಸ್ತೆ ಸುರಕ್ಷತಾ ಸಮಿತಿಯು ಜುಲೈ 19ರಂದು ರಾಜ್ಯ ಸರ್ಕಾರಕ್ಕೆ ರವಾನಿಸಿದ್ದ ಪತ್ರವನ್ನಾಧರಿಸಿ ಈ ಆದೇಶವನ್ನು ಎಡಿಜಿಪಿ ಅಲೋಕ್ ಕುಮಾರ್ ಹೊರಡಿಸಿದ್ದಾರೆ.

ಹಿನ್ನೆಲೆ: ಬೆಂಗಳೂರಿನ ನೈಸ್ ರಸ್ತೆಯ ಟೋಲ್ ಬಳಿ ಸ್ಕಾರ್ಪಿಯೊ ಕಾರಿನ ಚಾಲಕ 160 ಕಿ.ಮೀ. ವೇಗದಲ್ಲಿ ಕಾರನ್ನು ಚಾಲನೆ ಮಾಡಿ ಅಪಘಾತವಾಗಿತ್ತು. ಈ


ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿ


ಅಲೋಕ್‌ಕುಮಾರ್

ಅಪಘಾತದಲ್ಲಿ ಕಾರಿನಲ್ಲಿದ್ದ ಮೂವರು ಮೃತಪಟ್ಟು, ಇತರ ಮೂವರು ಗಂಭೀರವಾಗಿ ಗಾಯಗೊಂಡಿದ್ದರು. ಈ ಪ್ರಕರಣವನ್ನು ಉಲ್ಲೇಖಿಸಿ ರಾಜ್ಯ ಸರ್ಕಾರಕ್ಕೆ ಪತ್ರ ರವಾನಿಸಿದ್ದ ಸುಪ್ರೀಂಕೋರ್ಟ್‌ನ ರಸ್ತೆ ಸುರಕ್ಷತಾ ಸಮಿತಿಯು, ಈ ರೀತಿ ವೇಗವಾಗಿ ಚಾಲನೆ ಮಾಡುವ ವಾಹನ ಚಾಲಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ತಿಳಿಸಿತ್ತು. ಈ ರೀತಿ ಚಾಲಕರು ವಾಹನಗಳನ್ನು ಅತೀ ವೇಗ ಹಾಗೂ ಅಪಾಯಕಾರಿ ರೀತಿಯಲ್ಲಿ ಚಾಲನೆ ಮಾಡಿ ಬೇರೆ ವಾಹನಗಳಿಗೆ ಅಪಘಾತಪಡಿಸುವುದರ ಜೊತೆಗೆ ತಾವು ಹಾಗೂ ವಾಹನ ಪ್ರಯಾಣಿಕರನ್ನು ಅಪಘಾತಕ್ಕೀಡಾಗಿಸುತ್ತಾರೆ. ಇಂತಹ ರಸ್ತೆ ಅಪಘಾತಗಳಿಗೆ ಒಳಗಾಗಿ ಮೃತಪಟ್ಟವರ ಮತ್ತು ಗಾಯಗೊಂಡವರ ಸಂಖ್ಯೆ ಹೆಚ್ಚಾಗಲು ಇಂತಹ ಚಾಲಕರು ಕಾರಣರಾಗುತ್ತಿದ್ದಾರೆ ಎಂದು ಸುಪ್ರೀಂ ಕೋರ್ಟ್‌ನ ರಸ್ತೆ ಸುರಕ್ಷತಾ ಸಮಿತಿ ಅಭಿಪ್ರಾಯಪಟ್ಟಿತ್ತು. ಈ ಕಾರಣದಿಂದ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೇ ಎನ್‌ಹೆಚ್–275, ಬೆಂಗಳೂರು–ಹಾಸನ ರಾಷ್ಟ್ರೀಯ ಹೆದ್ದಾರಿ, ಬೆಂಗಳೂರು–ತುಮಕೂರು ರಾಷ್ಟ್ರೀಯ ಹೆದ್ದಾರಿ, ನೈಸ್ ರಸ್ತೆ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ, ಸೆಟಲೈಟ್ ಟೌನ್ ರಿಂಗ್ ರಸ್ತೆ, ಪ್ರಸ್ತಾವಿತ ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇ ಒಳಗೊಂಡಂತೆ ರಾಜ್ಯದ ಇತರ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಮತ್ತು ಇತರ ರಸ್ತೆಗಳಲ್ಲಿ 130 ಕಿ.ಮೀ.ಗಿಂತ ■ 5ನೇ ಪುಟಕ್ಕೆ

ವಯನಾಡಿನಲ್ಲಿ ಮಳೆಯ ರುದ್ರನರ್ತನ

ಉಕ್ಕಿ ಹರಿಯುತ್ತಿರುವ ಕಪಿಲೆ; ನಂಜುಂಡೇಶ್ವರನಿಗೆ ಜಲ ದಿಗ್ಬಂಧನ

■ ನಂ.ಗೂಡು ಬಳಿ ಬೆಂಗಳೂರು–ನೀಲಗಿರಿ ಹೆದ್ದಾರಿಯಲ್ಲಿ ಸಂಚಾರ ಬಂದ್; ಬದಲಿ ಮಾರ್ಗ ■ ನದಿ ತೀರದ ಜನ, ಜಾನುವಾರುಗಳು ಸುರಕ್ಷತಾ ಸ್ಥಳಕ್ಕೆ ಸ್ಥಳಾಂತರ; ಕಾಳಜಿ ಕೇಂದ್ರಗಳಲ್ಲಿ ಆಶ್ರಯ





ಕಬಿನಿ ಜಲಾಶಯದಿಂದ ಭಾರಿ ನೀರು ಬಿಟ್ಟಿರುವುದರಿಂದ ನಂಜನಗೂಡು ಬಳಿ ಕಪಿಲಾ ನದಿಯಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿ, ನಂಜುಂಡೇಶ್ವರ ಸನ್ನಿಧಿಯನ್ನೂ ಆವರಿಸಿದೆ. ಬಲಚಿತ್ರದಲ್ಲಿ ಬೆಂಗಳೂರು–ನೀಲಗಿರಿ ಹೆದ್ದಾರಿ ಮಲ್ಲನಮೂಲೆ ಬಳಿ ಜಲಾವೃತವಾಗಿದ್ದು, ವಾಹನ ಸಂಚಾರ ಬಂದ್ ಮಾಡಲಾಗಿದೆ.

ನಂಜನಗೂಡು ಜು. 31(ಆರ್‌ಕೆ)– ಕೇರಳದ ವಯನಾಡಿನಲ್ಲಿ ಭಾರಿ ಮಳೆಯಿಂದಾಗಿ ಕಬಿನಿ ಜಲಾಶಯದ ಒಳ ಹರಿವು ಪ್ರಮಾಣ ಹೆಚ್ಚಿರುವುದರಿಂದ ಭಾರಿ ಪ್ರಮಾಣದಲ್ಲಿ ನೀರು ಹೊರ ಬಿಡುತ್ತಿರುವುದರಿಂದ ಕಪಿಲಾ ನದಿಯು ಉಕ್ಕಿ ಹರಿಯುತ್ತಿದೆ.

ಕಬಿನಿ ಜಲಾಶಯದಲ್ಲಿ 2,281.72 ಅಡಿ ನೀರಿದ್ದು, ಒಳ ಹರಿವಿನ ಪ್ರಮಾಣ ಹೆಚ್ಚಿರುವುದರಿಂದ 50,000 ಕ್ಯೂಸೆಕ್ ನೀರನ್ನು ಹೊರ ಬಿಡುತ್ತಿರುವ ಕಾರಣ ಕಪಿಲಾ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಪರಿಣಾಮ ನಂಜನಗೂಡು ಬಹುಭಾಗ ಜಲಾವೃತಗೊಂಡಿದೆ.

ಅಲ್ಲಿನ ಮಲ್ಲನಮೂಲೆ ಮಠದ ಬಳಿ ಬೆಂಗಳೂರು–ನೀಲಗಿರಿ ಹೆದ್ದಾರಿ ಜಲಾವೃತಗೊಂಡು 3 ಅಡಿಗೂ ಎತ್ತರದಲ್ಲಿ ನೀರು ಹರಿಯುತ್ತಿರುವುದರಿಂದ ಮುಂಜಾಗ್ರತೆಯಾಗಿ ಸಂಚಾರ ಬಂದ್ ಮಾಡಲಾಗಿದೆ. ಆ ಮಾರ್ಗ ಸಂಚರಿಸುವ ವಾಹನಗಳಿಗೆ ಕಡಕೊಳ ಬಳಿ ಬದಲಿ ಮಾರ್ಗದ ವ್ಯವಸ್ಥೆ ಮಾಡಲಾಗಿದೆ. ಕಪಿಲಾ ನದಿಯಲ್ಲಿ ಉಂಟಾದ ಪ್ರವಾಹದಿಂದ ನದಿ ತೀರದಲ್ಲಿರುವ ಮಲ್ಲನಮೂಲೆ ಮಠ, ಶ್ರೀ ಬಸವೇಶ್ವರ ಲಿಂಗಭಟ್ಟರ ಗುಡಿ, ಕಾಶಿ ವಿಶ್ವನಾಥ



ಸ್ವಾಮಿ ದೇವಾಲಯ, ಶ್ರೀ ಚಾಮುಂಡೇಶ್ವರಿ, ಅಯ್ಯಪ್ಪಸ್ವಾಮಿ, ದತ್ತಾತ್ರೇಯ ಸ್ವಾಮಿ, ಪರಶುರಾಮ ದೇವಸ್ಥಾನಗಳು ಜಲಾವೃತಗೊಂಡಿವೆ. ಅಲ್ಲಿನ ಐತಿಹಾಸಿಕ ಹದಿನಾರು ಕಾಲು ಮಂಟಪ, ಹಳೆಯ ರೈಲ್ವೆ ಸೇತುವೆ ಭಾಗಶಃ ಮುಳುಗಡೆಯಾಗಿದ್ದು, ದಕ್ಷಿಣ ಕಾಶಿ ಎಂದೇ ಖ್ಯಾತಿಯಾಗಿರುವ ಶ್ರೀ ಶ್ರೀಕಂಠೇಶ್ವರಸ್ವಾಮಿ ದೇವಾಲಯದ ಸ್ನಾನಘಟ್ಟ, ದಾಸೋಹ ಭವನ, ವಾಹನ ನಿಲುಗಡೆ ಸ್ಥಳಗಳೂ ಜಲಾವೃತಗೊಂಡಿದ್ದು, ಭಕ್ತಾದಿಗಳು, ಪ್ರವಾಸಿಗರಿಗೆ ತೀವ್ರ ತೊಂದರೆ ಉಂಟಾಗಿದೆ. ಉಳಿದಂತೆ ಶಾಲೆಗಳು, ಸ್ಮಶಾನ, ತೆಂಗಿನ ತೋಟ, ಸಾವಿರಾರು ಎಕರೆ ಜಮೀನು ಕಪಿಲಾ ನದಿ ನೀರಿನಿಂದ ಮುಳುಗಡೆಯಾಗಿದ್ದು, ಚಾಮರಾಜನಗರ ರಸ್ತೆ, ಗುಂಡ್ಲುಪೇಟೆ ರಸ್ತೆ, ಹಳ್ಳದಕೇರಿಗೂ ನೀರು ನುಗ್ಗಿರುವುದರಿಂದ ಕೆಲ ಮನೆಗಳು ಮುಳುಗಡೆಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ವಯನಾಡಿನಲ್ಲಿ ಮಳೆಯ ಅಟ್ಟಹಾಸ ಹೀಗೆಯೇ ಮುಂದುವರಿದಲ್ಲಿ ಕಬಿನಿ ಜಲಾಶಯದಿಂದ ಹೆಚ್ಚುವರಿ ನೀರನ್ನು ಹೊರಕ್ಕೆ ಬಿಡಬೇಕಾಗುತ್ತದೆ. ಅದರಿಂದ ಕಪಿಲಾ ನದಿ ಅಪಾಯದ ಮಟ್ಟ ಮೀರಿ ಹರಿದಲ್ಲಿ ■ 5ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಹೆಂಡತಿ : ಎಣ್ಣೆ ಹಾಕೊಂಡ್ ಸ್ನಾನ ಮಾಡುವಂತೆ ಎದ್ದೇಳ್ರಿ...
ಗಂಡ : ಇಷ್ಟು ಬೇಗ ಬಾರ್ ಓಪನ್ ಆಗಿರೊಲ್ಲ ಕಣೆ...!

ಮೈಸೂರು ಮಿತ್ರ
ಗುರುವಾರ, 1 ಆಗಸ್ಟ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಹಣ ಮನುಷ್ಯನನ್ನು ಬದಲಿಸುವುದಿಲ್ಲ.
ನಿಜ ಸ್ವರೂಪವನ್ನು ಹೊರಗೆ ಹಾಕುತ್ತದೆ. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಾಲಿಗೆ ಹುಳಿ ಹಿಂಡಿದರೆ ಮೊಸರು, ಮಣ್ಣಿಗೆ ನೀರು ಹಾಕಿದರೆ ಕೆಸರು.

ನಿಮ್ಮ ಪತ್ರಗಳು

ಮಕ್ಕಳಲ್ಲಿ ಓದುವ ಅಭ್ಯಾಸ ವೃದ್ಧಿಗೆ ಕಾರ್ಯಕ್ರಮ, ಸ್ವಾಗತಾರ್ಹ

ಮಾನ್ಯರೆ,

ಡಿಜಿಟಲ್ ಯುಗದಲ್ಲಿ ಸೋಷಿಯಲ್ ಮೀಡಿಯಾಗಳು, ಸ್ಮಾರ್ಟ್‌ಫೋನ್‌ಗಳ ಬಳಕೆಯ ಪ್ರಭಾವದಿಂದ ಶಾಲಾ ಮಕ್ಕಳಲ್ಲಿ ದಿನದಿಂದ ದಿನಕ್ಕೆ ಓದುವ ಹವ್ಯಾಸ ಕುಂಠಿತವಾಗುತ್ತಿರುವುದನ್ನು ಸಾಕಷ್ಟು ಅಧ್ಯಯನ ವರದಿಗಳು ಖಚಿತಪಡಿಸಿವೆ. ಈ ಹಿನ್ನೆಲೆಯಲ್ಲಿ ಮಕ್ಕಳಲ್ಲಿ ಓದುವ ಹವ್ಯಾಸವನ್ನು ಹೆಚ್ಚಿಸುವುದಕ್ಕಾಗಿ ರಾಜ್ಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ 'ಓದುವ ಹವ್ಯಾಸ ಜ್ಞಾನದ ವಿಕಾಸ' ಎಂಬ ವಿನೂತನ ಪ್ರಯತ್ನಕ್ಕೆ ಮುಂದಾಗಿರುವುದು ಸ್ವಾಗತಾರ್ಹವಾಗಿದೆ.

ಕೋವಿಡ್ ಕಾಲಘಟ್ಟದಲ್ಲಿ ದೊಡ್ಡವರು ಸೇರಿದಂತೆ ಮಕ್ಕಳು ಸ್ಮಾರ್ಟ್‌ಫೋನ್ ಮೊರೆ ಹೋಗುವುದು ಅನಿವಾರ್ಯವಾಗಿತ್ತು. ಕಲಿಕೆಗೆ ಬೇರೆ ದಾರಿಯೇ ಇರಲಿಲ್ಲ. ಆಗ ನೆರವಿಗೆ ಬಂದಿದ್ದೇ ಸ್ಮಾರ್ಟ್‌ಫೋನ್‌ಗಳು ಅಥವಾ ಆನ್‌ಲೈನ್ ಮೂಲಕ ಕಲಿಯುವ ಪದ್ಧತಿ. ಆದರೆ ಶಿಕ್ಷಣ ವ್ಯವಸ್ಥೆಯು ಕೋವಿಡ್ ಪೂರ್ವ ಸ್ಥಿತಿಗೆ ಮರಳಿ, ಶಾಲೆಗಳು ಎಂದಿನಂತೆ ಆರಂಭವಾದರೂ ಮಕ್ಕಳು ಮಾತ್ರ ಫೋನ್‌ಗಳನ್ನು ಬಿಟ್ಟಿಲ್ಲ. ಇಂಥ ಪರಿಸ್ಥಿತಿಯಲ್ಲಿ ಮಕ್ಕಳಲ್ಲಿ ಓದುವ ಹವ್ಯಾಸವನ್ನು ಬೆಳೆಸುವುದು ಸುಲಭದ ಮಾತಲ್ಲ. ಹಾಗೆಯೇ 6 ರಿಂದ 10 ವರ್ಷದೊಳಗಿನ ಮಕ್ಕಳಿಗೆ ಮೊಬೈಲ್ ಕಲಿಕೆ ಸರಿಯಲ್ಲ ಎಂದು ವಿಶ್ವಸಂಸ್ಥೆಯು ಶಿಫಾರಸು ಮಾಡಿದೆ.

ಈ ವಿನೂತನ ಯೋಜನೆಯಡಿ 1ರಿಂದ 10ನೇ ತರಗತಿಯವರೆಗೆ ಓದುತ್ತಿರುವ ಮಕ್ಕಳು ವಾರದಲ್ಲಿ ಒಂದು ಅವಧಿ ಗ್ರಂಥಾಲಯದಲ್ಲಿ ಕಳೆಯುವುದು ಮತ್ತು ಪ್ರತಿ ಶಾಲೆಯು ಅತ್ಯುತ್ತಮ ಗ್ರಂಥಾಲಯ ಹೊಂದುವುದನ್ನು ಕಡ್ಡಾಯಗೊಳಿಸಲಾಗಿದೆ. ಮಕ್ಕಳ ಬುದ್ಧಿ ಬೆಳವಣಿಗೆಯ ವಿಕಾಸದ ದೃಷ್ಟಿಯಿಂದ ರಾಜ್ಯ ಸರ್ಕಾರದ ಈ ನಡೆ ಅತ್ಯುತ್ತಮ ಹೆಜ್ಜೆಯಾಗಿದೆ.

–ಕೆ.ಎಸ್.ಸುರೇಶ್, ಮುಖ್ಯ ಶಿಕ್ಷಕರು, ಸರಗೂರು.

ಬಸ್ ಸೌಕರ್ಯ ಕಲ್ಪಿಸಿ

ಮಾನ್ಯರೆ,

ನಂಜನಗೂಡು ತಾಲೂಕಿನ ಹಲವು ಗ್ರಾಮಗಳಿಗೆ ಬಸ್ ವ್ಯವಸ್ಥೆ ಇಲ್ಲ. ಈ ಮಾರ್ಗವಾಗಿ ಹಾಡ್ಯ, ಮಡುವಿನಹಳ್ಳಿ, ಈರೇಗೌಡನಹುಂಡಿ, ಹೆಡಿಯಾಲ, ಬಿರ್ವಾಳ್, ಸರಗೂರು ಗ್ರಾಮಗಳ ಮುಖಾಂತರ ದಿನನಿತ್ಯ ಓಡಾಡುವ ನೂರಾರು ಸಾರ್ವಜನಿಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರೆ ಜಿಲ್ಲೆಗಳಿಂದ ಬರುವ ಪ್ರಯಾಣಿಕರಿಗೆ ಬಸ್ ವ್ಯವಸ್ಥೆ ಇಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಮಾರ್ಗದಲ್ಲಿ ಚಿಕ್ಕದೇವಮ್ಮನವರ ದೇವಸ್ಥಾನ ಹಾಗೂ ನುಗು ಜಲಾಶಯ ಹಾಗೂ ಕಬಿನಿ ಜಲಾಶಯ ನೋಡಲು ಸಾರ್ವಜನಿಕರು ಹಾಗೂ ಇತರೆ ರಾಜ್ಯಗಳಿಂದ ಭಕ್ತರು ಹಾಗೂ ಪ್ರವಾಸಿಗರು ಭೇಟಿ ನೀಡುತ್ತಾರೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಇತ್ತ ಗಮನಹರಿಸಿ ಈ ಗ್ರಾಮಗಳಿಗೆ ಆದಷ್ಟು ಬೇಗ ಬಸ್ ಸೌಕರ್ಯ ಕಲ್ಪಿಸಬೇಕೆಂದು ಈ ಮೂಲಕ ಮನವಿ.

–ಸಿದ್ದಲಿಂಗೇಗೌಡ, ಹೈರಿಗೆ ಗ್ರಾಮ, ಹೆಚ್.ಡಿ. ಕೋಟೆ ತಾ.

ಮಿಷನ್ ಆಸ್ಪತ್ರೆ ಸಮಸ್ಯೆ ಪರಿಹರಿಸಲಿ

ಮಾನ್ಯರೆ,

ಕಳೆದ 15 ದಿನಗಳಿಂದ ಮೈಸೂರಿನ ಮಿಷನ್ ಆಸ್ಪತ್ರೆ ಸಿಬ್ಬಂದಿ, ಕಳೆದ 4 ತಿಂಗಳಿಂದ ನಮಗೆ ವೇತನ ನೀಡಿಲ್ಲ, ಇಎಸ್‌ಐ ಹಾಗೂ ಪಿಎಫ್ ಸಂದಾಯ ಮಾಡಿಲ್ಲ. ಯಾವುದೇ ಸೌಲಭ್ಯಗಳನ್ನು ನೀಡುತ್ತಿಲ್ಲ ಎಂದು ಮುಷ್ಕರ ನಡೆಸುತ್ತಿದ್ದು, ಫೆನಾಯಿಲ್ ಕುಡಿದು ಇಬ್ಬರು ಸಿಬ್ಬಂದಿ ಕೆ.ಆರ್.ಆಸ್ಪತ್ರೆಗೆ ದಾಖಲಾಗಿರುವುದು (ಮೈ.ಮಿತ್ರ–30.7.24)ವರದಿಯಾಗಿದೆ.

ಸುಮಾರು 70–80ರ ದಶಕದಲ್ಲಿ ಮೈಸೂರಿನಲ್ಲಿ ಈಗಿನ ಅಪೋಲೋ ಆಸ್ಪತ್ರೆಯಾಗಲೀ, ಜೆಎಸ್‌ಎಸ್ ಆಸ್ಪತ್ರೆಯಾಗಲೀ ಇರಲಿಲ್ಲ. ನಾನು ತಿಳಿದಂತೆ ಕೆ.ಆರ್. ಆಸ್ಪತ್ರೆ, ಕಾಮಾಕ್ಷಿ ಆಸ್ಪತ್ರೆ ಹಾಗೂ ಈಗ ಮುಷ್ಕರದಲ್ಲಿ ಸುದ್ದಿಯಾಗಿರುವ ಮಿಷನ್ ಆಸ್ಪತ್ರೆಗಳಷ್ಟೇ ಇದ್ದವು. ಅಂದಿನ ದಿನಗಳಲ್ಲಿ ಈಗಿನ ಡಯಾಬಿಟಿಕ್, ಹೈಪರ್ ಟೆನ್ಷನ್ ಅಷ್ಟಾಗಿ ಕಾಡುತ್ತಿರಲಿಲ್ಲ. ವೈದ್ಯಕೀಯ ರಂಗ ಕೂಡ ಈಗಿನಷ್ಟು ಬೆಳೆದಿರಲಿಲ್ಲ. ಹಾಗೆ ನೋಡಿದರೆ ಸರ್ಕಾರಿ ವೈದ್ಯಕೀಯ ವ್ಯವಸ್ಥೆ ಕೇವಲ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಮಾತ್ರ ಇತ್ತು. ಖಾಸಗಿ ಆಸ್ಪತ್ರೆಗಳು ಕೂಡ ಹೆಚ್ಚು ಇರಲಿಲ್ಲ. ಇಂತಹ ಸಂದರ್ಭದಲ್ಲಿ ಮೈಸೂರು ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ಗ್ರಾಮಾಂತರ ಪ್ರದೇಶಗಳ ಜನರು ತೀವ್ರ ಅನಾರೋಗ್ಯಕ್ಕೆ ತುತ್ತಾದಾಗ ಮೈಸೂರಿನ ಕೆ.ಆರ್.ಆಸ್ಪತ್ರೆ, ಕಾಮಾಕ್ಷಿ ಆಸ್ಪತ್ರೆ, ಪಿ.ಕೆ. ಸ್ಯಾನಿಟೋರಿಯಂ, ಇ.ಡಿ. ಆಸ್ಪತ್ರೆ ಅಥವಾ ಮಿಷನ್ ಆಸ್ಪತ್ರೆಯನ್ನು ಅವಲಂಬಿಸುತ್ತಿದ್ದರು. ಮಿಷನ್ ಆಸ್ಪತ್ರೆ ಹಳ್ಳಿ ಜನರ ಬಾಯಲ್ಲಿ 'ಮಿಷಿನ್ ಆಸ್ಪತ್ರೆ' ಎಂದೇ ಜನಜನಿತವಾಗಿತ್ತು.

1927 ರಲ್ಲಿ ಆರಂಭವಾದ ಕೆ.ಆರ್. ಆಸ್ಪತ್ರೆ ಈಗ ಶತಮಾನೋತ್ಸವ ಆಚರಿಸುವ ತಯಾರಿಯಲ್ಲಿದೆ. ಆದರೆ ಇದಕ್ಕೂ ಮೊದಲೇ 1906ರಲ್ಲಿ ಕ್ರಿಶ್ಚಿಯನ್ ಮಿಷನರಿಗಳಿಂದ 60 ಹಾಸಿಗೆಗಳ ಮಹಿಳೆಯರ ಮತ್ತು ಮಕ್ಕಳ ಆಸ್ಪತ್ರೆ ಸ್ಥಾಪಿಸಲ್ಪಟ್ಟಿತು ಎಂಬುದು ಗಮನಾರ್ಹ. ಇಂದು 320 ಬೆಡ್‌ಗಳ ಆಧುನಿಕ ಆಸ್ಪತ್ರೆಯಾಗಿ ಬೆಳೆದಿದೆ ಎಂದು ಮಾಹಿತಿ ಇದೆ. ಇಂತಹ ಆಸ್ಪತ್ರೆ ಈಗ ಆಡಳಿತ ಮಂಡಳಿ ಹಾಗೂ ನೌಕರರ ಮಧ್ಯೆ ವೈಮನಸ್ಸಿನ ಕಾರಣ ಮುಷ್ಕರದ ಹಾದಿ ಹಿಡಿದಿರುವುದು ವಿಷಾದನೀಯ.

ಆದ್ದರಿಂದ ಸರ್ಕಾರ ಮಧ್ಯೆ ಪ್ರವೇಶಿಸಿ ಅಲ್ಲಿನ ಆಡಳಿತ ಮಂಡಳಿ ಹಾಗೂ ನೌಕರರ ಜೊತೆ ಮಾತುಕತೆ ನಡೆಸಿ ಪರಿಹರಿಸಬೇಕು. ಅಲ್ಲದೆ ಆಡಳಿತ ಮಂಡಳಿ ಭ್ರಷ್ಟಾಚಾರ ನಡೆಸಿರುವುದು ಕಂಡು ಬಂದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಆಡಳಿತ ಮಂಡಳಿಯನ್ನು ವಜಾ ಮಾಡಿ, ಸರ್ಕಾರ ಆಡಳಿತಾಧಿಕಾರಿ ನೇಮಿಸಿ, ಹೊಸ ಆಡಳಿತ ಮಂಡಳಿ ರಚಿಸುವ ಕ್ರಮವಾಗಬೇಕು. ಸರ್ಕಾರ ಸಮಿತಿಯೊಂದನ್ನು ರಚಿಸಿ ತನಿಖೆ ಮಾಡಿಸಬೇಕು. ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರ ಈ ಬಗ್ಗೆ ಗಮನ ಹರಿಸಲಿ.


–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಜಾಲತಾಣ ಮಾಹಿತಿ ಸರಿಪಡಿಸಿ

ಮಾನ್ಯರೆ,

www.mysore.nic.in ಮೈಸೂರು ಜಿಲ್ಲಾ ಜಾಲತಾಣದಲ್ಲಿ ಪ್ರಾದೇಶಿಕ ಸಾರಿಗೆ ಕಚೇರಿ, ಚಾಮರಾಜಪುರಂ, ಮೈಸೂರು. ಈ ಕಚೇರಿಯನ್ನು ಸಂಪರ್ಕಿಸುವ ದೂರವಾಣಿ ಸಂಖ್ಯೆಗಳು ತಪ್ಪಾಗಿವೆ. ಮೈಸೂರಿನ ನಾಗರಿಕರ ಉಪಯೋಗಕ್ಕಾಗಿ ರಚಿಸಿರುವ ಜಾಲತಾಣದಲ್ಲಿ ಈ ತರಹನಾದ ನ್ಯೂನತೆಗಳಿರುವುದು ಜಾಲತಾಣದ ಸರಿಯಾದ ನಿರ್ವಹಣೆ ಇಲ್ಲದಿರುವುದನ್ನು ತೋರುತ್ತಿದೆ. ದಯಮಾಡಿ ಸಂಬಂಧಪಟ್ಟ ಅಧಿಕಾರಿ ವರ್ಗದವರು ಜಾಲತಾಣದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸರಿಯಾದ ಮಾಹಿತಿಯನ್ನು ಬಿತ್ತರಿಸಲು ವಿನಂತಿ.

–ಮಂಜೇಶ್ ದೇವಗಳ್ಳಿ, ಮೈಸೂರು



ಕೆಬಿಜೆಯವರ

ಭೂಮಂತ್ರ... ಭೂಮಂತ್ರ... ಭೂಮಂತ್ರ...

ಕಂದಾಯ ಭೂಮಿ ಲೂಟಿಯಾದ 29 ವರ್ಷದ ನಂತರ 'ಟಿ.ಎಂ. ವಿಜಯಭಾಸ್ಕರ್ ವರದಿ' ಮರು ಶೋಧ!



ಟಿ.ಎಂ.ವಿಜಯಭಾಸ್ಕರ್, ಐಎಎಸ್



1995ರಲ್ಲಿದ್ದ ಮೈಸೂರು ಜಿಲ್ಲಾಧಿಕಾರಿಗಳ ಹಳೆಯ ಕಚೇರಿ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಭೂಮಿ ಕಳೆದುಕೊಂಡವರಿಗೆ ಪರಿಹಾರವಾಗಿ 50:50 ಅನುಪಾತದಡಿ ಗೊತ್ತು ಗುರಿ ಇಲ್ಲದೆ, ಕಾನೂನು ಬಾಹಿರವಾಗಿ ನಿವೇಶನಗಳನ್ನು ಮಂಜೂರು ಮಾಡಿರುವ ವಿಚಾರದಲ್ಲಿ ಭುಗಿಲೆದ್ದಿರುವ ಜ್ವಾಲೆಯ ಮಧ್ಯೆಯೇ ಸರ್ಕಾರೇತರ ಸಂಸ್ಥೆ (NGO), **ಮೈಸೂರು ಗ್ರಾಹಕರ ಪರಿಷತ್** (ಎಂಜಿಪಿ), ಅನುಕ್ರಮವಾಗಿ ಕಾಂಗ್ರೆಸ್, ಜೆಡಿಎಸ್ ಮತ್ತು ಬಿಜೆಪಿ ಸರ್ಕಾರಗಳ ನಿರ್ಲಕ್ಷ್ಯತೆಯಿಂದಾಗಿ ಮೈಸೂರು ಜಿಲ್ಲಾಧಿಕಾರಿ ಕಚೇರಿಯ ಕಡತಗಳ ನಡುವೆ ಹುದುಗಿ ಹೋಗಿರುವ 29 ವರ್ಷಗಳ ಹಿಂದಿನ ಭೂ ಹಗರಣವೊಂದನ್ನು ಪುನಃ ಪ್ರಸ್ತಾಪಿಸಿದೆ.

ರಾಜಕಾರಣದಲ್ಲಿ, ಎಂತಹುದೇ ಹಣಕಾಸಿನ ಹಗರಣ ಸಂಭವಿಸಿದ ಸಂದರ್ಭದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಸೋದರ ಭಾವನೆವುಳ್ಳವರಾಗಿ ಅತ್ಯಂತ ನೈಪುಣ್ಯತೆಯಿಂದ ಪರಸ್ಪರ ಸಹಾಯ ಮಾಡಿಕೊಳ್ಳುತ್ತಾ ಬಂದಿರುವುದನ್ನು ನಾವು ನೋಡಿದ್ದೇವೆ

ಆದರೆ, ಸಾರ್ವಜನಿಕ ವೇದಿಕೆಗಳಲ್ಲಿ ಮತ್ತು ಪತ್ರಿಕಾಗೋಷ್ಠಿಗಳಲ್ಲಿ ಮಾತ್ರ ಕಳಂಕದ ಬಗ್ಗೆ ಪರಸ್ಪರ ಆರೋಪಿಸಿಕೊಳ್ಳುತ್ತವೆ. ಈ ಮೂಲಕ ಜನರನ್ನು ಮೂರ್ಖರನ್ನಾಗಿಸುತ್ತಾ ಬಂದಿವೆ.

ಪ್ರಸ್ತುತ, ಅಂತಹ ಒಂದು ಹಗರಣದ ಚರಿತ್ರೆಯ ಬಗ್ಗೆಯೇ ಈಗ ಎಂಜಿಪಿ ದನಿ ಎತ್ತಿದ್ದು **'ಟಿ.ಎಂ. ವಿಜಯಭಾಸ್ಕರ್ ವರದಿ'** ಎಂದೇ ಪ್ರಖ್ಯಾತಿಯಾಗಿರುವ ಹಾಗೂ ಹೆಚ್ಚು ಕಡಿಮೆ ಮೂರು ದಶಕಗಳಿಂದ ಹುದುಗಿ ಹೋಗಿರುವ ಸದರಿ ವರದಿಯನ್ನು ಎಂಜಿಪಿ ಹೊರ ತೆಗೆಯಲು ಬಯಸಿದೆ.

ಈ ಮೂರು ದಶಕಗಳ ಹಿಂದಿನ **'ಟಿ.ಎಂ. ವಿಜಯಭಾಸ್ಕರ್ ವರದಿ'ಗೆ ಒದಗಿದ ಗತಿಯೇ ಇಂದಿನ ಮುಡಾದ 50:50 ಅನುಪಾತದಡಿ ನಡೆದಿರುವಂತಹ ವಂಚನೆಗೆ ಸಂಬಂಧಿಸಿದ ಹಗರಣಕ್ಕೂ ಬರುವುದೋ ಎಂಬ ಆತಂಕ ಮೈಸೂರು ನಾಗರಿಕರನ್ನು ಬಲವಾಗಿ ಕಾಡುತ್ತಿದೆ.**

ಎಂಜಿಪಿಯ ಸಂಸ್ಥಾಪಕ ಸಂಚಾಲಕರು ಹಾಗೂ ಸಾಮಾಜಿಕ ಹಿತಾಸಕ್ತಿಗಳಿಗಾಗಿ ಅದಮ್ಯ ಹೋರಾಟಗಾರ **ಡಾ.ಭಾಮಿ ವಿ.ಶೆಣೈ** ಅವರು, ಸರ್ಕಾರವೇ ಶಾಮೀಲಾಗಿರುವಂತಹ ಈ ಹಗರಣದ ವರದಿಯ ಪ್ರತಿಯೊಂದನ್ನು ನನಗೆ ನೀಡಿ, ಮುಡಾದ ಸದರಿ 50:50 ಅನುಪಾತ ಯೋಜನೆ ಯಡಿಯ ವಂಚನೆ ಕಡೆ ಜನ ಹಾಗೂ ಮಾಧ್ಯಮಗಳು ಸರಿಯಾಗಿ ಗಮನಹರಿಸದೇ ಹೋದಲ್ಲಿ ಇದು ಸಹ ಮುಡಾ ಕಚೇರಿಯ ದಾಖಲೆಗಳ ರಾಶಿ ಸೇರುತ್ತದೆ ಎಂದು ಆತಂಕದಿಂದಲೇ ಹೇಳಿದರು.

ಕಾರಣ, ಇನ್ನಿತರ ರಾಜಕೀಯ ಪಕ್ಷಗಳು ಮುಡಾ ಆಡಳಿತ ಮಂಡಳಿಯ ಸಭೆಯಲ್ಲಿ, ಈ ನಿರ್ಣಯದ ವೇಳೆ ಭಾಗವಹಿಸಿದ್ದವು. ಅದಕ್ಕೂ ಮಿಗಿಲಾಗಿ ಈ ಹಗರಣದಲ್ಲಿ ಮುಖ್ಯಮಂತ್ರಿಗಳೇ ಶಾಮೀಲಾಗಿದ್ದಾರೆ ಎಂದು ಬೇರೆ ಆರೋಪಿಸಲಾಗಿದೆ.

ಅದು ಹಾಗಿರಲಿ, ಈಗ ಎಂಜಿಪಿಯು 1995ರ ಟಿ.ಎಂ. ವಿಜಯಭಾಸ್ಕರ್ ವರದಿಯನ್ನು ಪುನರುಜ್ಜೀವನಗೊಳಿಸಲು ಬಯಸಿದ್ದು, ಹೇಗಾದರೂ, ಆ ವರದಿಯ ಆಧಾರದ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವಂತೆ ಮಾಡಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವುದರ (ಅಂತಹವರ ಸಂಖ್ಯೆ ದೊಡ್ಡದಾಗಿದೆ) ಜೊತೆಗೆ ಅವರಿಂದ **ಮುಡಾಗೆ ಉಂಟಾಗಿರುವ ಅಂದಾಜು ನಷ್ಟ ರೂ. 62,52,55,200 ವಸೂಲಿಯಾಗಬೇಕಿದೆ** ಇದು ಸಾಧ್ಯವೇ? ಇದೊಂದು ರೀತಿ ಸತ್ತ ಕುದುರೆ ಬಡಿದೆಬ್ಬಿಸುವ ಪ್ರಯತ್ನದಂತಿದೆ.

ಈಗಲೂ ಸಾಕಷ್ಟು ಚರ್ಚೆಯಾಗುತ್ತಿರುವ, ಆದರೆ ಯಾವುದೇ ಕ್ರಮ ಜರುಗಿಸದ ವರದಿ ಈ ಟಿ.ಎಂ. ವಿಜಯಭಾಸ್ಕರ್ ವರದಿ. ಇದೊಂದು ರೀತಿ ರೋಚಕ ಬೆಳವಣಿಗೆ. ಕಬಿನಿ ಜಲಾಶಯ ಯೋಜನೆ, ಮೈಸೂರು ಇದರ ವಿಶೇಷ ಭೂಸ್ವಾಧೀನ ಅಧಿಕಾರಿ **ಬಿ.ಟಿ.ರಾಜಣ್ಣ ಕೆಎಎಸ್** ಅವರಿಗೆ ಮೈಸೂರಿನ ಅಂದಿನ **ಜಿಲ್ಲಾಧಿಕಾರಿ ಟಿ.ಎಂ.ವಿಜಯಭಾಸ್ಕರ್ ಐಎಎಸ್** ಅವರು ದಿನಾಂಕ 16.01.1995 ರಂದು ಅಧಿಕೃತ ಪತ್ರ ಬರೆದರು.

ಈ ಪತ್ರದಲ್ಲಿ ರಾಜಣ್ಣನವರಿಗೆ, **ಮೈಸೂರು ತಾಲೂಕಿನ ಕೆಲವು ಮಂಡಲ ಪಂಚಾಯಿತಿಗಳಲ್ಲಿ ನಿಯಮಾವಳಿಗಳನ್ನು ಉಲ್ಲಂಘಿಸಿ ಮಾಡಿರುವ ಖಾತೆಗಳನ್ನು ಪರಿಶೀಲಿಸುವಂತೆ ನಿರ್ದೇಶಿಸಲಾಗಿತ್ತು.** ಅದರಂತೆ ರಾಜಣ್ಣ ಕೂಲಂಕಷವಾಗಿ ಪರಿಶೀಲನೆ ನಡೆಸಿ ಎರಡೂವರೆ ತಿಂಗಳಲ್ಲಿ (31.3.1995 ರಲ್ಲಿ) ಜಿಲ್ಲಾಧಿಕಾರಿ ಟಿ.ಎಂ.ವಿಜಯಭಾಸ್ಕರ್ ಅವರಿಗೆ ವಿಸ್ತೃತವಾದ ಬೃಹತ್ ವರದಿಯನ್ನು ಸಲ್ಲಿಸಿದರು.

ಟಿ.ಎಂ. ವಿಜಯಭಾಸ್ಕರ್ ಅವರು ಈ ರೀತಿ ರಾಜಣ್ಣನವರಿಗೆ ಪತ್ರ ಬರೆದು ಖಾತೆಗಳ ನೀಡಿರುವ ಸಂಬಂಧ ವರದಿ ಸಲ್ಲಿಸುವಂತೆ ಸೂಚಿಸಲು ಮೂಲ ಕಾರಣವೆಂದರೆ, **ಬೆಟ್ಟೇಗೌಡ** ಎಂಬ ಕೃಷಿಕರೊಬ್ಬರು ದಿನಾಂಕ 26.09.1994ರಂದು ಜಿಲ್ಲಾಧಿಕಾರಿಗಳಿಗೆ ಕೊಟ್ಟ ಲಿಖಿತ ದೂರು. ಅದರಲ್ಲಿ ಅವರು, ಅಂದಿನ ಹಿನಕಲ್ ಮಂಡಲ ಪಂಚಾಯಿತಿಯ ಕಾರ್ಯದರ್ಶಿಯವರು ಹೆಬ್ಬಾಳ ಗ್ರಾಮದ ಸರ್ವೇ ನಂಬರ್ 238:ಎ ನಲ್ಲಿರುವ ತಮ್ಮ ಜಮೀನನ್ನು (ಸರ್ವೆ ನಂ. 238:ಎ) ಅನಧಿಕೃತವಾಗಿ ನಿವೇಶನಗಳನ್ನಾಗಿ ಪರಿವರ್ತಿಸಿ, ಅಲ್ಲಿ ಯಾವುದೇ ಮನೆಗಳು ಇಲ್ಲದಿದ್ದರೂ ಆ ನಿವೇಶನಗಳಿಗೆ ಸಂಬಂಧಪಟ್ಟ ಹಾಗೆ ಸುಮಾರು 100–150 ಜನರಿಗೆ ಅಕ್ರಮವಾಗಿ ಖಾತೆ ಮಾಡಿಕೊಟ್ಟಿರುತ್ತಾರೆ ಎಂದು ದೂರಿದ್ದರು.

ಹಾಗಾಗಿ, ಜಿಲ್ಲಾಧಿಕಾರಿಗಳು, ಹಿನಕಲ್, ಯರಗನಹಳ್ಳಿ, ಸಿದ್ದಲಿಂಗಪುರ ಮತ್ತು ಶ್ರೀರಾಂಪುರ ವ್ಯಾಪ್ತಿಯ ಭೂಮಿಯ ಬಗ್ಗೆ ತನಿಖೆಗೆ ಆದೇಶಿಸಿದ್ದರು.

ಇದಕ್ಕಾಗಿ ಬಿ.ಟಿ.ರಾಜಣ್ಣ, ನೇತೃತ್ವದಲ್ಲಿ ಅಧಿಕಾರಿಗಳ ತ್ರಿಸದಸ್ಯ ಸಮಿತಿಯನ್ನು ರಚಿಸಲಾಗಿತ್ತು. ಈ ವರದಿಯ ಎರಡನೆಯ ಪುಟದಲ್ಲಿ **ಸದರಿ ಗ್ರಾಮ ಠಾಣೆಗಳ ವ್ಯಾಪ್ತಿಯಲ್ಲಿ 4,000 ಕಾನೂನುಬದ್ಧ (ಸಕ್ರಮ) ನಿವೇಶನಗಳಿದ್ದರೆ, 5,896 ಅಕ್ರಮ ನಿವೇಶನ ಹಾಗೂ ಕಟ್ಟಡಗಳಿವೆ ಎಂದು ನಮೂದಿಸಲಾಗಿತ್ತು.**

> **ದುರದೃಷ್ಟವಶಾತ್, ಈ ಒಂದು ವ್ಯಾಪಕ ಭ್ರಷ್ಟಾಚಾರ ಮತ್ತು ಅಕ್ರಮದಲ್ಲಿ ತಮ್ಮನ್ನು ಆಯ್ಕೆ ಮಾಡಿದ ಜನರಿಗೆ ಇಲ್ಲವೆ ಮತದಾರರಿಗೆ ಸುಮಾರು ರೂ.62,52,55,200 ರೂಪಾಯಿಗಳಷ್ಟು ನಷ್ಟ ಉಂಟಾಗಿದೆ ಎಂಬ ಕಟು ಸತ್ಯ ಗೊತ್ತಿದ್ದರೂ ನಮ್ಮನ್ನಾಳುವ ರಾಜಕೀಯ ನಾಯಕರು, ಈ ವರದಿಯತ್ತ ತಿರುಗಿಯೂ ನೋಡದೆ ನಿರ್ಲಕ್ಷಿಸಿದ್ದಾರೆ.**

ಬಿ.ಟಿ.ರಾಜಣ್ಣ ನೇತೃತ್ವದ ಈ ತ್ರಿಸದಸ್ಯ ಸಮಿತಿ ಅತ್ಯಂತ ಪ್ರಾಮಾಣಿಕವಾಗಿ ತನ್ನ ಕರ್ತವ್ಯವನ್ನು ನಿರ್ವಹಿಸಿದೆ ಎಂಬುದಕ್ಕೆ ಅದು ನೀಡಿರುವ ಅತ್ಯಂತ ಸ್ಪಷ್ಟ ಹಾಗೂ ನಿಖರ ವರದಿಯೇ ಸಾಕ್ಷಿಯಾಗಿದೆ.

ದುರದೃಷ್ಟವಶಾತ್, ಈ ಒಂದು ವ್ಯಾಪಕ ಭ್ರಷ್ಟಾಚಾರ ಮತ್ತು ಅಕ್ರಮದಲ್ಲಿ ತಮ್ಮನ್ನು ಆಯ್ಕೆ ಮಾಡಿದ ಜನರಿಗೆ ಇಲ್ಲವೆ ಮತದಾರರಿಗೆ ಸುಮಾರು ರೂ. 62,52,55,200 ರೂಪಾಯಿಗಳಷ್ಟು ನಷ್ಟ ಉಂಟಾಗಿದೆ ಎಂಬ ಕಟು ಸತ್ಯ ಗೊತ್ತಿದ್ದರೂ ನಮ್ಮನ್ನಾಳುವ ರಾಜಕೀಯ ನಾಯಕರು, ಈ ವರದಿಯತ್ತ ತಿರುಗಿಯೂ ನೋಡದೆ ನಿರ್ಲಕ್ಷಿಸಿದ್ದಾರೆ.

ಸದರಿ ಪಂಚಾಯಿತಿಗಳ ಆದಾಯ ಮತ್ತು ವ್ಯಯಗಳ ಬಗ್ಗೆ ತನಿಖೆ ನಡೆಸಲು ತನಗೆ ನಿರ್ದೇಶನ ನೀಡಿಲ್ಲದ ಕಾರಣ, ಅದನ್ನು ತನಿಖೆಯ ವ್ಯಾಪ್ತಿಯಿಂದ ಹೊರಗಿಡಲಾಗಿತ್ತು ಎಂದು ಸಮಿತಿ ವರದಿ ಹೇಳಿದೆ. ಅದಾಗ್ಯೂ, ಒಂದು ವೇಳೆ ವಿಧಿ ವಿಧಾನಗಳ ಪರಿಶೋಧನೆಗೆ (forensic audit) ಒಳಪಡಿಸಿದರೆ, ಈ ಪಂಚಾಯಿತಿಗಳಿಗೆ ಅಕ್ರಮಗಳು ಹಾಗೂ ದುರುಪಯೋಗಗಳಿಂದ ಉಂಟಾಗಿರುವ ಲಕ್ಷಾಂತರ ರೂಪಾಯಿಗಳ ನಷ್ಟವನ್ನು ಬೆಳಕಿಗೆ ತರಬಹುದು ಎಂದು ಸಮಿತಿ ಅಭಿಪ್ರಾಯಪಟ್ಟಿದೆ.

ವರದಿಯಲ್ಲಿ ಸ್ಪಷ್ಟವಾಗಿ ಕೆಲವು ಕಾರ್ಯದರ್ಶಿಗಳ ಹೆಸರಿಸಲಾಗಿದೆ:

1. ಹಿನಕಲ್ ಮಂಡಲ್ ಪಂಚಾಯಿತಿಯ ಹಿಂದಿನ ಕಾರ್ಯದರ್ಶಿ

2. ಸಿದ್ದಲಿಂಗಪುರದ ಮಂಡಲ್ ಪಂಚಾಯಿತಿಯ ಹಿಂದಿನ ಕಾರ್ಯದರ್ಶಿ

3.ಯರಗನಹಳ್ಳಿ ಮಂಡಲ್ ಪಂಚಾಯಿತಿಯ ಹಿಂದಿನ ಕಾರ್ಯದರ್ಶಿ

4. ಉದ್ಬೂರ್ ಮಂಡಲ್ ಪಂಚಾಯಿತಿಯ ಹಿಂದಿನ ಕಾರ್ಯದರ್ಶಿ ಹಾಗೂ ಎಲ್ಲಾ ಮಂಡಲ್ ಪಂಚಾಯಿತಿಗಳ ಬಿಲ್ ಕಲೆಕ್ಟರ್‌ಗಳು ಈ ಭೂ ಹಗರಣದಲ್ಲಿ ಶಾಮೀಲಾಗಿದ್ದು, ಸರ್ಕಾರಿ ಹಣವನ್ನು ಲೂಟಿ ಮಾಡಿದ್ದಾರೆ ಎಂದು ವರದಿ ಸಲ್ಲಿಸಿದ್ದಾರೆ.

ಮಂಡಲ ಪಂಚಾಯಿತಿಯ ವ್ಯಾಪ್ತಿಯನ್ನು ಮುಡಾ ಪ್ರವೇಶಿಸಿ, ಅವುಗಳ ವ್ಯಾಪ್ತಿ ಸೀಮಿತಗೊಂಡಿರುವುದರಿಂದ, ಸದರಿ ಮಂಡಲ ಪಂಚಾಯಿತಿಗಳನ್ನು ರದ್ದುಪಡಿಸಲು ಈ ವರದಿ ಶಿಫಾರಸ್ಸು ಮಾಡಿದೆ. ಹಾಗೆಯೇ ಅನಧಿಕೃತ ಕಟ್ಟಡಗಳ ನಿರ್ಮಾಣ ತಡೆಯಲು ಬೆಂಗಳೂರಿನಲ್ಲಿರುವ ಹಾಗೆ "ಭೂ ಜಾಗೃತ ದಳ"(Land Vigilant Squad) ವನ್ನು ರಚಿಸಿ, ಒಂದು ವೇಳೆ ಅನಧಿಕೃತ ಕಟ್ಟಡಗಳು ತಲೆ ಎತ್ತಿದರೆ ಆ ಪಡೆಯನ್ನೇ ಹೊಣೆಗಾರರನ್ನಾಗಿಸುವಂತೆ ಶಿಫಾರಸ್ಸು ಮಾಡಿದೆ. ಔಚಿತ್ಯಪೂರ್ಣ ಸಲಹೆ!

ಆದರೆ ನಮ್ಮ ಅಪ್ರಾಮಾಣಿಕ ಹಾಗೂ ಭ್ರಷ್ಟ ರಾಜಕಾರಣಿಗಳಿಗೆ ಇದು ಬೇಕಿಲ್ಲ. ಅದು ಹೋಗಲಿ, ಎಲ್ಲಾ ಪಕ್ಷಗಳ ಪ್ರಾಮಾಣಿಕ ರಾಜಕಾರಣಿಗಳು ಅದಕ್ಕಾಗಿ ಹೋರಾಡುವುದನ್ನು ಯಾರು ತಡೆದಿದ್ದಾರೆ?

ಈ ವರದಿಯನ್ನು ಓದಿದ ನಂತರ, ಬಿ.ಟಿ.ರಾಜಣ್ಣ ಹಾಗೂ ಸಮಿತಿಯ ಉಳಿದಿಬ್ಬರು ಸದಸ್ಯರಾದ **ಜಿ.ಎನ್ ಬಸವರಾಜು,** ವಿಶೇಷ ತಹಸೀಲ್ದಾರ್, ಭೂಪರಿಮಿತ (Land Ceiling), ಮೈಸೂರು ಮತ್ತು **ಜಿ.ಎಸ್.ಗುರುಸಿದ್ದಯ್ಯ,** ಆಪ್ತ ಕಾರ್ಯದರ್ಶಿಗಳು, ಆಡಳಿತಾಧಿಕಾರಿಗಳು, ಮೈಸೂರು ಜಿಲ್ಲಾ ಪಂಚಾಯಿತಿ, ಮೈಸೂರು– **ಇಂತಹ ಪ್ರಾಮಾಣಿಕ ಹಾಗೂ ಬದ್ಧತೆಯುಳ್ಳ ಅಧಿಕಾರಿಗಳು ಇದ್ದಾರಲ್ಲ ಎಂದು ಅಚ್ಚರಿಯಾಯಿತು.**

ಅದೇ ವೇಳೆ, ನಾವು ಈ ರೀತಿಯ ಅಸಮರ್ಥ ಕಂದಾಯ ಮತ್ತು ವಸತಿ ಇಲಾಖೆಯ ಆಡಳಿತ ವ್ಯವಸ್ಥೆಯೊಂದಿಗೆ ವ್ಯವಹರಿಸಬೇಕಲ್ಲಾ ಎಂದು ಚಿಂತಿಸಬಹುದು. **ಗ್ರಾಮಾಂತರ ಪ್ರದೇಶಗಳಲ್ಲಿ ಮನೆ ಮತ್ತು ನಿವೇಶನಗಳನ್ನು ಹೊಂದಲು ಅಪೇಕ್ಷಿಸುವ ರೈತರು ಮತ್ತು ಇತರ ಜನರು ಯಾವಾಗಲೂ ಸ್ಥಳೀಯ ಭ್ರಷ್ಟ ರಾಜಕಾರಣಿಗಳ ಕೃಪೆಯಲ್ಲೇ ಇರಬೇಕಾದ ದುರ್ಗತಿ ಒದಗಿ ಬಂದಿದೆ.**

ಆದ್ದರಿಂದಲೇ, ಮೂವರು ಸದಸ್ಯರ ಈ ಸಮಿತಿಯು, ಮೇಲೆ ಹೇಳಲಾದ ನಾಲ್ವರು ಕಾರ್ಯದರ್ಶಿಗಳ ವಿರುದ್ಧ ಕ್ರಮ ಜರುಗಿಸಲು ಲೋಕಾಯುಕ್ತ ಇಲ್ಲವೆ ಸಿಒಡಿ ತನಿಖೆಗೆ ಆದೇಶಿಸಬೇಕೆಂದು ಶಿಫಾರಸ್ಸು ಮಾಡಿದ್ದರಲ್ಲಿ ಆಶ್ಚರ್ಯವೇನೂ ಇಲ್ಲ. ಈ ಸಮಿತಿಯ ವರದಿಯ ಬಗ್ಗೆ ರಾಜ್ಯ ಸರ್ಕಾರ ಗಮನಹರಿಸದಿದ್ದಾಗ ಹಾಗೂ ಅದನ್ನು ಉಪೇಕ್ಷಿಸಿದಾಗ ಅದು ಹೇಗೆ ಸದರಿ ಪ್ರಕರಣವನ್ನು ಲೋಕಾಯುಕ್ತ ಅಥವಾ ಸಿಒಡಿಗೆ ವಹಿಸುತ್ತಾರೆ? ನೀವೇ ಹೇಳಿ. **ಅದು ಹೋಗಲಿ, ಯಾರೊಬ್ಬರೂ ಈ ಹಗರಣಕ್ಕೆ ಸಂಬಂಧಿಸಿದ ಹಾಗೆ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ಹೂಡಲು ಮುಂದಾಗಲಿಲ್ಲ. ಎಂತಹ ವಿಪರ್ಯಾಸ!**

ಅದಾಗ್ಯೂ ಇಲ್ಲಿ ನಮ್ಮನ್ನು ಕಾಡುವ ಮೂಲ ಪ್ರಶ್ನೆ: ಈ ಪ್ರಕರಣದ ದೂರುದಾರರಾದ ಬೆಟ್ಟೇಗೌಡರು ಜಿಲ್ಲಾಧಿಕಾರಿಗಳಿಂದ ಯಾವ ಪರಿಹಾರ ಪಡೆದರು? ಅದೂ ಗೊತ್ತಿಲ್ಲ!

ನಮ್ಮ ಓದುಗರು ನೆನಪಿಸಿಕೊಳ್ಳಬೇಕು. ಕೆಲ ವರ್ಷಗಳ ಹಿಂದೆ ನಮ್ಮ ಶಾಸಕರು ಟಿ.ಎಂ. ವಿಜಯಭಾಸ್ಕರ್ ವರದಿಯಲ್ಲಿ ಉಲ್ಲೇಖವಾಗಿರುವ ಈ ನಾಲ್ಕು ಮಂಡಲ್ (ಗ್ರಾಮ) ಪಂಚಾಯಿತಿಗಳಾದ **ಹಿನಕಲ್, ಉದ್ಬೂರು (ಶ್ರೀರಾಂಪುರ), ಸಿದ್ದಲಿಂಗಪುರ ಹಾಗೂ ಯರಗನಹಳ್ಳಿ ಗ್ರಾಮ ಪಂಚಾಯಿತಿಗಳನ್ನು ಮೈಸೂರು ಮಹಾನಗರಪಾಲಿಕೆಯಲ್ಲಿ ವಿಲೀನಗೊಳಿಸಲು ಹಾಗೂ ಇದನ್ನು ಬೆಂಗಳೂರಿನಲ್ಲಿ ಇರುವ ಹಾಗೆ "ಬೃಹತ್ ಮೈಸೂರು ಮಹಾನಗರಪಾಲಿಕೆ" ಎಂದು ನಾಮಕರಣ ಮಾಡುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದರು.**

ಈ ಪ್ರದೇಶಗಳ ವ್ಯಾಪ್ತಿಯಲ್ಲಿ ಯಾರು ನಿವೇಶನ, ಕಲ್ನಾರ್‌ಶೀಟ್ ಸೂರುಗಳನ್ನು ಹೊಂದಿ, ಪಂಚಾಯಿತಿಗಳಿಂದ ಖಾತೆ ಮಾಡಿಸಿಕೊಂಡಿದ್ದರೋ ಅಂತಹವರಿಗೆ ನಾಗರಿಕ ಸೌಲಭ್ಯಗಳಾದ ರಸ್ತೆ, ದೀಪ, ಯುಜಿಡಿ, ನೀರು ಮುಂತಾದವು, **ಈ ಬಡಾವಣೆಗಳು ಒಮ್ಮೆ ಬೃಹತ್ ಮೈಸೂರು ಮಹಾನಗರಪಾಲಿಕೆಯ ವ್ಯಾಪ್ತಿಯೊಳಗೆ ಸೇರ್ಪಡೆಗೊಂಡ ನಂತರ ದೊರಕುತ್ತವೆ.**

ಕಂದಾಯ ಇಲಾಖೆಯ ನೌಕರರ ಸಾಥ್ ಪಡೆದು ತಮ್ಮ ನಿವೇಶನಗಳನ್ನು ಮಾರಿದ ರಾಜಕಾರಣಿಗಳು ಮತ್ತು ಭೂಮಾಫಿಯಾಗಳು ಅಕ್ರಮ ನಿವೇಶನಗಳನ್ನು ಖರೀದಿಸಿದ ನಿವೇಶನದಾರರು ಸಹಾಯ ಕೋರಿ ತಮ್ಮ ಬಳಿ ಬಂದಾಗ **"ಬೃಹತ್ ಮೈಸೂರು ಮಹಾನಗರಪಾಲಿಕೆ"**ಯನ್ನು ಕೇಳಿ ಹೋಗಿ, ನಮ್ಮನ್ನೇಕೆ ಕೇಳುತ್ತೀರಾ ಎನ್ನಬಹುದಲ್ಲವೇ!?

(ಮೂಲ ಇಂಗ್ಲಿಷ್ ಲೇಖನದ ಕನ್ನಡ ಅನುವಾದ)

Email: Voice@starofmysore.com

ಅಪರ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು.ಜು.31– ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನ ಅಪರ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಯ ಗರಿಷ್ಟ ಅವಧಿ ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಸದರಿ ಹುದ್ದೆಯನ್ನು ಹೊಸ ಅಭ್ಯರ್ಥಿಗಳಿಂದ ತುಂಬಲು ಅಗತ್ಯ ಷರತ್ತುಗಳನ್ನು ಪೂರೈಸಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 7 ವರ್ಷ ವಕೀಲ ವೃತ್ತಿಯನ್ನು ಪೂರೈಸಿರುವ ಆಸಕ್ತ ಅರ್ಹ ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸ, ಜಾತಿ, ವಿದ್ಯಾರ್ಹತೆ, ವಕೀಲ ವೃತ್ತಿಯಲ್ಲಿನ ಅನುಭವ ವಿವರಗಳನ್ನು ನಮೂದಿಸಿದ ಸ್ವಯಂ ವಿವರಣೆಯ ಮಾಹಿತಿಯೊಂದಿಗೆ ವಿದ್ಯಾರ್ಹತೆ, ವಕೀಲ ವೃತ್ತಿಯಲ್ಲಿ ರಾಜ್ಯ ಬಾರ್ ಕೌನ್ಸಿಲ್ ನೋಂದಣಿ ಮತ್ತು ವಕೀಲ ವೃತ್ತಿಯಲ್ಲಿ ಹೊಂದಿರುವ ಅನುಭವದ ಬಗ್ಗೆ ಸ್ಥಳೀಯ ವಕೀಲರ ಸಂಘದ ದೃಢೀಕರಣ ಪತ್ರ ಹಾಗೂ ಇತ್ಯಾದಿ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಆ.16ರೊಳಗಾಗಿ ಡಿಸಿ ಕಚೇರಿಗೆ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಮೂರನೇ ಪುಟದಿಂದ

ರಾಜ್ಯಪಾಲರ ನಡೆ ನಿಗೂಢ

ರಾಜಕೀಯ ಪ್ರೇರಿತ ಎಂದು ನಂಬಲು ಕಾರಣವಿದೆ. ಅವರಿಗೆ ಕೆಲವು ಸಾಂವಿಧಾನಿಕ ಅಧಿಕಾರಗಳನ್ನು ನೀಡಲಾಗಿದೆ. ಅದರ ಚೌಕಟ್ಟಿನೊಳಗೆ ಕಾರ್ಯ ನಿರ್ವಹಿಸಬೇಕು. ಅದನ್ನು ಮೀರಿದರೆ ಅನುಮಾನಗಳಿಗೆ ಕಾರಣವಾಗುತ್ತದೆ. ಏನೋ ರಾಜಕೀಯ ನಡೆಯುತ್ತಿದೆ ಎಂಬ ಶಂಕೆ ನಮಗಿದೆ ಎಂದು ಹೇಳಿದರು.

ರಾಜ್ಯಪಾಲರ ದುರ್ಬಳಕೆ: ಇದೇ ವಿಚಾರವಾಗಿ ಪ್ರತಿಕ್ರಿಯಿಸಿರುವ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಬಿಜೆಪಿಯವರು ರಾಜ್ಯಪಾಲರನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ತಮಿಳುನಾಡು, ಮಹಾರಾಷ್ಟ್ರ ಮತ್ತು ಪಶ್ಚಿಮ ಬಂಗಾಳದ ರಾಜ್ಯಪಾಲರು ಕೆಲವು ವಿಚಾರಗಳಲ್ಲಿ ತಮ್ಮ ಸಾಂವಿಧಾನಿಕ ಸ್ಥಾನಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಸುಪ್ರೀಂಕೋರ್ಟ್ ಕೂಡ ಈ ರಾಜ್ಯಪಾಲರ ನಡೆಯನ್ನು ಅವಲೋಕನ ಮಾಡಿದೆ. ರಾಜ್ಯಪಾಲರುಗಳು ಸರ್ಕಾರದ ಕಾರ್ಯ ನಿರ್ವಹಣೆಯಲ್ಲಿ ಮಧ್ಯೆ ಪ್ರವೇಶಿಸುತ್ತಿದ್ದಾರೆ ಎಂಬುದರ ಕುರಿತು ಮಾಧ್ಯಮಗಳಲ್ಲಿ ಹಲವಾರು ಲೇಖನಗಳು ಪ್ರಕಟಗೊಂಡಿವೆ. ಕರ್ನಾಟಕದಲ್ಲಿಯೂ ಅದೇ ರೀತಿ ನಡೆಯುತ್ತಿದೆ ಎಂದು ತೋರುತ್ತಿದೆ. ದೂರು ಬಂದ ಕೂಡಲೇ ಮುಖ್ಯಮಂತ್ರಿಗಳಿಂದ ವಿವರಣೆ ಕೇಳಿದ ನಿದರ್ಶನಗಳು ಇಲ್ಲ. ಆದರೆ ಇಲ್ಲಿ ಅದು ನಡೆದಿದೆ. ಬಳ್ಳಾರಿ ಗಣಿಗಾರಿಕೆ ಹಗರಣ ಸಂದರ್ಭ ಅಂದಿನ ರಾಜ್ಯಪಾಲರು ತೆಗೆದುಕೊಂಡ ನಿರ್ಣಯಕ್ಕೆ ಬಲವಾದ ಪುರಾವೆಗಳಿತ್ತು. ಆದರೆ ಮುಡಾ ಪ್ರಕರಣದಲ್ಲಿ ಅಂತಹದ್ದು ಏನೂ ಇಲ್ಲ ಎಂದು ಹೇಳಿದರಲ್ಲದೆ, ಈ ಸಂಬಂಧ ಸಂಪುಟದಲ್ಲಿ ನಿರ್ಣಯ ಕೈಗೊಳ್ಳುತ್ತೇವೆ ಎಂದರು.

ಸರ್ಕಾರ ಅಸ್ಥಿರಗೊಳಿಸುವ ಯತ್ನ: ಮತ್ತೊಂದೆಡೆ ಹಾಸನ ಜಿಲ್ಲೆ ಸಕಲೇಶಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕಂದಾಯ ಸಚಿವ ಕೃಷ್ಣ ಭೈರೇಗೌಡ ಬಿಜೆಪಿ ಹಾಗೂ ಜೆಡಿಎಸ್‌ನಿಂದ ರಾಜ್ಯಪಾಲರಿಗೆ ದೂರು ಕೊಡಿಸುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಿದೆ. ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಿಲುಕಿಸಿ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಹೊರಟಿದೆ ಎಂದು ಆರೋಪಿಸಿದರು. ರಾಜ್ಯಪಾಲರ ಕಚೇರಿಯನ್ನು ದುರುಪಯೋಗಪಡಿಸಿಕೊಂಡು ನಮ್ಮ ಸರ್ಕಾರವನ್ನು ಅಸ್ಥಿರಗೊಳಿಸಲು ಮುಂದಾದರೆ ಸುಪ್ರೀಂಕೋರ್ಟ್ ಮೊರೆ ಹೋಗುವುದರ ಜೊತೆಗೆ ಪ್ರಜಾಪ್ರಭುತ್ವ ಉಳಿಸಲು ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದರು. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ದೆಹಲಿಯಲ್ಲಿ ಕುಳಿತು, ನಮ್ಮ ಸರ್ಕಾರವನ್ನು ಪತನಗೊಳಿಸಲು ತಂತ್ರ ರೂಪಿಸುತ್ತಿದ್ದಾರೆ. ಹಾಗೆಂದ ಮಾತ್ರಕ್ಕೆ ನಾವೇನು ಕೈಕಟ್ಟಿ ಕೂರುವುದಿಲ್ಲ. ಕಾನೂನಾತ್ಮಕ ಹೋರಾಟ ನಡೆಸುತ್ತೇವೆ. ಎಲ್ಲಾ ಸವಾಲುಗಳನ್ನು ಎದುರಿಸಲು ತಯಾರಾಗೇ ಇದ್ದೇವೆ. ಅವರು ಏನು ಮಾಡುತ್ತಾರೋ ಮಾಡಲಿ. ನಾವು ಏನು ಮಾಡಬೇಕೋ ಮಾಡುತ್ತೇವೆ ಎಂದು ಹೇಳಿದರು.

ದೆಹಲಿಯಲ್ಲಿ ಎರಡು ದಿನ ವಾಸ್ತವ್ಯ ಹೂಡಿ ಮುಡಾ ಮತ್ತು ವಾಲ್ಮೀಕಿ ಹಗರಣದ ಬಗ್ಗೆ ತಮ್ಮ ಪಕ್ಷದ ವರಿಷ್ಠರಿಗೆ ಸುದೀರ್ಘವಾದ ವಿವರಣೆ ನೀಡಿ ಚರ್ಚಿಸಿದ ಬಳಿಕ ಇಂದು ಬೆಂಗಳೂರಿಗೆ ಆಗಮಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ (ಆ.1) ಬೆಳಗ್ಗೆ ತಮ್ಮ ಸಂಪುಟ ಸಹೋದ್ಯೋಗಿಗಳಿಗೆ ಉಪಹಾರ ಕೂಟ ಆಯೋಜಿಸಿದ್ದಾರೆ. ನಂತರ ಬೆಳಗ್ಗೆ 11 ಗಂಟೆಗೆ ಸಂಪುಟ ಸಭೆ ನಡೆಯಲಿದ್ದು, ಈ ಸಭೆಯಲ್ಲಿ 'ಖಾಸಗಿ ವ್ಯಕ್ತಿ ನೀಡುವ ದೂರು ಆಧರಿಸಿ ಮುಖ್ಯಮಂತ್ರಿಗಳ ವಿಚಾರಣೆಗೆ ಅನುಮತಿ ನೀಡಬಾರದು' ಎಂಬ ಒಂದು ಸಾಲಿನ ನಿರ್ಣಯವನ್ನು ಅಂಗೀಕರಿಸಿ, ಆ ಪ್ರಸ್ತಾವನೆಯನ್ನು ರಾಜ್ಯಪಾಲರಿಗೆ ರವಾನಿಸುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ನಿರೀಕ್ಷಿಸಿರಲಿಲ್ಲ: ಮತ್ತೊಂದೆಡೆ ಬಾಗಲಕೋಟೆಯಲ್ಲಿ ಇದೇ ವಿಚಾರವಾಗಿ ಮಾತನಾಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ರಾಜ್ಯಪಾಲ ಗೆಹ್ಲೋಟ್ ಅವರು ಈ ರೀತಿ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ನಿರೀಕ್ಷಿಸಿರಲಿಲ್ಲ. ಹಲವು ರಾಜ್ಯಗಳಲ್ಲಿ ರಾಜ್ಯಪಾಲರ ಮೂಲಕ ಸರ್ಕಾರಗಳನ್ನು ಅಸ್ಥಿರಗೊಳಿಸಿದಂತೆ ಕರ್ನಾಟಕದಲ್ಲೂ ಅಂತಹ ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದರು.

ಸಿದ್ದರಾಮಯ್ಯ ಸಂಪುಟ ಸಹೋದ್ಯೋಗಿಗಳ ಹೇಳಿಕೆಗಳು ಹೊರ ಬೀಳುತ್ತಿದ್ದಂತೆಯೇ ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಪಕ್ಷ ನಾಯಕ ಆರ್.ಅಶೋಕ್, ಮುಖ್ಯಮಂತ್ರಿಗಳ ವಿರುದ್ಧ ತನಿಖೆಗೆ ಅನುಮತಿ ನೀಡದಂತೆ ಸಂಪುಟ ಸಭೆ ತೆಗೆದುಕೊಳ್ಳುವ ತೀರ್ಮಾನಕ್ಕೂ, ರಾಜ್ಯಪಾಲರು ಚಲಾಯಿಸುವ ಅಧಿಕಾರಕ್ಕೂ ಸಂಬಂಧವಿಲ್ಲ ಎಂದು ತಿಳಿಸಿದರು.

ಸಾವಿನ ಸಂಖ್ಯೆ 254ಕ್ಕೆ ಏರಿಕೆ

ನಡೆದಿರುವ ರಕ್ಷಣಾ ಕಾರ್ಯಾಚರಣೆಯಲ್ಲಿ ಈವರೆವಿಗೂ 254 ದೇಹಗಳು ಪತ್ತೆಯಾಗಿದ್ದು, 300ಕ್ಕೂ ಹೆಚ್ಚು ಮಂದಿ ನಾಪತ್ತೆಯಾಗಿದ್ದಾರೆ ಎಂದು ಸದ್ಯದ ಮಾಹಿತಿ ಹೇಳಿದೆ. ಒಟ್ಟಾರೆ 922 ಕಾಳಜಿ ಕೇಂದ್ರಗಳಲ್ಲಿ 1726 ಕುಟುಂಬಗಳ 7093 ಮಂದಿಗೆ ಆಶ್ರಯ ನೀಡಲಾಗಿದೆ. ಇವರಲ್ಲಿ ಮೇಪಾಡಿ ಸಂತ ಜೋಸೆಫ್ ಪ್ರೌಢಶಾಲೆಯಲ್ಲಿ 40 ಮಂದಿ ಆಶ್ರಯ ಪಡೆದಿದ್ದಾರೆ. ಮಣ್ಣಿನಲ್ಲಿ ಸಿಲುಕಿದ್ದ ಕರ್ನಾಟಕದ 10 ಮಂದಿಯನ್ನು ರಕ್ಷಿಸಲಾಗಿದ್ದು, ಅವರೆಲ್ಲರೂ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಶಿಬಿರಗಳಲ್ಲಿ ಆಶ್ರಯ ಪಡೆದಿರುವ ಕರ್ನಾಟಕದವರು ನೀಡಿರುವ ಮಾಹಿತಿಯಂತೆ 9 ಮಂದಿ ನಾಪತ್ತೆಯಾಗಿದ್ದಾರೆ ಎಂದು ಕರ್ನಾಟಕದವರ ರಕ್ಷಣೆಗಾಗಿ ವಯನಾಡಿಗೆ ತೆರಳಿರುವ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ. ನಾಪತ್ತೆಯಾಗಿರುವವರ ಪಟ್ಟಿ ಕೇರಳ ಸರ್ಕಾರಕ್ಕೆ ದೊರೆತಿದೆಯಾದರೂ, ಅದುವೇ ಅಂತಿಮವಲ್ಲ ಎನ್ನಲಾಗುತ್ತಿದೆ. ದುರಂತದಲ್ಲಿ ಬದುಕುಳಿದಿರುವವರು ತಮಗೆ ಪರಿಚಯವಿರುವವರ ಹೆಸರನ್ನು ಮಾತ್ರ ಹೇಳಿದ್ದು, ಅವರ ಹೇಳಿಕೆಯ ಮೇರೆಗೆ ನಾಪತ್ತೆಯಾದವರ ಪಟ್ಟಿ ಸಿದ್ಧಪಡಿಸಲಾಗಿದ್ದು, ಈ ಸಂಖ್ಯೆ ಇನ್ನೂ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಇಂದಿನಿಂದ FIR ದಾಖಲು

ವೇಗವಾಗಿ ಚಾಲನೆ ಮಾಡುವ ಚಾಲಕರ ವಿರುದ್ಧ ಆಗಸ್ಟ್ 1ರಿಂದ ಸ್ವಯಂಪ್ರೇರಿತರಾಗಿ ಎಫ್‌ಐಆರ್ ದಾಖಲಿಸಬೇಕೆಂದು ರಾಜ್ಯದ ಎಲ್ಲಾ ಪೊಲೀಸ್ ಆಯುಕ್ತರು ಹಾಗೂ ಜಿಲ್ಲಾ ಎಸ್ಪಿಗಳಿಗೆ ಹೊರಡಿಸಿರುವ ಸುತ್ತೋಲೆಯಲ್ಲಿ ಎಡಿಜಿಪಿ ಅಲೋಕ್‌ಕುಮಾರ್ ತಿಳಿಸಿದ್ದಾರೆ.

ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇ ಎನ್‌ಹೆಚ್-275ರಲ್ಲಿ ಐಟಿಎಂಎಸ್ ಯೋಜನೆಯಡಿ ಈಗಾಗಲೇ ಅಳವಡಿಸಿರುವ ಎಎನ್‌ಪಿಆರ್ ಕ್ಯಾಮರಾಗಳ ಮೂಲಕ ಮತ್ತು ರಾಜ್ಯದ ಎಲ್ಲಾ ಪೊಲೀಸ್ ಘಟಕಗಳ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿಗಳು ಹಾಗೂ ರಾಜ್ಯ ಹೆದ್ದಾರಿಗಳಲ್ಲಿ ಕಾರ್ಯ ನಿರ್ವಹಿಸುವ ಸ್ಪೀಡ್ ಲೇಸರ್ ಗನ್‌ಗಳ ಮೂಲಕ ನಿಗದಿಪಡಿಸಿದ ವೇಗದ ಮಿತಿ ಮೀರಿ 130 ಕಿ.ಮೀ.ವರೆಗೆ ವಾಹನ ಚಾಲನೆ ಮಾಡುವ ಚಾಲಕರ ವಿರುದ್ಧ ಮೋಟಾರು ವಾಹನ ಕಾಯ್ದೆ 183ರಡಿ ಹಾಗೂ 130 ಕಿ.ಮೀ.ಗಿಂತ ಹೆಚ್ಚಿನ ವೇಗದಲ್ಲಿ ವಾಹನ ಚಾಲನೆ ಮಾಡುವ ಚಾಲಕರ ವಿರುದ್ಧ ಮೋಟಾರು ವಾಹನ ಕಾಯ್ದೆ 184ರಡಿ ಪ್ರಕರಣ ದಾಖಲಿಸಿ, ಬಿಎನ್‌ಎಸ್ 281 ರೀತ್ಯಾ ಎಫ್‌ಐಆರ್ ದಾಖಲಿಸಬೇಕು. ಅಲ್ಲದೇ ಮೋಟಾರು ವಾಹನ ಕಾಯ್ದೆ ಕಲಂ 206(4) ಕಾರ್ಯ ವಿಧಾನ ರೀತ್ಯಾ ಅಂತಹ ಚಾಲಕರ ಚಾಲನ ಪರವಾನಗಿಯನ್ನು ವಶಕ್ಕೆ ಪಡೆದು ಕಡ್ಡಾಯವಾಗಿ ಅಮಾನತುಗೊಳಿಸುವಂತೆ ಸಂಬಂಧಪಟ್ಟ ಆರ್‌ಟಿಓ ಅಧಿಕಾರಿಗಳಿಗೆ ಶಿಫಾರಸ್ಸು ಮಾಡಬೇಕು ಎಂದು ಎಡಿಜಿಪಿ ಅಲೋಕ್‌ಕುಮಾರ್ ತಮ್ಮ ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

ನಂಜುಂಡೇಶ್ವರನಿಗೆ ಜಲ ದಿಗ್ಬಂಧನ

ನಂಜನಗೂಡು ಪಟ್ಟಣ ಮತ್ತಷ್ಟು ಜಲಾವೃತಗೊಳ್ಳುವ ಭೀತಿ ಎದುರಾಗಲಿದೆ.

ಮೈಸೂರು ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತರೆಡ್ಡಿ, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯಿತ್ರಿ, ಉಪವಿಭಾಗಾಧಿಕಾರಿ ವೆಂಕಟರಾಜು, ತಹಸೀಲ್ದಾರ್, ತಾಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿ ಹಾಗೂ ಇನ್ನಿತರ ಅಧಿಕಾರಿಗಳು ಪ್ರವಾಹ ಮುಂಜಾಗ್ರತಾ ಕ್ರಮ ಕೈಗೊಂಡಿದ್ದಾರೆ.

ನದಿ ಪಾತ್ರದಲ್ಲಿರುವ ಜನ, ಜಾನುವಾರುಗಳನ್ನು ಸುರಕ್ಷತಾ ಸ್ಥಳಕ್ಕೆ ಸ್ಥಳಾಂತರಿಸಿ ಕಾಳಜಿ ಕೇಂದ್ರಗಳಲ್ಲಿ ಆಶ್ರಯ ನೀಡಲಾಗಿದೆ. ಶಾಸಕ ದರ್ಶನ್ ಧ್ರುವನಾರಾಯಣ ನೇತೃತ್ವದಲ್ಲಿ ಕಾಳಜಿ ಕೇಂದ್ರಗಳಲ್ಲಿ ಊಟ, ತಿಂಡಿ, ಮೂಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ನಂಜನಗೂಡು ತಾಲೂಕಿನ ಎಲ್ಲಾ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದ್ದು, ನದಿ ತೀರದಲ್ಲಿ ಈಜುವುದು, ಸೆಲ್ಫಿ ತೆಗೆದುಕೊಳ್ಳುವುದನ್ನು ನಿಷೇಧಿಸಲಾಗಿದೆ. ಮೈಸೂರು-ನಂಜನಗೂಡು ರಸ್ತೆ, ಚಾಮರಾಜನಗರ ರಸ್ತೆ, ಗುಂಡ್ಲುಪೇಟೆ ರಸ್ತೆ, ತಿ.ನರಸೀಪುರ ರಸ್ತೆಗಳಲ್ಲೂ ನೀರು ಹರಿಯುತ್ತಿದ್ದು, ಸುತ್ತೂರು ಬಳಿಯ ಸೇತುವೆ ಮುಳುಗಡೆಯಾಗಿ ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ.

ಜಿಲ್ಲಾಡಳಿತ, ಪೊಲೀಸ್ ಇಲಾಖೆಯು ಪ್ರವಾಹದಿಂದಾಗಿ ಪ್ರಾಣಹಾನಿಗಳಾಗದಂತೆ ತಡೆಯಲು ಕಾರ್ಯಾಚರಣೆ ನಡೆಸುತ್ತಿದ್ದು, ಅಗ್ನಿಶಾಮಕ ದಳ, ವಿಪತ್ತು ನಿರ್ವಹಣಾ ತಂಡದ ಸಿಬ್ಬಂದಿಗಳು ನಂಜನಗೂಡಿನಲ್ಲಿ ಬೀಡು ಬಿಟ್ಟಿದ್ದು, ರಕ್ಷಣಾ ಕಾರ್ಯಕ್ಕೆ ಸಜ್ಜುಗೊಂಡಿವೆ.

ನಂಜನಗೂಡು: ಉಕ್ಕಿ ಹರಿಯುತ್ತಿರುವ ಕಪಿಲೆಯಿಂದ ದಕ್ಷಿಣ ಕಾಶಿ ಶ್ರೀ ಶ್ರೀಕಂಠೇಶ್ವರನಿಗೆ ಮತ್ತೆ ಜಲ ದಿಗ್ಬಂಧನವೇರ್ಪಟ್ಟಿದೆ. ಭಾರೀ ಪ್ರಮಾಣದ ನೀರಿನಿಂದ ಶ್ರೀಕಂಠೇಶ್ವರ ಸ್ವಾಮಿ ಸನ್ನಿಧಿಯ ಸ್ನಾನಘಟ್ಟ, ಮುಡಿಕಟ್ಟೆ, ಹದಿನಾರು ಕಾಲು ಮಂಟಪ ಸಂಪೂರ್ಣ ಮುಳುಗಡೆಯಾಗಿದೆ. ದೇವಾಲಯದ ವಾಹನ ನಿಲುಗಡೆ ಪ್ರದೇಶ, ಡಾರ್ಮೆಟರಿ, ದಾಸೋಹ ಭವನದ ಸುತ್ತಲೂ ನೀರು ತುಂಬಿಕೊಂಡಿದೆ. ಅಲ್ಲದೇ ಭಕ್ತಿ ಮಾರ್ಗದಲ್ಲಿರುವ ಶಿವನ ವಿಗ್ರಹ ಕೂಡ ಜಲಾವೃತಗೊಂಡಿದೆ. ಇದರಿಂದ ಮೈಸೂರು-ಚಾಮರಾಜನಗರ ರಸ್ತೆ ಸಂಪೂರ್ಣ ಮುಳುಗಡೆಯಾಗಿ ಸಂಚಾರ ಸ್ಥಗಿತಗೊಂಡಿದೆ. ಭಕ್ತರು ಈ ರಸ್ತೆ ಬಿಟ್ಟು ಮತ್ತೊಂದು ರಸ್ತೆ ಮೂಲಕ ದೇವಸ್ಥಾನಕ್ಕೆ ತೆರಳಬೇಕಾಗಿದೆ. ಸ್ನಾನಘಟ್ಟಕ್ಕೆ ಬ್ಯಾರಿಕೇಡ್ ಹಾಕಿ ಪೊಲೀಸರನ್ನು ನಿಯೋಜಿಸಿರುವ ಕಾರಣ ಭಕ್ತರು ಪುಣ್ಯಸ್ನಾನ ಮಾಡಲು ಸಾಧ್ಯವಾಗದೆ, ದಾಸೋಹ ಭವನದ ಬಳಿಯಿರುವ ಕೊಳಾಯಿ ನೀರಿನಲ್ಲೇ ಸ್ನಾನ ಮಾಡಿ ದೇವರ ದರ್ಶನ ಪಡೆಯುತ್ತಿದ್ದಾರೆ.

ಮೈಸೂರು ಜಿಲ್ಲೆಯ 8 ಕಾಳಜಿ ಕೇಂದ್ರಗಳಲ್ಲಿ 306 ಮಂದಿಗೆ ಆಶ್ರಯ

ಮೈಸೂರು, ಜು. 31(ಆರ್‌ಕೆ)- ಅತೀ ಮಳೆಯಿಂದಾಗಿ ಜಲಾಶಯಗಳು ತುಂಬಿ ನದಿಗಳಲ್ಲಿ ಪ್ರವಾಹ ಉಂಟಾಗಿರುವುದರಿಂದ ನದಿಪಾತ್ರದಲ್ಲಿರುವ ಜನ, ಜಾನುವಾರುಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ.

ಮುಂಜಾಗ್ರತೆಯಾಗಿ ಮೈಸೂರು ಜಿಲ್ಲೆಯಾದ್ಯಂತ 8 ಕಾಳಜಿ ಕೇಂದ್ರಗಳನ್ನು ತೆರೆದಿರುವ ಜಿಲ್ಲಾಡಳಿತವು, ಅಪಾಯದಲ್ಲಿದ್ದ 306 ಮಂದಿಗೆ ಅಲ್ಲಿ ಆಶ್ರಯ ನೀಡಿದೆ. ನಂಜನಗೂಡು ತಾಲೂಕಿನ 4 ಗ್ರಾಮಗಳು ಪ್ರವಾಹ ಬಾಧಿತವಾಗಿದ್ದು, 105 ಕುಟುಂಬಗಳ 254 ಮಂದಿ ಸಂಕಷ್ಟಕ್ಕೆ ಸಿಲುಕಿದ್ದು, 6 ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ತಿ.ನರಸೀಪುರ ತಾಲೂಕಿನಲ್ಲಿ 4 ಗ್ರಾಮಗಳು ಪ್ರವಾಹ ಬಾಧಿತವಾಗಿದ್ದು, 29 ಕುಟುಂಬಗಳ 65 ಮಂದಿ ಬಾಧಿತರಾಗಿದ್ದಾರೆ. ಮಾಲಂಗಿ ಗ್ರಾಮದಲ್ಲಿ ಕಾಳಜಿ ಕೇಂದ್ರ ತೆರೆದು 52 ಮಂದಿಗೆ ಆಶ್ರಯ ನೀಡಲಾಗಿದೆ. ಅಲ್ಲಿ ಊಟ, ವಸತಿ, ಶೌಚಾಲಯ, ಬಟ್ಟೆ, ಕುಡಿಯುವ ನೀರು ಒದಗಿಸಿ ನೋಡಲ್ ಅಧಿಕಾರಿಗಳು ಸ್ಥಳದಲ್ಲಿದ್ದು ಸುರಕ್ಷತಾ ಕ್ರಮ ಕೈಗೊಂಡಿದ್ದಾರೆ. ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಜಿ.ಲಕ್ಷ್ಮೀಕಾಂತ ರೆಡ್ಡಿ, ಉಪ ವಿಭಾಗಾಧಿಕಾರಿಗಳಾದ ಕೆ.ಆರ್.ರಕ್ಷಿತ್, ವೆಂಕಟರಾಜು, ತಹಸೀಲ್ದಾರ್‌ಗಳು ಇಂದು ಜಿಲ್ಲೆಯ 8 ಕಾಳಜಿ ಕೇಂದ್ರಗಳಿಗೆ ಭೇಟಿ ನೀಡಿ ಆಶ್ರಯ ಪಡೆದಿರುವ ಪ್ರವಾಹ ಬಾಧಿತರಿಗೆ ಒದಗಿಸಿರುವ ಸೌಲಭ್ಯಗಳನ್ನು ಪರಿಶೀಲಿಸಿದರು



ಕಾಳಜಿ ಕೇಂದ್ರಗಳಲ್ಲಿ ಒದಗಿಸಿರುವ ಸೌಲಭ್ಯಗಳನ್ನು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಉಪವಿಭಾಗಾಧಿಕಾರಿ ಕೆ.ಆರ್.ರಕ್ಷಿತ್ ಬುಧವಾರ ಪರಿಶೀಲಿಸಿದರು.

ಕೇರಳ ಸಂತ್ರಸ್ತರ ನೆರವಿಗೆ ಮೈಸೂರಿನ 17 ಅಧಿಕಾರಿಗಳು

ಮೈಸೂರು, ಜು. 31(ಆರ್‌ಕೆ)- ಅತೀ ಮಳೆಯಿಂದಾಗಿ ಸರಣಿ ಭೂ ಕುಸಿತದಿಂದ ತತ್ತರಿಸಿರುವ ಕೇರಳದ ವಯನಾಡು ಜಿಲ್ಲೆಯ ವಿವಿಧೆಡೆ ರಕ್ಷಣಾ ಕಾರ್ಯದಲ್ಲಿ ನೆರವಾಗಲು ಮೈಸೂರು ಜಿಲೆಯ 17 ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

ಕೃಷಿ ಜಂಟಿ ನಿರ್ದೇಶಕ ಚಂದ್ರಶೇಖರ, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಮಂಜುನಾಥ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಪ್ರಭುರಾಜ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ. ಕುಮಾರಸ್ವಾಮಿ, ಎಂಎಂಸಿಆರ್‌ಐ ಡೀನ್ ಡಾ. ಕೆ.ಆರ್.ದಾಕ್ಷಾಯಿಣಿ, ಜಿಲ್ಲಾ ಸರ್ಜನ್ ಡಾ.ಅಮರನಾಥ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕಿ ಕುಮುದ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ದಿನೇಶ್, ತೋಟಗಾರಿಕಾ ಇಲಾಖೆ ಉಪನಿರ್ದೇಶಕ ಮಂಜುನಾಥ್, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಜಿಲ್ಲಾ ಅಧಿಕಾರಿ ರಾಘವೇಂದ್ರ, ಸಮಾಜ ಕಲ್ಯಾಣ ಅಧಿಕಾರಿ ರಂಗೇಗೌಡ ಅವರುಗಳಿಗೆ ನೆರವು ನೀಡಲು ಜವಾಬ್ದಾರಿ ನೀಡಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅಧಿಕೃತ ಜ್ಞಾಪನ ಹೊರಡಿಸಿದ್ದಾರೆ.

ಅದೇ ರೀತಿ ಕೆಎಸ್‌ಆರ್‌ಟಿಸಿ ಗ್ರಾಮಾಂತರ ವಿಭಾಗದ ನಿಯಂತ್ರಣಾಧಿಕಾರಿ ಶ್ರೀನಿವಾಸ, ಆರ್‌ಟಿಓ (ಪಶ್ಚಿಮ) ದೇವಿಕಾ, ಪೂರ್ವ ಆರ್‌ಟಿಓ ಶಫೀಉದ್ದೀನ್, ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್, ವಾರ್ತಾ ಇಲಾಖೆ ಉಪನಿರ್ದೇಶಕ ಅಶೋಕ್‌ಕುಮಾರ್ ಹಾಗೂ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ ಸಹ ವಯನಾಡು ಪ್ರವಾಹಪೀಡಿತ ಪ್ರದೇಶದಲ್ಲಿನ ರಕ್ಷಣಾ ಕಾರ್ಯಾಚರಣೆ ನೆರವಿಗೆ ನಿಯೋಜನೆಗೊಂಡಿದ್ದಾರೆ. ಪ್ರವಾಹದಲ್ಲಿ ಸಿಲುಕಿರುವ ಮೈಸೂರಿಗರ ರಕ್ಷಣೆ, ವೈದ್ಯಕೀಯ ಪರಿಕರ ಸರಬರಾಜು, ಆಹಾರದ ಕಿಟ್ ಪೂರೈಕೆ, ಜಿಲ್ಲೆಯಲ್ಲಿ ಕಂಟ್ರೋಲ್ ರೂಂ ತೆರೆದು ಮಾಹಿತಿ ನೀಡುವುದು, ಗಾಯಗೊಂಡವರನ್ನು ಕರೆತರಲು, ಆಹಾರ ಪೂರೈಕೆಗೆ ವಾಹನ ಒದಗಿಸುವುದು, ಬ್ಲಾಂಕೆಟ್, ನಿತ್ಯದ ಅಗತ್ಯ ವಸ್ತು ಪೂರೈಸುವುದು ಈ ಅಧಿಕಾರಿಗಳ ಜವಾಬ್ದಾರಿಯಾಗಿದೆ.

ವಯನಾಡಿಗೆ ಮೈಸೂರು ವೈದ್ಯರ ತಂಡ



ವಯನಾಡಿನ ಜನರಿಗೆ ವೈದ್ಯಕೀಯ ನೆರವಿಗಾಗಿ ಮೈಸೂರು ಜಿಲ್ಲೆಯ ವೈದ್ಯರ ತಂಡ ಬುಧವಾರ ಕೇರಳಕ್ಕೆ ತೆರಳಿತು.

ಮೈಸೂರು, ಜು. 31(ಆರ್‌ಕೆ)- ನೆರೆ ಹಾಗೂ ಸರಣಿ ಭೂ ಕುಸಿತದಿಂದ ಸಂಕಷ್ಟ ಪರಿಸ್ಥಿತಿಗೀಡಾಗಿರುವ ವಯನಾಡಿನ ಜನರಿಗೆ ವೈದ್ಯಕೀಯ ನೆರವಿಗಾಗಿ ಮೈಸೂರು ಜಿಲ್ಲೆಯ ವೈದ್ಯರ ತಂಡ ಇಂದು ಕೇರಳಕ್ಕೆ ತೆರಳಿತು.

ಜಿಲ್ಲಾಡಳಿತದಿಂದ ನಿಯೋಜನೆಗೊಂಡ ಡಾ.ಶ್ರೀನಿವಾಸ, ಡಾ.ನಾಗೇಂದ್ರರಾವ್, ಡಾ.ಶೇಷಾದ್ರಿ, ಹಿರಿಯ ಔಷಧ ವಿತರಣಾಧಿಕಾರಿ ಉಮೇಶ್ ಹಾಗೂ ಸಿಬ್ಬಂದಿಯನ್ನು ಹುಣಸೂರು ಉಪವಿಭಾಗಾಧಿಕಾರಿ ವೆಂಕಟರಾಜು, ತಹಸೀಲ್ದಾರ್ ಶ್ರೀನಿವಾಸ, ಹೆಚ್.ಡಿ.ಕೋಟೆ ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ಇಂದು ಬೆಳಗ್ಗೆ ಬಾವಲಿ ಚೆಕ್‌ಪೋಸ್ಟ್‌ನಲ್ಲಿ ಕಳುಹಿಸಿಕೊಟ್ಟರು. ಈ ವೇಳೆ ಡಾ.ವರ್ಷ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾಗೇಂದ್ರ, ರವಿರಾಜ್, ರೆವಿನ್ಯೂ ಇನ್ಸ್‌ಪೆಕ್ಟರ್ ಗೌಸ್ ಇತರರು ಉಪಸ್ಥಿತರಿದ್ದರು.

ಆಸ್ಪತ್ರೆಗಳಲ್ಲಿ ವಾರ್ಡ್, ಸಿಬ್ಬಂದಿ, ಔಷಧಿ ಮೀಸಲು

ಮೈಸೂರು, ಜು.31(ಆರ್‌ಕೆ)-ಜಲಾಶಯಗಳು ಭರ್ತಿಯಾಗಿ ಹೆಚ್ಚುವರಿ ನೀರನ್ನು ನದಿಗಳಿಗೆ ಬಿಟ್ಟಿರುವುದರಿಂದ ಪ್ರವಾಹ ಉಂಟಾಗಿರುವ ಹಿನ್ನೆಲೆಯಲ್ಲಿ ಮುಂಜಾಗ್ರತೆಯಾಗಿ ಜಿಲ್ಲಾಡಳಿತ ವೈದ್ಯಕೀಯ ಸೇವೆಗೆ ಸನ್ನದ್ಧವಾಗಿದೆ.

ತಾಲೂಕು ಸಾರ್ವಜನಿಕ ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಜಿಲ್ಲಾಸ್ಪತ್ರೆ, ಕೆ.ಆರ್.ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್‌ಗಳಲ್ಲಿ ವಾರ್ಡ್‌ಗಳು, ತುರ್ತು ಚಿಕಿತ್ಸಾ ವಾರ್ಡ್‌ಗಳಲ್ಲಿ ಹಾಸಿಗೆಗಳನ್ನು ಮೀಸಲಿರಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಓಪಿಡಿ, ಐಪಿಡಿ, ಐಸಿಯುಗಳಲ್ಲಿ ಮೂಲಸೌಲಭ್ಯಗಳೊಂದಿಗೆ ವೈದ್ಯರು, ನರ್ಸಿಂಗ್ ಸಿಬ್ಬಂದಿ, ಔಷಧಿಗಳು ಲಭ್ಯವಿರಬೇಕು. ಪ್ರಕೃತಿ ವಿಕೋಪದ ಹಿನ್ನೆಲೆಯಲ್ಲಿ ಅನುಮತಿ ಪಡೆಯದೇ ಕೇಂದ್ರ ಸ್ಥಾನ ಬಿಟ್ಟು ಹೋಗಬಾರದು. ಆಂಬುಲೆನ್ಸ್, ಅಗ್ನಿಶಾಮಕ ವಾಹನಗಳು, ಚಾಲಕರು ಕರ್ತವ್ಯದಲ್ಲಿ ನಿರತರಾಗಿರುವಂತೆಯೂ ನಿರ್ದೇಶನ ನೀಡಲಾಗಿದೆ. ವೈದ್ಯಕೀಯ ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ದಿನದ 24X7 ಸೇವೆಗೆ ಲಭ್ಯವಿರುವಂತೆ, ಚಿಕಿತ್ಸೆಗೆ ಅಗತ್ಯವಾದ ವೈದ್ಯಕೀಯ ಸಲಕರಣೆಗಳು, ಔಷಧಿಗಳೊಂದಿಗೆ ಸಿದ್ಧವಿರುವಂತೆಯೂ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

ಜಲಾಶಯಗಳಿಂದ ನದಿಗಳಿಗೆ ಹೆಚ್ಚಿನ ಪ್ರಮಾಣದ ನೀರನ್ನು ಬಿಡುತ್ತಿರುವುದರಿಂದ ನದಿ ಪಾತ್ರದ ಜನರಿಗೆ ಅಪಾಯ ಸಂಭವಿಸುವ ಸಾಧ್ಯತೆ ಇರುವುದರಿಂದ ಬಾಧಿತರನ್ನು ರಕ್ಷಿಸುವ ದೃಷ್ಟಿಯಿಂದ ಸರ್ವ ರೀತಿಯಲ್ಲಿ ಸಜ್ಜುಗೊಂಡಿದೆ.

ಇಂದಿನಿಂದ ಮೈಸೂರಲ್ಲಿ ಜ್ಯುವೆಲರಿ ಶಾಪಿಂಗ್ 'ಸ್ವರ್ಣೋತ್ಸವ'

ಮೈಸೂರು, ಜು.31(ಜಿಎ)-ಮೈಸೂರು ಸರಾಫ್ ವರ್ತಕರ ಸಂಘದ ವತಿಯಿಂದ ಆ.1ರಿಂದ ಸೆ.9ರವರೆಗೆ ನಗರದ ಆಯ್ದ ಆಭರಣ ಅಂಗಡಿಗಳಲ್ಲಿ ಜ್ಯುವೆಲರಿ ಶಾಪಿಂಗ್ 'ಸ್ವರ್ಣೋತ್ಸವ' ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಅಮರನಾಥ್ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇಳದಲ್ಲಿ ಪಾಲ್ಗೊಳ್ಳುತ್ತಿರುವ ಯಾವುದೇ ಆಭರಣ ಮಳಿಗೆಗಳಲ್ಲಿ ವರಮಹಾಲಕ್ಷ್ಮಿ ಹಾಗೂ ಗೌರಿ ಗಣೇಶ ಹಬ್ಬದ ಪ್ರಯುಕ್ತ ಈ 40 ದಿನಗಳ ಕಾಲ ಆಭರಣ ಖರೀದಿಸುವ ಗ್ರಾಹಕರಿಗೆ ಬಂಪರ್ ಬಹುಮಾನ ಗೆಲ್ಲುವ ಅವಕಾಶವಿದೆ ಎಂದರು.

ಜೊತೆಗೆ ಆಕರ್ಷಕ ಉಡುಗೊರೆ ಸಹಾ ಇರಲಿದ್ದು, ಮೈಸೂರು ಜಿಲ್ಲಾ ವ್ಯಾಪ್ತಿಯ ನಗರ ಹಾಗೂ ಪಟ್ಟಣಗಳ ಬಹುತೇಕ ಆಭರಣ ಮಳಿಗೆಗಳು ಈ ಉತ್ಸವದಲ್ಲಿ ಪಾಲ್ಗೊಳ್ಳುತ್ತಿವೆ. ಸಾಂಪ್ರದಾಯಿಕ ವಿನ್ಯಾಸ, ಹಗುರವಾದ ಹೆಚ್ಚು ಆಧುನಿಕ ವಿನ್ಯಾಸ, ವಜ್ರದ ಆಭರಣ ಬಯಸುವವರಿಗೆ ಈ ಸ್ವರ್ಣೋತ್ಸವ ಉತ್ತಮ ಅವಕಾಶ ಒದಗಿಸಲಿದೆ ಎಂದರು. ಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಆದರ್ಶ ಮೂರ್ತಿ, ಹರ್ಷ ತೊಳಸಿ, ರಕ್ಷಿತಾ ಲೋಕೇಶ್ ಇದ್ದರು.

ಕುವೆಂಪುರವರ ಕರೆಯಂತೆ ಕನ್ನಡಕ್ಕಾಗಿ ಕೈಯೆತ್ತಿದರೆ ಪೊಲೀಸರು ಬೇಡಿ ತೊಡಿಸುತ್ತಾರೆ...

● ಹಿರಿಯ ಸಾಹಿತಿ ಬನ್ನೂರು ಕೆ.ರಾಜು ವಿಷಾದ
● ತಾಯೂರು ವಿಠಲಮೂರ್ತಿ ಅವರಿಗೆ ನುಡಿನಮನ

ಮೈಸೂರು, ಜು.31(ಎಸ್‌ಪಿಎನ್)- ಕನ್ನಡಕ್ಕಾಗಿ ಕೈಯೆತ್ತು, ನಿನ್ನ ಕೈ ಕಲ್ಪವೃಕ್ಷವಾಗುತ್ತದೆ ಎಂದು ಕುವೆಂಪು ಹೇಳಿದ್ದರು. ಪ್ರಸ್ತುತ ಈ ಮಾತಿನಂತೆ ಕನ್ನಡ ಪರ ಹೋರಾಟಕ್ಕೆ ಕೈ ಎತ್ತಿದರೆ, ಆ ಕೈಗೆ ಪೊಲೀಸರಿಂದ ಬೇಡಿ ಬೀಳುತ್ತದೆ ಎಂದು ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.

ಮೈಸೂರು ಕೃಷ್ಣಮೂರ್ತಿಪುರಂನಲ್ಲಿ ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಇತ್ತೀಚೆಗೆ ನಿಧನರಾದ ಕನ್ನಡ ಪರ ಹೋರಾಟಗಾರ ಹಾಗೂ ಕೆ.ಆರ್.ಬ್ಯಾಂಕಿನ ಮಾಜಿ ಅಧ್ಯಕ್ಷ ತಾಯೂರು ವಿಠಲಮೂರ್ತಿ ಅವರಿಗೆ ನುಡಿನಮನ ಸಲ್ಲಿಸಿದರು.

ಮಾಜಿ ಶಾಸಕ ವಾಟಾಳ್ ನಾಗರಾಜು ಅವರ ಕನ್ನಡ ಪರ ಹೋರಾಟದ ಬದುಕನ್ನು ನಮ್ಮಾನ್ನಾಳುವ ಸರ್ಕಾರಗಳು ಗುರುತಿಸದೆ ಕಡೆಗಣಿಸಿವೆ. ಪೊಲೀಸರ ಬೂಟಿನೇಟು ತಿಂದ ಸೆ.2ರಂದೇ ನನ್ನ ಹುಟ್ಟುಹಬ್ಬ ಎಂದು ಹೇಳಿದ ಮಹನೀಯ. ತಮ್ಮ ಜೀವನದುದ್ದಕ್ಕೂ ಕನ್ನಡವೇ ನನ್ನ ಉಸಿರು, ಕನ್ನಡವೇ ಜಾತಿ ಎನ್ನುವ ವ್ಯಕ್ತಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯೋತ್ಸವ ಅಥವಾ ಅದಕ್ಕಿಂತ ಉನ್ನತಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಿಲ್ಲ ಎಂದರೆ, ಕನ್ನಡಿಗರಾದ ನಾವು ನಾಚಿಕೆ ಪಡಬೇಕು ಎಂದು ಹೇಳಿದರು.

ಇಂದಿಗೂ ಕರ್ನಾಟಕದಲ್ಲಿ ಕನ್ನಡಿಗರ ಪರ ದನಿಯಾಗಿರುವುದು ವಾಟಾಳ್ ನಾಗರಾಜ್. ಆ ಹಿರಿಯ ಜೀವ ಕಣ್ಮರೆಯಾದರೆ, ಬೆಂಗಳೂರು, ವಿಧಾನಸೌಧದಲ್ಲಿ ಕನ್ನಡಿಗರ ಸ್ಥಿತಿಗತಿಗಳನ್ನು ಕೇಳುವವರೇ ಇರುವುದಿಲ್ಲ ಎಂದ ಅವರು, ಕನ್ನಡ ಪರ ಹೋರಾಟಗಾರ ದಿ. ತಾಯೂರು ವಿಠಲಮೂರ್ತಿ ಅವರು, ವಾಟಾಳ್ ನಾಗರಾಜ್ ಮೈಸೂರಿಗೆ ಬಂದಾಗಲೆಲ್ಲಾ ಯಾವುದಾದರೊಂದು ವಿಷಯದ ಬಗ್ಗೆ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದರು.

ಮೈಸೂರು ಜಿಲ್ಲಾಡಳಿತ ಕನ್ನಡ ಪರ ಯಾವುದೇ ಚರ್ಚೆ ಇಟ್ಟುಕೊಂಡಿದ್ದರೂ ತಾಯೂರು ವಿಠಲಮೂರ್ತಿ ಹಾಜರಾತಿ ಕಡ್ಡಾಯವಾಗಿತ್ತು. ಅಂತೆಯೇ ಕನ್ನಡದ ಯಾವುದೇ ಸಮಸ್ಯೆಗೂ ತಾಯೂರು ವಿಠಲಮೂರ್ತಿ ಉಪಸ್ಥಿತಿ ಇರುತ್ತಿತ್ತು. ಇದು ಕನ್ನಡ ಪರ ಹೋರಾಟಕ್ಕಿಂತ ಬದ್ಧತೆ. ಈ ಅಂಶಗಳು ಇಂದಿನ ಯುವ ಹೋರಾಟಗಾರರು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಕನ್ನಡ ಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಮಾತನಾಡಿ, ತಾಯೂರು ವಿಠಲಮೂರ್ತಿ ತಾಯಿ ಹೃದಯದವರು. ಬೀದಿಬದಿ ವ್ಯಾಪಾರಿಗಳಿಗೆ, ಆಟೋ ಚಾಲಕರಿಗೆ, ಶೋಷಿತರಿಗೆ ರಾಜ್ಯ ಸರ್ಕಾರದಿಂದ ಯಾವುದೇ ರೀತಿಯ ಅನ್ಯಾಯವಾದರೂ ಬೀದಿಗಿಳಿದು ಸರ್ಕಾರದ ನಿಲುವನ್ನು ಖಂಡಿಸುತ್ತಿದ್ದ ವ್ಯಕ್ತಿತ್ವ ಅವರದ್ದಾಗಿತ್ತು. ಮೊದಲು ಕನ್ನಡ ಪರ ಹೋರಾಟ ಎಂದರೆ, ಸಾರ್ವಜನಿಕವಾಗಿ ಒಳ್ಳೆಯ ಗೌರವ ಸಿಗುತ್ತಿತ್ತು. ಇಂದು ಆ ಪರಿಸ್ಥಿತಿ ಇದೆಯೇ ಎಂದು ಪ್ರಶ್ನಿಸಿದರು.

ಪ್ರಸ್ತುತ ಯಾವುದೇ ಹೋರಾಟಕ್ಕೂ ಜನ ಬರಲ್ಲ. ಅವರಿಗೆ 500-1000 ಕೊಟ್ಟು ಕರೆಸುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜಕೀಯ ಪಕ್ಷಗಳು ಸಾರ್ವಜನಿಕ ಸಭೆ, ಸಮಾರಂಭಕ್ಕೆ ಜನರನ್ನು ಕರೆತರಲು ದುಡ್ಡು ಕೊಟ್ಟು ಕರೆತರುವ ಪ್ರವೃತ್ತಿ ಆರಂಭವಾದ ದಿನದಿಂದ ಹೋರಾಟಗಳಿಗೆ ಜನ ಸೇರುವುದು ಕಡಿಮೆಯಾಗಿವೆ. ಜನರ ಪರ ಯಾವುದೇ ಪ್ರತಿಭಟನೆ ಹಮ್ಮಿಕೊಂಡರೂ ಅದು ನಮ್ಮ ಸುತ್ತಮುತ್ತಲಿನ ಸ್ನೇಹಿತರು, ಕುಟುಂಬದವರನ್ನು ಕರೆತಂದು ಹೋರಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ವೇಳೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ವಿ.ಬಸವರಾಜು (ಹಿನಕಲ್), ವಿಪ್ರ ಮುಖಂಡ ಕೆ.ರಘುರಾಂ ವಾಜಪೇಯಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ದಿ.ತಾಯೂರು ವಿಠಲಮೂರ್ತಿ ಅವರ ಕನ್ನಡ ಪರ ಹೋರಾಟ ನೆನೆದರು. ಈ ವೇಳೆ ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಬಸವರಾಜೇಂದ್ರ ಸ್ವಾಮಿ, ತಾಯೂರು ವಿಠಲಮೂರ್ತಿ ಪುತ್ರ ಗಣೇಶ ಮೂರ್ತಿ ಕುಟುಂಬದ ಸದಸ್ಯರು ಸೇರಿದಂತೆ ಇತರರಿದ್ದರು.



ಕನ್ನಡ ಪರ ಹೋರಾಟಗಾರ ತಾಯೂರು ವಿಠಲಮೂರ್ತಿ ಅವರಿಗೆ ನುಡಿನಮನ ಸಲ್ಲಿಸಲಾಯಿತು.

ಕೆಆರ್‌ಎಸ್‌ನಿಂದ ನದಿಗೆ 1.70 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ

ವೆಲ್ಲೆಸ್ಲಿ ಸೇತುವೆ ಮುಳುಗಡೆ

ಕಾವೇರಿ ನದಿ ಪಾತ್ರದ ಪ್ರದೇಶಗಳಲ್ಲಿ ಪ್ರವಾಹ ಭೀತಿ

● ಬೃಂದಾವನ ಸೇರಿದಂತೆ ಎಲ್ಲಾ ಪ್ರವಾಸಿತಾಣಗಳಿಗೆ ಪ್ರವೇಶ ನಿಷೇಧ

ಶ್ರೀರಂಗಪಟ್ಟಣ, ಜು.31–ಕೊಡಗು ಜಿಲ್ಲೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಕೆಆರ್‌ಎಸ್‌ಗೆ ಭಾರಿ ಪ್ರಮಾಣದ ನೀರು ಹರಿದುಬರುತ್ತಿರುವುದರಿಂದ ಜಲಾಶಯದಿಂದ 1.70 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದ್ದು, ನದಿ ಪಾತ್ರದ ಗ್ರಾಮಗಳಲ್ಲಿ ಪ್ರವಾಹದ ಸ್ಥಿತಿ ನಿರ್ಮಾಣಗೊಂಡಿದೆಯಲ್ಲದೆ ಎರಡು ಶತಮಾನದಷ್ಟು ಹಳೆಯದಾದ ವೆಲ್ಲೆಸ್ಲಿ ಸೇತುವೆ ಮುಳುಗಡೆಯಾಗಿದೆ.

ಕಾವೇರಿ ನದಿಗೆ ಅಧಿಕ ನೀರು ಬಿಡುತ್ತಿರುವುದರಿಂದ ಎರಡು ಶತಮಾನಗಳಷ್ಟು ಹಳೆಯದಾದ ಶ್ರೀರಂಗಪಟ್ಟಣದ ಐತಿಹಾಸಿಕ ವೆಲ್ಲೆಸ್ಲಿ ಸೇತುವೆಯು ಮುಳುಗಡೆಯಾಗಿದೆ. ಸೇತುವೆಯ ಮೇಲೆ ನೀರು ಹರಿಯುತ್ತಿದ್ದು ಸೇತುವೆ ಕಾಣದಂತಾಗಿದೆ. ಇದರಿಂದ ಸೇತುವೆಯು ಅಪಾಯದ ಸ್ಥಿತಿಯಲ್ಲಿದೆ ಎಂದು ಹೇಳಲಾಗುತ್ತಿದೆ.

ಸೇತುವೆಯ ಎರಡು ಕಡೆ ಬ್ಯಾರಿಕೇಡ್ ಹಾಕಿ ಜನರ ಓಡಾಟ ಮತ್ತು ವಾಹನಗಳ ಸಂಚಾರಕ್ಕೆ ಬ್ರೇಕ್ ಹಾಕಲಾಗಿದೆ. ಹಲವು ವರ್ಷಗಳ ಹಿಂದೆ ವೆಲ್ಲೆಸ್ಲಿ ಸೇತುವೆ ಮುಳುಗಡೆಯಾಗಿತ್ತು ಅದನ್ನು ಬಿಟ್ಟರೆ ಇಂದೇ ಮುಳುಗಡೆಯಾಗಿರುವುದು. ಇದರ ಜೊತೆ ನಿಮಿಷಾಂಭ ದೇವಸ್ಥಾನ, ಸಂಗಮ, ಸಾಯಿ ಆಶ್ರಮ ಸೇರಿದಂತೆ ಹಲವು ಪ್ರವಾಸಿ ತಾಣ ಪಟ್ಟಣದಲ್ಲಿ ಮುಳುಗಡೆ ಭೀತಿಯಲ್ಲಿದೆ. ಇಂದು ಅಥವಾ ನಾಳೆ ಯಾವುದೇ ಕ್ಷಣದಲ್ಲಾದರೂ ಎರಡು ಲಕ್ಷಕ್ಕೂ ಅಧಿಕ ನೀರನ್ನು ಹೊರಬಿಡಲಾಗುವುದು ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿರುವುದರಿಂದ ತಾಲೂಕಿನಲ್ಲಿ ಮತ್ತಷ್ಟು ಪ್ರದೇಶಗಳು ಮುಳುಗಡೆ ಭೀತಿ ಎದುರಿಸುತ್ತಿವೆ.

ಭಾರಿ ಪ್ರಮಾಣದಲ್ಲಿ ನೀರು ಹರಿದು ಬರುತ್ತಿರುವುದರಿಂದ ತಾಲೂಕಿನ ಪ್ರವಾಸಿ ತಾಣಗಳಾದ ಬೃಂದಾವನ, ಬಲಮುರಿ, ಎಡಮುರಿ, ಪಕ್ಷಿಧಾಮ, ಘೋಸಾಯಿಘಾಟ್, ಸಂಗಮ ಸೇರಿದಂತೆ ಹಲವು ಪ್ರವಾಸಿ ತಾಣಗಳು ಮುಳುಗಡೆಯಾಗಿದ್ದು, ಪ್ರವಾಸಿಗರ ಪ್ರವೇಶ ನಿಷೇಧಿಸಲಾಗಿದೆ.


ಶ್ರೀರಂಗಪಟ್ಟಣದ ಐತಿಹಾಸಿಕ ವೆಲ್ಲೆಸ್ಲಿ ಸೇತುವೆಯು ಮುಳುಗಡೆಯಾಗಿರುವುದು.

ಕಾವೇರಿ ಜಲಾನಯನ ಪ್ರದೇಶದಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವುದರಿಂದ ಕಾವೇರಿ ನದಿ ಉಕ್ಕಿ ಹರಿಯುತ್ತಿದೆ. ಜಲಾಶಯಕ್ಕೆ ಒಳ ಹರಿವಿನ ಪ್ರಮಾಣ ಹೆಚ್ಚಾಗಿ ಜಲಾಶಯದಿಂದ ನದಿಗೆ ಭಾರಿ ಪ್ರಮಾಣದ ನೀರನ್ನು ಹೊರ ಬಿಡಲಾಗುತ್ತಿರುವುದರಿಂದ ನದಿಯ ಕೆಳಭಾಗದ ರೈತರು ಹಾಗೂ ಸಾರ್ವಜನಿಕರು ಎಚ್ಚರಿಕೆಯಿಂದ ಇರಲು ತಾಲೂಕು ಹಾಗೂ ಜಿಲ್ಲಾಡಳಿತ ಮನವಿ ಮಾಡಿದೆ. ಬೃಂದಾವನ ಗಾರ್ಡನ್‌ಗೆ ತೆರಳುವ ರಸ್ತೆ ಹಾಗೂ ಪಾರ್ಕಿಂಗ್ ಸ್ಥಳವು ಸಂಪೂರ್ಣ ಮುಳುಗಡೆಯಾದ ಕಾರಣ ಬೃಂದಾವನಕ್ಕೆ ಪ್ರವಾಸಿಗರ ಪ್ರವೇಶವನ್ನು ನಿಷೇಧಿಸಲಾಗಿದೆ.

ಬೃಂದಾವನದ ಪಕ್ಕದಲ್ಲಿರುವ ಬೋಟಿಂಗ್ ಪಾಂಟಿಂಗ್‌ನಿಂದ ನೀರು ಹೆಚ್ಚಾಗಿ ಬೃಂದಾವನ ಗಾರ್ಡನ್ ಮುಳುಗಡೆಯಾಗಿದೆ. ಆದ್ದರಿಂದ ಪ್ರವಾಸಿಗರು ಹಾಗೂ ಸುರಕ್ಷತೆ ದೃಷ್ಟಿಯಿಂದ ಪ್ರಸ್ತುತ ಪ್ರವಾಸಿಗರ ಪ್ರವೇಶವನ್ನು ನಿಷೇಧಿಸಲಾಗಿದೆ.

ತಾಯಿ ಕೊಂದು ಬಾವಿಗೆ ಹಾಕಿದ್ದ ಮಗನಿಗೆ ಜೀವಾವಧಿ ಶಿಕ್ಷೆ

ಕೆ.ಆರ್.ಪೇಟೆ,ಜು.31– ತಾಲೂಕಿನ ಜಾಗಿನಕೆರೆ ಗ್ರಾಮದಲ್ಲಿ ತಾಯಿಯನ್ನೇ ಕೊಲೆ ಮಾಡಿದ್ದ ಮಗನಿಗೆ ಶ್ರೀರಂಗಪಟ್ಟಣದ ಮೂರನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಜೀವಾವಧಿ ಶಿಕ್ಷೆ ಹಾಗೂ 25 ಸಾವಿರ ರೂ. ದಂಡ ವಿಧಿಸಿದೆ.

ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯ ಜಾಗಿನಕೆರೆ ಗ್ರಾಮದಲ್ಲಿ ದಿನಾಂಕ: 21–02–2018 ರಂದು ಜಾಗಿನಕೆರೆ ಗ್ರಾಮದ ಕಾಳಮ್ಮ ಅವರನ್ನು ಆಕೆಯ ಮಗನಾದ ರಮೇಶ ಮಾರಣಾಂತಿಕ ಹಲ್ಲೆ ನಡೆಸಿ ಕೊಲೆ ಮಾಡಿ ಬಾವಿಗೆ ಹಾಕಿದ್ದ. ಈ ಸಂಬಂಧ ಕೆ.ಆರ್.ಪೇಟೆ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ ಅಂದಿನ ಸಿಪಿಐ ಹೆಚ್.ಬಿ.ವೆಂಕಟೇಶಯ್ಯರವರು ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಗೋಪಾಲಕೃಷ್ಣ ರೈ ಅವರು ಆರೋಪಿ ರಮೇಶನಿಗೆ ಜೀವಾವಧಿ ಶಿಕ್ಷೆ ಹಾಗೂ 25 ಸಾವಿರ ರೂಪಾಯಿಗಳ ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಎಂ.ಕೆ. ಪ್ರಫುಲ್ಲಾ ಅವರು ವಾದ ಮಂಡಿಸಿದ್ದರು.

ಕಿರುಗಾವಲು ಪೋಲೀಸರಿಂದ ಮೂವರು ಮನೆಗಳ್ಳರ ಬಂಧನ

47 ಲಕ್ಷ ರೂ. ಮೌಲ್ಯದ ನಗ–ನಾಣ್ಯ ವಶ

ಮಂಡ್ಯ,ಜು.31– ಜಿಲ್ಲೆಯ ಮಳವಳ್ಳಿ ತಾಲೂಕಿನ ಕಿರುಗಾವಲು ಪೊಲೀಸರು ಕಾರ್ಯಾಚರಣೆ ನಡೆಸಿ ರಾತ್ರಿ ವೇಳೆ ಮನೆ ಕಳ್ಳತನ ಮಾಡುತ್ತಿದ್ದ ಮೂವರು ಕುಖ್ಯಾತ ಕಳ್ಳರನ್ನು ಬಂಧಿಸಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಬುಧವಾರ ನಗರದ ಎಸ್ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ವಿಷಯ ತಿಳಿಸಿ ಬಂಧಿತ ಆರೋಪಿಗಳಿಂದ ಬರೋಬ್ಬರಿ 670 ಗ್ರಾಂ ಚಿನ್ನ, 170 ಗ್ರಾಂ ಬೆಳ್ಳಿ ಹಾಗೂ ಟಿವಿಎಸ್ ಬೈಕ್‌ವೊಂದನ್ನು ವಶಪಡಿಸಿಕೊಂಡಿದ್ದು, ಇವುಗಳ ಮೌಲ್ಯ ಸುಮಾರು 47 ಲಕ್ಷರೂ. ಆಗಲಿದೆ ಎಂದು ವಿವರಿಸಿದರು.

ಇದೇ ವರ್ಷದ ಮಾರ್ಚ್ 9ರಂದು ಕಿರುಗಾವಲಿನ ಸಂತೇಮಾಳದ ಕಮಲಮ್ಮ ಲೇಟ್ ಮರಿಸಿದ್ದೇಗೌಡರು ಕುಟುಂಬ ಸಮೇತ ಬೆಂಗಳೂರಿಗೆ ತೆರಳಿ ವಾಪಸ್ ಅದೇ ತಿಂಗಳ 10ರಂದು ಮನೆಗೆ ಬಂದು ನೋಡಿದಾಗ ಬೆಡ್‌ರೂಂನಲ್ಲಿದ್ದ ಗಾಡ್ರೇಜ್ ಬೀರುವಿನ ಬಾಗಿಲನ್ನು ಮೀಟಿ ಬೀರುವಿನಲ್ಲಿದ್ದ 55 ಗ್ರಾಂ ತೂಕದ ಚಿನ್ನದ ಒಡವೆ ಹಾಗೂ 80 ಸಾವಿರ ಹಣವನ್ನು ಕಳುವು ಮಾಡಿಕೊಂಡು ಹೋಗಿರುವುದು ಕಂಡು ಬಂದಿತ್ತು ಈ ಸಂಬಂಧ ಕಮಲಮ್ಮ ಕಿರುಗಾವಲು ಠಾಣೆಗೆ ದೂರು ನೀಡಿದ್ದರು ಎಂದು ಹೇಳಿದರು.



ಮನೆಗಳ್ಳರಿಂದ ವಶಪಡಿಸಿಕೊಳ್ಳಲಾದ ಚಿನ್ನಾಭರಣಗಳೊಂದಿಗೆ ಪೊಲೀಸರು.

ದೂರಿನ ಅನ್ವಯ ಕಳುವಾದ ಮಾಲುಗಳ ಪತ್ತೆಗೆ ಎಎಸ್ಪಿಗಳಾದ ತಿಮ್ಮಯ್ಯ ಮತ್ತು ಗಂಗಾಧರಸ್ವಾಮಿ, ಡಿವೈಎಸ್ಪಿ ಕೃಷ್ಣಪ್ಪ ಮಾರ್ಗದರ್ಶನದಲ್ಲಿ ಸಿಪಿಐ ಶ್ರೀಧರ್, ಪಿಎಸ್‌ಐ ರವಿಕುಮಾರ್, ಅಶೋಕ್ ಮತ್ತು ಮಹೇಂದ್ರ ನೇತೃತ್ವದಲ್ಲಿ ತಂಡವನ್ನು ರಚಿಸಲಾಗಿತ್ತು. ಆ ತಂಡ ಎಲ್ಲಾ ಆಯಾಮದಲ್ಲಿ ತನಿಖೆ ಮಾಡಿ ಮೂವರು ಕುಖ್ಯಾತ ಕಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿಸಿದರು.

ಕೆ.ಎಂ.ದೊಡ್ಡಿಯ ಅಣ್ಣೂರು ಗ್ರಾಮದ ಶೇಖರ್, ಕ್ಯಾತಘಟ್ಟ ಗ್ರಾಮದ ಕೃಷ್ಣ ಹಾಗೂ ಅದೇ ಗ್ರಾಮದ ವೆಂಕಟೇಶ್ ಬಂಧಿತ ಆರೋಪಿಗಳಾಗಿದ್ದು, ಈ ಆರೋಪಿಗಳು ಕಳೆದ 30 ವರ್ಷಗಳಿಂದ ಬರೋಬ್ಬರಿ 14ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಭಾಗಿಯಾಗಿದ್ದು, ಇವರ ವಿರುದ್ಧ ಮಳವಳ್ಳಿ ತಾಲೂಕಿನ ಕಿರುಗಾವಲು ಠಾಣೆಯಲ್ಲಿ ಮೂರು, ಹಲಗೂರು ಠಾಣೆಯಲ್ಲಿ ನಾಲ್ಕು, ಬೆಳಕವಾಡಿ ಠಾಣೆಯಲ್ಲಿ ಒಂದು, ಮಳವಳ್ಳಿ ಗ್ರಾಮಾಂತರ ಠಾಣೆಯಲ್ಲಿ ಮೂರು, ಮಳವಳ್ಳಿ ಟೌನ್ ಠಾಣೆಯಲ್ಲಿ ಒಂದು ಮತ್ತು ಮದ್ದೂರು ತಾಲೂಕಿನ ಕೆ.ಎಂ.ದೊಡ್ಡಿ ಠಾಣೆಯಲ್ಲಿ ಒಂದು ಹಾಗೂ ಬೆಸಗರಹಳ್ಳಿ ಠಾಣೆಯಲ್ಲಿ ಒಂದು ಹೀಗೆ ಒಟ್ಟು 14 ಮನೆಕಳ್ಳತನ ಪ್ರಕರಣಗಳು ದಾಖಲಾಗಿವೆ ಎಂದು ವಿವರಿಸಿದರು.

ಸುಮಾರು 30 ವರ್ಷಗಳಿಂದ ಇದೇ ವೃತ್ತಿಯಲ್ಲಿ ಕುಖ್ಯಾತಿ ಪಡೆದಿರುವ ಶೇಖರ್, ಕೃಷ್ಣ ಹಾಗೂ ವೆಂಕಟೇಶ್ 60ರ ಆಸುಪಾಸಿನವರಾಗಿದ್ದು, ಇವರ ವೃತ್ತಿಯೇ ಕಳ್ಳತನವಾಗಿದೆ. ರಾತ್ರಿ ಸಂದರ್ಭದಲ್ಲಿ ಕಳ್ಳತನಕ್ಕೆ ಸುಲಭ ರೀತಿಯಲ್ಲಿರುವ ಮನೆಗಳನ್ನು ಪತ್ತೆಹಚ್ಚಿ ಮುಂಭಾಗದ ಬಾಗಿಲಿನಿಂದ ಹೋಗದೇ ಮನೆಯ ಹಿಂಬಾಗಿಲಿನ ಬಾಗಿಲು ಸುಲಭವಾಗಿ ಒಡೆಯಬಹುದೆಂಬ ಕಾರಣಕ್ಕೆ ಬಹುತೇಕ ಮನೆಕಳ್ಳತನಗಳನ್ನು ಹಿಂಬಾಗಿಲಿನಿಂದ ನುಗ್ಗಿ ಕೃತ್ಯ ಎಸಗಿದ್ದು, ಸಾರ್ವಜನಿಕರು ತಮ್ಮ ಮನೆ ಬಾಗಿಲುಗಳನ್ನು ಭದ್ರವಾಗಿ ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ವೃತ್ತ ನಿರೀಕ್ಷಕ ಶ್ರೀಧರ್, ಸಿಪಿಐಗಳಾದ ರವಿಕುಮಾರ್, ಅಶೋಕ್, ಮಹೇಂದ್ರ, ಸಿದ್ದರಾಜು, ಎಎಸ್‌ಐ ಸಿದ್ದರಾಜು, ಸಿಬ್ಬಂದಿಗಳಾದ ರಿಯಾಜ್ ಪಾಷಾ, ಪ್ರಭುಸ್ವಾಮಿ, ನಾಗೇಂದ್ರ, ಮಹದೇವ, ಜಯಕುಮಾರ್, ಮಹೇಶ್, ಶ್ರೀನಿವಾಸ್, ಮೋಹನ್ ಕುಮಾರ್, ಉಮೇಶ್, ಸಿದ್ದರಾಜು, ಕೌಶಿಕ್, ವಿಠಲ್, ಅರುಣ್, ಸುಬ್ರಹ್ಮಣಿ, ಮಹೇಂದ್ರ, ಶ್ರೀನಿವಾಸ್, ಮಧುಕಿರಣ್, ಶಿವಕುಮಾರ್, ರವಿಕಿರಣ್, ಲೋಕೇಶ್, ಮಹದೇವಸ್ವಾಮಿ, ಪ್ರೀತಿಕುಮಾರ್, ನರಸಿಂಹಮೂರ್ತಿ, ಶಿವರಾಜು ಈ ಕಾರ್ಯಾಚರಣೆ ನಡೆಸಿದ್ದು ಇವರ ಕಾರ್ಯವನ್ನು ಎಸ್ಪಿಯವರು ಶ್ಲಾಘಿಸಿದ್ದಾರೆ. ಗೋಷ್ಠಿಯಲ್ಲಿ ಎಎಸ್ಪಿಗಳಾದ ತಿಮ್ಮಯ್ಯ, ಗಂಗಾಧರ ಸ್ವಾಮಿ, ಡಿವೈಎಸ್ಪಿ ಕೃಷ್ಣಪ್ಪ ಉಪಸ್ಥಿತರಿದ್ದರು.

ಸರ್ಕಾರ ಅಸ್ಥಿರಗೊಳಿಸಲು ಹುನ್ನಾರ, ಅಹಿಂದ ವರ್ಗ ಜಾಗೃತವಾಗಬೇಕು

ಮಂಡ್ಯದಲ್ಲಿ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಕರೆ

ಮಂಡ್ಯ,ಜು.31– ಹಿಂದುಳಿದ ವರ್ಗದ



ನಾಯಕ ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮುಖ್ಯಮಂತ್ರಿ ಆಗಿರುವುದನ್ನು ಬಿಜೆಪಿ ಪಕ್ಷದವರಿಗೆ ಅರಗಿಸಿಕೊಳ್ಳಲು ಆಗುತ್ತಿಲ್ಲ. ಹೀಗಾಗಿ ಸಿಎಂ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಿ ಸರ್ಕಾರವನ್ನು ಅಸ್ಥಿರಗೊಳಿಸುವ ಹುನ್ನಾರ ಮಾಡುತ್ತಿರುವ ಬಿಜೆಪಿ ವಿರುದ್ಧ ಅಹಿಂದ ವರ್ಗ ಜಾಗೃತರಾಗಬೇಕೆಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಹೇಳಿದರು.

ನಗರದ ಕನಕ ಸಮುದಾಯ ಭವನದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ–ಜೆಡಿಎಸ್ ಪಾದಯಾತ್ರೆಗೆ ಅಹಿಂದ ಪ್ರತಿರೋಧ ಸಮಾವೇಶ ನಡೆಸುವ ಪೂರ್ವಭಾವಿ ಜಾಗೃತಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರಿಗೆ ಇರುವ ಶಕ್ತಿ ಮನೋಭಾವ ಕಡಿಮೆ ಮಾಡಲು ಮುಡಾ ಹಾಗೂ ವಾಲ್ಮೀಕಿ ಹಗರಣದಲ್ಲಿ ಅವರ ಹೆಸರನ್ನು ತಳುಕು ಹಾಕಲಾಗಿದೆ. ಇದರ ಸತ್ಯಾಸತ್ಯತೆ ರಾಜ್ಯದ ಜನತೆ ಹಾಗೂ ಬಿಜೆಪಿಯವರಿಗೂ ಗೊತ್ತು ಎಂದು ತಿಳಿಸಿದರು.

ಸೈಟ್‌ಗಳು ಸಿಎಂ ಅವರ ಧರ್ಮಪತ್ನಿ ಹೆಸರಲ್ಲಿ ಇದೆ. ಜಮೀನು ಕೊಟ್ಟಾಗ ಸೈಟ್ ಕೊಡುವುದು ಸಾಮಾನ್ಯ. ವಿಧಾನಸೌಧದ ಒಳಗೆ ಮತ್ತು ಹೊರಗೆ ಬಿಜೆಪಿ, ಜೆಡಿಎಸ್ ಹೋರಾಟ ಮಾಡುತ್ತಿದ್ದು, ಇದಕ್ಕೆ ಉತ್ತರ ಕೊಡಲು ನಾವು ಸಿದ್ದರಾಮಯ್ಯ ಜೊತೆಯಲ್ಲಿ ಇರಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಪ್ರಧಾನ ಸಂಚಾಲಕ ಕೆ.ಎಂ.ರಾಮಚಂದ್ರಪ್ಪ ಮಾತನಾಡಿ, ಹಿಂದುಳಿದ ವರ್ಗದ ನಾಯಕ ಸಿದ್ದರಾಮಯ್ಯ ಅವರನ್ನು ದುರ್ಬಲಗೊಳಿಸುವ ಕುತಂತ್ರವನ್ನು ಬಿಜೆಪಿ, ಜೆಡಿಎಸ್ ನಾಯಕರು ನಿಲ್ಲಿಸದಿದ್ದರೆ ರಾಜ್ಯದಾದ್ಯಂತ ಪ್ರತಿಭಟನೆ ಹಾಗೂ ಶೋಷಿತ ಸಮುದಾಯಗಳ ಎಚ್ಚರಿಕೆ ಸಮಾವೇಶ ಹಮ್ಮಿಕೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಬಿ.ಎಸ್.ಶಿವಣ್ಣ, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಎಂ.ಎಲ್.ಸುರೇಶ್, ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಎಂ.ಎಸ್. ಚಿದಂಬರ್, ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಮಂಡ್ಯ ಜಿಲ್ಲಾಧ್ಯಕ್ಷ ಕೆ.ಹೆಚ್.ನಾಗರಾಜು, ಮುಖಂಡರಾದ ಸುಬ್ಬಣ್ಣ, ಅಯೂಬ್‌ಖಾನ್, ದೇವರಾಜ್, ಶಶಿಧರ್ ಇತರರು ಉಪಸ್ಥಿತರಿದ್ದರು.

ಪುನರಾಯ್ಕೆ

ಮಂಡ್ಯ: ರೋಟರಿ ಸಕ್ಕರೆ ನಾಡು ಸಂಸ್ಥೆಯ



ನೂತನ ಜಿಲ್ಲಾಧ್ಯಕ್ಷರಾಗಿ ಎ.ಪಿ.ಸತೀಶ್ ಪುನರಾಯ್ಕೆಯಾಗಿದ್ದಾರೆ. ಕಳೆದ ಅವಧಿಯಲ್ಲೂ ಅಧ್ಯಕ್ಷರಾಗಿದ್ದ ಸತೀಶ್ ಉತ್ತಮ ರೀತಿಯಲ್ಲಿ ಸಂಸ್ಥೆಯನ್ನು ಮುನ್ನಡೆಸಿದ ಪರಿಣಾಮ ಈ ಬಾರಿಯೂ ಅವರನ್ನು ಮುಂದುವರೆಸಲಾಗಿದ್ದು, ಸತೀಶ್ ಅವರಿಗೆ ಸಂಸ್ಥೆಯ ಪ್ರಧಾನ ಸಂಚಾಲಕರಾದ ರೋಟರಿ ಶ್ರೀನಿವಾಸ್ ಮೂರ್ತಿ ಪದವಿ ಪ್ರದಾನ ಮಾಡಿದರು.

ಪಿಎಚ್.ಡಿ ಪದವಿ

ಮೈಸೂರು, ಜು. 31– ಡಾ. ಟಿ.ವಿ. ಸೋಮಶೇಖರ್ ಅವರ ಮಾರ್ಗದರ್ಶನದಲ್ಲಿ ಮಲ್ಲಿಕಾರ್ಜುನ ಅವರು ಶಿಕ್ಷಣ ವಿಷಯದಲ್ಲಿ ಸಂಶೋಧನೆ ನಡೆಸಿ



ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಪ್ಯಾರಿಸ್: ಈ ಬಾರಿ ಒಲಿಂಪಿಕ್ಸ್‌ನಲ್ಲಿ ತನಿಶಾ ಕ್ರಾಸ್ಟೊ ಅವರೊಂದಿಗೆ ಡಬಲ್ಸ್‌ನಲ್ಲಿ ಮೂರು ಸತತ ಸೋಲು ಅನುಭವಿಸುವ ಮೂಲಕ ಆಘಾತಗೊಂಡಿರುವ ಹಿರಿಯ ಬ್ಯಾಡ್ಮಿಂಟನ್ ಆಟಗಾರ್ತಿ ಅಶ್ವಿನಿ ಪೊನ್ನಪ್ಪ ಅವರು, 'ಇದು ನನ್ನ ಕೊನೆಯ ಒಲಿಂಪಿಕ್ಸ್' ಎಂದು ಹೇಳುವ ಮೂಲಕ ಅಭಿಮಾನಿಗಳಲ್ಲಿ ಆಘಾತ ಮೂಡಿಸಿದ್ದಾರೆ.

ಮಂಗಳವಾರ ನಡೆದ ಸಿ ಗುಂಪಿನ ಪಂದ್ಯದಲ್ಲಿ ಅಶ್ವಿನಿ ಹಾಗೂ ತನಿಶಾ ಜೋಡಿಯು ಆಸ್ಟ್ರೇಲಿಯಾದ ಸೆತ್ಯಾನಾ ಮಾಪಸಾ ಹಾಗೂ ಏಂಜೆಲಾ ಯು ಜೋಡಿ ವಿರುದ್ಧ 15–21, 10–21 ನೇರ ಸೆಟ್‌ನಲ್ಲಿ ಪರಾಭವಗೊಂಡಿತು. ಈ ಸೋಲಿನ ಮೂಲಕ 2024ರ ಒಲಿಂಪಿಕ್ಸ್‌ನಿಂದ ಈ ಜೋಡಿ ಹೊರಬಿದ್ದಿತು.

2028ರಲ್ಲಿ ಲಾಸ್‌ಏಂಜಲೀಸ್‌ನಲ್ಲಿ ನಡೆಯಲಿರುವ ಒಲಿಂಪಿಕ್ಸ್‌ನಲ್ಲಿ ಆಡುವಿರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ 34 ವರ್ಷದ ಅಶ್ವಿನಿ, ಇದು ನನ್ನ ಕೊನೆಯ ಒಲಿಂಪಿಕ್ಸ್. ಆದರೆ ತನಿಷಾ ಅವರ ಕ್ರೀಡೆಯ ಹಾದಿ ಇನ್ನೂ ಸುದೀರ್ಘವಿದೆ ಎಂದರು.

ಇಂದು ನಾವು ಗೆಲ್ಲಲೇಬೇಕು ಎಂದು ಆಡಿದೆವು. ಆದರೆ ಸಾಧ್ಯವಾಗಲಿಲ್ಲ. ಈ ಪ್ರಯಾಣದಲ್ಲಿ ನಾನು ಹಾಗೂ ತನಿಶಾ ಒಲಿಂಪಿಕ್ಸ್‌ನಲ್ಲಿ ಆಡಿದ್ದೆವು ಎಂಬ ಸಮಾಧಾನದೊಂದಿಗೆ ನಿರ್ಗಮಿಸುತ್ತಿದ್ದೇವೆ. ಇಲ್ಲಿ ಆಡುವುದು ಅಷ್ಟು ಸುಲಭದ ಮಾತಲ್ಲ ಎಂದು ಅಶ್ವಿನಿ ಹೇಳಿದ್ದಾರೆ. ಈ ಸೋಲು ನನ್ನ ಮನಸ್ಸು ಹಾಗೂ ಭಾವನೆಗಳ ಮೇಲೆ ಭಾರೀ ಆಘಾತ ಉಂಟು ಮಾಡಿದೆ. ಇಂಥ ಪರಿಸ್ಥಿತಿಯನ್ನು ಮತ್ತೆ ಎದುರಿಸಲಾರೆ. ಅದು ಸುಲಭವೂ ಅಲ್ಲ. ಕಿರಿಯ ವಯಸ್ಸಿನವರಾದರೆ ಇವೆಲ್ಲವನ್ನೂ ಸಹಿಸಿಕೊಳ್ಳಬಹುದು. ಸಾಕಷ್ಟು ವರ್ಷಗಳ ಕಾಲ ಆಡಿದ್ದೇನೆ. ಇನ್ನು ಸಾಗುವುದು ಕಷ್ಟ ಎಂದ ಅಶ್ವಿನಿ ಉಕ್ಕಿ ಬರುತ್ತಿದ್ದ ಕಣ್ಣೀರನ್ನು ತಡೆಯಲು ಯತ್ನಿಸಿದರು. ತನಿಶಾ ಕೂಡಾ ಭಾವುಕರಾದರು.

ಅಶ್ವಿನಿ ನನಗೆ ಬಹುದೊಡ್ಡ ಬೆಂಬಲವಾಗಿ ನನ್ನೊಂದಿಗಿದ್ದರು. ಪ್ರತಿ ಬಾರಿ ನನ್ನನ್ನು ಹುರಿದುಂಬಿಸುತ್ತಿದ್ದರು. ಉತ್ತಮ ಫಲಿತಾಂಶದ ನಿರೀಕ್ಷೆಯಲ್ಲಿದ್ದೆವು ಎಂದು ತನಿಶಾ ಹೇಳಿದ್ದಾರೆ. ಅಶ್ವಿನಿ ಅವರು 2001ರಲ್ಲಿ ಮೊದಲ ರಾಷ್ಟ್ರೀಯ ಪದಕ ಪಡೆದಿದ್ದರು. 2017ರವರೆಗೂ ಜ್ವಾಲಾ ಗುಟ್ಟ ಹಾಗೂ ಅಶ್ವಿನಿ ಪೊನ್ನಪ್ಪ ಜೋಡಿ ಹಲವು ಇತಿಹಾಸಗಳನ್ನು ನಿರ್ಮಿಸಿ, ಯಶಸ್ವಿ ಜೋಡಿ ಎನಿಸಿಕೊಂಡಿತ್ತು. ಈ ಜೋಡಿ ಹಲವು ಅಂತರರಾಷ್ಟ್ರೀಯ ಪದಕಗಳನ್ನು ಜಯಿಸಿತು. ಇದರಲ್ಲಿ 2010ರಲ್ಲಿ ದೆಹಲಿಯಲ್ಲಿ ನಡೆದ ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಕಂಚು, 2014 ಹಾಗೂ 2016ರಲ್ಲಿ ಉಬರ್ ಕಪ್ ಹಾಗೂ 2014ರಲ್ಲಿ ಏಷ್ಯನ್ ಚಾಂಪಿಯನ್‌ಶಿಪ್‌ನಲ್ಲೂ ಪದಕ ಪಡೆದಿದ್ದರು. ವಿಶ್ವ ಬ್ಯಾಡ್ಮಿಂಟನ್ ರ‍್ಯಾಂಕಿಂಗ್ ಪಟ್ಟಿಯಲ್ಲಿ ಈ ಜೋಡಿ ಮೊದಲ 20ರಲ್ಲಿ ಸ್ಥಾನ ಪಡೆದಿತ್ತು. 2012 ಹಾಗೂ 2016ರಲ್ಲೂ ಈ ಜೋಡಿ ಒಲಿಂಪಿಕ್ಸ್‌ನಲ್ಲಿ ಪಾಲ್ಗೊಂಡಿತ್ತು.

ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟ–2024

ಫೈನಲ್‌ಗೆ ಭಾರತದ ಶೂಟರ್ ಸ್ವಪ್ನಿಲ್ ಕುಸಾಲೆ



ಪ್ಯಾರಿಸ್, ಜು.31– ಪ್ಯಾರಿಸ್ 2024ರ ಒಲಿಂಪಿಕ್ಸ್‌ನಲ್ಲಿ ಭಾರತದ ಶೂಟರ್ ಸ್ವಪ್ನಿಲ್ ಕುಸಾಲೆ ಪುರುಷರ ವಿಭಾಗದ 50 ಮೀಟರ್ ರೈಫಲ್‌ನಲ್ಲಿ ಫೈನಲ್ ಪ್ರವೇಶಿಸಿದ್ದಾರೆ. ಅರ್ಹತಾ ಸುತ್ತಿನಲ್ಲಿ 3 ಸ್ಥಾನಗಳಿಗೆ ಭಾರತದ ಶೂಟರ್ ಗಳಾದ ಐಶ್ವರ್ಯ ಪ್ರತಾಪ್ ಸಿಂಗ್ ತೋಮರ್ ಮತ್ತು ಸ್ವಪ್ನಿಲ್ ಕುಸಾಲೆ ಸ್ಪರ್ಧಿಸಿದರು. ಚೊಚ್ಚಲ ಒಲಿಂಪಿಕ್ಸ್ ಪಂದ್ಯದಲ್ಲಿ ಕುಸಾಲೆ 590–38x ಸ್ಕೋರ್‌ನೊಂದಿಗೆ ಏಳನೇ ಸ್ಥಾನ ಪಡೆಯುವ ಮೂಲಕ ಫೈನಲ್‌ಗೆ ತಲುಪಿದರೆ, ಪ್ರತಾಪ್ ಸಿಂಗ್ ತೋಮರ್ ಒಟ್ಟು 589–33x ಅಂಕದೊಂದಿಗೆ 11ನೇ ಸ್ಥಾನ ಪಡೆದು ಕ್ರೀಡಾಕೂಟದಿಂದ ಹೊರಬಿದ್ದಿದ್ದಾರೆ.

ಪ್ರಿ ಕ್ವಾಟರ್ ಫೈನಲ್‌ಗೆ ದೀಪಿಕಾ ಕುಮಾರಿ



ಪ್ಯಾರಿಸ್, ಜು.31– ಭಾರತದ ಭರವಸೆಯ ಬಿಲ್ಲುಗಾರ್ತಿ ದೀಪಿಕಾ ಕುಮಾರಿ, ಮಹಿಳೆಯರ ವೈಯಕ್ತಿಕ ವಿಭಾಗದಲ್ಲಿ ಪ್ರಿ ಕ್ವಾಟರ್ ಫೈನಲ್ ಪ್ರವೇಶಿಸಿದ್ದಾರೆ.

ಪ್ಯಾರಿಸ್ 2024ರ ಒಲಿಂಪಿಕ್ಸ್ ಸೇರಿ ನಾಲ್ಕನೆ ಬಾರಿ ಭಾಗವಹಿಸಿರುವ ವಿಶ್ವದ ನಂ.1 ಮಾಜಿ ಬಿಲ್ಲುಗಾರ್ತಿ ದೀಪಿಕಾ ಕುಮಾರಿ, ತಂಡ ವಿಭಾಗದಲ್ಲಿ ನಿರಾಸೆ ಮೂಡಿಸಿದ್ದರು. ಆದರೆ ವೈಯಕ್ತಿಕ ವಿಭಾಗದಲ್ಲಿ ಸತತ ಎರಡು ಪಂದ್ಯಗಳಲ್ಲಿ ಗೆಲುವು ಸಾಧಿಸುವ ಮೂಲಕ ಭರವಸೆ ಮೂಡಿಸಿದ್ದಾರೆ.

ಮೊದಲ ಪಂದ್ಯದಲ್ಲಿ 6–5 ರಿಂದ ಎಸ್ಟೋನಿಯಾದ ರೀನಾ ಪರ್ನಾಲ್ ವಿರುದ್ಧ ಶುಭಾರಂಭ ಮಾಡಿ, ಎರಡನೇ ಪಂದ್ಯದಲ್ಲಿ 6–2 ರಿಂದ ನೆದರ್ಲೆಂಡ್‌ನ ಕ್ವಿಂಟಿ ರೋಫೆನ್ ಅವರನ್ನು ಮಣಿಸಿ ಪ್ರಿ ಕ್ವಾಟರ್ ಫೈನಲ್ ಪ್ರವೇಶಿಸಿದರು.



ಬ್ಯಾಡ್ಮಿಂಟನ್‌ನಲ್ಲಿ ಸಿಂಧು, ಲಕ್ಷ್ಯಸೇನ್ ಪ್ರಿಕ್ವಾರ್ಟರ್‌ಗೆ

ಪ್ಯಾರಿಸ್: ಬ್ಯಾಡ್ಮಿಂಟನ್ ಮಹಿಳೆಯರ ಸಿಂಗಲ್ಸ್‌ನಲ್ಲಿ ಮೂರನೇ ಒಲಿಂಪಿಕ್ಸ್ ಪದಕದ ಪ್ರಯತ್ನ ದಲ್ಲಿರುವ ಪಿ.ವಿ. ಸಿಂಧು 16ರ ಸುತ್ತಿಗೆ ಸ್ಥಾನ ಕಾದಿರಿಸಿದರೆ, ಇಂಡೊನೇಷ್ಯಾದ ಜೊನಾಥನ್ ಕ್ರಿಸ್ಟಿಗೆ ಸೋಲಿನ ಆಘಾತ ನೀಡಿದ ಭಾರತದ ಲಕ್ಷ್ಯಸೇನ್ ಪ್ರಿಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಭಾರತದ ಬ್ಯಾಡ್ಮಿಂಟನ್ ತಾರೆ ಪಿ.ವಿ.ಸಿಂಧು, ಬುಧವಾರ ನಡೆದ 'ಎಂ' ಗುಂಪಿನ ಪಂದ್ಯದಲ್ಲಿ ಎಸ್ಟೋನಿಯಾದ ಕ್ರಿಸ್ಟಿನ್ ಕುಬಾ ಅವರನ್ನು 21–5, 21–10 ರಿಂದ ಸೋಲಿಸುವ ಮೂಲಕ 16ರ ಸುತ್ತಿನಲ್ಲಿ ಸ್ಥಾನ ಪಡೆದುಕೊಂಡಿದ್ದಾರೆ. ಹಾಗೆಯೇ 22ನೇ ವರ್ಷ ವಯಸ್ಸಿನ ಲಕ್ಷ್ಯಸೇನ್, ಪ್ರಬುದ್ಧತೆ ಮತ್ತು ತಂತ್ರಗಾರಿಕೆ ಪ್ರದರ್ಶಿಸಿ 21–18, 21–12 ನೇರ ಸೆಟ್‌ಗಳಿಂದ ಏಷ್ಯನ್ ಚಾಂಪಿಯನ್ ಕ್ರಿಸ್ಟಿ ಅವರನ್ನು ಹಿಮ್ಮೆಟ್ಟಿಸಿದರು.

ಟೇಬಲ್ ಟೆನಿಸ್‌ನಲ್ಲಿ ಶ್ರೀಜಾ ಅಕುಲಾ ಪ್ರಿ ಕ್ವಾರ್ಟರ್ ಪ್ರವೇಶ

ಪ್ಯಾರಿಸ್, ಜು.31– ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತದ ಟೇಬಲ್ ಟೆನಿಸ್ ತಾರೆ ಶ್ರೀಜಾ ಅಕುಲಾ ಮಹಿಳೆಯರ ಸಿಂಗಲ್ಸ್‌ನಲ್ಲಿ ಪ್ರಿ ಕ್ವಾರ್ಟರ್ ಫೈನಲ್ ತಲುಪಿದ್ದು, ಈ ಮೂಲಕ ಒಲಿಂಪಿಕ್ಸ್‌ನಲ್ಲಿ 16ರ ಘಟ್ಟ ತಲುಪಿದ ಭಾರತದ ಎರಡನೇ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ತಮ್ಮ 26ನೇ ವರ್ಷದ ಜನ್ಮದಿನ ಸಂಭ್ರಮದಲ್ಲಿದ್ದ ಶ್ರೀಜಾ, ಬುಧವಾರ ನಡೆದ 32ರ ಘಟ್ಟದ ಪಂದ್ಯದಲ್ಲಿ 9–11, 12–10, 11–4, 11–5, 10–12, 12–10 (4–2) ರಿಂದ ಸಿಂಗಾಪುರದ ಜಿಯಾನ್ ಝೆಂಗ್ ವಿರುದ್ಧ ಜಯಿಸುವ ಮೂಲಕ ಮಣಿಕಾ ಬಾತ್ರಾ ಅವರೊಂದಿಗೆ ಪ್ರಿ ಕ್ವಾರ್ಟರ್ ಫೈನಲ್ ಪ್ರವೇಶಿಸಿ ದಾಖಲೆ ಬರೆದಿದ್ದಾರೆ.


ಆರಂಭಿಕ ಸೆಟ್‌ನಲ್ಲಿ ಹಿನ್ನಡೆ ಅನುಭವಿಸಿದ್ದ ಶ್ರೀಜಾ, ನಂತರ ಸತತ ಮೂರು ಸೆಟ್‌ಗಳಲ್ಲಿ ಮೇಲುಗೈ ಸಾಧಿಸಿದರು. ಐದನೇ ಸೆಟ್‌ನಲ್ಲಿ ಮತ್ತೆ ಸಿಂಗಾಪುರದ ಆಟಗಾರ್ತಿ ತಿರುಗೇಟು ನೀಡಿದರೂ, ಆರನೇ ಸೆಟ್‌ನಲ್ಲಿ ಹಿಡಿತ ಸಾಧಿಸಿ ಮುಂದಿನ ಸುತ್ತಿಗೆ ಲಗ್ಗೆ ಹಾಕಿದರು.



ಮೇಕೆದಾಟು ಸಮಸ್ಯೆಯನ್ನು ನೀವೇ ಬಗೆಹರಿಸಿಕೊಳ್ಳಿ...

ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಪ್ರಧಾನಿ ನರೇಂದ್ರ ಮೋದಿ ಸಲಹೆ

● ದೆಹಲಿಯಲ್ಲಿ ಮೋದಿ ಭೇಟಿ ಮಾಡಿದ ಡಿಕೆಶಿ ● ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸುವಂತೆ ಮನವಿ ● ಬೆಂಗಳೂರನ್ನು ಗಿಫ್ಟ್ ಸಿಟಿ ಮಾಡಿ ● ತಮಿಳುನಾಡಿಗೆ ಇತಿಹಾಸದಲ್ಲೇ ಹೆಚ್ಚು ನೀರು


ನವದೆಹಲಿಯಲ್ಲಿ ಬುಧವಾರ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ಮೇಕೆದಾಟು ಯೋಜನೆ ಸಮಸ್ಯೆ ಪರಿಹಾರಕ್ಕೆ ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸುವಂತೆ ಕೋರಿದರು.

ನವದೆಹಲಿ, ಜು.31(ಬಿಎಲ್‌ಯು)– ಮೇಕೆದಾಟು ಯೋಜನೆ ಬಿಕ್ಕಟ್ಟನ್ನು ತಮಿಳುನಾಡು ಹಾಗೂ ಕರ್ನಾಟಕ ಬಗೆಹರಿಸಿಕೊಂಡರೆ ಉತ್ತಮ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಲಹೆ ನೀಡಿದ್ದಾರೆ.

ದೆಹಲಿಯಲ್ಲಿ ಇಂದು ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ಡಿ.ಕೆ.ಶಿವಕುಮಾರ್, ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸಿದರೆ ಮೇಕೆದಾಟು ಯೋಜನೆ ಸಮಸ್ಯೆ ಪರಿಹರಿಸಬಹುದು ಎಂದು ಕೋರಿದ್ದಾರೆ. ಇದಕ್ಕೆ ಪ್ರತಿಕ್ರಿಯೆ ನೀಡಿದ ಪ್ರಧಾನಿ ಮೋದಿ, ಮೇಕೆದಾಟು ಯೋಜನೆ ಸಮಸ್ಯೆಯನ್ನು ನೀವೇ ಬಗೆಹರಿಸಿಕೊಂಡರೆ ಉತ್ತಮ ಎಂದು ಸಲಹೆ ನೀಡಿದ್ದಾರೆ. ಇಷ್ಟಾದರೂ ರಾಜ್ಯ ಸರ್ಕಾರದ ವತಿಯಿಂದ ಪ್ರಧಾನಿಗೆ ಪುನರ್ ಮನವಿ ಮಾಡಲಾಗಿದೆ. ತಮಿಳುನಾಡಿಗೆ 40 ಟಿಎಂಸಿ ನೀರು ಬಿಡಬೇಕಿತ್ತು. ಆದರೆ ಈ ಬಾರಿ 84 ಟಿಎಂಸಿಗೂ ಹೆಚ್ಚು ನೀರು ಬಿಟ್ಟಿದ್ದೇವೆ ಎಂದು ಇದೇ ವೇಳೆ ನರೇಂದ್ರ ಮೋದಿ ಅವರಿಗೆ ಜಲ ಸಂಪನ್ಮೂಲ ಸಚಿವರೂ ಆದ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೆ.

ಗುಜರಾತ್‌ನ ಅಹಮದಾಬಾದ್ ಅನ್ನು ಗಿಫ್ಟ್ ಸಿಟಿ ಮಾದರಿಯಲ್ಲಿ ಬೆಂಗಳೂರನ್ನು ಪರಿಗಣಿಸಬೇಕು. ಸುರಕ್ಷಿತ ಸುರಂಗ ರಸ್ತೆ, ಸಿಗ್ನಲ್ ಮುಕ್ತ ರಸ್ತೆ, ಮಳೆ ನೀರು ಗಾಲುವೆಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಕೋರಿದ್ದಾರೆ.

ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ನಂತರ ಪತ್ರಕರ್ತರ ಜೊತೆ ಮಾತನಾಡಿದ ಡಿ.ಕೆ.ಶಿವಕುಮಾರ್, ಬೆಂಗಳೂರು ಅತೀ ಹೆಚ್ಚು ತೆರಿಗೆ ಸಂಗ್ರಹವಾಗುವ ನಗರವಾಗಿದೆ ಆದರೆ ಈ ಬಜೆಟ್‌ನಲ್ಲಿ ಬೆಂಗಳೂರಿಗೆ ಏನೂ ನೀಡಿಲ್ಲ. ಈ ಹಿನ್ನೆಲೆಯಲ್ಲಿ ಮಹಾರಾಷ್ಟ್ರದಂತೆ ಕರ್ನಾಟಕವನ್ನು ಪರಿಗಣಿಸಬೇಕು ಎಂದು ಪ್ರಧಾನಮಂತ್ರಿ ಅವರನ್ನು ಕೋರಿದ್ದೇನೆ ಎಂದರು.

ಬೆಂಗಳೂರಿಗೆ ಹೊರಗಿನಿಂದ ಹೆಚ್ಚು ಜನರು ಬರುತ್ತಿದ್ದಾರೆ. ಜೊತೆಗೆ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಬೇಕಿದೆ. ಇದಕ್ಕೆ ಅನುದಾನದ ಅವಶ್ಯಕತೆ ಇದೆ ಎಂಬುದನ್ನು ನರೇಂದ್ರ ಮೋದಿ ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದೇನೆ ಎಂದು ತಿಳಿಸಿದರು.

ಕಳೆದ ಬಾರಿಯ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆಗೆ 5.300 ಕೋಟಿ ರೂಪಾಯಿ ಅನುದಾನ ಘೋಷಣೆ ಮಾಡಲಾಗಿತ್ತು. ಆದರೆ ಆ ಹಣ ಇನ್ನೂ ಬಂದಿಲ್ಲ ಎಂದು ನರೇಂದ್ರ ಮೋದಿ ಗಮನಕ್ಕೆ ತಂದಾಗ, ಈ ವಿಚಾರವನ್ನು ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸುವುದಾಗಿ ಭರವಸೆ ನೀಡಿದರು ಎಂದು ಹೇಳಿದರು.

ಪಾದಯಾತ್ರೆಗೆ ನಾವು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ

ಬಿಜೆಪಿ ಹಾಗೂ ಜೆಡಿಎಸ್‌ನವರು ನಡೆಸುತ್ತಿರುವ ಪಾದಯಾತ್ರೆಗೆ ಪ್ರತ್ಯುತ್ತರ ನೀಡಲು ನಾವು ಕೂಡ ಪಾದಯಾತ್ರೆ ಮಾಡಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ ಎಂದು ಡಿ.ಕೆ.ಶಿವಕುಮಾರ್ ಇದೇ ವೇಳೆ ತಿಳಿಸಿದ್ದಾರೆ. ಕಾಂಗ್ರೆಸ್ ಪಕ್ಷ ಹಮ್ಮಿಕೊಳ್ಳುವ ಪಾದಯಾತ್ರೆ ಸಂಬಂಧ ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿ ಕರೆದು ಸಮಗ್ರ ಮಾಹಿತಿ ನೀಡುತ್ತೇನೆ. ಬಿಜೆಪಿ ಪಾದ ಯಾತ್ರೆಗೆ ಬೆಂಬಲ ನೀಡುವುದಿಲ್ಲ ಎಂಬ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ, ಈ ಬಗ್ಗೆ ನನಗೇನು ತಿಳಿದಿಲ್ಲ ಎಂದಷ್ಟೆ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯೆ ನೀಡಿದರು.

ಬಾಕ್ಸರ್ ಲವ್ಲಿನಾ ಬೊರ್ಗೊಹೈನ್ ಕ್ವಾರ್ಟರ್ ಫೈನಲ್‌ಗೆ

ಪ್ಯಾರಿಸ್, ಜು.31– ಭಾರತದ ಬಾಕ್ಸರ್ ಲವ್ಲಿನಾ ಬೊರ್ಗೊ ಹೈನ್ ಕ್ವಾರ್ಟರ್ ಫೈನಲ್‌ಗೆ ಪ್ರವೇಶ ಪಡೆದಿದ್ದಾರೆ. ಪ್ಯಾರಿಸ್ 2024ರ ಒಲಿಂಪಿಕ್ಸ್‌ನಲ್ಲಿ



ಗೆಲುವಿನ ಅಭಿಯಾನ ಮುಂದುವರೆಸಿರುವ ಲವ್ಲಿನಾ, ಬುಧವಾರ ನಡೆದ ಮಹಿಳೆಯರ 75 ಕೆಜಿ ವಿಭಾಗದ 16ನೇ ಸುತ್ತಿನ ಪಂದ್ಯದಲ್ಲಿ ನಾರ್ವೆಯ ಸುನಿವಾ ಹೊಫ್‌ಸ್ಟಾಡ್ ಅವರನ್ನು 5–0 ಅಂಕಗಳಿಂದ ಸೋಲಿಸಿದರು. ಸತತ ಎರಡನೇ ಪದಕ ಗೆಲ್ಲುವ ಗುರಿಯಲ್ಲಿರುವ ಲವ್ಲಿನಾ, ಆ.4 ರಂದು ಎಂಟರಘಟ್ಟದಲ್ಲಿ ಚೀನಾದ ಲಿ ಕಿಯಾನ್ ಅವರನ್ನು ಎದುರಿಸಲಿದ್ದಾರೆ.

ಬಾಕ್ಸಿಂಗ್‌ನಲ್ಲಿ ಭಾರತ ಈ ಬಾರಿಯ ಕ್ರೀಡೆಗಳಲ್ಲಿ ಮಿಶ್ರಫಲ ಕಂಡಿದ್ದು, ಆರರಲ್ಲಿ ಮೂವರು ಬಾಕ್ಸರ್‌ಗಳು ಈಗಾಗಲೇ ಹೊರಬಿದ್ದಿದ್ದಾರೆ. ಏಷ್ಯನ್ ಗೇಮ್ಸ್ ಮಾಜಿ ಚಾಂಪಿಯನ್ ಅಮಿತ್ ಪಂಘಲ್ (51 ಕೆ.ಜಿ), ಪ್ರೀತಿ ಪವಾರ್ (54 ಕೆ.ಜಿ) ಮತ್ತು ಜೈಸ್ಮಿನ್ ಲಂಬೋರಿಯಾ (57 ಕೆ.ಜಿ) ಬೇಗನೇ ಹೊರ ಬಿದ್ದಿದ್ದಾರೆ. ಬೊರ್ಗೊಹೈನ್ ಜೊತೆ ನಿಖತ್ ಝರೀನ್ (ಮಹಿಳೆಯರ 50 ಕೆ.ಜಿ) ಮತ್ತು ನಿಶಾಂತ್ ದೇವ್ (ಪುರುಷರ 71 ಕೆ.ಜಿ) ಸವಾಲು ಉಳಿಸಿಕೊಂಡಿದ್ದಾರೆ.

ಇಂದು ಕಣಕ್ಕೆ ಚಿನ್ನದ ಹುಡುಗ ನೀರಜ್ ಚೋಪ್ರಾ ನೇತೃತ್ವದ ಅಥ್ಲೀಟ್ ತಂಡ

ಪ್ಯಾರಿಸ್, ಜು.31– ಭಾರತದ 'ಚಿನ್ನದ ಹುಡುಗ' ನೀರಜ್ ಚೋಪ್ರಾ ನಾಯಕತ್ವದ 29 ಅಥ್ಲೀಟ್‌ಗಳ ತಂಡವು ಗುರುವಾರ ಒಲಿಂಪಿಕ್ಸ್‌ನಲ್ಲಿ



ಆರಂಭವಾಗಲಿರುವ ಅಥ್ಲೆಟಿಕ್ಸ್‌ನಲ್ಲಿ ಕಣಕ್ಕಿಳಿಯಲಿದ್ದು, ಸತತ ಎರಡನೇ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಜಯಿಸುವ ನಿರೀಕ್ಷೆಯಲ್ಲಿ ನೀರಜ್ ಇದ್ದಾರೆ.

2020ರ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಚಿನ್ನ ಜಯಿಸಿದ್ದ ಚೋಪ್ರಾ ಅವರ ಜಾವೆಲಿನ್ ಥ್ರೋ ಸ್ಪರ್ಧೆಯ ಅರ್ಹತಾ ಸುತ್ತು ಆ.6ರಂದು ನಡೆಯಲಿದ್ದು, ಆ.8 ರಿಂದ ಪದಕ ಸುತ್ತಿನ ಸ್ಪರ್ಧೆ ನಡೆಯಲಿದೆ. ಟೋಕಿಯೊದ ಸಾಧನೆಯ ನಂತರವೂ 15 ಪ್ರಮುಖ ಅಂತರರಾಷ್ಟ್ರೀಯ ಚಾಂಪಿಯನ್‌ಷಿಪ್‌ಗಳಲ್ಲಿ ಭಾಗವಹಿಸಿದ್ದ ನೀರಜ್, ಉತ್ತಮ ಲಯದಲ್ಲಿದ್ದು ಭಾರತದವರೇ ಆದ ಕಿಶೋರ್ ಜೇನಾ ಅವರಿಂದಲೂ ಸ್ಪರ್ಧೆ ಎದುರಿಸಲಿದ್ದಾರೆ.

ರೇಸ್ ವಾಕಿಂಗ್: ಗುರುವಾರ ಅಥ್ಲೆಟಿಕ್ಸ್‌ನಲ್ಲಿ ನಡೆಯಲಿರುವ 20 ಕಿ.ಮೀ ರೇಸ್ ವಾಕಿಂಗ್ ಸ್ಪರ್ಧೆಯ ಪುರುಷರ ವಿಭಾಗದಲ್ಲಿ ಆಕಾಶದೀಪ್ ಸಿಂಗ್, ವಿಕಾಶ್ ಸಿಂಗ್ ಮತ್ತು ಪರಮಜೀತ್ ಸಿಂಗ್ ಬಿಷ್ಟ್ ಸ್ಪರ್ಧಿಸುವರು. ಮಹಿಳೆಯರ ವಿಭಾಗದಲ್ಲಿ ಪ್ರಿಯಾಂಕಾ ಗೋಸ್ವಾಮಿ ಇದ್ದಾರೆ. ಪುರುಷರ 3000 ಮೀ ಸ್ಟೀಪಲ್ ಚೇಸ್‌ನಲ್ಲಿ ಅವಿನಾಶ್ ಸಾಬಳೆ ಹಾಗೂ 4x400 ಮೀ ರಿಲೆ ತಂಡದ ಮೇಲೆ ನಿರೀಕ್ಷೆ ಇದೆ. ಮಹಿಳೆಯರ ವಿಭಾಗದಲ್ಲಿ ಜ್ಯೋತಿ ಯರಾಜಿ(100 ಮೀ ಹರ್ಡಲ್ಸ್), ಪಾಲ್ ಚೌಧರಿ (3000 ಮೀ ಸ್ಟೀಪಲ್ ಚೇಸ್), ಅನುರಾಣಿ (ಜಾವೆಲಿನ್ ಥ್ರೋ) ಹಾಗೂ 4x400 ಮೀ ರಿಲೆ ತಂಡದವರು ಕಣದಲ್ಲಿದ್ದಾರೆ. ಹಾಗೆಯೇ ಪುರುಷರ ಶಾಟ್‌ಪಟ್‌ನಲ್ಲಿ ತಜಿಂದರ್ ಪಾಲ್ ಸಿಂಗ್ ತೂರ್, ಟ್ರಿಪಲ್ ಜಂಪ್ ಅಥ್ಲೀಟ್ ಪ್ರವೀಣ್ ಚಿತ್ರವೇಲ್ ಮತ್ತು ಅಬುಲ್ಲಾ ಅಬೂಬಕ್ಕರ್ ಅವರು ಫೈನಲ್ ಸುತ್ತು ಪ್ರವೇಶಿಸುವ ನಿರೀಕ್ಷೆಯಲ್ಲಿದ್ದಾರೆ.

ಮೈಸೂರು ಮಿತ್ರ

ದೇಶ - ವಿದೇಶ

10 ವರ್ಷದವನ ಮೇಲೆ ಗುಂಡು ಹಾರಿಸಿದ ಐದು ವರ್ಷದ ಬಾಲಕ



ಸುಪೌಲ್: 5 ವರ್ಷದ ಬಾಲಕ ಶಾಲೆಗೆ ಪಿಸ್ತೂಲ್ ತಂದು ಮತ್ತೊಬ್ಬ ವಿದ್ಯಾರ್ಥಿಗೆ ಗುಂಡು ಹಾರಿಸಿದ್ದಾನೆ. ಬಿಹಾರದ ಸುಪೌಲ್ ಜಿಲ್ಲೆಯ ಸೇಂಟ್ ಜೋನ್ ಬೋರ್ಡಿಂಗ್ ಶಾಲೆಯಲ್ಲಿ ಈ ಘಟನೆ ನಡೆದಿದೆ. ಪೊಲೀಸರ ಪ್ರಕಾರ ನರ್ಸರಿ ವಿದ್ಯಾರ್ಥಿಯಾಗಿದ್ದ ಬಾಲಕ ತನ್ನ ಶಾಲಾ ಬ್ಯಾಗ್‌ನಲ್ಲಿ ಪಿಸ್ತೂಲ್ ಅನ್ನು ಬಚ್ಚಿಟ್ಟುಕೊಂಡು ಶಾಲೆಗೆ ಹೋಗಿದ್ದ. ನಂತರ 10 ವರ್ಷದ ಬಾಲಕನ ಮೇಲೆ ಗುಂಡು ಹಾರಿಸಿದ್ದು, ಆತನ ಕೈಗೆ ಗಾಯವಾಗಿದೆ. ಗಾಯಾಳು ವಿದ್ಯಾರ್ಥಿ 3ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಸದ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ನಾನು ನನ್ನ ತರಗತಿಗೆ ಹೋಗುತ್ತಿದ್ದಾಗ ಅವನು ತನ್ನ ಬ್ಯಾಗ್‌ನಿಂದ ಪಿಸ್ತೂಲ್ ತೆಗೆದು ನನ್ನ ಮೇಲೆ ಗುಂಡು ಹಾರಿಸಿದ ಎಂದು ಆಸ್ಪತ್ರೆಯಲ್ಲಿ ದಾಖಲಾಗಿರುವ ಹುಡುಗ ಹೇಳಿಕೆ ನೀಡಿದ್ದಾನೆ. ಜೊತೆಗೆ ಗುಂಡು ಹಾರಿಸಿದ ಹುಡುಗನೊಂದಿಗೆ ಯಾವುದೇ ಜಗಳ ಮಾಡಿಲ್ಲ ಎಂದು ಸಹ ಹೇಳಿದ್ದಾನೆ. ಶಾಲೆಯ ಪ್ರಾಂಶುಪಾಲರನ್ನು ಪೊಲೀಸರು ಬಂಧಿಸಿದ್ದು, ಇಷ್ಟು ದೊಡ್ಡ ನಿರ್ಲಕ್ಷ್ಯ ಹೇಗೆ ನಡೆದಿದೆ ಎಂದು ಪ್ರಶ್ನಿಸುತ್ತಿದ್ದಾರೆ. ಗುಂಡು ಹಾರಿಸಿದ ವಿದ್ಯಾರ್ಥಿ ಹಾಗೂ ಆತನ ತಂದೆಯ ಪತ್ತೆಗೂ ಮುಂದಾಗಿದ್ದಾರೆ. ಇದರಿಂದ ಆತಂಕಗೊಂಡ ಪೋಷಕರು ಶಾಲೆಗೆ ನುಗ್ಗಿ ಆಡಳಿತ ಮಂಡಳಿ ವಿರುದ್ಧ ಘೋಷಣೆ ಕೂಗಿದರು. ವಿದ್ಯಾರ್ಥಿಗಳ ಬ್ಯಾಗ್‌ಗಳನ್ನು ನಿಯಮಿತವಾಗಿ ಪರಿಶೀಲಿಸುವಂತೆ ಜಿಲ್ಲೆಯಾದ್ಯಂತ ಶಾಲೆಗಳನ್ನು ಕೇಳುತ್ತಿದ್ದೇವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಾಹ್ಯಾಕಾಶ ನಿಲ್ದಾಣದಿಂದ ಶೀಘ್ರದಲ್ಲೇ ಸುನೀತಾ ವಿಲಿಯಮ್ಸ್ ವಾಪಸ್?



ನ್ಯೂಯಾರ್ಕ್: ಬೋಯಿಂಗ್ ಸಂಸ್ಥೆಯ ಸ್ಟಾರ್ ಲೈನರ್ ಗಗನನೌಕೆ ಭೂಮಿಯಿಂದ ಗಗನಕ್ಕೆ ಚಿಮ್ಮಿದ ಕ್ಷಣದಿಂದ ಈವರೆಗೂ ಉದ್ವಿಗ್ನತೆಯೇ ನೆಲೆಸಿದೆ. ಈ ಗಗನನೌಕೆಯಲ್ಲಿ ರಾಕೆಟ್ ಮೂಲಕ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ತಲುಪಿದ್ದ ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್, ಭೂಮಿಗೆ ವಾಪಸ್ ಬರೋದು ಯಾವಾಗ ಅನ್ನೋ ಪ್ರಶ್ನೆಗೆ ನಾಸಾ ಸಮಾಧಾನದ ಉತ್ತರ ನೀಡಿದೆ. ಮೊಟ್ಟ ಮೊದಲ ಬಾರಿಗೆ ಗಗನಯಾತ್ರಿಕರನ್ನು ಹೊತ್ತು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ್ದ ಬೋಯಿಂಗ್ ಸಂಸ್ಥೆಯ ಸ್ಟಾರ್ ಲೈನರ್ ಗಗನನೌಕೆಯಲ್ಲಿ ಇಬ್ಬರು ಗಗಗಯಾತ್ರಿಕರು ಇದ್ದರು. ಇವರಿಬ್ಬರೂ ಇದೀಗ ಒಂದೂವರೆ ತಿಂಗಳಿಗೂ ಹೆಚ್ಚು ಕಾಲ ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದಲ್ಲೇ ನೆಲೆಸಿದ್ದು, ಕೆಲವೇ ದಿನಗಳಲ್ಲಿ ಭೂಮಿಗೆ ವಾಪಸ್ ಬರುವ ನಿರೀಕ್ಷೆ ಇದೆ ಎಂದು ನಾಸಾ ಹೇಳುತ್ತಿದೆ. ಕಳೆದ ಜುಲೈ 20 ರಂದು ನಾಸಾ ಹಾಗೂ ಬೋಯಿಂಗ್‌ನ ಎಂಜಿನಿಯರ್‌ಗಳ ತಂಡ, ಗಗನನೌಕೆಯ ಸಮಗ್ರ ಪರಿಶೀಲನೆ ನಡೆಸಿದ್ದು, ನೌಕೆಯು ಭೂಮಿಗೆ ವಾಪಸ್ ಬರಲು ಸಮರ್ಥವಾಗಿದೆ ಎಂಬ ವಿಶ್ವಾಸ ವ್ಯಕ್ತಪಡಿಸಲಾಗಿದೆ. ಹಾಗೆ ನೋಡಿದರೆ ಈ ನೌಕೆ ಜೂನ್ 14ರಂದೇ ಭೂಮಿಗೆ ವಾಪಸ್ ಬರಬೇಕಿತ್ತು. ಆದರೆ, ಸರಿಸುಮಾರು ಎರಡು ತಿಂಗಳಾಗುತ್ತಾ ಬಂದರೂ ವಾಪಸ್ ಬರುವ ಲಕ್ಷಣಗಳೇ ಕಾಣುತ್ತಿಲ್ಲ. ತಮ್ಮ ಗಗನನೌಕೆ ಗಗನಯಾತ್ರಿಗಳನ್ನು ಭೂಮಿಗೆ ವಾಪಸ್ ಕರೆತರಲು ಸಮರ್ಥವಾಗಿದೆ ಎಂದೇ ನಾಸಾ ಹಾಗೂ ಬೋಯಿಂಗ್ ಹೇಳುತ್ತಿವೆ.

ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ಹುದ್ದೆ ರದ್ದು; ಭವಿಷ್ಯದಲ್ಲೂ ಪರೀಕ್ಷೆ ಬರೆಯದಂತೆ ನಿಷೇಧ



ನವದೆಹಲಿ: ಮಹಾರಾಷ್ಟ್ರದ ವಿವಾದಿತ ಟ್ರೈನಿ ಐಎಎಸ್ ಪೂಜಾ ಖೇಡ್ಕರ್ ದೋಷಿ ಎಂದು ಯುಪಿಎಸ್‌ಸಿ ಘೋಷಿಸಿದ್ದು, ಆಕೆ ಭವಿಷ್ಯದಲ್ಲಿ ಯುಪಿಎಸ್‌ಸಿ ಪರೀಕ್ಷೆಗಳಿಗೆ ಹಾಜರಾಗದಂತೆ ಶಾಶ್ವತ ನಿಷೇಧವನ್ನು ವಿಧಿಸಿದೆ. ಇತ್ತೀಚೆಗಷ್ಟೇ ಪೂಜಾಗೆ ಯುಪಿಎಸ್‌ಸಿ ಶೋಕಾಸ್ ನೋಟಿಸ್ ಜಾರಿ ಮಾಡಿತ್ತು.

ಖೇಡ್ಕರ್ ವಿರುದ್ಧ ಯುಪಿಎಸ್‌ಸಿ ಪೊಲೀಸ್ ಕೇಸ್ ದಾಖಲಿಸಿದ್ದು, ನಂತರ ದೆಹಲಿ ಪೊಲೀಸ್ ಕ್ರೈಂ ಬ್ರಾಂಚ್ ಜುಲೈ 19ರಂದು ಖೇಡ್ಕರ್ ಅವರನ್ನು ನಾಗರಿಕ ಸೇವೆಗಳ ಪರೀಕ್ಷೆಯಲ್ಲಿ ಉಮೇದುವಾರಿಕೆ ಪಡೆಯಲು ಅಂಗವೈಕಲ್ಯ ಮತ್ತು ಇತರ ಹಿಂದುಳಿದ ವರ್ಗಗಳ (ಕೆನೆಪದರವಲ್ಲದ) ಕೋಟಾಗಳನ್ನು ದುರುಪಯೋಗಪಡಿಸಿಕೊಂಡಿದೆ ಎಂದು ಕೇಸ್ ದಾಖಲಿಸಿತ್ತು. ಅಪರಾಧ ವಿಭಾಗದ ಸಹಾಯಕ ಪೊಲೀಸ್ ಆಯುಕ್ತರ (ಎಸಿಪಿ) ನೇತೃತ್ವದ ತಂಡವು ವಿವಿಧ ಸರ್ಕಾರಿ ಇಲಾಖೆಗಳಿಂದ ದಾಖಲೆಗಳನ್ನು ಸಂಗ್ರಹಿಸಿದ ನಂತರ ಪೂಜಾ ವಿರುದ್ಧ ಐಪಿಸಿ ಸೆಕ್ಷನ್ 420 (ವಂಚನೆ), 464 (ಕಾಲ್ಪನಿಕ ವ್ಯಕ್ತಿಯ ಹೆಸರಿನಲ್ಲಿ ದಾಖಲೆ ಮಾಡುವುದು), 465 (ನಕಲಿ) ಮತ್ತು 471 (ನಕಲಿ ದಾಖಲೆಯನ್ನು ರವಾನಿಸುವುದು) ಮತ್ತು ಹಕ್ಕುಗಳ ಸೆಕ್ಷನ್ 89 ಮತ್ತು 91ರ ಅಡಿಯಲ್ಲಿ ಪ್ರಕರಣ ವಿಕಲಚೇತನರ ಕಾಯ್ದೆ ಮತ್ತು ಮಾಹಿತಿ ತಂತ್ರಜ್ಞಾನ ಕಾಯ್ದೆಯ 66ಡಿ ಪ್ರಕರಣ ದಾಖಲಿಸಿದ್ದರು.

ಇರಾನ್‌ಗೆ ನುಗ್ಗಿ ಹಮಾಸ್ ಮುಖ್ಯಸ್ಥ ಇಸ್ಮಾಯಿಲ್ ಹನಿಯೆ ಹತ್ಯೆಗೈದ ಇಸ್ರೇಲ್



ಟೆಹರಾನ್: ಹಮಾಸ್ ಮುಖ್ಯಸ್ಥ ಇಸ್ಮಾಯಿಲ್ ಹನಿಯೆ ಮತ್ತು ಆತನ ಒಬ್ಬ ಬಾಡಿಗಾರ್ಡ್‌ನನ್ನು ಇರಾನ್‌ನಲ್ಲಿ ಮಂಗಳವಾರ ಹತ್ಯೆ ಮಾಡಲಾಗಿದೆ ಎಂದು ಪ್ಯಾಲೆಸ್ತಿನ್ ಸಂಘಟನೆಯು ಬುಧವಾರ ಹೇಳಿಕೆ ಬಿಡುಗಡೆ ಮಾಡಿದೆ. ಈ ಹತ್ಯೆಗೆ ಇಸ್ರೇಲ್ ಕಾರಣ ಎಂದು ಹಮಾಸ್ ಆರೋಪಿಸಿದೆ. ಟೆಹರಾನ್‌ನಲ್ಲಿನ ಇಸ್ಮಾಯಿಲ್ ಹನಿಯೆ ನಿವಾಸದ ಮೇಲೆ ವಿಶ್ವಾಸಘಾತುಕ ಜಿಯೋನಿಸ್ಟ್ ಮಂಗಳವಾರ ಬೆಳಿಗ್ಗೆ ದಾಳಿ ನಡೆಸಿ ಅವರನ್ನು ಹತ್ಯೆ ಮಾಡಿದೆ ಎಂದು ಹಮಾಸ್ ಸಂಘಟನೆ ಹೇಳಿದೆ. ದಾಳಿ ಕುರಿತಾಗಿ ಹೆಚ್ಚಿನ ಮಾಹಿತಿ ಪಡೆಯಲು ತನಿಖೆ ನಡೆಸಲಾಗುತ್ತಿದೆ ಎಂದು ಅದು ತಿಳಿಸಿದೆ.

ಇರಾನ್‌ನ ಹೊಸ ಅಧ್ಯಕ್ಷರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಿದ ಬಳಿಕ ಟೆಹರಾನ್‌ನ ತಮ್ಮ ಕೇಂದ್ರ ಕಚೇರಿಯಲ್ಲಿದ್ದ ಚಳವಳಿಯ ಮುಖ್ಯಸ್ಥ, ಸಹೋದರ, ನಾಯಕ, ಮುಜಾಹಿದ್ ಇಸ್ಮಾಯಿಲ್ ಹನಿಯೆ ಅವರು ಜಿಯೋನಿಸ್ಟ್‌ಗಳ ದಾಳಿಯಲ್ಲಿ ಮೃತಪಟ್ಟಿದ್ದಾರೆ ಎಂದು ಹಮಾಸ್ ಹೇಳಿಕೆ ನೀಡಿದೆ. ಅಕ್ಟೋಬರ್ 7ರಂದು ಇಸ್ರೇಲ್ ಗಡಿ ಭಾಗದ ಒಳಗೆ ನುಗ್ಗಿ, ಭೀಕರ ದಾಳಿ ನಡೆಸುವ ಮೂಲಕ ಸುಮಾರು 1195 ಜನರ ಹತ್ಯೆಗೆ ಕಾರಣವಾಗಿದ್ದ ಹಮಾಸ್ ಗುಂಪನ್ನು ನಾಶಪಡಿಸುವುದಾಗಿ ಮತ್ತು ಅದರ ಮುಖ್ಯಸ್ಥ ಇಸ್ಮಾಯಿಲ್ ಹನಿಯೆನನ್ನು ಹತ್ಯೆ ಮಾಡುವುದಾಗಿ ಇಸ್ರೇಲ್ ಶಪಥ ಮಾಡಿತ್ತು.

ಬಡವರಿಗೆ ಮನೆ ನಿರ್ಮಾಣಕ್ಕೆ ಉಚಿತ ಮರಳು; ಜಾರ್ಖಂಡ್ ಸಿಎಂ ಘೋಷಣೆ



ರಾಂಚಿ: ಜಾರ್ಖಂಡ್‌ನಲ್ಲಿ ಮರಳು ಬಿಕ್ಕಟ್ಟಿನ ಮಧ್ಯೆ, ರಾಜ್ಯ ವಿಧಾನಸಭೆಯ ಮುಂಗಾರು ಅಧಿವೇಶನದಲ್ಲಿ ಮುಖ್ಯಮಂತ್ರಿ ಹೇಮಂತ್ ಸೊರೆನ್ ಅವರು ಮನೆ ನಿರ್ಮಾಣಕ್ಕಾಗಿ ಆದಾಯ ತೆರಿಗೆಯಿಂದ ವಿನಾಯಿತಿ ಪಡೆದಿರುವ ಬಡವರಿಗೆ ಉಚಿತವಾಗಿ ಮರಳು ನೀಡಲಾಗುವುದು ಎಂದು ಘೋಷಿಸಿದರು.

ಜಾರ್ಖಂಡ್ ಅಸೆಂಬ್ಲಿಯಲ್ಲಿ ಮಾತನಾಡಿದ ಸೊರೆನ್, ರಾಜ್ಯಾದ್ಯಂತ ಬಡವರಿಗೆ ಅಬುವಾ ಆವಾಸ್, ಪಿಎಂ ಆವಾಸ್ ಅಥವಾ ವೈಯಕ್ತಿಕ ಮನೆಗಳ ನಿರ್ಮಾಣಕ್ಕೆ ಅಗತ್ಯವಿರುವ ಮರಳಿನ ಸಮಸ್ಯೆಯನ್ನು ಸದನದಲ್ಲಿ ಪದೇಪದೆ ಪ್ರಸ್ತಾಪಿಸಲಾಗುತ್ತಿದೆ ಮತ್ತು ಮರಳು ಬೆಲೆ ಏರಿಕೆಯ ಭಾರವನ್ನು ಅವರು ಹೊರಬೇಕಾಗಿದೆ. ಮರಳಿನ ಕೊರತೆಯಿಂದಾಗಿ ಬೆಲೆ ಏರಿಕೆಯ ವಿಷಯವು ಸರ್ಕಾರದ ಗಮನಕ್ಕೆ ಬಂದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮರಳಿನ ಬೆಲೆ ಹೆಚ್ಚುತ್ತಿರುವುದರಿಂದ ರಾಜ್ಯದಲ್ಲಿ ಬಡವರಿಗೆ ಉಚಿತವಾಗಿ ಮರಳು ದೊರೆಯುವಂತೆ ಮಾಡಲಾಗುವುದು ಎಂದು ಸದನಕ್ಕೆ ತಿಳಿಸಲು ಬಯಸುತ್ತೇನೆ ಎಂದು ಹೇಳಿದರು.

ಮೈಸೂರು ಸಿಪಿಸಿ ಪಾಲಿಟೆಕ್ನಿಕ್‌ಗೆ 65 ಕೋಟಿ ವೆಚ್ಚದಲ್ಲಿ ಆಧುನಿಕ ಸ್ಪರ್ಶ

ಸಿಪಿಸಿ ಪಾಲಿಟೆಕ್ನಿಕ್‌ನ ಅಮೃತ ಮಹೋತ್ಸವದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಘೋಷಣೆ

● ರಾಜ್ಯದ 106 ಪಾಲಿಟೆಕ್ನಿಕ್‌ಗಳ ಬಗ್ಗೆ ವರದಿ ಪಡೆದು ಆಧುನೀಕರಣ ● ಮೈಸೂರಿನ ಮಹಾರಾಣಿ ವಿಜ್ಞಾನ ಕಾಲೇಜಿನ ಉನ್ನತೀಕರಣ ● ಶೀಘ್ರದಲ್ಲೇ ಮುಖ್ಯಮಂತ್ರಿಗಳಿಂದ ಶಂಕುಸ್ಥಾಪನೆ



ಮೈಸೂರಿನ ಅಶೋಕ ರಸ್ತೆಯಲ್ಲಿರುವ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್‌ನ 70ನೇ ವರ್ಷದ ಅಮೃತ ಮಹೋತ್ಸವ ವರ್ಷಾಚರಣೆಗೆ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಚಾಲನೆ ನೀಡಿದರು.

ಮೈಸೂರು,ಜು.31(ಜಿಎ)–ರಾಜ್ಯದಲ್ಲಿರುವ ಎಲ್ಲಾ ಪಾಲಿಟೆಕ್ನಿಕ್‌ಗಳ ಸ್ಥಿತಿಗತಿಗಳ ವರದಿಯನ್ನು ಪಡೆದುಕೊಳ್ಳಲಾಗುತ್ತಿದ್ದು, ಮೈಸೂರಿನ ಸಿಪಿಸಿ ಪಾಲಿಟೆಕ್ನಿಕ್‌ಗೂ 65 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಸ್ಪರ್ಶ ನೀಡಲು ನಿರ್ಧರಿಸಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದರು.

ಮೈಸೂರಿನ ಅಶೋಕ ರಸ್ತೆಯಲ್ಲಿರುವ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್‌ನ 70ನೇ ವರ್ಷದ ಅಮೃತ ಮಹೋತ್ಸವ ವರ್ಷಾಚರಣೆಗೆ ಚಾಲನೆ ನೀಡಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನ ಯಾವುದೇ ಅಭಿವೃದ್ಧಿ ವಿಚಾರಕ್ಕೆ ಸಂಬಂಧಿಸಿದಂತೆ ಚರ್ಚಿಸಿದಾಗ ಎಲ್ಲಾ ರೀತಿಯ ಪ್ರೋತ್ಸಾಹ ನೀಡಿದ್ದಾರೆ. ಅವರು ತಿಳಿಸಿದಂತೆ ಮಹಾರಾಜ ಕಟ್ಟಿಸಿರುವ ಮಹಾರಾಣಿ ವಿಜ್ಞಾನ ಕಾಲೇಜಿಗೆ ಭೇಟಿ ನೀಡಿ ಅಲ್ಲಿನ ಸ್ಥಿತಿಯನ್ನು ಪರಿಶೀಲಿಸಿ, ನಂತರ ಉನ್ನತೀಕರಣಗೊಳಿಸಲು ತೀರ್ಮಾನಿಸಲಾಗಿದೆ ಎಂದರು.

ಮಹಾರಾಣಿ ಕಾಲೇಜು ಪಾರಂಪರಿಕ ಕಟ್ಟಡವಾದ ಹಿನ್ನೆಲೆಯಲ್ಲಿ ಕಾಮಗಾರಿ ಆರಂಭಿಸಲು ಪಾರಂಪರಿಕ ತಜ್ಞರ ಸಲಹೆ ಪಡೆಯಲಾಗಿದ್ದು, 55 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗುತ್ತಿದೆ. 5 ಕೋಟಿ ವೆಚ್ಚದ ಕಾಮಗಾರಿಗೆ ಮುಖ್ಯಮಂತ್ರಿಗಳು ಸದ್ಯದಲ್ಲಿಯೇ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬಾಕಿ 50 ಕೋಟಿ ವೆಚ್ಚದಲ್ಲಿ 2 ಸಾವಿರ ವಿದ್ಯಾರ್ಥಿನಿಯರಿಗೆ ಅನುಕೂಲವಾಗುವಂತೆ ವಿದ್ಯಾರ್ಥಿ ನಿಲಯ ನಿರ್ಮಿಸಲು ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ ಎಂದರು.


ಸಿಪಿಸಿ ಪಾಲಿಟೆಕ್ನಿಕ್‌ಗೂ ವಿಸ್ತೃತ 65 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಸ್ಪರ್ಶ ನೀಡಲು ಚಿಂತಿಸಿದ್ದು, ಈಗಾಗಲೇ ಸಿವಿಲ್ ಇಂಜಿನಿಯರ್ ಕಳುಹಿಸಿ ವರದಿ ಸಿದ್ಧಪಡಿಸಲಾಗಿದೆ. ಮತ್ತೊಂದೆಡೆ ಕಾಲೇಜಿನಲ್ಲಿ ಎಐ ಮತ್ತು ಸೈಬರ್ ಕುರಿತ ಎರಡು ಹೊಸ ಕೋರ್ಸ್ ಆರಂಭಿಸಲು ಚಿಂತಿಸಿರುವುದರಿಂದ ಕಾಲೇಜಿಗೆ ನೂತನ ತಂತ್ರಜ್ಞಾನ ಅಳವಡಿಸಲಾಗುತ್ತದೆ. ಹೀಗೆ ರಾಜ್ಯದ 106 ಪಾಲಿಟೆಕ್ನಿಕ್‌ಗಳ ವರದಿ ಪಡೆದುಕೊಳ್ಳುತ್ತಿದ್ದೇನೆ. ಅವುಗಳನ್ನು ಅಭಿವೃದ್ಧಿಪಡಿಸಲು ಶ್ರಮಿಸುತ್ತೇನೆ. ಚಿಂತಾಮಣಿಯಲ್ಲಿ ನಮ್ಮ ತಾತಾ ಅವರು ಕಟ್ಟಿಸಿರುವ ಪಾಲಿಟೆಕ್ನಿಕ್ 75 ವರ್ಷ ಪೂರೈಸಿದ್ದು, ನನ್ನ ಕ್ಷೇತ್ರದಲ್ಲಿರುವ ಈ ಪಾಲಿಟೆಕ್ನಿಕ್‌ಗೆ ಕಾಯಕಲ್ಪ ಮಾಡಬೇಕೆಂದು ಮಹಾದಾಸೆಯಾಗಿದೆ ಎಂದರು.

ಶಾಸಕ ತನ್ವೀರ್ ಸೇಠ್ ಮಾತನಾಡಿ, ಪಾಲಿಟೆಕ್ನಿಕ್‌ಗಳು ಬಡವರ ಪಾಲಿನ ಇಂಜಿನಿಯರಿಂಗ್ ಕಾಲೇಜುಗಳಾಗಿವೆ. ಮೈಸೂರಿಗೆ ಒಂದು ಮಹಿಳಾ ಪಾಲಿಟೆಕ್ನಿಕ್ ಬೇಕೆಂದು ಬೇಡಿಕೆ ಸಲ್ಲಿಸಿದೆ. ಅದು ಹಣಕಾಸು ಇಲಾಖೆಗೆ ಹೋಗಿದ್ದು, ಅದಕ್ಕಾಗಿ ಸ್ಥಳ ನಿಯೋಜನೆ ಮಾಡಿದ್ದೇನೆ ಎಂದರು.

ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಹಳೆಯ ಯಂತ್ರಗಳಿದ್ದು, ಹೊಸ ಕಾರ್ಯಕ್ರಮಗಳನ್ನು ರೂಪಿಸಿ ಬೇಡಿಕೆಗಳಿಗೆ ಅನುಗುಣವಾಗಿ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಬೇಕು. ಒಂದು ಅಕ್ಷರ ಓದಿಲ್ಲದೇ ಇರುವ ಶಿಕ್ಷಣದ ನೀತಿಗಳ ಬಗ್ಗೆ ಮಾತನಾಡುತ್ತಾರೆ. ತಾಂತ್ರಿಕ ತಂಡವನ್ನು ರಚಿಸಿ ಅಗತ್ಯ ಸೂಚನೆ ಸಲಹೆಗಳನ್ನು ಪಡೆದುಕೊಳ್ಳಬೇಕಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿಪಿಸಿ ಕಾಲೇಜು ನಿರ್ಮಾಣಕ್ಕೆ ಸ್ಥಳ ದಾನ ಮಾಡಿದ ಸಿ.ಪೆರುಮಾಳ್ ಚೆಟ್ಟಿ ಅವರ ಪುತ್ರ ಪಿ.ಧರ್ಮರಾಜ್ ಚೆಟ್ಟಿ ಮತ್ತು ಮೊಮ್ಮಗಳಾದ ಜೆ.ಲೋಕೇಶ್ವರಿ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ತಾಂತ್ರಿಕ ಶಿಕ್ಷಣ ಇಲಾಖೆ ಹೆಚ್ಚುವರಿ ನಿರ್ದೇಶಕ ಕೆ.ಎಂ. ಸುರೇಶ್‌ಕುಮಾರ್, ಪ್ರಾಂಶುಪಾಲ ಎಂ.ಪ್ರಕಾಶ್, ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಎನ್.ಎಸ್.ಬಸವರಾಜು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಉದ್ಯಮಿ ಗಗನ್‌ದೀಪ್‌ಗೆ ಹುಟ್ಟುಹಬ್ಬದ ಸಂಭ್ರಮ...




ಮೈಸೂರಿನ ಯುವ ಉದ್ಯಮಿ ಗಗನ್‌ದೀಪ್ ಹುಟ್ಟುಹಬ್ಬದ ಅಂಗವಾಗಿ ಶ್ರೀ ಕೃಷ್ಣ ಎಂಟರ್‌ಪ್ರೈಸಸ್ ಮಾಲೀಕ ಕೆ.ಪ್ರದೀಪ್ ಸಿಂಗ್, ಚಾಮುಂಡೇಶ್ವರಿ ಪ್ಲೈವುಡ್ ಮಾಲೀಕ ಮಹದೇವ್, ಎಪಿಎಂಸಿ ಕೆಂಚಪ್ಪ ಅಂಡ್ ಸನ್ ಮಾಲೀಕ ಆದರ್ಶ್, ದೇವರಾಜ ಮಾರುಕಟ್ಟೆ ಅಧ್ಯಕ್ಷ ಸಂದೀಪ್ ಹಾಗೂ ಚಿಕನ್ ಫಾಸ್ಲು ಅವರು ಭಾರಿ ಗಾತ್ರದ ಹೂವಿನ ಹಾರ ಹಾಕಿ, ಆತ್ಮೀಯವಾಗಿ ಅಭಿನಂದಿಸಿ, ಶುಭ ಕೋರಿದರು.

ಶ್ರೀಗಳ ಆಶೀರ್ವಾದ ಪಡೆದ ಮೇಘಾಲಯದ ನೂತನ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್



ಮೇಘಾಲಯದ ನೂತನ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಅವರು ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮಕ್ಕೆ ಭೇಟಿ ನೀಡಿ, ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಅವರ ಆಶೀರ್ವಾದ ಪಡೆದರು.

ಬೈರುತ್‌ನಲ್ಲಿ ನಡೆದ ದಾಳಿಯಲ್ಲಿ ಹಿಜ್ಬುಲ್ಲಾ ಹಿರಿಯ ಕಮಾಂಡರ್ ಫುವಾದ್ ಶುಕ್ರ್ ಹತ್ಯೆ



ಜೆರುಸಲೇಂ, ಜು.31– ಲೆಬನಾನಿನ ರಾಜಧಾನಿ ಬೈರುತ್‌ನ ದಕ್ಷಿಣ ಉಪನಗರದಲ್ಲಿ ಬಂದ್ ನಡೆಸಿದ ನಂತರ ಉನ್ನತ ಹಿಜ್ಬುಲ್ಲಾ ಕಮಾಂಡರ್ ಫುವಾದ್ ಶುಕ್ರ್ ಅನ್ನು ಹೊಡೆದುರುಳಿಸಿರುವುದಾಗಿ ಇಸ್ರೇಲ್ ಹೇಳಿದೆ.

ಲೆಬನಾನಿನ ಸಶಸ್ತ್ರ ಗುಂಪಿನ ಭದ್ರಕೋಟೆಯಾದ ದಹಿಯೆಹ್‌ನಲ್ಲಿ ನಡೆದ ಸ್ಫೋಟದಲ್ಲಿ ಓರ್ವ ಮೃತಪಟ್ಟು ಹಲವರು ಗಾಯಗೊಂಡಿದ್ದಾರೆ. ಫೈಟರ್ ಜೆಟ್‌ಗಳಿಂದ ಫುವಾದ್ ಶುಕ್ರ್ ಗುಪ್ತಚರ ಆಧಾರಿತ ನಿರ್ಮೂಲನೆಗೆ ಗುರಿಯಾಗಿದ್ದಾನೆ ಎಂದು ಇಸ್ರೇಲಿ ಮಿಲಿಟರಿ ಹೇಳಿದೆ. ಲೆಬನಾನ್‌ನ ಪ್ರಧಾನಮಂತ್ರಿ ನಜೀಬ್ ಮಿಕಾಟಿ ಇಸ್ರೇಲಿ ಆಕ್ರಮಣವನ್ನು ಖಂಡಿಸಿದ್ದಾರೆ. ಅಂತಾರಾಷ್ಟ್ರೀಯ ಕಾನೂನಿನ ಸ್ಪಷ್ಟ ಉಲ್ಲಂಘನೆ ಇದಾಗಿದ್ದು, ನಾಗರಿಕರನ್ನು ಕೊಲ್ಲುವ ಆಕ್ರಮಣಕಾರಿ ಸರಣಿ ಕಾರ್ಯಾಚರಣೆಯಲ್ಲಿ ಇದೊಂದು ಕ್ರಿಮಿನಲ್ ಕ್ರಮ ಎಂದಿದ್ದಾರೆ. ದಾಳಿಯ ನಂತರ ಇಸ್ರೇಲಿ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಸೋಷಿಯಲ್ ಮೀಡಿಯಾ ಪೋಸ್ಟ್‌ನಲ್ಲಿ ಹಿಜ್ಬುಲ್ಲಾ ಅಪಾಯಕಾರಿ ಗಡಿಯನ್ನು ದಾಟಿದೆ. ದಾಳಿಯಲ್ಲಿ ಫುವಾದ್ ಶುಕ್ರ್ ಮೃತಪಟ್ಟಿದ್ದಾನೆ ಎಂದಿದ್ದಾರೆ. ಫುವಾದ್ ಶುಕ್ರ್ ಹಿಜ್ಬುಲ್ಲಾ ನಾಯಕ ಹಸನ್ ನಸ್ರಲ್ಲಾನ ಹಿರಿಯ ಸಲಹೆಗಾರ ಎಂದು ನಂಬಲಾಗಿದೆ ಎಂದು ಯುಎಸ್ ಹೇಳಿದೆ. 1983ರಲ್ಲಿ ಬೈರುತ್‌ನಲ್ಲಿನ ಯುಎಸ್ ಮೆರೀನ್ ಬ್ಯಾರಕ್‌ಗಳ ಮೇಲೆ 241 ಮಂದಿ ಅಮೆರಿಕಾದ ಸೇನಾ ಸಿಬ್ಬಂದಿಯನ್ನು ಕೊಂದ ಬಾಂಬ್ ದಾಳಿಯಲ್ಲಿ ಫುವಾದ್ ಶುಕ್ರ್ ಪಾತ್ರ ವಹಿಸಿದ್ದನೆಂದು ಆರೋಪಿಸಿ ಅವನ ಬಗ್ಗೆ ಸುಳಿವು ನೀಡಿದವರಿಗೆ ಬಹುಮಾನ ಘೋಷಿಸಲಾಗಿತ್ತು.

ಗುರುವಂದನೆ...



ವೇದಕುಸುಮ ವೇದಾಧ್ಯಾಯೀ ವಿಪ್ರರ ವತಿಯಿಂದ ಸಂಸ್ಕೃತ ವಿದ್ವಾನ್ ವೇದಬ್ರಹ್ಮ ಟಿ.ವಿ.ಸತ್ಯನಾರಾಯಣ ಅವರಿಗೆ ಗುರುಪೂರ್ಣಿಮೆ ಅಂಗವಾಗಿ ಗುರುವಂದನೆ ಸಲ್ಲಿಸಲಾಯಿತು. ವೇದಾಧ್ಯಾಯೀಗಳಿಗೆ ಗುರುಪೂರ್ಣಿಮೆಯ ಮಹತ್ವ ಮತ್ತು ವೇದ ಉಪನಿಷತ್ತುಗಳ ಅಧ್ಯಯನದ ಮಹತ್ವವನ್ನು ತಿಳಿಸಿಕೊಟ್ಟರು. ವೇದಾಧ್ಯಾಯಿಗಳೆಲ್ಲರೂ ಗುರುಗಳ ಆಶೀರ್ವಾದ ಪಡೆದರು.

ಹಂಪನಾ ಲೇಖನ ಸಂಚಯ ಪರಾಮರ್ಶನ ಎಂಬ ಕೃತಿ ಬಿಡುಗಡೆ...



ಮೈಸೂರಿನ ರೋಟರಿ ಕೇಂದ್ರದಲ್ಲಿ ಸಂವಹನ ಪ್ರಕಾಶಕರು ಹಾಗೂ ಕನ್ನಡ ಸಾಹಿತ್ಯ ಕಲಾಕೂಟ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಾ.ಎಸ್.ಪಿ.ಪದ್ಮಪ್ರಸಾದ್ ಸಂಪಾದಿಸಿರುವ ಹಂಪನಾ ಲೇಖನ ಸಂಚಯ ಪರಾಮರ್ಶನ ಎಂಬ ಕೃತಿಯನ್ನು ವಿಶ್ರಾಂತ ಕುಲಪತಿ ಪ್ರೊ.ಹೀ.ಚಿ. ಬೋರಲಿಂಗಯ್ಯ ಬಿಡುಗಡೆಗೊಳಿಸಿದರು. ಈ ವೇಳೆ ಕೃತಿ ಸಂಪಾದಕ ಡಾ.ಎಸ್.ಪಿ.ಪದ್ಮಪ್ರಸಾದ್, ಪ್ರೊ.ಪ್ರೀತಿ ಶುಭಚಂದ್ರ, ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ.ಚಂದ್ರಶೇಖರ್, ಕುವೆಂಪು ಭಾಷಾ ಭಾರತಿ ಅಧ್ಯಕ್ಷ ಚನ್ನಪ್ಪಕಟ್ಟಿ, ಸಾಹಿತಿ ಪ್ರೊ.ಹಂಪನಾ, ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಪ್ರಕಾಶಕ ಡಿ.ಎನ್.ಲೋಕಪ್ಪ, ಜೇನಹಳ್ಳಿ ಸಿದ್ದಲಿಂಗಪ್ಪ ಇದ್ದರು.

ಮಾಲ್ ಆಫ್ ಮೈಸೂರಲ್ಲಿ ನಾಳೆಯಿಂದ ಕಾವಾ ವಿದ್ಯಾರ್ಥಿಗಳ ವೈವಿಧ್ಯಮಯ ಕಲಾಕೃತಿಗಳ ಪ್ರದರ್ಶನ

ಮೈಸೂರು, ಜು.31(ಜಿಎ)–ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿ (ಕಾವಾ)ನ ಅಂತಿಮ ವರ್ಷದ ವಿದ್ಯಾರ್ಥಿಗಳ ತಂಡದಿಂದ ಆ.2ರಿಂದ 4ರವರೆಗೆ ಮಾಲ್ ಆಫ್ ಮೈಸೂರಿನಲ್ಲಿ ತಾವೇ ಸೃಷ್ಟಿಸಿದ ವೈವಿಧ್ಯಮಯ ಕಲಾಕೃತಿ ಪ್ರದರ್ಶನ ಏರ್ಪಡಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ವಿದ್ಯಾರ್ಥಿನಿ ಕಾವ್ಯ ಈ ವಿಷಯ ತಿಳಿಸಿ, ಎಂಟು ವಿದ್ಯಾರ್ಥಿಗಳ ಈ ತಂಡದಿಂದ ಈ ಪ್ರದರ್ಶನ ಏರ್ಪಡಿಸಿದ್ದು, ಗ್ರಾಫಿಕ್, ಅಚ್ಚು ಕಲೆ, ಶಿಲ್ಪಕಲೆ, ಫೋಟೋಗ್ರಾಫ್ ಮೊದಲಾದವುಗಳನ್ನು ಕಾಣಬಹುದಾಗಿದೆ. ಆಸಕ್ತರು ತಮ್ಮ ಸೃಷ್ಟಿಯನ್ನು ನೋಡಿ ಉತ್ತೇಜಿಸುವ ಉದ್ದೇಶದಿಂದ ಈ ಪ್ರದರ್ಶನ ಆಯೋಜಿಸಲಾಗಿದೆ. ಬೆಳಗ್ಗೆ 10ರಿಂದ ರಾತ್ರಿ 7.30 ವೀಕ್ಷಣೆಗೆ ಅವಕಾಶವಿದ್ದು, ಉಚಿತ ಪ್ರವೇಶವಿದೆ. ಪ್ರದರ್ಶನದ ಜೊತೆಗೆ ನಿತ್ಯ ಸಂಜೆ ಸಂಗೀತ ಕಾರ್ಯಕ್ರಮವೂ ಇರಲಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ವಿದ್ಯಾರ್ಥಿಗಳಾದ ಧ್ರುವ ರಾಜ್, ಆದರ್ಶ್, ಜ್ಯೋತಿಕಾ ಬೈಜು, ಯದುನಂದನ್ ಉಪಸ್ಥಿತರಿದ್ದರು.

ಮೈಸೂರಲ್ಲಿ ಕೆಪಿಎಂಇಎ ಪ್ರಾಧಿಕಾರದ ಪರಿಶೀಲನಾ ಸಭೆ



ಮೈಸೂರು ಡಿಹೆಚ್‌ಓ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಅಧ್ಯಕ್ಷತೆಯಲ್ಲಿ ಕೆಪಿಎಂಇಎ ಪ್ರಾಧಿಕಾರದ ಪರಿಶೀಲನಾ ಸಭೆ ನಡೆಸಲಾಯಿತು.

ಮೈಸೂರು, ಜು.31– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಅಧ್ಯಕ್ಷತೆಯಲ್ಲಿ ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ ಉಪಸ್ಥಿತಿಯಲ್ಲಿ ಕೆಪಿಎಂಇಎ ಪ್ರಾಧಿಕಾರದ ಪರಿಶೀಲನಾ ಸಭೆ ನಡೆಸಲಾಯಿತು.

ಜಿಲ್ಲೆಯ ವಿವಿಧ ಖಾಸಗಿ ಆಸ್ಪತ್ರೆಗಳನ್ನು ಭೇಟಿ ಮಾಡಿ ಪರಿಶೀಲಿಸಿ ಕೆಪಿಎಂಇಎ ಕಾಯ್ದೆಯಡಿ ಒಟ್ಟು 28 ಪ್ರಕರಣಗಳನ್ನು ದಾಖಲಿಸಿದ್ದು, 15 ಸಂಸ್ಥೆಗಳಿಗೆ ದಂಡ ವಿಧಿಸಲಾಗಿದೆ. ನಾಲ್ಕು ಸಂಸ್ಥೆಗಳನ್ನು ಸಂಪೂರ್ಣ ಬಂದ್ ಮಾಡಿಸಲು ಹಾಗೂ ಮೂರು ಪ್ರಕರಣಗಳನ್ನು ಪೆಂಡಿಂಗ್‌ನಲ್ಲಿ ಇರಿಸಿ, ಮೊದಲನೇ ಬಾರಿ ದಾಖಲಾದ ಪ್ರಕರಣಗಳಿಗೆ ಕಡಿಮೆ ಪ್ರಮಾಣದ ದಂಡ ವಿಧಿಸಲು ಮತ್ತು ಮುಂದಿನ ದಿನಗಳಲ್ಲಿ ಸರಿಯಾದ ನಿರ್ವಹಣೆ ಮಾಡದಿದ್ದಲ್ಲಿ ಪರವಾನಗಿಯನ್ನು ರದ್ದು ಮಾಡುವುದಾಗಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಆದೇಶಿಸಿದರು.

ದಾಖಲಾದ ಪ್ರಕರಣಗಳ ಆಸ್ಪತ್ರೆಗಳಿಗೆ ಮುಂದಿನ ತಿಂಗಳು ಭೇಟಿ ನೀಡಿ ನಿಯಾಮಾನುಸಾರ ಕೆಪಿಎಂಇಎ ನಿಯಮಗಳ ಅನ್ವಯ ಕಾಲಕಾಲಕ್ಕೆ ಪರಿಶೀಲನೆಯನ್ನು ನಡೆಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಹಾಗೂ ಸಭೆಯಲ್ಲಿ ಹಾಜರಿದ್ದ ಇತರೆ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು.

ಡಿಹೆಚ್‌ಓ ಡಾ.ಪಿ.ಸಿಕುಮಾರಸ್ವಾಮಿ ಮಾತನಾಡಿ, ತಾಲೂಕು ಆರೋಗ್ಯಾಧಿಕಾರಿಗಳ ತಂಡ ಖಾಸಗಿ ಕ್ಲಿನಿಕ್‌ಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕೆಲವು ಆಯುಷ್ ವೈದ್ಯರು ತಮ್ಮ ಆಸ್ಪತ್ರೆಗಳಲ್ಲಿ ಅಲೋಪತಿ ಔಷಧಿಗಳನ್ನು ರೋಗಿಗಳಿಗೆ ನೀಡುತ್ತಿರುವ ಬಗ್ಗೆ ಪರಿಶೀಲನೆ ವೇಳೆ ಕಂಡುಬಂದಿರುವುದಾಗಿ ತಿಳಿಸಿದರು.

ಡೆಂಗ್ಯೂ: ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಭೆ

ಮೈಸೂರು: ಜಿಲ್ಲಾ ಪಂಚಾಯತ್‌ನ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಅಧ್ಯಕ್ಷತೆಯಲ್ಲಿ ಡೆಂಗ್ಯೂ ತಡೆಗಟ್ಟುವಿಕೆ, ನಿಯಂತ್ರಣ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಕುರಿತು ಜಿಲ್ಲಾಮಟ್ಟದ ಟಾಸ್ಕ್ ಫೋರ್ಸ್ ಸಭೆ ಆಯೋಜಿಸಲಾಗಿತ್ತು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿ, ಪ್ರತಿ ಶುಕ್ರವಾರ ನಡೆಯುವ 'ಡ್ರೈ ಡೇ' ಕಾರ್ಯಚಟುವಟಿಕೆಯಲ್ಲಿ ಪೌರಕಾರ್ಮಿಕರು, ಅಂಗನವಾಡಿ ಕಾರ್ಯಕರ್ತೆಯರು ಸಕ್ರಿಯವಾಗಿ ಪಾಲ್ಗೊಂಡು ಡೆಂಗ್ಯೂ ನಿಯಂತ್ರಣ ಕಾರ್ಯಾಚರಣೆಯನ್ನು ಯಶಸ್ವಿಗೊಳಿಸಬೇಕು. ಶಾಲಾ, ಕಾಲೇಜುಗಳಲ್ಲಿ ನಡೆಯುವ ಪ್ರಾರ್ಥನಾ ಸಭೆಯಲ್ಲಿ ವಿದ್ಯಾರ್ಥಿಗಳಿಗೆ ಡೆಂಗ್ಯೂ ನಿಯಂತ್ರಣ, ತಡೆಗಟ್ಟುವಿಕೆ ಹಾಗೂ ಮುನ್ನೆಚ್ಚರಿಕೆಯ ಕ್ರಮಗಳ ಕುರಿತು ಶಿಕ್ಷಕರು ಹಾಗೂ ಅಧ್ಯಾಪಕರು ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದರು. ಈ ವೇಳೆ ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ ಇನ್ನಿತರರಿದ್ದರು.

ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿದ ಸಚಿವರಾದ ಕೃಷ್ಣ ಭೈರೇಗೌಡ, ಭೋಸರಾಜು

ಸಂತ್ರಸ್ತ ಕುಟುಂಬಗಳಿಗೆ ಧೈರ್ಯ

ಮಡಿಕೇರಿ, ಜು.31–ಕುಶಾಲನಗರ ವ್ಯಾಪ್ತಿಯ ವಿವಿಧ ಮಳೆ ಹಾನಿ ಪ್ರದೇಶಗಳಿಗೆ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು, ಶಾಸಕ ಡಾ.ಮಂತರ್ ಗೌಡ, ಜಿಲ್ಲಾಧಿಕಾರಿ ವೆಂಕಟ್ ರಾಜಾ ಬುಧವಾರ ಭೇಟಿ ನೀಡಿ, ಪರಿಶೀಲಿಸಿದರು.

ಹಾರಂಗಿ ಬಳಿಯ ಮನೆ ಹಾನಿ ಪ್ರದೇಶ ಅತ್ತೂರು, ಗುಡ್ಡೆಹೊಸರು ಬಳಿಯ ತೆಪ್ಪದಕಂಡಿ ಗ್ರಾಮಕ್ಕೆ ಭೇಟಿ ನೀಡಿದ ಸಚಿವರು, ಸಂತ್ರಸ್ತ ಕುಟುಂಬಗಳಿಗೆ ಧೈರ್ಯ ತುಂಬಿದರು. ಮನೆ ಮತ್ತು ಸ್ವತ್ತು ಹಾನಿ ಸಂಬಂಧಿಸಿದಂತೆ ಸೂಕ್ತ ಪರಿಹಾರವನ್ನು ಸಂತ್ರಸ್ತರಿಗೆ ಶೀಘ್ರ ವಿತರಿಸಬೇಕು ಎಂದು ಸಚಿವರು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಬಳಿಕ ವಾಲ್ನೂರು ತ್ಯಾಗತ್ತೂರು, ಸಿದ್ದಾಪುರದ ಸ್ವರ್ಣಮಾಲ ಕಲ್ಯಾಣ ಮಂಟಪ ಮತ್ತು ನೆಲ್ಯ ಹುದಿಕೇರಿಯಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರಗಳಿಗೆ ತೆರಳಿ ಸಂತ್ರಸ್ತರಿಗೆ ಸಂತ್ವಾನ ಹೇಳಿದರು. ನೆರೆ, ಭೂ ಕುಸಿತ, ಮನೆ ಹಾನಿ ಮತ್ತಿತರ ವಿಚಾರಗಳ ಕುರಿತು ಸಂತ್ರಸ್ತರಿಂದ ಮಾಹಿತ ಪಡೆದರು. ಕಾಳಜಿ ಕೇಂದ್ರಗಳಲ್ಲಿ ಅಗತ್ಯ ಮೂಲ ಸೌಕರ್ಯ ಒದಗಿಸಬೇಕು ಎಂದು ಸಚಿವರು ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಕೃಷ್ಣ ಭೈರೇಗೌಡ, ಕೊಡಗಿನಲ್ಲಿ ಕಡಿಮೆ ಅವಧಿಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿ ಕೃಷಿ ಬೆಳೆಗಳಿಗೆ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ ಸಮಗ್ರ ವರದಿ ನೀಡುವಂತೆ ಜಿಲ್ಲಾಧಿಕಾರಿಗೆ ಸೂಚಿಸಲಾಗಿದ್ದು, ತಕ್ಷಣ ಪರಿಹಾರ ಬಿಡುಗಡೆ ಮಾಡಲಾಗುವುದು ಎಂದು ಹೇಳಿದರು.

ಹವಾಮಾನ ಇಲಾಖೆ ಮುನ್ಸೂಚನೆ ಆಧರಿಸಿ ಈ ಬಾರಿ ರಾಜ್ಯದಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಲಿದೆ ಎಂದು ಅಂದಾಜಿಸಲಾಗಿತ್ತು ಅದರಂತೆ ರಾಜ್ಯದ ವಿವಿಧ ಜಿಲ್ಲೆಗಳಿಲ್ಲಿ ಎನ್‌ಡಿಆರ್‌ಎಫ್, ಎಸ್‌ಡಿಆರ್, ಎಫ್‌ಸಿವಿಲ್ ಡಿಫೆನ್ಸ್ ಸಹಿತ ರಕ್ಷಣಾ ತಂಡಗಳನ್ನ ನಿಯೋಜಿಸಲಾಗಿದೆ. ಪ್ರಾಣ ಹಾನಿ ತಡೆಯುವುದು ನಮ್ಮ ಧ್ಯೇಯವಾಗಿತ್ತಾದರೂ ಅನಿರೀಕ್ಷಿತ ಘಟನೆಗಳು ನಡೆದು ಹೋಗಿವೆ ಎಂದು ವಿಷಾಧಿಸಿದರು. ಈ ಬಾರಿ ಕೊಡಗಿನಲ್ಲಿ ವಾಡಿಕೆಗಿಂತ ಶೇ.24ರಷ್ಟು ಹೆಚ್ಚು ಮಳೆಯಾಗಿದೆ. 1 ತಿಂಗಳಲ್ಲಿ ಆಗಬೇಕಿದ್ದ ಮಳೆ 4–5 ದಿನಗಳಲ್ಲಿ ಸುರಿದಿದೆ. ಹವಾಮಾನ ವೈಪರೀತ್ಯದಿಂದ ಹೆಚ್ಚು ಮಳೆಯಾಗಿದೆ ಎಂದರು.

ಕೊಡಗು ಜಿಲ್ಲೆಯ 11 ಕಡೆಗಳಲ್ಲಿ ಭೂ ಕುಸಿತ, 18 ಕಡೆಗಳಲ್ಲಿ ಗುಡ್ಡ ಕುಸಿದಿದ್ದರೆ, 15 ಗ್ರಾಮಗಳಲ್ಲಿ ನದಿ ನೀರು ನುಗ್ಗಿದೆ. 264 ಜನ ಮಳೆಯಿಂದ ಬಾಧಿತರಾಗಿದ್ದು, 5 ಮಂದಿ ಗಾಯಗೊಂಡಿದ್ದಾರೆ ಎಂದು ವಿವರಿಸಿದರು. ರಾಜ್ಯದ ವಿವಿಧ ಮಳೆ ಹಾನಿ ಪ್ರದೇಶಗಳಿಗೆ ಖುದ್ದು ಭೇಟಿ ನೀಡಿ, ಪರಿಶೀಲಿಸಲಾಗುತ್ತಿದೆ. ಮುಖ್ಯಮಂತ್ರಿಗಳು ಕೂಡ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾಹಿತಿ ಪಡೆಯುತ್ತಿದ್ದಾರೆ. ಮಳೆ ಹಾನಿ ಪ್ರದೇಶಗಳಿಗೆ ಮುಖ್ಯಮಂತ್ರಿಗಳು ಕೂಡ ಭೇಟಿ ನೀಡಿ, ಪರಿಶೀಲಿಸಲಿದ್ದಾರೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಮಳೆಯಿಂದ 1200ಕ್ಕೂ ಅಧಿಕ ವಿದ್ಯುತ್ ಕಂಬಗಳು ಹಾನಿಯಾಗಿವೆ. ಈ ಹಿನ್ನೆಲೆಯಲ್ಲಿ ಬೇರೆ ಜಿಲ್ಲೆಗಳಿದಂಲೂ ಸಿಬ್ಬಂದಿಯನ್ನು ಕೊಡಗು ಜಿಲ್ಲೆಗೆ ನಿಯೋಜಿಸಲಾಗುತ್ತಿದೆ. ಮಳೆಯಿಂದ ಗ್ರಾಮೀಣ ರಸ್ತೆಗಳಿಗೆ ಹಾನಿಯಾಗಿದ್ದು, ಎಸ್‌ಡಿಆರ್‌ಎಫ್ ನಿಧಿ ಬಳಸಿ ಶೀಘ್ರ ರಸ್ತೆಗಳನ್ನು ತಾತ್ಕಾಲಿಕವಾಗಿ ದುರಸ್ತಿಗೊಳಿಸುವಂತೆ ಜಿಲ್ಲಾಧಿಕಾರಿಗೆ ಸೂಚಿಸಿರುವುದಾಗಿ ತಿಳಿಸಿದರು.

ಈ ಸಂದರ್ಭ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಉಪ ವಿಭಾಗಾಧಿಕಾರಿ ವಿನಾಯಕ ನರ್ವಾಡೆ, ತಹಸೀಲ್ದಾರ್‌ಗಳಾದ ಕಿರಣ್ ಗೌರಯ್ಯ, ರಾಮಚಂದ್ರ ರಾವ್, ಕಂದಾಯ ಇಲಾಖೆ ಅಧಿಕಾರಿಗಳು, ಸ್ಥಳೀಯ ಗ್ರಾಪಂ ಜನಪ್ರತಿನಿಧಿಗಳು ಹಾಜರಿದ್ದರು.



ತೆಪ್ಪದಕಂಡಿ ಗ್ರಾಮಕ್ಕೆ ಸಚಿವರಾದ ಕೃಷ್ಣ ಭೈರೇಗೌಡ, ಎನ್.ಎಸ್.ಭೋಸರಾಜು, ಶಾಸಕ ಡಾ.ಮಂತರ್‌ಗೌಡ, ಜಿಲ್ಲಾಧಿಕಾರಿ ವೆಂಕಟ್ ರಾಜಾ ಭೇಟಿ ನೀಡಿ, ಸಂತ್ರಸ್ತ ಕುಟುಂಬಗಳಿಗೆ ಧೈರ್ಯ ತುಂಬಿದರು.

ಶಾಶ್ವತ ಕಾಮಗಾರಿಗೆ 300 ಕೋಟಿ ನೀಡಲು ಸಿಎಂ ಸಮ್ಮತಿ

ಕೊಡಗು ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಗುಡ್ಡ ಕುಸಿಯುವ ಸಾಧ್ಯತೆಯಿರುವ ಪ್ರದೇಶಗಳ ಕುರಿತು ಜಿಯೋಲಾಜಿಕಲ್ ಸರ್ವೇ ವಿಜ್ಞಾನಿಗಳು ಈಗಾಗಲೇ ವರದಿ ನೀಡಿದ್ದಾರೆ. ರಾಷ್ಟ್ರೀಯ ಹೆದ್ದಾರಿಗಳನ್ನು ಹೊರತುಪಡಿಸಿ ರಾಜ್ಯ ಮುಖ್ಯ ರಸ್ತೆಗಳು, ಲೋಕೋಪಯೋಗಿ ರಸ್ತೆಗಳ ಗುಡ್ಡ ಕುಸಿಯುವ ಪ್ರದೇಶಗಳಲ್ಲಿ ಶಾಶ್ವತ ತಡೆಗೋಡೆ ನಿರ್ಮಿಸಲು 300 ಕೋಟಿ ರೂ. ನೀಡಲು ಮುಖ್ಯಮಂತ್ರಿಗಳು ಸಮ್ಮತಿಸಿದ್ದಾರೆ. ಜಿಎಸ್‌ಐ ನೀಡಿರುವ ಸ್ಥಳಗಳ ಕುರಿತು ಕಾಮಗಾರಿ ಪ್ರಸ್ತಾವನೆ ಸಲ್ಲಿಸಲು ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ ಎಂದು ಸಚಿವ ಕೃಷ್ಣ ಭೈರೇಗೌಡ ಹೇಳಿದರು.

ಬದಲಾವಣೆಗೆ ಸಿದ್ಧವಾಗಬೇಕು: 2018ರಲ್ಲಿ ಕೊಡಗಿನಲ್ಲಿ ಪ್ರಕೃತಿ ವಿಪತ್ತು ಸಂಭವಿಸಿತ್ತು. ಇದರ ಮುಂದುವರೆದ ಭಾಗವಾಗಿ ಕೇರಳದ ವಯನಾಡನ್ನು ನೋಡುತ್ತಿದ್ದೇವೆ. ನಮ್ಮ ಕಾಲಿಗೆ ನಾವೇ ಕೊಡಲಿ ಏಟು ಹಾಕಿಕೊಂಡಂತೆ ಆಗಿದೆ. ಪರಿಸರಕ್ಕೂ ಒಂದು ಸಹನೆ ಇದೆ. ಅಭಿವೃದ್ಧಿ ಹೆಸರಲ್ಲಿ ಪ್ರಕೃತಿ ಮೇಲಿನ ಹಾನಿಯನ್ನು ನಾವು ಗಮನಿಸುತ್ತಿಲ್ಲ. ಹಾನಿ ತಡೆಗೆ ಯಾರೂ ಮನ ಪೂರ್ವಕವಾಗಿ ಸಿದ್ಧರಾಗಿಲ್ಲ ಎಂದರು.

ಸರ್ಕಾರದ ಮೇಲೆ ಜವಾಬ್ದಾರಿ ಇದ್ದು ಜನರು ಕೂಡ ಬದಲಾವಣೆಗೆ ಸಿದ್ಧರಾಗಬೇಕು. ಇಲ್ಲವಾದಲ್ಲಿ ನಾಳೆಯ ದುರಂತಗಳಿಗೆ ನಾವೇ ಹೊಣೆಗಾರರಾಗಬೇಕಾಗುತ್ತದೆ. ಸರ್ಕಾರ ಬಿಗಿ ಕ್ರಮ ತೆಗೆದುಕೊಳ್ಳಬೇಕು. ಈ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸಲಾಗುವುದು ಎಂದು ಹೇಳಿದರು.

> “ ಭೂ ಕುಸಿತ ಎಲ್ಲಿ ಆಗುತ್ತದೆ ಎಂದು ಅಂದಾಜಿಸಿಕೊಂಡು, ವಿಜ್ಞಾನಿಗಳ ವರದಿ ಆಧರಿಸಿ ಅಪಾಯದಲ್ಲಿರುವ ಮನೆಗಳ ನಿವಾಸಿಗಳನ್ನು ಬಲವಂತವಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಜಿಲ್ಲಾಧಿಕಾರಿಗೆ ಸೂಚಿಸಿದ್ದೇನೆ. ಗುಡ್ಡದ ಅಂಚಿನಲ್ಲಿ ಮನೆ ನಿರ್ಮಿಸಿಕೊಂಡು ಮಳೆ ಬಂದಾಗ ಮನೆ ಕುಸಿಯುವುದಿಲ್ಲ ಎನ್ನಲಾಗುತ್ತದೆಯೇ? ಈ ವಿಚಾರದಲ್ಲಿ ನಿಷ್ಠುರವಾಗಿಯೇ ವರ್ತಿಸಬೇಕಾಗುತ್ತದೆ. ನಮಗೆ ಜೀವ ಉಳಿಸೋದು ಮುಖ್ಯವೇ ಹೊರತು, ಪರಿಹಾರ ವಿತರಿಸುವುದಲ್ಲ. ನನ್ನ ಮತ್ತು ಸರ್ಕಾರದ ಧ್ಯೇಯ ಕೂಡ ಅದೇ ಆಗಿದೆ. ಈ ಕಾರಣದಿಂದ ಅಧಿಕಾರಿಗಳ ಮಾತು ಕೇಳದೆ ನೀರಿಗೆ ಇಳಿಯುವವರಿಗೆ, ಮಾತು ಕೇಳದವರಿಗೆ ಲಾಠಿ ರುಚಿ ತೋರಿಸಲು ಪೊಲೀಸರಿಗೆ ಸೂಚಿಸಿದ್ದೇನೆ.
>
> –ಕೃಷ್ಣ ಭೈರೇಗೌಡ, ಕಂದಾಯ ಸಚಿವ

ಕಾಳಜಿ ಕೇಂದ್ರಗಳಿಗೆ ಸ್ಥಳಾಂತರ



ಸಿದ್ದಾಪುರ ಸ್ವರ್ಣಮಾಲ ಕಲ್ಯಾಣ ಮಂಟಪದ ಕಾಳಜಿ ಕೇಂದ್ರದಲ್ಲಿ ಆಶ್ರಯ ಪಡೆಯುತ್ತಿರುವ ಕುಟುಂಬಗಳು.

ಮಡಿಕೇರಿ, ಜು.31–ಮಳೆ ಹಿನ್ನೆಲೆಯಲ್ಲಿ ಕೊಡಗು ಜಿಲ್ಲೆಯ ವಿವಿಧೆಡೆಯ ಹಲವು ಕುಟುಂಬಗಳನ್ನು ಮುನ್ನೆಚ್ಚರಿಕಾ ಕ್ರಮವಾಗಿ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದ್ದು, ಭಾಗಮಂಡಲ ಗ್ರಾಮದ ಕಾಶಿ ಮಠದ ಕಾಳಜಿ ಕೇಂದ್ರದಲ್ಲಿ 2 ಕುಟುಂಬಗಳ 7 ಸದಸ್ಯರು ಆಶ್ರಯ ಪಡೆದಿದ್ದಾರೆ.

ವಿರಾಜಪೇಟೆ ತಾಲೂಕಿನ ಕರಡಿಗೋಡು ಗ್ರಾಮದ ಕಾವೇರಿ ನದಿ ದಡ ವ್ಯಾಪ್ತಿಯ ಹೊಳೆಕೆರೆ ಪೈಸಾರಿಯ ಪ್ರವಾಹ ಭೀತಿಯಲ್ಲಿರುವ ಕುಟುಂಬಗಳನ್ನು ಸಿದ್ದಾಪುರ ಸ್ವರ್ಣಮಾಲ ಕಲ್ಯಾಣ ಮಂಟಪಕ್ಕೆ ಸ್ಥಳಾಂತರಿಸಲಾಗಿದೆ. ತೋರ ಗ್ರಾಮದ ಭೂ ಕುಸಿತ ಪ್ರದೇಶದಲ್ಲಿರುವ ಕುಟುಂಬಗಳನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ಮಡಿಕೇರಿಯ ಇಂದಿರಾ ನಗರದಲ್ಲಿ 2 ಮನೆಗಳು ಅಪಾಯ ಸ್ಥಿತಿಯಲ್ಲಿದ್ದು, ಈ ಮನೆಗಳ ನಿವಾಸಿಗಳಿಗೆ ಈಗಾಗಲೇ ನೋಟಿಸ್ ನೀಡಲಾಗಿದೆ. ಇಲ್ಲಿನ ಸಮುದಾಯ ಭವನದ ಸಮಿತಿಗೂ ಮಾಹಿತಿ ನೀಡಿ ಎರಡು ಕುಟುಂಬಗಳಿಗೆ ತಾತ್ಕಾಲಿಕ ವ್ಯವಸ್ಥೆ ಮಾಡಲಾಗಿದೆ. ಹೋಬಳಿಯ ವಾಲ್ನೂರು ತ್ಯಾಗತ್ತೂರು ಗ್ರಾಮದ ಹೊಳೆ ಪಕ್ಕದ ಕುಟುಂಬದವರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದ್ದು, 23 ಜನ ಆಶ್ರಯ ಪಡೆದಿದ್ದಾರೆ.

ನೆಲ್ಲಿಹುದಿಕೇರಿ ಗ್ರಾಮದ ಶಾಲೆಯಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದ್ದು, ತಹಸೀಲ್ದಾರ್ ಭೇಟಿ ನೀಡಿ, ಅಗತ್ಯ ಸೌಲಭ್ಯ ಕಲ್ಪಿಸಿದ್ದಾರೆ. ಕಾಳಜಿ ಕೇಂದ್ರಗಳಲ್ಲಿ ಆರೋಗ್ಯ ಸಿಬ್ಬಂದಿ ಕೂಡ ನೇಮಿಸಲಾಗಿದೆ.

ಸಂತ್ರಸ್ತರ ರಕ್ಷಣೆ: ಕುಶಾಲನಗರದ ಸಾಯಿ ಲೇಔಟ್‌ನಲ್ಲಿ ಪ್ರವಾಹ ಬಂದ ಕಾರಣ ಮನೆಯೊಳಗೆ ಸಿಲುಕಿದ್ದ 19 ಮಂದಿಯನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿ ದೋಣಿಗಳ ಮೂಲಕ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಮಡಿಕೇರಿ ಹೋಬಳಿ ಎಸ್.ಕಟ್ಟೆಮಾಡು ಗ್ರಾಮದ ಪರಂಬು ಪೈಸಾರಿ ಮನೆಗಳ ನಿವಾಸಿಗಳನ್ನು ಮುಂಜಾಗ್ರತಾ ಕ್ರಮವಾಗಿ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಅಮ್ಮತಿ ಹೋಬಳಿ ಹಚ್ಚಿನಾಡು ಗ್ರಾಮದ ಕಾವೇರಿ ನದಿ ದಡದ 10 ಕುಟುಂಬದ 44 ಸದಸ್ಯರನ್ನು ಹಚ್ಚಿನಾಡು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ.

ಮನೆಯಲ್ಲಿದ್ದ ಚಿನ್ನಾಭರಣ ಕಳವು

ಸುಂಟಿಕೊಪ್ಪ: ಇಲ್ಲಿನ ಹೊಸ ಬಡಾವಣೆಯ ಮನೆಯೊಂದರಲ್ಲಿ ಚಿನ್ನಾಭರಣ ಹಾಗೂ ನಗದು ಕಳ್ಳತನವಾಗಿದೆ. ಹೊಸಬಡಾವಣೆ ನಿವಾಸಿ ಮನು ಅಚ್ಚಮಯ್ಯ ಅವರು ಸಂಬಂಧಿಕರ ಮನೆಗೆ ತೆರಳಿದ್ದರು. ಈ ವೇಳೆ ಕಳ್ಳರು ಮನೆಯ ಬೀರುವಿನಲ್ಲಿದ್ದ 1 ಚಿನ್ನದ ಬಳೆ ಹಾಗೂ 6500 ರೂ. ಕಳವು ಮಾಡಲಾಗಿದೆ. ಕುಶಾಲನಗರ ವೃತ್ತ ನಿರೀಕ್ಷಕ ರಾಜೇಶ್ ಕೋಟ್ಯಾನ್, ಸುಂಟಿಕೊಪ್ಪ ಠಾಣಾಧಿಕಾರಿ ಎಂ.ಸಿ.ಶ್ರೀಧರ್, ಅಪರಾಧ ಪತ್ತೆ ದಳದ ಇನ್ಸ್‌ಪೆಕ್ಟರ್ ಸ್ವಾಮಿ, ಬೆರಳಚ್ಚು ತಜ್ಞರು, ಶ್ವಾನ ದಳ ತಂಡದೊಂದಿಗೆ ಸ್ಥಳ ಪರಿಶೀಲಿಸಲಾಯಿತು. ಈ ಸಂಬಂಧ ಸುಂಟಿಕೊಪ್ಪ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಕೊಡಗರಹಳ್ಳಿ ಗ್ರಾಮದಲ್ಲಿ ಒಂಟಿ ಸಲಗ



ಮಡಿಕೇರಿ, ಜು.31– ಸುಂಟಿಕೊಪ್ಪ ಸಮೀಪದ ಕೊಡಗರಹಳ್ಳಿ ಗ್ರಾಮದಲ್ಲಿ ಒಂಟಿ ಸಲಗ ಬುಧವಾರ ಬೆಳ್ಳಂಬೆಳಗ್ಗೆ ಕಾಣಿಸಿಕೊಂಡು ಆತಂಕ ಮೂಡಿಸಿತು.

ಬೆಳಗ್ಗೆ 6.30ರಲ್ಲಿ ಗ್ರಾಮದ ಮುಖ್ಯ ರಸ್ತೆಯಲ್ಲಿ ರಾಜಾರೋಷವಾಗಿ ಸಂಚರಿಸಿದ ಒಂಟಿ ಸಲಗ ಗ್ರಾಮಸ್ಥರು ಕಿರುಚಿಕೊಂಡಾಗ ಪಕ್ಕದ ತೋಟಕ್ಕೆ ಓಡಿ ಹೋಯಿತು. ಇದರಿಂದ ಬೇಲಿ ಮತ್ತು ತೋಟದಲ್ಲಿನ ಗಿಡಗಳಿಗೆ ಹಾನಿಯಾಗಿದ್ದು, ನಿತ್ಯ ಈ ಕಾಡಾನೆ ಗ್ರಾಮದಲ್ಲಿ ಸಂಚರಿಸುತ್ತಿರುವ ಬಗ್ಗೆ ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗಷ್ಟೇ ಬೆಳೆಗಾರರೊಬ್ಬರು ಒಂಟಿ ಸಲಗದ ದಾಳಿಯಿಂದ ಪಾರಾಗಿದ್ದರು. ಅರಣ್ಯ ಇಲಾಖೆ ಕಾಡಾನೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಪ್ರವಾಸಿಗರ ನಿಷೇಧಿಸುವಂತೆ ಮನವಿ ಸಲ್ಲಿಕೆ

ಮಡಿಕೇರಿ, ಜು.31–ಕೊಡಗಿನಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಮುಂಜಾಗೃತಾ ಕ್ರಮವಾಗಿ ಮುಂದಿನ 7 ದಿನಗಳವರೆಗೆ ಜಿಲ್ಲೆಗೆ ಪ್ರವಾಸಿಗರ ಪ್ರವೇಶ ನಿಷೇಧಿಸಬೇಕೆಂದು ಕೊಡಗು ರಕ್ಷಣಾ ವೇದಿಕೆಯಿಂದ ಒತ್ತಾಯಿಸಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರಿಗೆ ಮನವಿ ಸಲ್ಲಿಸಲಾಯಿತು.

ಕೊರವೇ ಅಧ್ಯಕ್ಷ ಅಚ್ಚಂಡೀರ ಪವನ್ ಪೆಮ್ಮಯ್ಯ ಮಾತನಾಡಿ, ವಯನಾಡುವಿನಲ್ಲಿ ಹೋಂ ಸ್ಟೇ ಮತ್ತು ರೆಸಾರ್ಟ್‌ಗಳಿದ್ದ ಗುಡ್ಡ ಕುಸಿದು ಅಮಾಯಕ ಪ್ರವಾಸಿಗರು ಕೂಡ ಮೃತಪಟ್ಟಿದ್ದಾರೆ. ಕೊಡಗು ಜಿಲ್ಲೆಯಲ್ಲೂ ಇದೇ ಅನಾಹುತ ಸಂಭವಿಸದಂತೆ ತಡೆಯಲು ಮಳೆಯ ತೀವ್ರತೆ ಕಡಿಮೆಯಾಗುವವರೆಗೆ ಪ್ರವಾಸಿಗರನ್ನು ನಿಷೇಧಿಸಬೇಕೆಂದು ಮನವಿ ಮಾಡಿದರು.

ಪ್ರಸಿದ್ಧ ಪ್ರವಾಸಿತಾಣ ವಯನಾಡುವಿನಲ್ಲಿ ಧಾರಾಕಾರ ಮಳೆಯಿಂದ ಭೀಕರ ಭೂ ಕುಸಿತವಾಗಿ ಸ್ಥಳೀಯರೊಂದಿಗೆ ಪ್ರವಾಸಿಗರು ಕೂಡ ಸಾವನ್ನಪ್ಪಿದ್ದಾರೆ ಮತ್ತು ಕಣ್ಮರೆಯಾಗಿದ್ದಾರೆ. ಇದು ಕೇರಳ ಪಕ್ಕದಲ್ಲೇ ಇರುವ ಕೊಡಗಿಗೆ ಎಚ್ಚರಿಕೆಯ ಗಂಟೆಯಾಗಿದೆ. ದೇಶದ ಹೆಸರುವಾಸಿ ಪ್ರವಾಸಿತಾಣಗಳ ಪಟ್ಟಿಯಲ್ಲಿರುವ ಕೊಡಗಿನ ಬೆಟ್ಟಗುಡ್ಡಗಳ ಬಹುತೇಕ ಸ್ಥಳಗಳಲ್ಲಿ ರೆಸಾರ್ಟ್ ಮತ್ತು ಹೋಂ ಸ್ಟೇಗಳು ನಿರ್ಮಾಣಗೊಂಡಿವೆ. 2018ರಲ್ಲಿ ಕೊಡಗಿನಲ್ಲೂ ಭೂ ಕುಸಿತವಾಗಿತ್ತು. ಆದ್ದರಿಂದ ಮುನ್ನೆಚ್ಚರಿಕಾ ಕ್ರಮವಾಗಿ 7 ದಿನಗಳವರೆಗೆ ಕೊಡಗಿಗೆ ಪ್ರವಾಸಿಗರ ಆಗಮನವನ್ನು ನಿಷೇಧಿಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಕೊರವೇ ನಿರ್ದೇಶಕ ಎಂ.ವೈ.ಸುಲೈಮಾನ್ ಹಾಗೂ ವರ್ಗೀಸ್ ಹಾಜರಿದ್ದರು.



ಕೊಡಗಿಗೆ ಪ್ರವಾಸಿಗರ ಪ್ರವೇಶ ನಿಷೇಧಿಸುವಂತೆ ಆಗ್ರಹಿಸಿ ಕೊರವೇಯಿಂದ ಡಿಸಿ ವೆಂಕಟ್ ರಾಜಾ ಅವರಿಗೆ ಮನವಿ ಸಲ್ಲಿಸಲಾಯಿತು.

ಶಿವನಸಮುದ್ರ, ಭರಚುಕ್ಕಿ, ಹೊಗೇನಕಲ್‌ಗೆ ಪ್ರವಾಸಿಗರ ನಿಷೇಧ



ಕೊಳ್ಳೇಗಾಲ ತಾಲೂಕಿನ ಭರಚುಕ್ಕಿ ಜಲಪಾತ ವೀಕ್ಷಣೆಗೆ ನಿರ್ಬಂಧಿಸಿರುವುದು.


ಚಾಮರಾಜನಗರ, ಜು.31–ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರಿ ಮಳೆಯಾಗುತ್ತಿರುವುದರಿಂದ ಕೃಷ್ಣರಾಜಸಾಗರ ಹಾಗೂ ಕಬಿನಿ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ನದಿಗೆ ಬಿಡುತ್ತಿರುವ ಹಿನ್ನೆಲೆಯಲ್ಲಿ ಕೊಳ್ಳೇಗಾಲ ಹಾಗೂ ಹನೂರು ತಾಲೂಕಿನ ಪ್ರವಾಸಿ ತಾಣಗಳಿಗೆ ಆ.2ರವರೆಗೆ ಸಾರ್ವಜನಿಕರ ಭೇಟಿ ನಿಷೇಧಿಸಲಾಗಿದೆ.

ಕೊಳ್ಳೇಗಾಲ ಹಾಗೂ ಹನೂರು ತಾಲೂಕಿನ ಪ್ರವಾಸಿ ತಾಣಗಳಾದ ವೆಸ್ಲಿ ಸೇತುವೆ, ಶಿವನ ಸಮುದ್ರ ಭರಚುಕ್ಕಿ ಹಾಗೂ ಹೊಗೇನಕಲ್ ಜಲಪಾತ ಪ್ರದೇಶಗಳಿಗೆ ಹೆಚ್ಚಿನ ಪ್ರವಾಸಿಗರು ಆಗಮಿಸುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಪ್ರವಾಸಿಗರನ್ನು ನಿಷೇಧಿಸಿಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದ್ದಾರೆ.

ಬಂದೋಬಸ್ತ್: ಮಳೆ ಪ್ರಮಾಣ ಹಾಗೂ ನೀರಿನ ಹರಿವು ಹೆಚ್ಚಾದ ಹಿನ್ನೆಲೆ ಪ್ರವಾಸಿಗ ಸ್ವರ್ಗ ಎಂದೆ ಬಿಂಬಿತವಾದ ಕೊಳ್ಳೇಗಾಲ ತಾಲೂಕಿನ ಭರಚುಕ್ಕಿ ಜಲಪಾತ ವೀಕ್ಷಣೆಗೆ ಜಿಲ್ಲಾಡಳಿತ ನಿರ್ಬಂಧ ವಿಧಿಸಿರುವ ಹಿನ್ನೆಲೆಯಲ್ಲಿ ಸತ್ತೇಗಾಲ ಹ್ಯಾಂಡ್ ಪೋಸ್ಟ್ ಗಡಿಯಂಚಿನಲ್ಲಿ ಬಂದೋಬಸ್ತ್ ಏರ್ಪಡಿಸಲಾಗಿದೆ.

ಬುಧವಾರ ಬೆಳಗ್ಗೆಯಿಂದಲೇ ನೀರಿನ ಹರಿವು ಹೆಚ್ಚಾಗಿದ್ದು, ಭರಚುಕ್ಕಿಗೆ ತೆರಳದಂತೆ ಹ್ಯಾಂಡ್‌ಪೋಸ್ಟ್ ಬಳಿ ಪೊಲೀಸ್ ಬ್ಯಾರಿಕೇಡ್ ಅಳವಡಿಸಿ ನಿರ್ಬಂಧ ಹೇರಲಾಗಿದೆ. ಜಲಪಾತ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರಿಗೆ ಗ್ರಾಮಾಂತರ ಪೊಲೀಸರು ತಿಳವಳಿಕೆ ನೀಡಿ, ವಾಪಸ್ ಕಳುಹಿಸುತ್ತಿದ್ದಾರೆ.

ಜಿಲ್ಲೆಯ ಗಡಿ ಭಾಗಗಳಿಗೆ ಡಿಸಿ ಭೇಟಿ, ಪರಿಶೀಲನೆ



ಜಿಲ್ಲೆಯ ಕೇರಳ ಗಡಿ ಭಾಗಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಹಾಗೂ ಜಿಪಂ ಸಿಇಓ ಮೋನಾ ರೋತ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಚಾಮರಾಜನಗರ, ಜು.31–ವಯನಾಡು ಭೂ ಕುಸಿತ ದುರಂತ ಹಿನ್ನೆಲೆಯಲ್ಲಿ ಕೇರಳಕ್ಕೆ ಪರಿಹಾರ ನೀಡಲು ತೆರಳುವ ವಾಹನಗಳ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡುವ ದಿಸೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪ ನಾಗ್ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಮೊನಾ ರೋತ್ ಜಿಲ್ಲೆಯ ಕೇರಳ ಗಡಿ ಭಾಗಗಳಿಗೆ ಬುಧವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಕೇರಳದಲ್ಲಿ ಹೆಚ್ಚು ಮಳೆಯಾಗುತ್ತಿರುವ ಕಾರಣ ಮುತ್ತಂಗ ಚೆಕ್‌ಪೋಸ್ಟ್ ಸಮೀಪದ ಹೆದ್ದಾರಿಯಲ್ಲಿ ನೀರಿನ ಹರಿವಿನ ಪ್ರಮಾಣ ಹೆಚ್ಚಳವಾಗಿದ್ದು, ಗುಂಡ್ಲುಪೇಟೆ–ಕೇರಳ ಹೆದ್ದಾರಿಯಲ್ಲಿ ಕಾರ್ಯಾಚರಣೆಗೆ ತೆರಳುವ ವಾಹನಗಳ ಸುಗಮ ಸಂಚಾರ ಸಂಬಂಧ ಪರಿಶೀಲಿಸಿದರು.

ಗಡಿ ಭಾಗದ ಮೂಲೆಹೊಳೆ ಚೆಕ್‌ಪೋಸ್ಟ್ ಸೇರಿದಂತೆ ಕೇರಳಕ್ಕೆ ಹೊಂದಿಕೊಂಡ ಜಿಲ್ಲೆಯ ಗಡಿ ಪ್ರದೇಶಗಳ ವ್ಯವಸ್ಥೆ ವೀಕ್ಷಿಸಿದರು. ಇದೇ ವೇಳೆ ಅರಣ್ಯ, ಪೊಲೀಸ್ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಯಿಂದ ಮಾಹಿತಿ ವಿವರ ಪಡೆದರು. ಗಡಿ ಭಾಗದಲ್ಲಿ ಅನುಸರಿಸಬೇಕಿರುವ ಕ್ರಮಗಳ ಬಗ್ಗೆ ಜಿಲ್ಲಾಧಿಕಾರಿ ಸೂಕ್ತ ನಿರ್ದೇಶನ ನೀಡಿದರು.

ಜನಪದ ಚಾಮರಾಜನಗರದ ದೈವಕಲೆ

• ಚಿಂತಕ ಬಂಜಗೆರೆ ಜಯಪ್ರಕಾಶ್ ಅಭಿಮತ • ಚಾಮರಾಜನಗರದಲ್ಲಿ ಜನಪದ ಸಂಭ್ರಮ

ಚಾಮರಾಜನಗರ, ಜು.31–ಚಾಮರಾಜನಗರಕ್ಕೆ ಜನಪದ ಕಲೆ ದೈವಕಲೆಯಾಗಿದ್ದು, ಕರ್ನಾಟಕಕ್ಕೆ ಮಾದರಿಯಾಗುವ ಜನಪದ ಕಲೆಗಳು ಇಲ್ಲಿವೆ ಎಂದು ಸಾಹಿತಿ ಹಾಗೂ ಸಂಸ್ಕೃತಿ ಚಿಂತಕ ಡಾ.ಬಂಜಗೆರೆ ಜಯಪ್ರಕಾಶ್ ಅಭಿಪ್ರಾಯಪಟ್ಟರು.

ನಗರದ ವರನಟ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಬುಧವಾರ ಕರ್ನಾಟಕ ಜಾನಪದ ಅಕಾಡೆಮಿ, ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಆಕಾಶವಾಣಿ ಮೈಸೂರು ಎಫ್‌ಎಂ 100.06 ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಜನಪದ ಸಂಭ್ರಮ ಕಾರ್ಯಕ್ರಮದಲ್ಲಿ ವರ್ತಮಾನದ ತಲ್ಲಣಗಳು ಹಾಗೂ ಜಾನಪದ ಕುರಿತು ಉಪನ್ಯಾಸ ನೀಡಿ ಮಾತನಾಡಿದ ಅವರು, ಮಲೆಮಹದೇಶ್ವರ, ಮಂಟೇಸ್ವಾಮಿ, ಸಿದ್ದಪ್ಪಾಜಿಯಂತಹ ಸಾಧುಸಂತರು ನಡೆದಾಡಿದ ಪುಣ್ಯಭೂಮಿ ಇದಾಗಿದೆ. ಎಲ್ಲಾ ಬಗೆಯ ಜನಪದ ಕಲಾವಿದರು ಇಲ್ಲಿದ್ದಾರೆ. ಕಲಾವಿದರಲ್ಲಿ ಇತ್ತೀಚೆಗೆ ಜಾಗೃತ ಪ್ರಜ್ಞೆ ಮೂಡಿದೆ. ವರ್ತಮಾನದಲ್ಲಿ ನಮ್ಮ ಉದ್ಯೋಗಕ್ಕೂ ಬದುಕಿನ ಕಲೆಗೂ ಸಂಬಂಧವಿದೆ ಎಂದು ತಿಳಿಸಿದರು.

ಚಾಮರಾಜನಗರ ಜಿಲ್ಲೆ ಜನಪದ ಕಲೆಗಳಿಗೆ ಇಡೀ ರಾಜ್ಯದ ಕೇಂದ್ರಸ್ಥಾನವಾಗಿದೆ. ಸಾಹಿತ್ಯ, ಸಂಸ್ಕೃತಿಗೆ ದಕ್ಷಿಣದ ಹೆಬ್ಬಾಗಿಲು ಆಗಿದೆ. ಜನಪದ ಕಲೆ ಹಾಗೂ ಸಂಸ್ಕೃತಿ ನಿಂತ ನೀರಲ್ಲ, ಅದು ನಿರಂತರ ಚಲನಶೀಲವಾದದ್ದು. ಜನರ ಬಾಯಲ್ಲಿ ಬರುವ ಪದವೇ ಜನಪದವಾಗಿದೆ. ಜನಪದ ಸಂಸ್ಕೃತಿ, ಸಂಗೀತ ಕಲೆಗಳು ಗ್ರಾಮೀಣ ಜನರ ವೃತ್ತಿಬದುಕಿನ ಮೇಲೆ ಅವಲಂಬಿತವಾಗಿವೆ ಎಂದರು.

ಜನರು ದಿನನಿತ್ಯದ ದುಡಿಮೆಯ ಬಿಡುವಿನ ವೇಳೆಯಲ್ಲಿ ಕಲೆಗಳನ್ನು ಅಸ್ವಾದಿಸುತ್ತಾರೆ. ಸುಗ್ಗಿ ಕಣ, ಕಳೆ ಕೀಳುವಾಗ, ಗದ್ದೆ ನಾಟಿ, ದೋಣಿ ನಡೆಸುವಾಗ ಜನಪದ ಕಾವ್ಯಗಳು ಮೇಳೈಸುತ್ತವೆ. ಜನಪದ ಎಂದಿಗೂ ಕಳೆಗುಂದಿಲ್ಲ. ಅದು ತನ್ನ ಚಲನಶೀಲತೆಯನ್ನು ಇಂದಿಗೂ ಉಳಿಸಿಕೊಂಡಿದೆ ವಿಕಾಸ ಹಾಗೂ ವಿಸ್ತರಣೆ ಜನಪದ ಕಲೆಯ ಅವಿಭಾಜ್ಯ ಅಂಗಗಳಾಗಿದ್ದು, ಜನರ ನಿತ್ಯ ಬದುಕಿನಲ್ಲಿ ಹಾಸುಹೊಕ್ಕಾಗಿವೆ ಎಂದರು.

ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ.ಮರಿಸ್ವಾಮಿ ಮಾತನಾಡಿ, ಜಾನಪದ ಕಲೆಗಳ ತವರೂರು ಚಾಮರಾಜನಗರ. ಜನಪದ ಇಲ್ಲಿ ಸಮೃದ್ಧವಾಗಿದೆ ಹಿಂದೆ ಹಳ್ಳಿಗಳಲ್ಲಿ ಜನಪದ ಜೀವಂತವಾಗಿತ್ತು. ಜನಪದವನ್ನು ಬರವಣಿಗೆ ಮೂಲಕ ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಲು ಕಲಾವಿದರು ಮುಂದಾಗಬೇಕು ಎಂದರು.

ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನ ಮಾತನಾಡಿ, ಜಿಲ್ಲೆಯ ಜಾನಪದ ಕಲಾವಿದರು ರಾಜ್ಯ ಮತ್ತು ದೇಶಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ರಾಷ್ಟ್ರ ಮಟ್ಟದಲ್ಲಿ ಅವಕಾಶಗಳನ್ನು ಪಡೆದಿದ್ದಾರೆ. ಜಿಲ್ಲೆ ಅನೇಕ ಕಲಾವಿದರನ್ನು ಚಿತ್ರರಂಗಕ್ಕೂ ನೀಡಿದೆ. ಜಾನಪದ ಕಲೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಉತ್ತಮ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಎಚ್.ವಿ.ಚಂದ್ರು, ಕರ್ನಾಟಕ ಜಾನಪದ ಅಕಾಡಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಕುಮಾರ್ ಮಾತನಾಡಿದರು. ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಕಾರ್ಯಕ್ರಮ ಉದ್ಘಾಟಿಸಿದರು. ಕರ್ನಾಟಕ ಜಾನಪದ ಅಕಾಡಮಿ ಸದಸ್ಯರಾದ ಉಮೇಶ್, ಮಲ್ಲಿಕಾರ್ಜುನ ಕಲ್ಲಹಳ್ಳಿ, ರಿಜಿಸ್ಟ್ರಾರ್ ನಮ್ರತಾ, ಗುರುರಾಜ ಹೊಸಕೋಟೆ ಇದ್ದರು.

ವೇದಿಕೆ ಕಾರ್ಯಕ್ರಮದ ಬಳಿಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿವಿಧ ಕಲಾ ತಂಡಗಳು ಸಾಂಸ್ಕೃತಿಕ ಕಲೆ ಪ್ರದರ್ಶಿಸಿದವು. ಕಾರ್ಯಕ್ರಮಕ್ಕೂ ಮೊದಲು ನಗರದ ಶ್ರೀ ಚಾಮರಾಜೇಶ್ವರ ದೇವಾಲಯದಿಂದ ವಿವಿಧ ಕಲಾ ತಂಡಗಳೊಂದಿಗೆ ಜನಪದ ಸಂಭ್ರಮದ ಜಾಥಾಗೆ ಚಾಲನೆ ನೀಡಲಾಯಿತು.



ಚಾಮರಾಜನಗರದ ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಿದ್ದ ಜಾನಪದ ಸಂಭ್ರಮಕ್ಕೆ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ ಚಾಲನೆ ನೀಡಿದರು.

> “ ಜನಪದ ಸಂಸ್ಕೃತಿ ಉಳಿಸುವ ನಿಟ್ಟಿನಲ್ಲಿ ಆಕಾಶವಾಣಿಯು ಜನಪದ ಕಲಾವಿದ ರನ್ನು ನಿರಂತರವಾಗಿ ಪ್ರೋತ್ಸಾಹಿಸುತ್ತಿದೆ. ಆಕಾಶವಾಣಿಯ ಧ್ವನಿಪರೀಕ್ಷೆ ಮಾನದಂಡದ ಆಧಾರದಲ್ಲಿ ವಿವಿಧ ಇಲಾಖೆಗಳು ಕಲಾವಿದರಿಗೆ ಕಾರ್ಯಕ್ರಮ ನೀಡುತ್ತಿವೆ.
>
> –ಎಸ್.ಎಸ್.ಉಮೇಶ್, ಮೈಸೂರಿನ ಆಕಾಶವಾಣಿ ಉಪನಿರ್ದೇಶಕ

ಕಾಳಜಿ ಕೇಂದ್ರಕ್ಕೆ ಶಾಸಕ ಕೃಷ್ಣಮೂರ್ತಿ ಭೇಟಿ

ಕೊಳ್ಳೇಗಾಲ, ಜು.31–ಕಾವೇರಿ ನದಿ ಪಾತ್ರದ ಗ್ರಾಮಗಳಲ್ಲಿ ನೀರಿನ ಹರಿವು ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ತಾಲೂಕಿನ ದಾಸನಪುರ ಗ್ರಾಮಸ್ಥರನ್ನು ಜಿಲ್ಲಾಡಳಿತ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಿದ್ದು, ಶಾಸಕ ಎ.ಆರ್.ಕೃಷ್ಣಮೂರ್ತಿ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಗ್ರಾಮಸ್ಥರ ಕ್ಷೇಮ ವಿಚಾರಿಸಿದರು.

ಈ ವೇಳೆ ಶಾಸಕರು ಗ್ರಾಮಸ್ಥರ ಊಟೋಪಾಚಾರ ಬಗ್ಗೆ ವಿಚಾರಿಸಿ, ಅಡುಗೆ ಪರಿಶೀಲಿಸಿದರು. ಗುಣಮಟ್ಟದ ಆಹಾರ ವಿತರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ತಹಸೀಲ್ದಾರ್ ಮಂಜುಳಾ ಹಾಗೂ ವಿವಿಧ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಬಳಿಕ ಮಾತನಾಡಿದ ಶಾಸಕರು, ಕಾಳಜಿ ಕೇಂದ್ರದಲ್ಲಿ ಎಲ್ಲರಿಗೂ ಗುಣಮಟ್ಟದ ಆಹಾರ ಕಲ್ಪಿಸಲಾಗಿದ್ದು, ಅಗತ್ಯ ವೈದ್ಯಕೀಯ ಸೌಲಭ್ಯಗಳನ್ನು ಕೂಡ ಒದಗಿಸಲಾಗಿದೆ. ನದಿ ತೀರದ ಕೆಲ ಗ್ರಾಮಸ್ಥರು ಕಾಳಜಿ ಕೇಂದ್ರಗಳಿಗೆ ಬರಲು ನಿರಾಕರಿಸಿದ್ದು, ಅಂತಹವರನ್ನು ಮನವೊಲಿಸಲಾಗುತ್ತಿದೆ ಎಂದರು.

ಉಪವಿಭಾಗಾಧಿಕಾರಿ ಮಹೇಶ್ ಮಾತನಾಡಿ, ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲಾಗುತ್ತಿದೆ. ತಾಲೂಕು ವ್ಯಾಪ್ತಿಯ ಕಾವೇರಿ ನದಿ ಗ್ರಾಮಗಳಲ್ಲಿ ಪ್ರವಾಹ ಪರಿಸ್ಥಿತಿ ಎದುರಾಗಿದ್ದು, ದಾಸನಪುರ ಗ್ರಾಮದ ಜನರನ್ನು ಕೊಳ್ಳೇಗಾಲ ಮಹದೇಶ್ವರ ಹಾಸ್ಟೆಲ್‌ನ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ ಎಂದು ಮಾಹಿತಿ ನೀಡಿದರು.



ಕೊಳ್ಳೇಗಾಲ ಮಹದೇಶ್ವರ ಹಾಸ್ಟೆಲ್‌ನ ಕಾಳಜಿ ಕೇಂದ್ರಕ್ಕೆ ಶಾಸಕ ಎ.ಆರ್.ಕೃಷ್ಣಮೂರ್ತಿ ಭೇಟಿ ನೀಡಿ ಗ್ರಾಮಸ್ಥರ ಕ್ಷೇಮ ವಿಚಾರಿಸಿದರು.

ವರ್ತಕರ ಸಂಘದ ಅಧ್ಯಕ್ಷರಾಗಿ ಶಂಕರ್ ಆಯ್ಕೆ

ಚಾಮರಾಜನಗರ, ಜು.31–ವರ್ತಕರ ಸಂಘದ 2024–25ನೇ ಸಾಲಿನ ಅಧ್ಯಕ್ಷರಾಗಿ ಎನ್.ಶಂಕರ್ ಅವಿರೋಧವಾಗಿ ಆಯ್ಕೆಯಾದರು.

ನಗರದ ಬಿ.ರಾಚಯ್ಯ ಜೋಡಿರಸ್ತೆಯ ವರ್ತಕರ ಭವನದ ಸಂಘದ ಕಚೇರಿ ಸಭಾಂಗಣದಲ್ಲಿ ನಡೆದ ಅಧ್ಯಕ್ಷ ಹಾಗೂ ಪದಾಧಿಕಾರಿಗಳ ಆಯ್ಕೆ ಚುನಾವಣೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಎನ್.ಶಂಕರ್ ಒಬ್ಬರೇ ನಾಮಪತ್ರ ಸಲ್ಲಿಸಿದರು. ಗೌರವ ಕಾರ್ಯದರ್ಶಿ ಸ್ಥಾನಕ್ಕೆ ಸ್ಪರ್ಧಿಸಿದ್ದ ಕೆ.ಎಸ್.ಚಿದಾನಂದ ಗಣೇಶ್ 11 ಮತ ಪಡೆದು ಆಯ್ಕೆಯಾದರೆ, ಕೆ.ಎಸ್.ಮಹೇಶ್ ಕುಮಾರ್ 9 ಮತ ಪರಾಭಗೊಂಡರು. ಉಪಾಧ್ಯಕ್ಷರಾಗಿ ಎನ್.ಸತೀಶ್, ಸಹ ಕಾರ್ಯದರ್ಶಿಯಾಗಿ ಎಂ.ಕಮಲ್‌ರಾಜ್ ಹಾಗೂ ಖಜಾಂಚಿಯಾಗಿ ಎಚ್.ಬಿ.ವಿಶ್ವಕುಮಾರಸ್ವಾಮಿ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಯಾದ ಸಂಘದ ಮಾಜಿ ಅಧ್ಯಕ್ಷ ಎ.ಜಯಸಿಂಹ ಶ್ರೀನಿವಾಸ್ ಎಸ್‌ಆರ್‌ಎಸ್ ಕರ್ತವ್ಯ ನಿರ್ವಹಿಸಿದರು.

ಸಂಘ ನಿರ್ದೇಶಕರಾದ ಸಿ.ಎನಾರಾಯಣ್, ಕೆ.ಎಸ್.ರವಿಶಂಕರ್, ಜಿ.ರಮೇಶ್, ಸಿ.ಎಸ್.ಮಹೇಶ್‌ಕುಮಾರ್, ಪಿಎನ್, ಸಂಜಯ್, ಜಿ.ಅಂಕಶೆಟ್ಟಿ, ಬಿ.ಶ್ರೀಧರ್, ಎನ್.ಆರ್.ಮುರಳೀಧರ್, ಸಿಎನ್.ಮಹೇಶ್ ಕುಮಾರ್, ಎನ್.ಚೇತನ್, ಎ.ಶ್ರೀನಿವಾಸನ್, ಎಲ್.ಸುರೇಸ್, ಎಚ್.ಬಿ. ರಾಜಶೇಖರ್, ವಿ.ಪ್ರದೀಪ್, ಸಿಎಸ್.ಮಹೇಶ್ ಕುಮಾರ್ ಇದ್ದರು.



ಚಾ.ನಗರ ವರ್ತಕರ ಸಂಘದ ಅಧ್ಯಕ್ಷ ಎನ್.ಶಂಕರ್ ಅವರನ್ನು ಅಭಿನಂದಿಸಲಾಯಿತು.


ನಾಳೆಯಿಂದ ಶಿಕ್ಷಕರ ವರ್ಗಾವಣೆ ಕೌನ್ಸೆಲಿಂಗ್

ಚಾಮರಾಜನಗರ: ಶಿಕ್ಷಕರ ವರ್ಗಾವಣೆ ಕೌನ್ಸೆಲಿಂಗ್ ಅನ್ನು ಆ.2 ರಿಂದ 12ರ ವರೆಗೆ ನಗರದ ಜಿಲ್ಲಾಡಳಿತ ಭವನದ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

ವರ್ಗಾವಣೆಗೆ ಶಿಕ್ಷಕರು ಸೇವಾ ದೃಢೀಕರಣ, ಮೂಲ ಪ್ರಮಾಣ ಪತ್ರಗಳೊಂದಿಗೆ ವರ್ಗಾವಣಾ ಕೌನ್ಸೆಲಿಂಗ್‌ಗೆ ಹಾಜರಾಗಬೇಕು. ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರಿಗೆ ಪ್ರತ್ಯೇಕ ಕೌನ್ಸೆಲಿಂಗ್ ನಡೆಯಲಿದ್ದು, ಮಾಹಿತಿಗೆ ದೂ.ಸಂ: 08226–222406 ಮತ್ತು ಮೊ.ಸಂ: 97430 99505 ಅಥವಾ ಮೊ.ಸಂ: 9448978661 ಅನ್ನು ಸಂಪರ್ಕಿಸಬಹುದೆಂದು ಡಿಡಿಪಿಐ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು–ಮೈಸೂರು ಪಾದಯಾತ್ರೆಯಿಂದ ಹಿಂದೆ ಸರಿದ ಜೆಡಿಎಸ್

- ಈ ಪಾದಯಾತ್ರೆಗೆ ನಮ್ಮ ಬೆಂಬಲವೂ ಇಲ್ಲ
- ಖಂಡತುಂಡಾಗಿ ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿಕೆ
- ಪೆನ್‌ಡ್ರೈವ್ ಹಂಚಿದೋರ ಕೂರ್‍ಸಿಕೊಂಡು ಸಭೆ ಮಾಡ್ತೀರಾ....; ಪ್ರೀತಂಗೌಡ ವಿರುದ್ಧ ಪರೋಕ್ಷ ಆಕ್ರೋಶ



ಬೆಂಗಳೂರು, ಜು.31(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಮುಡಾ ಹಾಗೂ ಮಹರ್ಷಿ ವಾಲ್ಮೀಕಿ ನಿಗಮದ ಹಗರಣಗಳನ್ನು ಮುಂದಿಟ್ಟು ಕೊಂಡು ಬೆಂಗಳೂರು–ಮೈಸೂರು ಪಾದಯಾತ್ರೆಗೆ ಮುಂದಾಗಿದ್ದ ಬಿಜೆಪಿ ಮತ್ತು ಜೆಡಿಎಸ್ ನಡುವೆ ಭಿನ್ನಾಭಿಪ್ರಾಯ ತಲೆದೋರಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಎಚ್.ಡಿ.ಕುಮಾರಸ್ವಾಮಿ, ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಬೆಂಗಳೂರು–ಮೈಸೂರು ಪಾದಯಾತ್ರೆ ತೀರ್ಮಾನ ಕೈಗೊಳ್ಳಲಾಗಿದೆ. ಇದರಿಂದ ಯಾವುದೇ ಲಾಭ ಇಲ್ಲ. ಇದಕ್ಕಿಂತ ಕಾನೂನು ಹೋರಾಟ ಮುಖ್ಯ. ರಾಜಕೀಯವೇ ಪ್ರಾಮುಖ್ಯವಲ್ಲ. ಈ ಪಾದಯಾತ್ರೆಗೆ ಜೆಡಿಎಸ್‌ನ ನೈತಿಕ ಬೆಂಬಲವೂ ಇಲ್ಲ ಎಂದು ಕಡ್ಡಿ ಮುರಿದಂತೆ ಹೇಳಿದ್ದಾರೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಕುಟುಂಬ ನಾಶ ಮಾಡಲು ಹೊರಟ ಪ್ರೀತಂಗೌಡನನ್ನು ಸಭೆಯಲ್ಲಿ ಕೂರಿಸಿಕೊಂಡು, ಆ ಸಭೆಗೆ ನನ್ನನ್ನೂ ಕರೆಯಲಾಯಿತು ಎಂದು ಅಸಮಾಧಾನ ಹೊರಹಾಕಿದ್ದಾರೆ.

ಲೋಕಸಭಾ ಚುನಾವಣೆ ವೇಳೆ ಹಾಸನದಲ್ಲಿ ಪೆನ್‌ಡ್ರೈವ್ ಹಂಚಿದೋರು ಯಾರು ಎಂಬುದು ಗೊತ್ತಿರಲಿಲ್ವಾ, ಚುನಾವಣಾ ಮೈತ್ರಿಯೇ ಬೇರೆ, ರಾಜಕೀಯವೇ ಬೇರೆ ಎಂದು ಖಡಕ್ಕಾಗಿ ಮಾತನಾಡಿದ್ದಾರೆ. ಬಿಜೆಪಿ ಪಾದಯಾತ್ರೆಯಲ್ಲಿ ಭಾಗಿಯಾಗಬಾರದು ಎಂಬ ನಿರ್ಧಾರವನ್ನು ಜಿ.ಟಿ.ದೇವೇಗೌಡ ನೇತೃತ್ವದಲ್ಲಿ ನಡೆದ ಜೆಡಿಎಸ್ ಕೋರ್ ಕಮಿಟಿ ಸದಸ್ಯರು ತೆಗೆದುಕೊಂಡಿದ್ದಾರೆ. ಬಿಜೆಪಿ ತನ್ನ ತೀರ್ಮಾನ ತೆಗೆದುಕೊಂಡು ಹೋರಾಟ ಮಾಡುತ್ತಿದೆ. ಪಾದಯಾತ್ರೆಗೆ ಇದು ಸೂಕ್ತ ಸಂದರ್ಭವಲ್ಲ ಅನ್ನೋ ಕಾರಣಕ್ಕೆ ಜೆಡಿಎಸ್ ಹಿಂದೆ ಸರಿದಿದೆ.

ಜನರಿಂದ ಟೀಕೆ ವ್ಯಕ್ತವಾಗುವ ಸಾಧ್ಯತೆ ಇದ್ದು, ನಾವು ಪಾದಯಾತ್ರೆಯಿಂದ ಹಿಂದೆ ಸರಿದಿದ್ದೇವೆ. ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದಿದ್ದಾಗ ಯಾಕೆ ಬೆಂಬಲ ಕೊಡಬೇಕು. ಬೆಂಗಳೂರಿನಿಂದ ಮೈಸೂರು ವರೆಗೂ ನಮ್ಮ (ಜೆಡಿಎಸ್) ಶಕ್ತಿ ಇದೆ. ನಮ್ಮನ್ನು ಪರಿಗಣಿಸದಿದ್ದರೆ ಹೇಗೆ ಎಂದು ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

ಈ ಮೊದಲು ಮುಡಾ ಮತ್ತು ವಾಲ್ಮೀಕಿ ನಿಗಮ ಹಗರಣದ ಆಳ–ಅಗಲವನ್ನು ಜನಸಾಮಾನ್ಯರಿಗೆ ತಲುಪಿಸುವ ಉದ್ದೇಶದಿಂದ ಬಿಜೆಪಿ–ಜೆಡಿಎಸ್ ಜಂಟಿಯಾಗಿ ಬೆಂಗಳೂರು–ಮೈಸೂರು ಪಾದಯಾತ್ರೆ ನಡೆಸಲು ಎರಡೂ ಪಕ್ಷಗಳ ಮುಖಂಡರು ಮುಂದಾಗಿದ್ದರು. ಬೆಂಗಳೂರಿನಲ್ಲಿ ನಿನ್ನೆ ನಡೆದ ಜೆಡಿಎಸ್ ಕೋರ್ ಕಮಿಟಿ ಸಭೆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ್ದ ಪಕ್ಷದ ಮುಖಂಡರಾದ ಜಿ.ಟಿ.ದೇವೇಗೌಡ ಮತ್ತು ನಿಖಿಲ್ ಕುಮಾರಸ್ವಾಮಿ, ರಾಜ್ಯದಾದ್ಯಂತ ಭಾರಿ ಮಳೆಯಾಗುತ್ತಿದ್ದು, ಅನಾಹುತಗಳು ಸಂಭವಿಸುತ್ತಿವೆ. ಮಳೆ ಕಡಿಮೆಯಾದ ನಂತರ ಬಿಜೆಪಿ ಪಾದಯಾತ್ರೆ ಕೈಗೊಳ್ಳಬೇಕು ಎಂದಿದ್ದರು.

ಪಾದಯಾತ್ರೆ ವೇಳೆ ಭಾರಿ ಮಳೆಯಾದರೆ ಪಕ್ಷಗಳ ಕಾರ್ಯಕರ್ತರು ಮತ್ತು ಪಾದಯಾತ್ರೆಯಲ್ಲಿ ಪಾಲ್ಗೊಳ್ಳುವ ಜನರು ಅನಗತ್ಯ ತೊಂದರೆಗಳನ್ನು ಎದುರಿಸಬೇಕಾಗುತ್ತದೆ. ಮಳೆ ಕಡಿಮೆಯಾದ ನಂತರ ಬಿಡದಿಯಿಂದ ಪಾದಯಾತ್ರೆ ಆರಂಭಿಸಬಹುದು. ಪಾದಯಾತ್ರೆ ಕುರಿತು ಪಕ್ಷದ ಸ್ಥಳೀಯ ಮುಖಂಡರ ಸಲಹೆಗಳನ್ನು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮತ್ತು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಚರ್ಚಿಸಲಾಗುವುದು ಎಂದಿದ್ದರು.

ಕೇಂದ್ರ ಸಚಿವರಾಗಿರುವ ಎಚ್.ಡಿ.ಕುಮಾರಸ್ವಾಮಿ ಸಂಸತ್ ಅಧಿವೇಶನದಲ್ಲಿ ಪಾಲ್ಗೊಳ್ಳಬೇಕಿರುವುದರಿಂದ ಅವರಿಲ್ಲದೆ ಪಾದಯಾತ್ರೆ ಯಶಸ್ವಿಯಾಗದು ಎಂಬ ಅಭಿಪ್ರಾಯವನ್ನು ಜಿ.ಟಿ.ದೇವೇಗೌಡ ವ್ಯಕ್ತಪಡಿಸಿದ್ದರು.

ಇತ್ತೀಚಿನ ಈ ಬೆಳವಣಿಗೆಗೂ ಮುನ್ನ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ ಸಮ್ಮುಖದಲ್ಲಿ ಎರಡೂ ಪಕ್ಷಗಳ ಮುಖಂಡರು ಸಭೆ ನಡೆಸಿ, ಆಗಸ್ಟ್ 3ರಿಂದ ಪಾದಯಾತ್ರೆ ಆರಂಭಿಸುವುದಾಗಿ ಜಂಟಿ ಪತ್ರಿಕಾಗೋಷ್ಠಿ ಯಲ್ಲಿ ಘೋಷಣೆ ಮಾಡಿದ್ದರು. ತೀರ್ಮಾನ ಕೈಗೊಂಡ ಎರಡೇ ದಿನದಲ್ಲಿ ಜೆಡಿಎಸ್ ತನ್ನ ನಿರ್ಧಾರದಿಂದ ಹಿಂದೆ ಸರಿದಿದೆ.

ಕೇರಳದ ವಯನಾಡು ಭೂಕುಸಿತದಲ್ಲಿ ಬಲಿಯಾದ ಕನ್ನಡಿಗರ ಕುಟುಂಬಕ್ಕೆ 5 ಲಕ್ಷ ಪರಿಹಾರ



ಮೈಸೂರು, ಜು.31(ಬಿಎಲ್‌ಯು)– ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೀಕರ ಸರಣಿ ಭೂಕುಸಿತದಲ್ಲಿ ಮೃತಪಟ್ಟಿರುವ ಕನ್ನಡಿಗರ ಕುಟುಂಬಗಳಿಗೆ 5 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸದ್ಯ ದೆಹಲಿಯಲ್ಲಿರುವ ಸಿದ್ದರಾಮಯ್ಯ ತಮ್ಮ ಎಕ್ಸ್ ಖಾತೆಯಲ್ಲಿ ಈ ವಿಚಾರ ತಿಳಿಸಿದ್ದು, ಈ ದುರಂತದಲ್ಲಿ ಸಾವಿನ ಸಂಖ್ಯೆ ಏರುತ್ತಲೇ ಇದ್ದು, ಕನ್ನಡಿಗರು ಪ್ರಾಣ ಕಳೆದುಕೊಂಡಿರುವುದು ನೋವುಂಟು ಮಾಡಿದೆ ಎಂದು ಹೇಳಿದ್ದಾರೆ.

ಈಗಾಗಲೇ ರಾಜ್ಯದ ಇಬ್ಬರು ಐಎಎಸ್ ಅಧಿಕಾರಿಗಳು, ಎನ್‌ಡಿಆರ್‌ಎಫ್ ಮತ್ತು ಸೇನಾಪಡೆಯ ತಂಡಗಳು ರಕ್ಷಣಾ ಕಾರ್ಯದಲ್ಲಿ ನಿರತವಾಗಿವೆ. ಇಂದು ರಕ್ಷಣಾ ಕಾರ್ಯದ ಉಸ್ತುವಾರಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನು ವಯನಾಡಿಗೆ ಕಳುಹಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಸಂತ್ರಸ್ತರ ಪ್ರಾಣ ರಕ್ಷಣೆ ನಮ್ಮ ಮೊದಲ ಆದ್ಯತೆಯಾಗಿದ್ದು, ಸಂಕಷ್ಟದಲ್ಲಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರ್ನಾಟಕಕ್ಕೆ ಕರೆತರಲು ನಮ್ಮ ಸರ್ಕಾರ ಶಕ್ತಿ ಮೀರಿ ಶ್ರಮಿಸುತ್ತಿದೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ. ದೆಹಲಿಯಲ್ಲಿರುವ ಸಿದ್ದರಾಮಯ್ಯ, ಸಂತೋಷ್ ಲಾಡ್‌ಗೆ ದೂರವಾಣಿ ಕರೆ ಮಾಡಿ ತಕ್ಷಣವೇ ವಯನಾಡಿಗೆ ತೆರಳುವಂತೆ ಸೂಚಿಸಿದ್ದಾರೆ.



ಪ್ರವಾಹ ಪೀಡಿತ ಪ್ರದೇಶದಲ್ಲಿ ಪರಿಹಾರ ಕಾರ್ಯಗಳು, ಸಂತ್ರಸ್ತರ ರಕ್ಷಣೆ ಸೇರಿದಂತೆ ಎಲ್ಲಾ ರೀತಿಯ ನೆರವು ನೀಡಲು ಕೇರಳ ಸರ್ಕಾರದ ಜೊತೆ ಸಂಪರ್ಕ ಸಾಧಿಸಬೇಕು. ಈ ಮೂಲಕ ಜನರ ಜೀವ ಮತ್ತು ಆರೋಗ್ಯ ರಕ್ಷಣೆಗೆ ನೆರವಾಗುವಂತೆ ಸಲಹೆ ನೀಡಿದ್ದಾರೆ. ಸಂಜೆ ವೇಳೆಗೆ ಸಂತೋಷ್ ಲಾಡ್ ವಯನಾಡಿಗೆ ತೆರಳಿದ್ದಾರೆ. ಅಲ್ಲಿ ಕೇರಳ ಮುಖ್ಯಮಂತ್ರಿ ಕಚೇರಿ ಜೊತೆ ನಿರಂತರ ಸಂಪರ್ಕದಲ್ಲಿದ್ದು, ದುರಂತಕ್ಕೆ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ತುರ್ತು ಮತ್ತು ಕ್ಷಿಪ್ರ ಕ್ರಮ ಕೈಗೊಳ್ಳುವ ಕಾರ್ಯದಲ್ಲಿ ಸಂತೋಷ್ ಲಾಡ್ ಮಗ್ನರಾಗಲಿದ್ದಾರೆ.

ಅಗತ್ಯ ನೆರವು ನೀಡುವುದಾಗಿ ಪಿಣರಾಯಿ ವಿಜಯನ್‌ಗೆ ಭರವಸೆ

ಭೂಕುಸಿತದಿಂದ ತತ್ತರಿಸಿರುವ ಕೇರಳ ರಾಜ್ಯಕ್ಕೆ ಅಗತ್ಯ ನೆರವು ನೀಡುವುದಾಗಿ ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಅವರಿಗೆ ದೂರವಾಣಿ ಕರೆ ಮಾಡಿ ಮಾತನಾಡಿರುವ ಸಿದ್ದರಾಮಯ್ಯ, ಭೂಕುಸಿತಕ್ಕೆ ನೂರಾರು ಜನರು ಬಲಿಯಾಗಿರುವ ಬಗ್ಗೆ ಆಘಾತ ವ್ಯಕ್ತಪಡಿಸಿದ್ದಾರೆ. ಪರಿಹಾರ ಕಾರ್ಯದಲ್ಲಿ ನಮ್ಮ ಸರ್ಕಾರ ನಿಮ್ಮೊಂದಿಗೆ ಕೈ ಜೋಡಿಸಲಿದೆ. ಅಗತ್ಯ ನೆರವು ಒದಗಿಸಲು ಸಿದ್ಧವಿದೆ. ರಕ್ಷಣಾ ತಂಡಗಳು ಮತ್ತು ಸಾಮಗ್ರಿಗಳನ್ನು ಕಳುಹಿಸುವುದಾಗಿ ಸಿದ್ದರಾಮಯ್ಯ ಇದೇ ವೇಳೆ ಪಿಣರಾಯಿ ವಿಜಯನ್ ಅವರಿಗೆ ತಿಳಿಸಿದರು.


ಮೈಸೂರು ಮಿತ್ರ

ದಿ. ಧ್ರುವನಾರಾಯಣ್ ಜನ್ಮದಿನದ ಅಂಗವಾಗಿ ಬೃಹತ್ ಉದ್ಯೋಗ ಮೇಳ

ನಿಮ್ಮ ಉದ್ಯೋಗವನ್ನು ಹೊರ ರಾಜ್ಯದವರು ಗಿಟ್ಟಿಸಿಕೊಳ್ಳುತ್ತಿದ್ದಾರೆ

ನಂಜನಗೂಡು, ಜು.31– ನಿಮ್ಮ ಉದ್ಯೋಗವಕಾಶಗಳನ್ನು ಹೊರ ರಾಜ್ಯದವರು ಗಿಟ್ಟಿಸಿಕೊಳ್ಳುತ್ತಿದ್ದಾರೆ. ಸ್ಥಳೀಯ ಯುವಕರು ಸರ್ಕಾರಿ ಹುದ್ದೆ ಅಥವಾ ತಮ್ಮ ವಿದ್ಯೆಗೆ ತಕ್ಕ ನೌಕರಿ ಬೇಕೆಂಬ ಮನಸ್ಥಿತಿ ಬದಲಾಯಿಸಿಕೊಂಡು ಸ್ಥಳೀಯವಾಗಿ ಉದ್ಯೋಗ ಸೃಷ್ಟಿ ಮಾಡಿಕೊಳ್ಳಬೇಕು ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದರು.

ನಗರದ ಜೆಎಸ್ಎಸ್ ಮಂಗಳ ಮಂಟಪದಲ್ಲಿ ಬುಧವಾರ ಮಾಜಿ ಸಂಸದ ದಿ.ಧ್ರುವನಾರಾಯಣ ಅವರ 63 ನೇ ಜನ್ಮದಿನದ ಅಂಗವಾಗಿ ತಾಲೂಕು ಕಾಂಗ್ರೆಸ್ ಘಟಕ ಆಯೋಜಿಸಿದ್ದ ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ನಂಜನಗೂಡಿನಲ್ಲಿ ಮಾಜಿ ಸಂಸದ ದಿ.ಧ್ರುವನಾರಾಯಣ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಉದ್ಯೋಗ ಮೇಳದಲ್ಲಿ ಮಾಜಿ ಸಂಸದ ಡಿ.ಕೆ. ಸುರೇಶ್, ಶಾಸಕರಾದ ಯತೀಂದ್ರ, ದರ್ಶನ್ ಉದ್ಯೋಗ ಪತ್ರ ವಿತರಿಸಿದರು.

ದಿ.ಧ್ರುವನಾರಾಯಣ ಸ್ಥಳೀಯ ಯುವಕರಿಗೆ ಉದ್ಯೋಗ ದೊರಕಿಸಿ, ಭವಿಷ್ಯ ರೂಪಿಸುವ ಕನಸನ್ನು ಹೊಂದಿದ್ದರು, ಚಾಮರಾಜನಗರದಲ್ಲಿ ಕೈಗಾರಿಕಾ ಕೇಂದ್ರ ಸ್ಥಾಪಿಸುವ ಮೂಲಕ ಹಿಂದುಳಿದ ಜಿಲ್ಲೆಯ ಯುವಕರಿಗೆ ನೆರವಾಗಿದ್ದರು, ಅವರ ಆಶಯದಂತೆ ಯುವಕರಿಗೆ ಉದ್ಯೋಗ ದೊರಕಿಸುವ ಸಲುವಾಗಿ ನೂರಕ್ಕೂ ಹೆಚ್ಚು ಕಂಪನಿಗಳನ್ನು ಕರೆಸಿ, ಅಧಿಕಾರಿಗಳ ಸಮ್ಮುಖದಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ, ಉದ್ಯೋಗ ಆಕಾಂಕ್ಷಿಗಳ ವಿದ್ಯೆ, ಕೌಶಲಕ್ಕೆ ತಕ್ಕಂತೆ ಉದ್ಯೋಗಗಳು ದೊರಕಿವೆ. ಈ ಮೇಳದಲ್ಲಿ 600ಕ್ಕೂ ಹೆಚ್ಚು ಮಂದಿಗೆ ಉದ್ಯೋಗಾವಕಾಶ ದೊರಕಿದೆ. ದಿ.ಧ್ರುವನಾರಾಯಣ ಅವರಿಗೆ ಸಾಟಿಯಾದ ರಾಜಕಾರಣಿ ಇಲ್ಲ. ಅವರಿಗೆ ಅವರೇ ಸಾಟಿ, ಅವರ ಕನಸುಗಳನ್ನು ಅವರ ಹಾದಿಯಲ್ಲೇ ನಡೆಯುವ ಮೂಲಕ ಅವರ ಮಗ ದರ್ಶನ್ ಧ್ರುವನಾರಾಯಣ ಸಾಕಾರಗೊಳಿಸುತ್ತಿದ್ದಾರೆ ಎಂದು ಹೇಳಿದರು.

ಶಾಸಕ ಯತೀಂದ್ರ ಮಾತನಾಡಿ, ಕೇಂದ್ರ ಸರ್ಕಾರ ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಹೇಳಿತ್ತು, ಆದರೆ ದೇಶದ ಕೋಟ್ಯಾಂತರ ಮಂದಿ ಯುವಕರು ಉದ್ಯೋಗ ಸಿಗದೆ ನಿರುದ್ಯೋಗಿಗಳಾಗಿದ್ದಾರೆ, ಯುವಕರಿಗೆ ಸ್ಫೂರ್ತಿಯಾಗಿದ್ದ ಧ್ರುವನಾರಾಯಣ 2 ಬಾರಿ ಸಂಸದರಾಗಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ನಡೆಸಿ ಜನರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿದ್ದಾರೆ, ಅವರ ಮಗ ಶಾಸಕ ದರ್ಶನ್ ಸಹ ಜನರೊಂದಿಗೆ ಬೆರೆತು ಕೆಲಸ ಮಾಡುವ ಮೂಲಕ ತಂದೆಯ ಹಾದಿಯಲ್ಲಿ ನಡೆದಿದ್ದಾರೆ, ಯುವಕರಿಗೆ ಉದ್ಯೋಗ ದೊರಕಿಸುವ ಈ ಪ್ರಯತ್ನ ಯಶಸ್ವಿಯಾಗಿದೆ ಎಂದು ಹೇಳಿದರು.

ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, ತಂದೆಯವರು ಚಾಮರಾಜನಗರ ಜಿಲ್ಲೆಯಲ್ಲಿ ನಿರುದ್ಯೋಗ ಹೋಗಲಾಡಿಸುವ ಉದ್ದೇಶದಿಂದ ಕೈಗಾರಿಕಾ ಪ್ರದೇಶ ಸ್ಥಾಪಿಸಿ ಹಲವಾರು ಕೈಗಾರಿಕೆಗಳು ಸ್ಥಾಪನೆಯಾಗುವಂತೆ ಮಾಡಿದ್ದಾರೆ. ಅಲ್ಲದೆ ನನ್ನ ತಂದೆ ಬದುಕಿದ್ದಾಗ 2 ಬಾರಿ ಉದ್ಯೋಗ ಮೇಳವನ್ನು ನಡೆಸಿ, ಯುವಕರಿಗೆ ಉದ್ಯೋಗ ದೊರಕಿಸುವ ಪ್ರಯತ್ನ ನಡೆಸಿದ್ದರು, ಅವರ ಆಶಯದಂತೆ ಅವರ ಹುಟ್ಟುಹಬ್ಬದ ಪ್ರಯುಕ್ತ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಸ್ಥಳೀಯವಾಗಿ ನಮ್ಮ ಯುವಕರಿಗೆ ಹೆಚ್ಚಿನ ಉದ್ಯೋಗ ದೊರಕಿಸುವ ನಿಟ್ಟಿನಲ್ಲಿ ಬದ್ಧನಾಗಿದ್ದೇನೆ ಎಂದು ಹೇಳಿದರು.

ಸಮಾರಂಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಬಿ.ಜೆ.ವಿಜಯ್‌ಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ವಿಧಾನಸಭಾ ಉಸ್ತುವಾರಿ ಶ್ರೀಕಂಠು, ಹಿರೇಹಳ್ಳಿ ಸೋಮೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಮಹೇಶ್, ಸಿ.ಎಂ.ಶಂಕರ್, ಶ್ರೀಕಂಠನಾಯಕ, ವಾಲ್ಮೀಕಿ ನಿಗಮ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ಮುಖಂಡರಾದ ಕಾವೇರಪ್ಪ, ಎನ್.ಎಂ. ಮಂಜುನಾಥ್, ವಿಜಯ್‌ಕುಮಾರ್, ಶ್ರೀನಿವಾಸಮೂರ್ತಿ, ದೊರೆಸ್ವಾಮಿನಾಯಕ, ಮಾಜಿ ನಗರಸಭಾ ಉಪಾಧ್ಯಕ್ಷ ದೊರೆಸ್ವಾಮಿ, ಕೆಪಿಸಿಸಿ ಸದಸ್ಯ ಅಕ್ಬರ್ ಅಲಿಂ, ಧೀರೇನ್ ಧ್ರುವನಾರಾಯಣ್ ಸೇರಿದಂತೆ ಇತರರಿದ್ದರು.

ರಕ್ತದಾನ ಮಾಡಿ, ಜೀವ ಉಳಿಸಿ; ಡಿ.ಕೆ.ಸುರೇಶ್

ನಂಜನಗೂಡು, ಜು.31– ಕ್ಷೇತ್ರದ ಜನರ ಆರೋಗ್ಯ ರಕ್ಷಣೆಯ ಜೊತೆಗೆ ಅಪಘಾತಕ್ಕೆ ಒಳಗಾದವರ ಜೀವ ಉಳಿಸಲು ಅಗತ್ಯವಾದ ರಕ್ತವನ್ನು ದಾನ ಮಾಡುವ ಮೂಲಕ ಸಂಸ್ಥೆ ಹಾಗೂ ಯುವಕರು ಧ್ರುವನಾರಾಯಣ ಅವರನ್ನು ಸ್ಮರಿಸುತ್ತಿರುವುದು ಹೆಮ್ಮೆ ತಂದಿದೆ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದರು.

ನಗರದ ಮಹದೇಶ್ವರ ಸಭಾಂಗಣದಲ್ಲಿ ಲಯನ್ಸ್ ಕ್ಲಬ್ ಹಾಗೂ ಧ್ರುವನಾರಾಯಣ ಅಭಿಮಾನಿಗಳು ಬುಧವಾರ ಆಯೋಜಿಸಿದ್ದ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಸದಾ ಜನರ ಒಡನಾಟ ಹೊಂದಿ ಜನರ ಕಷ್ಟ–ಸುಖಗಳಿಗೆ ಸ್ಪಂದಿಸುತ್ತಿದ್ದ ಮಾಜಿ ಸಂಸದ ಧ್ರುವನಾರಾಯಣ ಅವರ ಹುಟ್ಟುಹಬ್ಬವನ್ನು ಲಯನ್ಸ್ ಸಂಸ್ಥೆ ಹಾಗೂ ಅಭಿಮಾನಿಗಳು ಒಟ್ಟುಗೂಡಿ, ಸೇವಾಕಾರ್ಯಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿರುವುದು ಸಂತಸ ತಂದಿದೆ ಎಂದರು.

ಎನ್.ಎಂ.ಮಂಜುನಾಥ್ ಮಾತನಾಡಿ, ಶಿಬಿರದಲ್ಲಿ 175 ಮಂದಿ ಆರೋಗ್ಯ ತಪಾಸಣೆ ಮಾಡಿಸಿಕೊಂಡಿದ್ದಾರೆ. 150 ಮಂದಿ ಇಸಿಜಿ ಮಾಡಿಸಿದ್ದಾರೆ, 42 ಮಂದಿ ಯುವಕರು ರಕ್ತದಾನ ಮಾಡುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ್ದಾರೆ, ಅಲ್ಲದೆ ಕಣ್ಣಿನ ಶಸ್ತ್ರಚಿಕಿತ್ಸೆ ಅಗತ್ಯವಿದ್ದ 37 ರೋಗಿಗಳನ್ನು ಉಚಿತವಾಗಿ ಕೊಯಮತ್ತೂರಿನ ಅರವಿಂದ ಕಣ್ಣಿನ ಆಸ್ಪತ್ರೆಗೆ ಕಳುಹಿಸಿಕೊಡಲಾಗಿದೆ, ಶಸ್ತ್ರ ಚಿಕಿತ್ಸೆಗೆ ಒಳಗಾದ ರೋಗಿಗಳಿಗೆ ಊಟ, ವಸತಿ ಸೌಕರ್ಯ ಕಲ್ಪಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಯತೀಂದ್ರ, ದರ್ಶನ್ ಧ್ರುವನಾರಾಯಣ, ಎಸ್.ಸಿ.ಬಸವರಾಜು, ಬಿ.ಜೆ.ವಿಜಯ್ ಕುಮಾರ್, ಲಯನ್ಸ್ ಸಂಸ್ಥೆ ಅಧ್ಯಕ್ಷ ಮಹದೇವ, ಉಮೇಶ್, ಮುಖಂಡರಾದ ವಿಜಯ್‌ಕುಮಾರ್, ಶ್ರೀನಿವಾಸ ಮೂರ್ತಿ, ಮುದ್ದುಮಾದಶೆಟ್ಟಿ, ನಂಜುಂಡಸ್ವಾಮಿ, ಉಪಸ್ಥಿತರಿದ್ದರು.



ನಂಜನಗೂಡಿನ ಮಹದೇಶ್ವರ ಸಭಾಂಗಣದಲ್ಲಿ ಲಯನ್ಸ್ ಕ್ಲಬ್ ಹಾಗೂ ಧ್ರುವನಾರಾಯಣ ಅಭಿಮಾನಿಗಳು ಆಯೋಜಿಸಿದ್ದ ರಕ್ತದಾನ ಶಿಬಿರವನ್ನು ಮಾಜಿ ಸಂಸದ ಡಿ.ಕೆ.ಸುರೇಶ್ ಉದ್ಘಾಟಿಸಿದರು. ಯತೀಂದ್ರ, ದರ್ಶನ್ ಧ್ರುವನಾರಾಯಣ ಇದ್ದಾರೆ.

ಸಹಕಾರ ಸಂಘದ ಹೊಸ ಷೇರುದಾರ ರೈತರಿಗೂ ಸಾಲ ಸೌಲಭ್ಯ

ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ನಿರ್ಧಾರ

ತಿ.ನರಸೀಪುರ, ಜು.31 –ಸಹಕಾರ ಸಂಘಕ್ಕೆ ಹೊಸದಾಗಿ ಷೇರುದಾರರಾಗಿರುವ ರೈತರಿಗೆ ಸಾಲ ನೀಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ನೆರಗ್ಯಾತನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎನ್.ಎಂ.ಜಯಪ್ಪ ಹೇಳಿದರು.

ನೆರಗ್ಯಾತನಹಳ್ಳಿ ಗ್ರಾಮದ ಸಹಕಾರ ಸಂಘದ ಆವರಣದಲ್ಲಿ ಮಂಗಳವಾರ ನಡೆದ 2023–24 ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ತಿ.ನರಸೀಪುರ ತಾಲೂಕು ನೆರಗ್ಯಾತನಹಳ್ಳಿ ಗ್ರಾಮದಲ್ಲಿ ನಡೆದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಸಂಘದ ಅಧ್ಯಕ್ಷ ಎನ್.ಎಂ.ಜಯಪ್ಪ ಮಾತನಾಡಿದರು.

ಗ್ರಾಮದ ಸಹಕಾರ ಸಂಘದ ಸದಸ್ಯರ ಬಹುದಿನದ ಬೇಡಿಕೆಯಂತೆ ಹೊಸ ಸದಸ್ಯರಿಗೂ ಸಾಲ ಕೊಡಲು ನಿರ್ಧರಿಸಲಾಗಿದ್ದು ಹೊಸ ಖಾತೆದಾರರ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡಲಾಗಿದ್ದು, ಪಟ್ಟಿಯು ಮುಂದಿನವಾರ ಅನುಮೋದನೆಯಾಗಿ ಬರುವ ಸಾಧ್ಯತೆ ಇದ್ದು ನಂತರ ಸಾಲ ಸೌಲಭ್ಯ ಕಲ್ಪಿಸಿಕೊಡಲಾಗುತ್ತದೆ ಎಂದರು.

ಸಂಘದಿಂದ ಸಾಲ ಪಡೆದ ಸದಸ್ಯರು ಸಕಾಲಕ್ಕೆ ಸಾಲ ಮರುಪಾವತಿಸುವ ಮೂಲಕ ಸಂಘದ ಅಭಿವೃದ್ಧಿಗೆ ಸಹಕಾರ ನೀಡಬೇಕು, ಫಲಾನುಭವಿಗಳು ಸುಸ್ತಿದಾರರಾದಾಗ ಅನಿವಾರ್ಯವಾಗಿ ಸಂಘದ ಖಾತೆಯಿಂದ ಸಾಲದ ಮೊತ್ತವನ್ನು ಪಾವತಿ ಮಾಡಲೇ ಬೇಕಾಗುತ್ತದೆ. ಸುಸ್ತಿದಾರರ ಸಾಲದ ಮೊತ್ತವನ್ನು ಸಂಘದ ಖಾತೆಯಿಂದ ಭರಿಸಿದಾಗ ಸಂಘ ನಷ್ಟ ಅನುಭವಿಸುವ ಸಾಧ್ಯತೆ ಇರುತ್ತದೆ.ಅಲ್ಲದೇ ಸುಸ್ತಿದಾರರ ಸಾಲ ಬಾಕಿ ಉಳಿದರೆ ಸಂಘದ ಮತ್ತಿತರ ಸದಸ್ಯರಿಗೂ ಯಾವುದೇ ಸಾಲ ಸೌಲಭ್ಯ ನೀಡಲು ಸಾಧ್ಯವಿಲ್ಲ, ಹಾಗಾಗಿ ಖಾತೆದಾರು ಸುಸ್ತಿದಾರರಾಗದೇ ಸಾಲ ಮರುಪಾವತಿಸಿ ಎಂದು ಮನವಿ ಮಾಡಿದರು.

ಮುಂದುವರೆದು ಮಾತನಾಡಿದ ಅವರು, ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಗ್ರಾಮೀಣ ಪ್ರದೇಶದ ಜನರಿಗೆ ತುಂಬಾ ಅನುಕೂಲವಾಗಿದೆ. ಸಾಲ ಪಡೆದುಕೊಂಡು ಕೃಷಿ ಚಟುವಟಿಕೆಗೆ ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗಬಹುದು ಎಂದರು.

ಸಂಘದಿಂದ ಸಾಲ ಪಡೆದುಕೊಂಡು ಹೈನುಗಾರಿಕೆ ಹಾಗೂ ನೀರಾವರಿ ಸೇರಿದಂತೆ ಇನ್ನಿತರ ಚಟುವಟಿಕೆಗೆ ಹಣ ಬಳಸಿಕೊಂಡು ಆರ್ಥಿಕವಾಗಿ ಉನ್ನತಿ ಸಾಧಿಸಬೇಕೆಂದು ಸಲಹೆ ನೀಡಿದರು.

ಸಂಘದ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎನ್.ಎಸ್. ಧನಂಜಯ್ ವಾರ್ಷಿಕ ವರದಿ ಮಂಡಿಸಿ ಸರ್ವ ಸದಸ್ಯರ ಸಹಕಾರದಿಂದ ಸಂಘವು ಪ್ರಸಕ್ತ ಸಾಲಿನಲ್ಲಿ 10.70 ಲಕ್ಷ ರೂ.ಗಳ ನಿವ್ವಳ ಲಾಭಗಳಿಸಿ ಯಶಸ್ವಿಯಾಗಿ ಮುನ್ನಡೆ ಸಾಧಿಸಿದೆ ಎಂದರು.

ಈ ವೇಳೆ ಸಂಘದ ಉಪಾಧ್ಯಕ್ಷ ಸಿದ್ದರಾಜು, ನಿರ್ದೇಶಕರಾದ ದುಂಡಪ್ಪ, ಬಸವರಾಜಪ್ಪ, ನಾಗೇಶ, ಬಸವರಾಜು, ಎಂ.ಪುಟ್ಟಸ್ವಾಮಿ, ಎಂ.ಶಿವರಾಜು, ಡಿ. ಮಂಟೇಸ್ವಾಮಿ, ಶಿವಕುಮಾರ್, ಕೆಂಪಮ್ಮಣ್ಣಿ, ಸುಂದ್ರಮ್ಮ, ಎಂಸಿಡಿಸಿಸಿ ಬ್ಯಾಂಕ್ ಪ್ರತಿನಿಧಿ ಎನ್.ಎಸ್.ಶೇಖರ್, ಸಿಬ್ಬಂದಿ ಎನ್.ಮಮತ, ಎಂ.ಮನು, ಡೈರಿ ಗುರುಮೂರ್ತಿ ಸೇರಿದಂತೆ ಗ್ರಾಮಸ್ಥರು, ಷೇರುದಾರರು, ಯಜಮಾನರು ಹಾಜರಿದ್ದರು.

ಧ್ರುವನಾರಾಯಣ್ ನನಗೆ ರಾಜಕೀಯ ಗುರು



ಆರ್.ಧ್ರುವನಾರಾಯಣ್ ಅಭಿಮಾನಿ ಬಳಗದ ವತಿಯಿಂದ ಸರಗೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ 1200 ಮರಣೋತ್ತರ ಪರೀಕ್ಷೆ ನಡೆಸಿ ಸೇವೆ ಸಲ್ಲಿಸುತ್ತಿರುವ ರಾಜಮ್ಮ ಅವರನ್ನು ಶಾಸಕರ ಜೊತೆಗೂಡಿ ಸನ್ಮಾನಿಸಲಾಯಿತು.

ಸರಗೂರು, ಜು.31– ನನಗೆ ರಾಜಕೀಯ ಗುರುವಾಗಿ ಮಾರ್ಗದರ್ಶನ ನೀಡಿದವರು ಆರ್.ಧ್ರುವನಾರಾಯಣ್‌ರವರು, ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ದಿ.ಆರ್.ಧ್ರುವನಾರಾಯಣ್ ಅಭಿಮಾನಿ ಬಳಗದ ವತಿಯಿಂದ ಪಟ್ಟಣ ಪಂಚಾಯಿತಿ ಮುಂಭಾಗ ಆರ್.ಧ್ರುವನಾರಾಯಣ್ ಹುಟ್ಟುಹಬ್ಬದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿನ ಬಡತನದಲ್ಲಿರುವ ಕುಟುಂಬವು ಆರ್ಥಿಕವಾಗಿ ಮುಂದೆ ಬರಬೇಕು. ಹೆಚ್.ಡಿ. ಕೋಟೆ ಮತ್ತು ಸರಗೂರು ತಾಲೂಕಿನ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಬಹಳಷ್ಟು ಶ್ರಮಿಸಿದ್ದಾರೆ. ಅವರ ಆಶೀರ್ವಾದದಿಂದಲೇ ಎರಡನೇ ಬಾರಿ ಶಾಸಕನಾಗಿದ್ದೇನೆ ಎಂದರು.

ಎರಡು ಕ್ಷೇತ್ರಕ್ಕೆ ಹೆಚ್ಚು ಅನುದಾನ ತಂದು ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ. ಇದೀಗ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವುದರಿಂದ ಈ ಭಾಗದ ಅಭಿವೃದ್ಧಿಗೆ ಅನುಕೂಲವಾಗಲಿದೆ. ಧ್ರುವನಾರಾಯಣ್ ಅವರು ಸರಗೂರು ಪಟ್ಟಣವನ್ನು ಮಾದರಿ ಪಟ್ಟಣ ಮಾಡುವ ಕನಸು ಕಂಡಿದ್ದರು. ಸೋಲು–ಗೆಲುವನ್ನು ಸಮಾನತೆಯಿಂದ ಸ್ವೀಕರಿಸಿದವರು. ಸರಳ ಸಜ್ಜನಿಕೆಗೆ ಹೆಸರುವಾಸಿಯಾದವರು. ಇವರ ಹುಟ್ಟುಹಬ್ಬವನ್ನು ಇವರ ಅಭಿಮಾನಿ ಬಳಗ ಉತ್ತಮ ಸೇವಾ ಕಾರ್ಯ ಮಾಡುವ ಮೂಲಕ ನಡೆಸಿಕೊಂಡು ಬರುತ್ತಿದ್ದಾರೆ. ಅವರಿಗೆ ಅಭಿನಂದನೆಗಳು ಎಂದು ತಿಳಿಸಿದರು.

ಆರ್.ಧ್ರುವನಾರಾಯಣ್ ಅಭಿಮಾನಿ ಬಳಗದ ಅಧ್ಯಕ್ಷ ಬೀರ್ವಾಳ್ ಚಿಕ್ಕಣ್ಣ, ಗೌರವಾಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ, ಉಪಾಧ್ಯಕ್ಷ ಸುಭಾನ್, ಕಾರ್ಯದರ್ಶಿ ಚಲುವರಾಜು, ಖಜಾಂಚಿ ಐ.ಸಿ.ನಿಂಗರಾಜು, ನಿರ್ದೇಶಕರಾದ ದೇವಲಾಪುರ ಸಿದ್ದರಾಜು, ಬೀರ್ವಾಳ್ ಬಸವರಾಜು, ಗುರುಸ್ವಾಮಿ, ಚಿನ್ನಸ್ವಾಮಿ, ಚಿಕ್ಕವೀರನಾಯಕ, ಶ್ರೀನಿವಾಸ್, ಪ್ರಕಾಶ್, ಬೆಟ್ಟಸ್ವಾಮಿ, ಸಿದ್ದರಾಜು, ಶಿವಶಂಕರನ್, ಪುಟ್ಟಸ್ವಾಮಿ, ಸರಗೂರು ಬ್ಲಾಕ್ ಅಧ್ಯಕ್ಷ ಮನುಗನಹಳ್ಳಿ ಮಾದಪ್ಪ, ಕಾಂಗ್ರೆಸ್ ಹಿರಿಯ ಮುಖಂಡರಾದ ಬಿ.ಸಿ.ಬಸಪ್ಪ, ಶಂಭುಲಿಂಗನಾಯಕ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪಿ.ರವಿ, ತಾಲೂಕು ಆದಿ ಕರ್ನಾಟಕ ಮಹಾಸಭಾ ಅಧ್ಯಕ್ಷ ಶಿವಣ್ಣ, ಬಸವರಾಜು, ದಡದಹಳ್ಳಿ ಮಹೇಶ್, ಜಯಕುಮಾರ್, ನಿಜಪ್ಪ, ಸತೀಶ್‌ಗೌಡ, ಪ್ರದೀಪ್, ಗ್ರಾಮೀಣ ಮಹೇಶ್, ಆದನೂರು ರಾಜೇಶ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಬಿ.ಸಿ.ರಾಜು, ಹುಣಸಹಳ್ಳಿ ನಾಗರಾಜು ಉಪಸ್ಥಿತರಿದ್ದರು.

ಆರ್.ಧ್ರುವನಾರಾಯಣ್ ಅಭಿಮಾನಿ ಬಳಗದ ವತಿಯಿಂದ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ 1200 ಮರಣೋತ್ತರ ಪರೀಕ್ಷೆ ನಡೆಸಿ ಸೇವೆ ಸಲ್ಲಿಸುತ್ತಿರುವ ರಾಜಮ್ಮ ಅವರನ್ನು ಶಾಸಕರ ಜೊತೆಗೂಡಿ ಸನ್ಮಾನಿಸಲಾಯಿತು.

ಸೋಮನಾಥಪುರ ಗ್ರಾಪಂಗೆ ಎಸ್. ರಾಜಣ್ಣ ಅಧ್ಯಕ್ಷ



ತಿ.ನರಸೀಪುರ ತಾಲೂಕು ಸೋಮನಾಥಪುರ ಗ್ರಾಪಂ ನೂತನ ಅಧ್ಯಕ್ಷರಾಗಿ ಎಸ್.ರಾಜಣ್ಣ ಅವಿರೋಧವಾಗಿ ಆಯ್ಕೆಯಾದರು.

ತಿ.ನರಸೀಪುರ, ಜು.31– ತಾಲೂಕಿನ ಸೋಮನಾಥಪುರ ಗ್ರಾಮ ಪಂಚಾಯ್ತಿ ಅಧ್ಯಕ್ಷರಾಗಿ ಕಗ್ಗಲೀಪುರ ಗ್ರಾಮದ ಎಸ್. ರಾಜಣ್ಣ ಎರಡನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದರು.

ಆಂತರಿಕ ಒಪ್ಪಂದದಂತೆ ತಮ್ಮ 10 ತಿಂಗಳ ಅವಧಿ ಪೂರೈಸಿ ಅಧ್ಯಕ್ಷ ಸ್ಥಾನಕ್ಕೆ ಕೆ.ಪಿ.ಪುಟ್ಟಸ್ವಾಮಿ ರಾಜೀನಾಮೆ ಸಲ್ಲಿಸಿದ್ದರಿಂದ ತೆರವಾದ ಸ್ಥಾನಕ್ಕೆ ಪಂಚಾಯ್ತಿ ಸಭಾಂಗಣದಲ್ಲಿ ನಡೆದ ಚುನಾವಣೆಯಲ್ಲಿ ಎಸ್. ರಾಜಣ್ಣ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವರ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ನೀರಾವರಿ ಇಲಾಖೆಯ ಚೆಂಗಪ್ಪ ಪ್ರಕಟಿಸಿದರು. ಅಧ್ಯಕ್ಷರ ಅವಿರೋಧ ಆಯ್ಕೆ ಪ್ರಕಟಗೊಳ್ಳುತ್ತಿದ್ದಂತೆ ಪಂಚಾಯ್ತಿ ಮುಂಭಾಗ ನೆರೆದಿದ್ದ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಉಪಾಧ್ಯಕ್ಷೆ ಗೀತಾ, ನಿಕಟಪೂರ್ವ ಅಧ್ಯಕ್ಷ ಕೆ.ಪಿ.ಪುಟ್ಟಸ್ವಾಮಿ, ಸದಸ್ಯರಾದ ಗೌರಮ್ಮ, ಎಸ್.ಕಾಂತರಾಜು, ಸುಂದ್ರಮ್ಮ, ಹೇಮಾವತಿ, ಪಿ.ಮಂಜೇಶ್ ಗೌಡ, ಅರ್ಚನ, ಪುಟ್ಟಸಿದ್ದಮ್ಮ, ಸುವರ್ಣ, ಗಿರೀಶ್ ಹಾಗೂ ಎಸ್.ಸಿದ್ದಪ್ಪ ಚುನಾವಣಾ ಸಭೆಗೆ ಹಾಜರಾಗಿ ನೂತನ ಅಧ್ಯಕ್ಷರ ಆಯ್ಕೆಗೆ ಅನುಮೋದನೆ ನೀಡಿದರೆ ಸದಸ್ಯೆ ನಾಗರತ್ನಮ್ಮ ಗೈರಾಗಿದ್ದರು.

ಈ ವೇಳೆ ನೂತನ ಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ಎಪಿಎಂಸಿ ಮಾಜಿ ಅಧ್ಯಕ್ಷ ರಾಜಣ್ಣ, ಪಂಚಾಯ್ತಿಯ ಎಲ್ಲಾ ಸದಸ್ಯರಲ್ಲಿ ಸಾಮರಸ್ಯ ಇರುವುದರಿಂದ ಅವಿರೋಧ ಆಯ್ಕೆ ಮಾಡಲಾಗಿದೆ. ಹಾಗಾಗಿ ಎಲ್ಲಾ ಸದಸ್ಯರು, ಮುಖಂಡರು ನೂತನ ಅಧ್ಯಕ್ಷರಿಗೆ ಪಂಚಾಯ್ತಿ ಅಭಿವೃದ್ಧಿಪಡಿಸಲು ಸಹಕರಿಸಬೇಕು.ಪಂಚಾಯ್ತಿ ವ್ಯಾಪ್ತಿಯ ಎಲ್ಲ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು ಅಧ್ಯಕ್ಷರು ಕಾರ್ಯ ನಿರ್ವಹಿಸಬೇಕೆಂದು ಸಲಹೆ ನೀಡಿದರು. ಎಸ್.ರಾಜಣ್ಣ ಮಾತನಾಡಿ, ಪಿಕಾರ್ಡ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡರ ಮಾರ್ಗದರ್ಶನದಲ್ಲಿ ಮುಂಬರುವ ದಿನಗಳಲ್ಲಿ ಪಂಚಾಯ್ತಿಯ ಅಭಿವೃದ್ಧಿಗೆ ಬೇಕಾದ ಸಲಹೆ ಸೂಚನೆ ಪಡೆಯಲಾಗುತ್ತದೆ ಎಂದರು.

ಈ ವೇಳೆ ಜಿಪಂ ಮಾಜಿ ಸದಸ್ಯ ಜಯಪಾಲ್ ಭರಣಿ, ಪಂಚಾಯ್ತಿ ಮಾಜಿ ಅಧ್ಯಕ್ಷ ಅಶೋಕ್, ರಾಜೇಶ್ ಪುಟ್ಟಸ್ವಾಮಿ, ಗ್ರಾಪಂ ಸದಸ್ಯ ಬೂದಹಳ್ಳಿ ಮಹದೇವ, ಮಾಜಿ ಸದಸ್ಯ ಮಾಧು, ಸೋಮನಾಥಪುರ ಗಣೇಶ್, ಕಗ್ಗಲೀಪುರ ಗ್ರಾಮದ ಮುಖಂಡರಾದ ರವಿಕುಮಾರ್, ಚಂದ್ರಶೇಖರ್, ಎಂ.ಲೋಕೇಶ್, ಮಹದೇವ, ಮಾದೇಶ್ ಗೌಡ, ದೇವರಾಜು, ರಾಜೇಶ್, ಪಂಚಾಯ್ತಿ ಪಿಡಿಓ ಶಶಿಕುಮಾರ್, ಕಾರ್ಯದರ್ಶಿ ಸುಧೀರ್ ಸೇರಿದಂತೆ ಮತ್ತಿತರ ಮುಖಂಡರು ಹಾಜರಿದ್ದರು.

ಶಕ್ತಿ ಕೇಂದ್ರದ ಅಧ್ಯಕ್ಷರಾಗಿ ನಂಜುಂಡಸ್ವಾಮಿ



ತಿ.ನರಸೀಪುರ, ಜು.31– ಭಾರತೀಯ ಜನತಾ ಪಾರ್ಟಿಯ ತಿ.ನರಸೀಪುರ ವಿಧಾನಸಭಾ ಕ್ಷೇತ್ರದ ಟೌನ್ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾಗಿ ಪುರಸಭೆಯ ಮಾಜಿ ಸದಸ್ಯ ಕೆ. ನಂಜುಂಡಸ್ವಾಮಿ ಅವರನ್ನು ನೇಮಕ ಮಾಡಿ ಕ್ಷೇತ್ರ ಅಧ್ಯಕ್ಷ ಶಿವಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಡಜನರ ಪರ ಕೆಲಸ ಮಾಡಿದ ಪ್ರಾಮಾಣಿಕರು ಧ್ರುವನಾರಾಯಣ್

ಹೆಚ್.ಡಿ.ಕೋಟೆ, ಜು.31– ನಿಜವಾದ ಬಡವರಿಗೆ ಸರ್ಕಾರದ ಸೌಲಭ್ಯ ಸಿಗಬೇಕು ಎಂದು ಪ್ರಾಮಾಣಿಕವಾಗಿ ಕೆಲಸ ಮಾಡಿದವರು ಮಾಜಿ ಸಂಸದ ಆರ್.ಧ್ರುವನಾರಾಯಣ್ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದ ಆವರಣದಲ್ಲಿ ಬುಧವಾರ ಹೆಚ್.ಡಿ.ಕೋಟೆ ಮತ್ತು ಸರಗೂರು ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಅವರ 63ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಆರ್.ಧ್ರುವನಾರಾಯಣ್ ಅವರು ಎರಡು ಬಾರಿ ಸಂಸದರಾಗಿ, ಶಾಸಕರಾಗಿ ಸದಾ ಜನರ ಕಷ್ಟಗಳಿಗೆ ಸ್ಪಂದಿಸಿ ಕೆಲಸ ಮಾಡಿದರು. ಹಾಗೇ ತಾಲೂಕಿನಲ್ಲಿ ಅನೇಕ ಯೋಜನೆಗಳ ಮೂಲಕ ಶಾಶ್ವತವಾಗಿ ಉಳಿಯುವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದರು.

ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಏಕಲವ್ಯ ವಸತಿ ಶಾಲೆ, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಅಂಬೇಡ್ಕರ್ ವಸತಿ ಶಾಲೆ, ಅಂಬೇಡ್ಕರ್ ಭವನ ನವೀಕರಣ, ತಂಬಾಕು ಹರಾಜು ಮಾರುಕಟ್ಟೆ ಸೇರಿದಂತೆ ಶೈಕ್ಷಣಿಕ ಹಾಗೂ ಆರೋಗ್ಯಕ್ಕೆ ಆದ್ಯತೆ ನೀಡಿ ಕೆಲಸ ಮಾಡಿದರು. ಧ್ರುವನಾರಾಯಣ್ ಅವರು ಒಂದು ಹೆಸರಾಗಿರದೆ ಒಂದು ಶಕ್ತಿಯಾಗಿ ಕೆಲಸ ಮಾಡಿದರು. ಎಲ್ಲಾ ಪಕ್ಷದವರ ಜೊತೆ ರಾಜಕೀಯವಾಗಿ ನಿಕಟ ಸಂಬಂಧ ಹೊಂದಿದ್ದ ಅವರು ಪಕ್ಷಾತೀತ ನಾಯಕರಾಗಿದ್ದರು ಎಂದರು.



ಹೆಚ್.ಡಿ.ಕೋಟೆ ಮತ್ತು ಸರಗೂರು ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ದಿ.ಆರ್.ಧ್ರುವನಾರಾಯಣ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ವಿಕಲಚೇತನರಿಗೆ ವ್ಹೀಲ್‌ಚೇರ್, ಮಹಿಳೆಯರಿಗೆ ಹೊಲಿಗೆ ಯಂತ್ರ, ನಿರ್ಗತಿಕರಿಗೆ ಆಹಾರ್ ಕಿಟ್‌ಗಳನ್ನು ಶಾಸಕ ಅನಿಲ್ ಚಿಕ್ಕಮಾದು ವಿತರಣೆ ಮಾಡಿದರು.

ಧ್ರುವನಾರಾಯಣ್ ಅವರ ಹುಟ್ಟುಹಬ್ಬದ ಅಂಗವಾಗಿ ನಯನಕುಮಾರ್ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವತಿಯಿಂದ ವಿವಿಧ ಕಾಯಿಲೆಗಳಿಗೆ ಸಂಬಂಧಿಸಿದಂತೆ 250ಕ್ಕೂ ಜನರು ಆರೋಗ್ಯ ತಪಾಸಣೆ ನಡೆಸಿದರು. ವಿಕಲಚೇತನರಿಗೆ ವೀಲ್‌ಚೇರ್, ಮಹಿಳೆಯರಿಗೆ ಹೊಲಿಗೆ ಯಂತ್ರ, ನಿರ್ಗತಿಕರಿಗೆ ಆಹಾರ್ ಕಿಟ್‌ಗಳನ್ನು ವಿತರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಆರ್.ಧ್ರುವನಾರಾಯಣ್ ಅಭಿಮಾನಿ ಬಳಗದ ತಾಲೂಕು ಅಧ್ಯಕ್ಷ ಎಚ್.ಸಿ.ನರಸಿಂಹಮೂರ್ತಿ, ಹಿರೇಹಳ್ಳಿ ಸೋಮೇಶ್, ಏಜಾಜ್ ಪಾಷ, ಮನುಗನಹಳ್ಳಿ ಮಾದಪ್ಪ, ಭಾಗ್ಯಲಕ್ಷ್ಮೀ, ಚಿಕ್ಕವೀರನಾಯಕ, ಪಿ.ರವಿ, ಶಿವಪ್ಪ ಕೋಟೆ, ಪರಶಿವಮೂರ್ತಿ, ವನಸಿರಿ ಶಂಕರ, ಆಸೀಫ್ ಇಕ್ಬಾಲ್, ವನಸಿರಿ ಉಮೇಶ್, ಮಣಿ, ಕುಮಾರ, ಮುದ್ದಮಲ್ಲಯ್ಯ, ಜಿವಿಕ ಬಸವರಾಜು, ಅಶೋಕ್, ಪ್ರಕಾಶ್ ಬುದ್ದ, ಸೌಮ್ಯ ಮಂಜುನಾಥ್, ಸ್ಟುಡಿಯೋ ಪ್ರಕಾಶ್, ಮೊತ್ತ ಶಿವಮಲ್ಲು, ಹೈರಿಗೆ ಮಲ್ಲೇಶ, ಮುಳ್ಳೂರು ಮಂಜು, ವೆಂಕಟೇಶ್, ಶಿವರಾಜು ಕಂದೇಗಾಲ, ಸತೀಶ್ ಗೌಡ, ಗುರುಸ್ವಾಮಿ ಇದ್ದರು.

ಸಿರಿಧಾನ್ಯ ಸರ್ವಜನರ ಕಾಮಧೇನು

ಹುಣಸೂರು, ಜು.31– ತಾಲೂಕು ಬಲೆನಳ್ಳಿ ಗ್ರಾಮದ ಶಾಲಾ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ವತಿಯಿಂದ ಸಿರಿಧಾನ್ಯ ಹಾಗೂ ಬೆಳೆಯ ಮಾಹಿತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮವನ್ನು ಯೋಜನೆ ಅಧಿಕಾರಿ ಧನಂಜಯ, ಪ್ರಗತಿಪರ ಕೃಷಿಕ ಚೆಲುವರಾಜು, ಗ್ರಾಮ ಪಂಚಾಯತಿ ಸದಸ್ಯೆ ನಿಂಗಮ್ಮ ಉದ್ಘಾಟಿಸಿದರು. ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಪ್ರಗತಿಪರ ಕೃಷಿಕ ಚೆಲುವರಾಜು, ಸಿರಿಧಾನ್ಯವು ಇಂದು ಶ್ರೀಮಂತ ಹಾಗೂ ಆರೋಗ್ಯವಂತರ ಅಹಾರವಾಗಿದೆ. ಇಂದು ಕೋಟಿ–ಕೋಟಿ ಸಂಪಾದಿಸಿದರೂ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ವಿಫಲನಾಗಿದ್ದಾನೆ. ಇದಕ್ಕೆಲ್ಲ ಮಾನವನ ಉನ್ನತ ಹೈಫೈ ಜೀವನಶೈಲಿಯೇ ಮುಖ್ಯ ಕಾರಣವಾಗಿದೆ ಎಂದರು. ಇದನ್ನು ಹೋಗಲಾಡಿಸಲು ನಾವುಗಳು ನಮ್ಮ ಆರೋಗ್ಯಕ್ಕಾಗಿ ನಮ್ಮ ಪೂರ್ವಿಕರು ಬಳಸಿದಂತಹ ಶುದ್ಧ ಆಹಾರ ಪದ್ಧತಿಯನ್ನು ಅನುಸರಿಸಬೇಕು. ಸಿರಿಧಾನ್ಯದ ಬೆಳೆಗಳನ್ನು ಎಲ್ಲಾ ಕಾಲದಲ್ಲೂ ಬೆಳೆಯಬಹುದು. ಇದಕ್ಕೆ ಯಾವ ರೋಗ ಬಾಧೆಗಳು, ಕ್ರಿಮಿಕೀಟಗಳು ಹಾಗೂ ಔಷಧಿ, ರಾಸಾಯನಿಕ ಗೊಬ್ಬರದ ಅವಶ್ಯಕತೆ ಇರುವುದಿಲ್ಲ. ರೈತರು ತುಂಡುಭೂಮಿಯಲ್ಲಿ ಈ ಸಿರಿಧಾನ್ಯಗಳನ್ನು ಬೆಳೆದು ಮನೆಗೆ ಉಪಯೋಗಿಸಿ ಮಿಕ್ಕ ಧಾನ್ಯವನ್ನು ಮಾರುಕಟ್ಟೆಯಲ್ಲಿ ಮಾರಬಹುದು ಎಂದರು. ಯೋಜನೆ ಅಧಿಕಾರಿ ಧನಂಜಯ ಮಾತನಾಡಿದರು. ಕಾರ್ಯಕ್ರಮದಲ್ಲಿ ಕೃಷಿ ಮೇಲೆ ವಿತರಕ ಶಿವಶಂಕರು, ಸಂತೋಷ್, ತಮ್ಮಣ್ಣ, ಉಪಾಧ್ಯಕ್ಷೆ ನಿಂಗಮ್ಮ, ಸೇವಾ ಪ್ರತಿನಿಧಿ ಛಾಯಾಕುಮಾರಿ ಹಾಗೂ ಸಂಘದ ಸದಸ್ಯರು ಭಾಗವಹಿಸಿದ್ದರು

ಬಿದರಗೂಡು ಡೈರಿ ಅಧ್ಯಕ್ಷರಾಗಿ ಎಲ್.ಕುಮಾರ್ ಆಯ್ಕೆ



ಬಿದರಗೂಡು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಎಲ್.ಕುಮಾರ್, ಉಪಾಧ್ಯಕ್ಷರಾಗಿ ಪ್ರಕಾಶ್ ಅವಿರೋಧವಾಗಿ ಆಯ್ಕೆಯಾದರು.

ಮಲ್ಕುಂಡಿ, ಜು.31– ನಂಜನಗೂಡು ತಾಲೂಕಿನ ಬಿದರಗೂಡು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಎಲ್.ಕುಮಾರ್, ಉಪಾಧ್ಯಕ್ಷರಾಗಿ ಪ್ರಕಾಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ಎಲ್.ಕುಮಾರ್, ಉಪಾಧ್ಯಕ್ಷ ಸ್ಥಾನಕ್ಕೆ ಪ್ರಕಾಶ್ ಇವರಿಬ್ಬರೇ ನಾಮಪತ್ರ ಸಲ್ಲಿಸಿದ್ದು, ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಪ್ರೇಮ ಘೋಷಣೆ ಮಾಡಿದರು. ನೂತನ ಅಧ್ಯಕ್ಷ ಎಲ್.ಕುಮಾರ್ ಮಾತನಾಡಿ, ಎಲ್ಲಾ ಸದಸ್ಯರ ಸಹಮತ ಪಡೆದು ಅಭಿವೃದ್ಧಿಯತ್ತ ಕೊಂಡೊಯ್ಯುವುದರ ಜೊತೆಗೆ ರೈತರು ಗುಣಮಟ್ಟದ ಹಾಲನ್ನು ಶೇಖರಣೆ ಮಾಡಿದಾಗ ಮಾತ್ರ ಸಂಘ ಲಾಭ ಕಾಣಲು ಸಾಧ್ಯ. ಆದ್ದರಿಂದ ಪ್ರತಿಯೊಬ್ಬ ರೈತರು ಗುಣಮಟ್ಟದ ಹಾಲನ್ನು ಶೇಖರಣೆ ಮಾಡಿ, ಸಂಘದ ಅಭಿವೃದ್ಧಿಗೆ ಸಹಕರಿಸಿ ಎಂದರಲ್ಲದೆ ಸರ್ಕಾರದಿಂದ ಬರುವ ಸೌಲಭ್ಯಗಳನ್ನು ಪ್ರತಿಯೊಬ್ಬ ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಸಂಘದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ತಿಳಿಸಿದರು.

ನಿರ್ದೇಶಕರುಗಳಾದ ಮುದ್ದರಾಮಪ್ಪ, ರಾಮಣ್ಣ, ಶಿವಕುಮಾರ್, ಮಹದೇವಸ್ವಾಮಿ, ಶಿವಣ್ಣ, ಸಿದ್ದಪ್ಪ, ನಾರಾಯಣನಾಯಕ, ಬೋರೇಗೌಡ, ಚಿನ್ನಮಣಿ, ಶಾಂತಮ್ಮ, ಮಹದೇವಸ್ವಾಮಿ, ಮದೇಶ್, ಕೆಂಪಣ್ಣ, ನಂದಿ, ರಾಜಣ್ಣ, ಮಲ್ಲಿಕಾರ್ಜುನಪ್ಪ, ರಾಜಶೇಖರ್, ಕುಮಾರ್, ಸಿಇಓ ಶಿವಪ್ರಸಾದ್ ಸೇರಿದಂತೆ ಪ್ರಮುಖರು ಹಾಜರಿದ್ದರು

ಸುಂದರ್ ನಿಧನ

ಸರಗೂರು, ಜು.31– ಪಟ್ಟಣದ ಡ್ರೈವರ್ ಸುಂದರ್ [ಮಾಮು] ನಿಧನರಾಗಿದ್ದಾರೆ. ಅವರಿಗೆ 60 ವರ್ಷ ವಯಸ್ಸಾಗಿತ್ತು. 35 ವರ್ಷಗಳಿಂದ ವಾಹನ ಚಾಲಕರ ಸಂಘದ ಸಕ್ರಿಯ ಸದಸ್ಯರಾಗಿದ್ದ ದಿವಂಗತರು ಪತ್ನಿ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸರಗೂರು ವಾಹನ ಚಾಲಕರ ಸಂಘ ಸೇರಿದಂತೆ ವಿವಿಧ ಸಂಘ–ಸಂಸ್ಥೆಯವರು ಸಂತಾಪ ಸೂಚಿಸಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ಆರ್ಯಈಡಿಗರ ರುದ್ರಭೂಮಿಯಲ್ಲಿ ಗುರುವಾರ ಬೆಳಗ್ಗೆ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ



ನೂತನ ಮುಖ್ಯ ಕಾರ್ಯದರ್ಶಿಯಾಗಿ ಶಾಲಿನಿ ರಜನೀಶ್ ಅಧಿಕಾರ ಸ್ವೀಕಾರ



ಬೆಂಗಳೂರು: ರಾಜ್ಯ ಸರ್ಕಾರದ ನೂತನ ಮುಖ್ಯ ಕಾರ್ಯದರ್ಶಿಯಾಗಿ ಶಾಲಿನಿ ರಜನೀಶ್ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು.

ಮುಖ್ಯಕಾರ್ಯದರ್ಶಿ ಹುದ್ದೆಯಿಂದ ನಿವೃತ್ತರಾದ ರಜನೀಶ್ ಗೋಯೆಲ್ ಅವರು ಶಾಲಿನಿ ಅವರಿಗೆ ಅಧಿಕಾರ ಹಸ್ತಾಂತರಿಸಿದರು. ಇವರಿಬ್ಬರೂ ಪತಿ-ಪತ್ನಿ. ಶಾಲಿನಿ ಅವರು ಮುಂದಿನ ಎರಡೂವರೆ ವರ್ಷ ಅಧಿಕಾರದಲ್ಲಿ ಇರಲಿದ್ದಾರೆ.

ಅಲ್ಲದೇ, ಪಂಚಾಯತ್ ರಾಜ್ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಯಲ್ಲಿದ್ದ ಉಮಾ ಮಹಾದೇವನ್ ಅವರನ್ನು ಅಭಿವೃದ್ಧಿ ಆಯುಕ್ತರ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ. ಸರ್ಕಾರದ ಪ್ರಮುಖ ಎರಡೂ ಉನ್ನತ ಹುದ್ದೆಗಳಲ್ಲೂ ಮಹಿಳೆಯರೇ ಇರುವುದೂ ವಿಶೇಷ. ಅಲ್ಲದೇ, ಕೌಶಲ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯ (ಹೆಚ್ಚುವರಿ ಪ್ರಭಾರ) ಜವಾಬ್ದಾರಿಯನ್ನು ಉಮಾ ಅವರಿಗೆ ನೀಡಲಾಗಿದೆ.

ಗ್ರಾಮೀಣಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಅವರಿಗೆ, ಪಂಚಾಯತ್ ರಾಜ್ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಯ ಹೆಚ್ಚುವರಿ ಪ್ರಭಾರ ನೀಡಿ ವರ್ಗಾವಣೆ ಮಾಡಲಾಗಿದೆ.

ತೋಟಗಾರಿಕಾ ಇಲಾಖೆ ನಿರ್ದೇಶಕ ಡಿ.ಎಸ್. ರಮೇಶ್‌ಗೆ ಮೈಸೂರು ಪ್ರಾದೇಶಿಕ ಆಯುಕ್ತರ ಹೆಚ್ಚುವರಿ ಪ್ರಭಾರ ನೀಡಲಾಗಿದೆ. ಪಂಚಾಯತ್ ರಾಜ್ ಆಯುಕ್ತೆ ಅರುಂಧತಿ ಚಂದ್ರಶೇಖರ್ ಅವರಿಗೆ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ನಿರ್ದೇಶಕಿಯ (ಹೆಚ್ಚುವರಿ ಪ್ರಭಾರ) ಹೊಣೆ ನೀಡಿ ವರ್ಗಾವಣೆ ಮಾಡಲಾಗಿದೆ.

ನಾಳೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-3

ಬೆಂಗಳೂರು, ಜು.31- ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ 3ನ್ನು ನಡೆಸಲು ಅಂತಿಮ ಹಂತದ ಸಿದ್ಧತೆ ಪೂರ್ಣಗೊಳಿಸಿದ್ದು, ಆಗಸ್ಟ್ 2 ರಿಂದ ಆಗಸ್ಟ್ 9 ರವರೆಗೆ ಪರೀಕ್ಷೆ ನಡೆಯಲಿದೆ.

ಆ.2ರಂದು ಪ್ರಥಮ ಭಾಷೆ ವಿಷಯದ ಪರೀಕ್ಷೆಯು ಬೆಳಿಗ್ಗೆ 10.15 ರಿಂದ 1.30ರವರೆಗೆ, ಆ.3 ರಂದು ತೃತೀಯ ಭಾಷೆ ವಿಷಯದ ಪರೀಕ್ಷೆಯು ಬೆಳಿಗ್ಗೆ 10.15 ರಿಂದ ಮಧ್ಯಾಹ್ನ 1.15ರವರೆಗೆ, ಆ.5 ರಂದು ವಿಜ್ಞಾನ ವಿಷಯದ ಪರೀಕ್ಷೆಯು 10.15ರಿಂದ 1.30ರವರೆಗೆ, ಆ.6 ರಂದು ಸಮಾಜ ವಿಜ್ಞಾನ ವಿಷಯ ಬೆಳಿಗ್ಗೆ 10.15 ರಿಂದ ಮಧ್ಯಾಹ್ನ 1.30, ಆ.7ರಂದು ದ್ವಿತೀಯ ಭಾಷೆ, ಬೆಳಿಗ್ಗೆ 10.15 ರಿಂದ 1.15, ಆ.8ರಂದು ಗಣಿತ ವಿಷಯದ ಪರೀಕ್ಷೆ ಬೆಳಿಗ್ಗೆ 10.15ರಿಂದ ಮಧ್ಯಾಹ್ನ 1.30ರವರೆಗೆ ನಡೆಯಲಿದೆ.

ಪರೀಕ್ಷೆ ನಡೆಯುವ ದಿನದಂದು ಪರೀಕ್ಷಾ ಕೇಂದ್ರದ 200 ಮೀ. ಸುತ್ತಲಿನ ಪ್ರದೇಶವನ್ನು ಕಲಂ 163ರ ಪ್ರಕಾರ ನಿಷೇಧಿತ ಪ್ರದೇಶವೆಂದೂ ಘೋಷಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ಜೆರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಸೆಂಟರ್, ಸೈಬರ್ ಸೆಂಟರ್, ಕೋಚಿಂಗ್ ಸೆಂಟರ್‌ಗಳು ಪರೀಕ್ಷೆ ಮುಗಿಯುವವರೆಗೂ ತೆರೆಯದಂತೆ ಆದೇಶಿಸಲಾಗಿದೆ.

ಬೆಟ್ಟದಲ್ಲಿ ಅಖಂಡ ಜ್ಯೋತಿ ಬೆಳಗಿಸಿದ ಮೈಸೂರು ವಾರಿಯರ್ಸ್ ತಂಡ



ಚಾಮುಂಡಿಬೆಟ್ಟದಲ್ಲಿ ತಾಯಿ ಚಾಮುಂಡೇಶ್ವರಿ ದೇವಸ್ಥಾನದ ಎದುರು ಮೈಸೂರು ವಾರಿಯರ್ಸ್ ತಂಡದ ವತಿಯಿಂದ 6 ಅಡಿ ಎತ್ತರದ ಅಖಂಡ ಜ್ಯೋತಿ ಬೆಳಗಿಸಲಾಯಿತು.

ಮೈಸೂರು, ಜು.31(ಪಿಎಂ)- ಎನ್‌ಆರ್ ಗ್ರೂಪ್ ಮಾಲೀಕತ್ವದ ಮೈಸೂರು ವಾರಿಯರ್ಸ್ ತಂಡದ ವತಿಯಿಂದ ಚಾಮುಂಡಿಬೆಟ್ಟದಲ್ಲಿ ತಾಯಿ ಚಾಮುಂಡೇಶ್ವರಿ ದೇವಾಲಯದ ಎದುರು 6 ಅಡಿ ಎತ್ತರದ ಅಖಂಡ ಜ್ಯೋತಿ ಬೆಳಗಿಸಲಾಯಿತು.

ಆ.15ರಿಂದ ಸೆ.1ರವರೆಗೆ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯಲಿರುವ ಮಹಾರಾಜ ಟ್ರೋಫಿಯ 3ನೇ ಆವೃತ್ತಿಯ ಪಂದ್ಯಾವಳಿಗಾಗಿ ಇದೇ ವೇಳೆ ತರಬೇತಿಗೆ ಚಾಲನೆ ನೀಡಲಾಯಿತು. ದೇವಿಯ ಆಶೀರ್ವಾದ ಪಡೆದು ಪಂದ್ಯಾವಳಿಯಲ್ಲಿ ಗೆಲುವಿಗಾಗಿ ಪ್ರಾರ್ಥಿಸಲಾಯಿತು.

ಮೈಸೂರು ವಾರಿಯರ್ಸ್ ತಂಡದ ಮಾಲೀಕರೂ ಆದ ಸೈಕಲ್ ಪ್ಯೂರ್ ಅಗರಬತ್ತಿ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ, ತಂಡದ ಆಟಗಾರರಾದ ಕರುಣ್ ನಾಯರ್, ಸುಚಿತ್ ಜೆ, ಗೌತಮ್ ಕೆ, ಮನೋಜ್ ಭಾಂಡಗೆ, ಪ್ರಸಿದ್ಧ್ ಕೃಷ್ಣ, ಸಿ.ಎ. ಕಾರ್ತಿಕ್, ವೆಂಕಟೇಶ್ ಎಂ, ವಿದ್ಯಾಧರ್ ಪಾಟೀಲ್ ಮತ್ತು ಧನುಷ್ ಗೌಡ ಸೇರಿದಂತೆ ತಂಡದ 13 ಆಟಗಾರರು ಚಾಮುಂಡೇಶ್ವರಿ ದೇವಿಯ ಆಶೀರ್ವಾದ ಪಡೆದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಲ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಶಾಸ್ತ್ರಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಫ್ಯಾಮಿಲಿ ಡ್ರಾಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ಡೆಡ್‌ಪೂಲ್ & ವೊಲ್ವೆರಿನ್ (ಇಂ)	4 ಪ್ರದರ್ಶನಗಳು
ಸಂಗಂ	
ಕಾಟನ್‌ಪೇಟೆ ಗೇಟ್ (ಕ)	4 ಪ್ರದರ್ಶನಗಳು
ಲಿಡೋ	
ರಾಜಹುಲಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ನರಬಲಿ (ತೆ)	4 ಪ್ರದರ್ಶನಗಳು
ಪ್ರಭಾ	
ರಕ್ತಾಕ್ಷ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.8ಕ್ಕೆ, ಬೆ.10.40ಕ್ಕೆ, ರಾಯನ್ (ತ): ಮ.1.20ಕ್ಕೆ, ಸಂ.410ಕ್ಕೆ, ರಾ.7ಕ್ಕೆ, ರಾ.9.55ಕ್ಕೆ.
ಸ್ಕ್ರೀನ್ 2	ರಕ್ತಾಕ್ಷ (ಕ): ಬೆ.10.30ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ಮ.12.50ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.35ಕ್ಕೆ, ಕಲ್ಕಿ 2898 ಎಡಿ (ಕ): ರಾ.7ಕ್ಕೆ, ಲೆವೆಲ್ ಕ್ರಾಸ್ (ಮ): ಬೆ.10.25ಕ್ಕೆ.
ಸ್ಕ್ರೀನ್ 3	ಬ್ಯಾಡ್ ನ್ಯೂಸ್ (ಹಿಂ): ಬೆ10.30ಕ್ಕೆ, ಸಂ.4.15ಕ್ಕೆ, ರೂಪಾಂತರ (ಕ): ಮ.1.15ಕ್ಕೆ, ಫ್ಯಾಮಿಲಿ ಡ್ರಾಮಾ (ಕ): ರಾ.7.10ಕ್ಕೆ, ರುದ್ರವೀಣಾ (ತೆ): ರಾ.10.10ಕ್ಕೆ.
ಸ್ಕ್ರೀನ್ 4	ರಾಯನ್ (ತ): ಬೆ.10.35ಕ್ಕೆ, ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.30ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ರಾ.9.45ಕ್ಕೆ

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ರೂಪಾಂತರ (ಕ): ಬೆ.10.35ಕ್ಕೆ, ಲವ್ ಲಿ (ಕ): ಮ.1ಕ್ಕೆ, ಕೆಂಡ (ಕ): ಮ.3.50ಕ್ಕೆ, ಫ್ಯಾಮಿಲಿ ಡ್ರಾಮ (ಕ): ಸಂ.6.25ಕ್ಕೆ, ವಿದ್ಯಾರ್ಥಿ ವಿದ್ಯಾರ್ಥಿನಿಯರೆ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.30ಕ್ಕೆ, ರಾ.7ಕ್ಕೆ, ರಾಯನ್ (ತೆ): ಮ.1.15ಕ್ಕೆ, ಸಂ.4.10ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.25ಕ್ಕೆ, ಸಂ.4ಕ್ಕೆ, ರಾ.9.20ಕ್ಕೆ, ರಾಯನ್ (ತ): ಸಂ.6.30ಕ್ಕೆ.
ಸ್ಕ್ರೀನ್ 4	ರಾಯನ್ (ತ): ಬೆ.10.30ಕ್ಕೆ, ಕಲ್ಕಿ 2898 ಎಡಿ (ಕ): ಮ.1.15ಕ್ಕೆ, ರೂಪಾಂತರ (ಕ): ಸಂ.4.35ಕ್ಕೆ, ರಾ.9ಕ್ಕೆ, ರುದ್ರವೀಣ (ತೆ): ರಾ.7ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರಲ್ಲಿ ಮಾಜಿ ಸಂಸದ ಧ್ರುವನಾರಾಯಣ ಹುಟ್ಟುಹಬ್ಬ ಆಚರಣೆ

ಕಾಂಗ್ರೆಸ್ ಮುಖಂಡರಿಂದ ಅಗಲಿದ ಅಜಾತಶತ್ರುವಿನ ಗುಣಗಾನ



ಮೈಸೂರಿನ ಅಶೋಕಪುರಂನಲ್ಲಿ ವಿವಿಧ ಸೇವಾ ಕಾರ್ಯದೊಂದಿಗೆ ಮಾಜಿ ಸಂಸದ ದಿವಂಗತ ಆರ್.ಧ್ರುವನಾರಾಯಣ ಅವರ ಹುಟ್ಟುಹಬ್ಬ ಆಚರಿಸಲಾಯಿತು.

ಮೈಸೂರು, ಜು.31(ಎಂಕೆ)- ಮೈಸೂರು ಅಶೋಕಪುರಂನ ಬಿ.ಬಸವಲಿಂಗಪ್ಪ ವೃತ್ತದಲ್ಲಿ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ಹಾಗೂ ಆದಿ ಕರ್ನಾಟಕ ಹಿತರಕ್ಷಣಾ ಸಮಿತಿ ವತಿಯಿಂದ ವಿವಿಧ ಸೇವಾ ಕಾರ್ಯಗಳ ಮೂಲಕ ಮಾಜಿ ಸಂಸದ ದಿವಂಗತ ಆರ್.ಧ್ರುವನಾರಾಯಣ ಅವರ 63ನೇ ವರ್ಷದ ಹುಟ್ಟುಹಬ್ಬ ಆಚರಿಸಲಾಯಿತು.

ಈ ವೇಳೆ ಆರ್.ಧ್ರುವನಾರಾಯಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಕೇಕ್ ಕತ್ತರಿಸಿ ಸಿಹಿ ವಿತರಿಸಲಾಯಿತು. ಹಾಗೆಯೇ ಪ್ರತಿಭಾನ್ವಿತ ಮಕ್ಕಳಿಗೆ ಪಠ್ಯ ಪುಸ್ತಕ, ಬ್ಯಾಗ್ ಹಾಗೂ ನೂರಾರು ಮಹಿಳೆಯರಿಗೆ ಸೀರೆ ವಿತರಣೆ ಮಾಡಲಾಯಿತು. ಶಾಸಕ ದರ್ಶನ್ ಧ್ರುವನಾರಾಯಣ ಕೇಕ್ ಕತ್ತರಿಸಿ, ತಮ್ಮ ತಂದೆಯವರಂತೆ ಸದಾ ಅಶೋಕಪುರಂ ಜನತೆಯ ಕಷ್ಟಗಳಿಗೆ ಸ್ಪಂದಿಸುವುದಾಗಿ ಭರವಸೆ ನೀಡಿದರು.

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಅಪರೂಪದ ರತ್ನವಾಗಿದ್ದ ಆರ್.ಧ್ರುವನಾರಾಯಣ್, ಒಂದು ವೋಟ್‌ನಿಂದ ಗೆದ್ದು, ಮತದಾನದ ಮಹತ್ವ ಅರಿತಿದ್ದವರು. ಬಹಳ ಆಳವಾಗಿ ತಮ್ಮ ಕೆಲಸದಲ್ಲಿ ತೊಡಗಿಕೊಳ್ಳುತ್ತಿದ್ದ ಅವರು ಪ್ರಬುದ್ಧತೆಯ ರಾಜಕಾರಣಿ ಎಂದು ಸ್ಮರಿಸಿದರು.

ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ನಾನು ಶಾಸಕನಾಗಲೂ ಕಾರಣರಾದ ಮೂರ್ನಾಲ್ಕು ಮಂದಿಯಲ್ಲಿ ಧ್ರುವಣ್ಣ ಕೂಡ ಒಬ್ಬರು. 2018ರ ನವೆಂಬರ್‌ನಲ್ಲಿ ನನ್ನನ್ನು ಬೆಂಗಳೂರಿಗೆ ಕರೆದುಕೊಂಡು ಹೋಗಿ ಪಕ್ಷ ಸೇರುವಂತೆ ತಿಳಿಸಿದ್ದರಲ್ಲದೆ ಶಾಸಕರನ್ನಾಗಿಸುವುದಾಗಿ ಹೇಳಿದ್ದರು. ಆದರೆ ಚುನಾವಣೆ ಹತ್ತಿರದಲ್ಲಿ ನಮ್ಮಿಂದ ಮರೆಯಾದ ಅವರು, ಎಂದಿಗೂ ಮರೆಯಾಗದ ಮಾಣಿಕ್ಯ. ಅವರ ದಾರಿಯಲ್ಲೇ ಸಾಗುತ್ತಿರುವ ಶಾಸಕ ದರ್ಶನ್ ಜೊತೆ ಸದಾ ಇರುತ್ತೇನೆ. ಸ್ವಂತ ತಮ್ಮನಾಗಿ ನೋಡುತ್ತಿದ್ದೇನೆ ಎಂದರು.

ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್ ಮಾತನಾಡಿ, ಧ್ರುವನಾರಾಯಣ್ ಈ ಭಾಗದ ರಾಜಕೀಯ ಶಕ್ತಿಯಾಗಿದ್ದರು. ಸದಾಕಾಲ ಸಕ್ರಿಯವಾಗಿ ರಾಜಕಾರಣದಲ್ಲಿ ತೊಡಗಿಕೊಂಡಿದ್ದ ಅವರು, ಬಿಟ್ಟು ಹೋದ ಸ್ನೇಹ ನಮ್ಮೊಂದಿಗೆ ಸದಾ ಇರಲಿದೆ. ವಿವಿಧ ಸೇವಾ ಕಾರ್ಯಗಳ ಮೂಲಕ ಅವರ ಹುಟ್ಟುಹಬ್ಬದ ಆಚರಣೆ ಅರ್ಥಪೂರ್ಣವಾಗಿದೆ ಎಂದು ನೆನೆದರು.

14 ವರ್ಷದ ಒಡನಾಟ: ಮೈಸೂರು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮಾತನಾಡಿ, ಯೂತ್ ಕಾಂಗ್ರೆಸ್‌ನಲ್ಲಿದ್ದಾಗಿನಿಂದಲೂ ಧ್ರುವನಾರಾಯಣ್ ಅವರೊಂದಿಗೆ ಒಡನಾಟವಿದ್ದು, ನನ್ನ ಬಗ್ಗೆ ವಿಶೇಷ ಪ್ರೀತಿ ಅವರಲ್ಲಿತ್ತು. ಅವರ ನಿಧನ ರಾಜಕೀಯ ಕ್ಷೇತ್ರಕ್ಕೆ ದೊಡ್ಡ ಹಿನ್ನಡೆಯಾಗಿದೆ. ಅವರಂತೆ ಜನತೆ ಸೇವೆಯಲ್ಲಿ ತೊಡಗಿರುವ ಅವರ ಪುತ್ರ ದರ್ಶನ್ ಜೊತೆಗೆ ಕಾಂಗ್ರೆಸ್ ಸದಾ ಇರಲಿದೆ ಎಂದರು. ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಮುಖಂಡರಾದ ತಿಮ್ಮಯ್ಯ, ವಕೀಲ ಕಾಂತರಾಜು, ಆದಿ ಕರ್ನಾಟಕ ಹಿತರಕ್ಷಣಾ ಸಮಿತಿಯ ಎನ್. ಭಾಸ್ಕರ್, ಮುರುಳಿ, ಮಲ್ಲಿಕಾರ್ಜುನ್ ಮತ್ತಿತರರಿದ್ದರು.

ಆ.25ಕ್ಕೆ ಅಖಿಲ ಭಾರತ ವೀರಶೈವ ಮಹಾಸಭಾ ಚುನಾವಣೆ

ಬೆಂಗಳೂರು: ಅಖಿಲ ಭಾರತ ವೀರಶೈವ ಮಹಾಸಭಾದ ಕರ್ನಾಟಕ, ಕೇರಳ ಮತ್ತು ಆಂಧ್ರಪ್ರದೇಶ ರಾಜ್ಯ ಘಟಕಗಳಿಗೆ ಆಗಸ್ಟ್ 25ರಂದು ಚುನಾವಣೆ ನಡೆಯಲಿದೆ. ಚುನಾವಣಾಧಿಕಾರಿ ಎಂ.ಬಿ. ದ್ಯಾಬೇರಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ವಿವರ ನೀಡಿದರು.

ಆ.1ರಿಂದ ಆ.7ರ ವರೆಗೆ ನಾಮಪತ್ರ ಸ್ವೀಕಾರ ನಡೆಯಲಿದೆ. ಆ.8ರಂದು ನಾಮಪತ್ರ ಪರಿಶೀಲನೆ, ಆ.11 ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಆಗಿದೆ. ಆ.25ರಂದು ಬೆಳಿಗ್ಗೆ 8ರಿಂದ ಸಂಜೆ 5ರವರೆಗೆ ಮತದಾನ ನಡೆಯಲಿದೆ. ಅಂದು ಸಂಜೆ ಮತ ಎಣಿಕೆ ನಡೆಯಲಿದೆ ಎಂದು ತಿಳಿಸಿದರು.

ಅಧ್ಯಕ್ಷರು ಮತ್ತು ಕಾರ್ಯನಿರ್ವಹಣ ಸಮಿತಿ ಸದಸ್ಯರು ಸೇರಿ ಒಟ್ಟು 41 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಜೊತೆಗೆ ಮಹಾಸಭಾದ ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನಗಳಿಗೂ ಚುನಾವಣೆ ನಡೆಯಲಿದೆ. ಕರ್ನಾಟಕದ 30, ಕೇರಳ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಮಹಾರಾಷ್ಟ್ರಗಳಿಂದ ಕೇಂದ್ರ ಕಾರ್ಯಕಾರಿ ಸಮಿತಿಗೆ ತಲಾ ಒಬ್ಬ ಮಹಿಳೆ ಸೇರಿ ತಲಾ 5 ಸದಸ್ಯರ ಆಯ್ಕೆ ನಡೆಯಲಿದೆ ಎಂದು ಮಾಹಿತಿ ನೀಡಿದರು. ಈಗಾಗಲೇ 31 ಜಿಲ್ಲೆ, 1 ಮಹಾನಗರ ಪಾಲಿಕೆ, 176 ತಾಲೂಕು ಘಟಕಗಳ ಅಧ್ಯಕ್ಷರು ಮತ್ತು ಕಾರ್ಯನಿರ್ವಾಹಕ ಸಮಿತಿಗೆ ಸದಸ್ಯರ ಆಯ್ಕೆಯಾಗಿದೆ ಎಂದು ರಾಜ್ಯ ಘಟಕದ ಚುನಾವಣಾಧಿಕಾರಿ ಸಿ.ಎಸ್. ವೀರೇಶ ತಿಳಿಸಿದರು.

ಜಿಲ್ಲಾ ಎಸ್ಪಿ ವಿಷ್ಣುವರ್ಧನ್‌ಗೆ ಅಭಿನಂದನೆ



ಮೈಸೂರು ಜಿಲ್ಲಾ ಎಸ್ಪಿ ವಿಷ್ಣುವರ್ಧನ್ ಅವರನ್ನು ಬಿಜೆಪಿ ಮುಖಂಡರಾದ ಸಂತೋಷ್ ಶಂಭು, ರಮೇಶ್, ಪುನೀತ್, ಸಂಜಯ್ ಇನ್ನಿತರರು ಅಭಿನಂದಿಸಿದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಜು.31- ಆದರ್ಶ ಸೇವಾ ಸಂಘದ ವತಿಯಿಂದ 2024ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚಿನ ಅಂಕಗಳಿಸಿರುವ ತ್ರಿಮತಸ್ಥ ಬ್ರಾಹ್ಮಣ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸಂಘದ ಸದಸ್ಯರು ಹಾಗೂ ಹೊಸದಾಗಿ ಸಂಘದ ಸದಸ್ಯತ್ವ ಪಡೆದವರ ಪ್ರತಿಭಾನ್ವಿತ ಮಕ್ಕಳು ಅರ್ಜಿ ಸಲ್ಲಿಸಬಹುದಾಗಿದ್ದು, ಸಂಘದ ಕಚೇರಿ: ನಂ.2, ಬ್ಲಾಕ್ 27, ಮಧುವನ ಬಡಾವಣೆ, ಶ್ರೀರಾಂಪುರ 2ನೇ ಹಂತ, ಮೈಸೂರು-570034 ವಿಳಾಸಕ್ಕೆ ಅಂಚೆಯ ಮೂಲಕ ಆ.15ರೊಳಗೆ ಸಲ್ಲಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ.0821-3559202 ಗೆ ಸಂಪರ್ಕಿಸಬಹುದಾಗಿದೆ.

ಬೆಂಗಳೂರು-ಮೈಸೂರು ಪಾದಯಾತ್ರೆಯಲ್ಲಿ ನಿತ್ಯವೂ ಮೈಸೂರು ಜಿಲ್ಲೆಯ 500 ಕಾರ್ಯಕರ್ತರು ಭಾಗಿ

ಪೂರ್ವಭಾವಿ ಸಭೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಘೋಷಣೆ



ಬಿಜೆಪಿ ಕಚೇರಿಯಲ್ಲಿ ನಡೆದ ಬೆಂಗಳೂರು-ಮೈಸೂರು ಪಾದಯಾತ್ರೆಯ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಮಾತನಾಡಿದರು.

ಮೈಸೂರು, ಜು.31(ಎಂಕೆ)- ರಾಜ್ಯ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಖಂಡಿಸಿ ಹಮ್ಮಿಕೊಂಡಿರುವ ಬೆಂಗಳೂರು-ಮೈಸೂರು ಪಾದಯಾತ್ರೆ ಹಿನ್ನೆಲೆಯಲ್ಲಿ ನಗರದ ಬಿಜೆಪಿ ಕಚೇರಿಯಲ್ಲಿ ಬುಧವಾರ ಪೂರ್ವಭಾವಿ ಸಭೆ ನಡೆಸಲಾಯಿತು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಮಾತನಾಡಿ, ಮುಡಾ ಹಗರಣ, ವಾಲ್ಮೀಕಿ ಅಭಿವೃದ್ಧಿ ನಿಗಮದ ಭ್ರಷ್ಟಾಚಾರ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿದ್ದ ಹಣ ದುರುಪಯೋಗ ಸೇರಿದಂತೆ ಜನವಿರೋಧಿ ಆಡಳಿತ ನಡೆಸುತ್ತಿರುವ ರಾಜ್ಯ ಕಾಂಗ್ರೆಸ್ ಸರಕಾರ, ಅಸ್ತಿತ್ವಕ್ಕೆ ಬಂದಾಗಿನಿಂದಲೂ ಒಂದಲ್ಲ ಒಂದು ಹಗರಣ ಮಾಡುತ್ತಾ ಜನತೆಯನ್ನು ವಂಚಿಸುತ್ತಿದೆ ಎಂದು ಕಿಡಿಕಾರಿದರು.

ಮನೆಯ ಯಜಮಾನಿಗೆ ಪ್ರತಿ ತಿಂಗಳು 2000 ರೂ. ಕೊಡುವ ಭರವಸೆಯನ್ನು ಪೂರೈಸಲಾಗದೆ ಜನತೆಗೆ ಹಾಡಹಗಲೇ ಮೋಸ ಮಾಡುತ್ತಿರುವುದನ್ನು ರಾಜ್ಯದ ಜನತೆ ಗಮನಿಸುತ್ತಿದ್ದಾರೆ. ಮುಡಾದಿಂದ 50:50 ಯೋಜನೆಯಲ್ಲಿ 2023ರಲ್ಲೇ ರದ್ದುಪಡಿಸಬೇಕೆಂಬ ಆದೇಶವಿದ್ದರೂ ಸ್ವತಃ ಮುಖ್ಯಮಂತ್ರಿಗಳೇ ಮುಡಾ ಹಗರಣದಲ್ಲಿ ಭಾಗಿಯಾಗಿರುವುದು ಸರಿಯೇ ಎಂದು ಪ್ರಶ್ನಿಸಿದರು.

ರಾಜ್ಯ ಸರ್ಕಾರದ ಈ ಎಲ್ಲಾ ಭ್ರಷ್ಟಾಚಾರ, ಹಗರಣಗಳ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಕರೆ ನೀಡಿರುವ ಬೆಂಗಳೂರು-ಮೈಸೂರು ಪಾದಯಾತ್ರೆಗೆ ಆ.3ರಂದು ಮೈಸೂರು ಜಿಲ್ಲೆಯಿಂದಲೂ ಸಹ ಪ್ರತಿದಿನ 500 ಮಂದಿ ಬಿಜೆಪಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ. ರಾಜ್ಯದಿಂದ ಬಹುತೇಕ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾದಯಾತ್ರೆಗೆ ಭಾಗವಹಿಸಲಿದ್ದು, ಸರಕಾರದ ಭ್ರಷ್ಟಾಚಾರಗಳ ವಿರುದ್ಧ ರಣಕಹಳೆ ಮೊಳಗಲಿದೆ ಎಂದರು.

ಮಾಜಿ ಶಾಸಕ ಹರ್ಷವರ್ಧನ್ ಮಾತನಾಡಿ, ಕಾಂಗ್ರೆಸ್ ಸರಕಾರ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಹಣವನ್ನು ಸಹ ದುರುಪಯೋಗಪಡಿಸಿಕೊಳ್ಳುತ್ತಿದ್ದು, ಹಿಂದುಳಿದ ವರ್ಗಗಳ ಅಭಿವೃದ್ಧಿ ರಾಜ್ಯದೆಲ್ಲೆಡೆ ಕುಂಠಿತವಾಗಿದೆ. ಹಾಗೆಯೇ ಮುಡಾ ಹಗರಣದಲ್ಲಿ ಸ್ವತಃ ಮುಖ್ಯಮಂತ್ರಿಗಳೇ ಭಾಗಿಯಾಗಿದ್ದು, ದಾಖಲೆಗಳ ಸಮೇತ ಸಿಕ್ಕಿಹಾಕಿಕೊಂಡಿರುವುದು ರಾಜ್ಯದ ಜನತೆಗೆ ತಿಳಿದಿದೆ. ಮುಖ್ಯಮಂತ್ರಿಗಳಿಗೆ ತಮ್ಮ ತಪ್ಪಿನ ಅರಿವಾಗಿ ಇದರಿಂದ ಮುಜುಗರಕ್ಕೆ ಒಳಗಾಗಿರುವುದು ಅವರ ನಡೆ-ನುಡಿಯಲ್ಲಿ ತಿಳಿಯುತ್ತದೆ ಎಂದು ಹೇಳಿದರು. ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷರಾದ ಮಂಗಳಾ ಸೋಮಶೇಖರ್, ಎಸ್.ಮಹದೇವಯ್ಯ, ಪ್ರಧಾನ ಕಾರ್ಯದರ್ಶಿಗಳಾದ ಕಿರಣ್ ಜಯರಾಮೇಗೌಡ, ಮಡವಾಡಿ ಮಹೇಶ್, ಮುಖಂಡರಾದ ಬಾಲು ಮತ್ತಿತರರು ಉಪಸ್ಥಿತರಿದ್ದರು.



ನಿವೃತ್ತ ಉಪನ್ಯಾಸಕರಿಗೆ ಬೀಳ್ಕೊಡುಗೆ

ಮೈಸೂರಿನ ಮಂಚೇಗೌಡನಕೊಪ್ಪಲು ಸರ್ಕಾರಿ ಪದವಿಪೂರ್ವ ಕಾಲೇಜಿನ ಜೀವಶಾಸ್ತ್ರ ಉಪನ್ಯಾಸಕಿ ಶ್ರೀಮತಿ ಕಲ್ಪನಾ ಅವರು ನಿವೃತ್ತಿ ಹೊಂದಿದ್ದ ಹಿನ್ನೆಲೆಯಲ್ಲಿ ಅವರನ್ನು ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ರವಿ ಮಂಚೇಗೌಡನಕೊಪ್ಪಲು ಅಭಿನಂದಿಸಿ, ಬೀಳ್ಕೊಟ್ಟರು. ಈ ವೇಳೆ ಪ್ರಾಂಶುಪಾಲರಾದ ಶಿವಮಲ್ಲು ಹಾಗೂ ಉಪನ್ಯಾಸಕ ವೃಂದ ಉಪಸ್ಥಿತರಿದ್ದರು.

ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್ ಡಿಪ್ಲೊಮಾ ಪ್ರವೇಶಕ್ಕೆ ಅವಧಿ ವಿಸ್ತರಣೆ


ಮೈಸೂರು,ಜು.31-ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್‌ನಲ್ಲಿ 2024-25ನೇ ಸಾಲಿನಲ್ಲಿ ಸರ್ಕಾರಿ ಕೋಟಾದಡಿ ಖಾಲಿ ಉಳಿದಿರುವ ಪ್ರಥಮ ಸೆಮಿಸ್ಟರ್ ಡಿಪ್ಲೊಮಾ ಕೋರ್ಸುಗಳು ಮತ್ತು ಐ.ಟಿ.ಐ/ಪಿ.ಯು.ಸಿ(ಸೈನ್ಸ್)ನಲ್ಲಿ ಪಾಸಾದ ವಿದ್ಯಾರ್ಥಿನಿಯರು ಡಿಪ್ಲೊಮಾ 3ನೇ ಸೆಮಿಸ್ಟರ್ ಕೋರ್ಸುಗಳಿಗೆ ಪ್ರವೇಶ ಪಡೆಯಲು ಆ.6ರವರೆಗೆ ವಿಸ್ತರಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇ.35 ಅಂಕಗಳೊಂದಿಗೆ ಪಾಸಾದ ಅರ್ಹ ವಿದ್ಯಾರ್ಥಿನಿಯರು ಮೊದಲನೇ ವರ್ಷಕ್ಕೆ ಪ್ರವೇಶ ಪಡೆಯಬಹುದು ಹಾಗೂ ಐ.ಟಿ.ಐ/ಪಿ.ಯು.ಸಿ (ಸೈನ್ಸ್) ಪರೀಕ್ಷೆಯಲ್ಲಿ ಶೇ.35 ಅಂಕಗಳೊಂದಿಗೆ ಪಾಸಾದ ಅರ್ಹ ವಿದ್ಯಾರ್ಥಿನಿಯರು 2ನೇ ವರ್ಷಕ್ಕೆ ಪ್ರವೇಶ ಪಡೆಯಬಹುದು. ಹೆಚ್ಚಿನ ವಿವರಗಳಿಗೆ ಸವಿತಾ ಎಂ., ಮೊ.959165 0765) ಅಥವಾ ವಿ.ಬಿ.ಲೋಕೇಶ, ಪ್ರಾಂಶುಪಾಲರು (ಮೊ.80502 16873) ಅವರನ್ನು ಸಂಪರ್ಕಿಸಬಹುದು.

ಕೆಆರ್‌ಎಸ್ ನೀರಿನ ಮಟ್ಟ




ಗರಿಷ್ಠ ಮಟ್ಟ	124.80 ಅಡಿ
ಬುಧವಾರ	123.40 ಅಡಿ
ಒಳಹರಿವು	154460 ಕ್ಯೂಸೆಕ್
ಹೊರಹರಿವು	172161 ಕ್ಯೂಸೆಕ್

ಕಬಿನಿ ನೀರಿನ ಮಟ್ಟ




ಗರಿಷ್ಠ ಮಟ್ಟ	2284 ಅಡಿ
ಬುಧವಾರ	2281.56 ಅಡಿ
ಒಳಹರಿವು	47666 ಕ್ಯೂಸೆಕ್
ಹೊರಹರಿವು	50000 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಬುಧವಾರ	2854.43 ಅಡಿ
ಒಳಹರಿವು	9098 ಕ್ಯೂಸೆಕ್
ಹೊರಹರಿವು	12250 ಕ್ಯೂಸೆಕ್

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀ ಬಿ. ಶಿವಣ್ಣ ರವರು

(ಲೇ|| ಯ|| ಶ್ರೀ ಮಾದಯ್ಯ ಉ|| ಭೂಪಣ್ಣರವರ ಮಗ) (ಭೂಪಣ್ಣನವರ ಕುಟುಂಬ)
ನಿವೃತ್ತ ನೌಕರರ ನ್ಯಾಯಾಂಗ ಇಲಾಖೆ, ಮೈಸೂರು ಜಿಲ್ಲಾ ನ್ಯಾಯಾಲಯ
ಶ್ರೀ ಚಂದ್ರಮೌಳೇಶ್ವರ ಸ್ವಾಮಿ ದೇವಸ್ಥಾನದ ವ್ಯವಸ್ಥಾಪಕರು, ಕೆ.ಜಿ.ಕೊಪ್ಪಲು, ಮೈಸೂರು

ಇವರು ದಿನಾಂಕ 21-07-2024 ಭಾನುವಾರ ದಂದು ದೈವಾಧೀನರಾದರೆಂದು ತಿಳಸಲು ವಿಷಾದಿಸುತ್ತೇವೆ. ತತ್ಸಂಬಂಧ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ದಿನಾಂಕ 01-08-2024 ಗುರುವಾರ ಬೆಳಗ್ಗೆ 11.00 ಗಂಟೆಗೆ ಶ್ರೀ ಮರುಳೇಶ್ವರ ದೇವಸ್ಥಾನ, ಶಾಂತಿಧಾಮ ಆವರಣ, ಕಾವೇರಿ ಶಾಲೆ ಎದುರು, ಕುವೆಂಪುನಗರ, ಮೈಸೂರು ಇಲ್ಲಿ ಏರ್ಪಡಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ

ದುಃಖತಪ್ತರು : ಶ್ರೀಮತಿ ವಿಶಾಲಾಕ್ಷಮ್ಮ, ಮಕ್ಕಳು, ಸೊಸೆ ಮತ್ತು ಮೊಮ್ಮಕ್ಕಳು
ಲೇ|| ಯ|| ಶ್ರೀ ಮಾದಯ್ಯ ಉ|| ಭೂಪಣ್ಣರವರ ಕುಟುಂಬದವರು, ಲೇ|| ಬುಂಡೇಮಾದೇಗೌಡರ ಕುಟುಂಬವರ್ಗದವರು ಬಂಧು-ಮಿತ್ರರು ಹಾಗೂ ಕೆ.ಜಿ.ಕೊಪ್ಪಲು ಗ್ರಾಮಸ್ಥರು.
ಭೋಜನ : ಮಧ್ಯಾಹ್ನ 12.30 ಗಂಟೆಗೆ

WANTED SALES Staff: Male / Female

1. Readymade Women's Wear (Male/Female) : 4 Nos
2. Fancy and Silk Saree (Male/Female): 2 Nos.
3. Kidswear (Male/Female) : 2 Nos.
4. Helper (Male/Female): 5 Nos. (Age limit within 40)
5. Tailor: Male: 2 Nos. (Ladies Readymade Dress alterations Tailor)
6. Housekeeping (Male/ Female): 1 No. (Age: within 45 Years)

Interview timing: 11.30 am to 2pm & 3.30pm to 6.pm
From: 01.08.2024 to 03.08.2024

Bhimji's 65, DD Urs Road, Mysore-1
Ph: 0821-4192666

ನಗರಸಭಾ ಕಾರ್ಯಾಲಯ, ಮಡಿಕೇರಿ, ಕೊಡಗು ಜಿಲ್ಲೆ.

ದೂರವಾಣಿ: 08272-228323 । ಫ್ಯಾಕ್ಸ್ : 08272-223998
e-mail: itstaff_ulb_madikeri1@yahoo.com
ಕಾವೇರಿ ಕಲಾಕ್ಷೇತ್ರದ ಹತ್ತಿರ, ಮಡಿಕೇರಿ – 571201

ಸಂಖ್ಯೆ: ತಾಂತ್ರಿಕ ಶಾಖೆ/ಜೆಇ(1)/ಜಿ.ದೀ/ವಾ.ಟಿ/02/2024-25/3ನೇ ಕರೆ ದಿನಾಂಕ : 31/07/2024

ಮರು ಟೆಂಡರ್ ಪ್ರಕಟಣೆ

2023-24ನೇ ಸಾಲಿನ ನಗರಸಭಾ ನಿಧಿ ಕಾಮಗಾರಿಗಳನ್ನು ನಿರ್ವಹಿಸಲು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಆದ್ಯಾದೇಶ 1999 ಹಾಗೂ ನಿಯಮ 2000ಕ್ಕೆ ಒಳಪಟ್ಟು ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟಿರುವ ಅರ್ಹ ಗುತ್ತಿಗೆದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಇಂಡೆಂಟ್ ಸಂಖ್ಯೆ: DMA/2023-24 /EL /WORK_INDENT 7012/Call-3 ಅಂದಾಜು ಮೊತ್ತ 35.70 ಲಕ್ಷಗಳು ಆಗಿರುತ್ತದೆ. ಆಸಕ್ತಿಯುಳ್ಳ ಅರ್ಹ ಗುತ್ತಿಗೆದಾರರು ಟೆಂಡರ್ ವಿವರಗಳನ್ನು KPPP ವೆಬ್‌ಸೈಟ್ ಮೂಲಕ ಪಡೆದುಕೊಂಡು ನಂತರ ಭರ್ತಿ ಮಾಡಿದ ಟೆಂಡರ್‌ಗಳನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಸಲ್ಲಿಸಬಹುದು. ಹೆಚ್ಚಿನ ಮಾಹಿತಿ, ಕಾಮಗಾರಿ ವಿವರಣೆ, ನಿಭಂದನೆ ಹಾಗೂ ಷರತ್ತುಗಳಿಗೆ ಕಛೇರಿ ವೇಳೆಯಲ್ಲಿ ಈ ಕಛೇರಿಯ ತಾಂತ್ರಿಕ ಶಾಖೆಯನ್ನು ಸಂಪರ್ಕಿಸುವುದು. ಟೆಂಡರ್ ಡೌನ್‌ಲೋಡ್, ಅಪ್ ಲೋಡ್, ಟೆಂಡರ್ ಪ್ರೋಸೆಸಿಂಗ್ ಮತ್ತು ಇ.ಎಂ.ಡಿ ಪಾವತಿ ಬಗ್ಗೆ ಸಂಬಂಧಪಟ್ಟಂತೆ ವಿವರಗಳನ್ನು ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಪಡೆಯಬಹುದು.

ಸಹಿ/- ಆಡಳಿತಾಧಿಕಾರಿಗಳು, ನಗರಸಭೆ, ಮಡಿಕೇರಿ ಹಾಗೂ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ.
ಸಹಿ/- ಪೌರಾಯುಕ್ತರು, ನಗರಸಭೆ, ಮಡಿಕೇರಿ.

IN THE SUPREME COURT OF INDIA EXTRA-ORDINARY APPELLATE JURISDICTION

SPECIAL LEAVE PETITION (CIVIL) No. 4686 OF 2022
WITH PRAYER FOR INTERIM RELIEF

RATHANCHAND PUROHITH H @ RIDMAL RAM ... Petitioner(s)/Appellant(s)
VERSUS
R.C. KODANDARAMA SHETTY SINCE DEAD BY HIS LRS AND OTHERS ... Respondent(s) To,

1 K.N. PRASANNA KUMAR, S/O LATE K.R. NANJUNDA SHETTY, R/AT DOOR NO. 426, 3RD FLOOR, 2ND CROSS, DODDAVAKKALAGERI, LASHKAR MOHALLA, MYSURU-570001, KARNATAKA
PID: 242315/2023 FOR R[13] IN SLP(C) NO.4686/2022 (SEC IV-A)
2 K.N. GEETHA D/O LATE K.R. NANJUNDA SHETTY, R/AT DOOR NO. 426, 3RD FLOOR, 2ND CROSS, DODDAVAKKALAGERI, LASHKAR MOHALLA, MYSURU-570001, KARNATAKA
PID: 242316/2023 FOR R[14] IN SLP(C) NO.4686/2022 (SEC IV-A)
3 K.N. BHANUPRAKASH S/O LATE K.R. NANJUNDA SHETTY, R/AT DOOR NO. 426, 3RD FLOOR, 2ND CROSS, DODDAVAKKALAGERI, LASHKAR MOHALLA, MYSURU-570001. KARNATAKA
PID: 242317/2023 FOR R[15] IN SLP(C) NO.4686/2022 (SEC IV-A)
4 VEDAVATHI D/O LATE K.R. NANJUNDA SHETTY, R/AT DOOR NO. 426, 3RD FLOOR, 2ND CROSS, DODDAVAKKALAGERI, LASHKAR MOHALLA, MYSURU-570001, KARNATAKA
PID: 242318/2023 FOR R[16] IN SLP(C) NO.4686/2022 (SEC IV-A)

WHEREAS the Petition for Special Leave to Appeal with prayer for interim relief along with application for EXEMPTION FROM FILING O.T., above mentioned (copy enclosed) filed in the Registry by Mr. GP. CAPT. KARAN SINGH BHATI, Advocate on behalf of the Petitioner(s) above named was listed for hearing before this Court on 11th July, 2022, when the Court was pleased to pass the following order:-

"Issue notice. Neither party to create third party rights in respect of the plaint 'A', 'B' and 'C' properties.

AND WHEREAS, the matter above-mentioned was listed before Hon'ble Court (In Chambers) on 03rd October, 2023, When the following order was passed:-

"1 Counsel appearing on behalf of the petitioner submits that an application (IA No 65549/2023) for effecting service upon unserved respondents by way of substituted service has been filed.
2 The application for substituted service for effecting service through paper publication is allowed. Let steps be taken within a period of three weeks.
3 Applications for setting aside abatement, condonation of delay in filing substitution and substitution stand allowed."

NOW, THEREFORE, TAKE NOTICE that the above petition with prayer for interim relief will be posted for hearing before this Court in due course and you may enter appearance before this Court either in person or through an advocate on record of this Court duly appointed by you in that behalf within 30 days from the date of service of notice. You may thereafter show cause to the Court on the day that may subsequently be specified as to why Special Leave Petition and interim relief as prayed be not granted and the resultant appeal be not allowed.

You may file your affidavit in opposition to the petition as provided under Rule 14 (1) of Order XXI, S.C.R.2013 within 30 days from the date of receipt of notice or not later than 2 weeks before the date appointed for hearing, whichever be earlier, but shall do so only by setting out the grounds in opposition to the questions of law or grounds set out in the SLPs and may produce such pleadings and documents filed before the Court/Tribunal against whose order the SLP is filed and shall also set out the grounds for not granting interim order or for vacating interim order if already granted.

TAKE FURTHER NOTICE that if you fail to enter appearance as aforesaid, no further notice shall be given to you even after the grant of special leave for hearing of the resultant appeal and the matter above mentioned shall be disposed of in your absence.

Dated: 29th November, 2023 Sd/- ASSISTANT REGISTRAR

ಸಾರ್ವಜನಿಕರ ಗಮನಕ್ಕೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ನನ್ನ ಕಕ್ಷಿದಾರರು, ಬೆಂಗಳೂರು ಸಿಟಿ, ಬಸವೇಶ್ವರನಗರ, ಕೆ.ಹೆಚ್.ಬಿ. ಕಾಲೋನಿ, 2ನೇ ಹಂತ, ಮನೆ ನಂ: 129 ಎಂ.ಐ.ಜಿ. ರಲ್ಲಿ ವಾಸವಾಗಿರುವ ಶ್ರೀ. ಕೆ.ಆರ್. ಕೃಷ್ಣಮೂರ್ತಿ ರವರ ಧರ್ಮಪತ್ನಿಯಾದ ಶ್ರೀಮತಿ. ರುಕ್ಮಿಣಿಯಮ್ಮ, ಬಿ.ಎಂ. ರವರಿಗೆ ಸೇರಿದ ಷೆಡ್ಯೂಲ್‌ನಲ್ಲಿ ಕಾಣಿಸಿರುವ ಸ್ವತ್ತನ್ನು ಖರೀದಿಮಾಡಲು ಒಪ್ಪಿರುತ್ತಾರೆ.
ಈ ಷೆಡ್ಯೂಲ್ ಸ್ವತ್ತಿನ ಬಗ್ಗೆ ಯಾರಿಗಾದರೂ ಯಾವುದೇ ತೆರನಾದ ಹಕ್ಕು ಅಥವ ಅಧಿಕಾರ ಇದ್ದಲ್ಲಿ ಅವರುಗಳು ನಮಗೆ ಲಿಖಿತ ನೋಂದಾಯಿತ ಅಂಚೆಯ ಮೂಲಕ ಮೂಲ ದಾಖಲಾತಿಗಳ ಸಹಿತ ಷೆಡ್ಯೂಲ್ ಸ್ವತ್ತಿನ ಮೇಲೆ ಅವರಿಗೆ ಇರುವ ಹಕ್ಕು ಅಥವ ಅಧಿಕಾರದ ಸ್ವರೂಪವನ್ನು ಈ ಪ್ರಕಟಣೆಯಾದ ಹತ್ತು (10) ದಿನಗಳೊಳಗೆ ಲಿಖಿತ ಹೇಳಿಕೆ ಮೂಲಕ ಈ ಕೆಳಕಂಡವರಿಗೆ ತಿಳಿಸಬಹುದು. ಹದಿನೈದು ದಿನಗಳೊಳಗೆ ಯಾವುದೇ ರೀತಿಯ ದೂರು ಬರದಿದ್ದಲ್ಲಿ, ನಮ್ಮ ಕಕ್ಷಿದಾರರು ಕ್ರಯಕ್ಕೆ ಪಡೆಯಲು ಮುಂದುವರಿಯುತ್ತಾರೆ. ನಂತರ ಬಂದ ಯಾವುದೇ ರೀತಿಯ ದೂರುಗಳನ್ನು ಪರಿಗಣಿಸಲಾಗುದಿಲ್ಲ.
ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಸಿಟಿ, ನಜರ್‌ಬಾದ್ ಮೊಹಲ್ಲಾ, ಹಂಚ್ಯಾ ಸಾತಗಳ್ಳಿ ಎ-ಜೋನ್, ನಿವೇಶನ ಸಂಖ್ಯೆ: 1360, ವಿಸ್ತೀರ್ಣ ಪೂರ್ವ ಪಶ್ಚಿಮ 24.00 ಮೀಟರ್ ದಕ್ಷಿಣೋತ್ತರ 15.00 ಮೀಟರ್, ಒಟ್ಟು 360.00 ಚದರ ಮೀಟರ್‌ಗಳುಳ್ಳ ಖಾಲಿ ನಿವೇಶನ, ಮತ್ತು ಇದಕ್ಕೆ ಚಕ್ಕು ಬಂದಿ: ಪೂರ್ವಕ್ಕೆ 1355ನೇ ನಂಬರ್ ಸ್ವತ್ತು, ಪಶ್ಚಿಮಕ್ಕೆ: ರಸ್ತೆ, ಉತ್ತರಕ್ಕೆ: 1359ನೇ ನಂಬರ್ ಸ್ವತ್ತು, ದಕ್ಷಿಣಕ್ಕೆ: 1361ನೇ ನಂಬರ್ ಸ್ವತ್ತು.

Sd/- J. SRINIVAS B.Com, LL.B, P.G.D.B.T .ADVOCATE
Office: Near Barma Bazar, Behind Katta Meeta, Danvanthri Road Cross, Mysore. Cell No. 9844136362
e-mail: srinivasj2806@gmail.com
ದಿನಾಂಕ : 31/07/2024, ಸ್ಥಳ : ಮೈಸೂರು

ಸಾರ್ವಜನಿಕರಿಗೆ ಪ್ರಕಟಣೆ

ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ನಮ್ಮ ಕಕ್ಷಿದಾರರಾದ ಮೈಸೂರು ನಗರ, ಆಲನಹಳ್ಳಿ, ಗಿರಿದರ್ಶಿನಿ ಬಡಾವಣೆ, 2ನೇ ಮುಖ್ಯರಸ್ತೆ, ಮನೆ ನಂ.625 ರಲ್ಲಿ ವಾಸವಾಗಿರುವ ಶ್ರೀ ರಘು.ಟಿ.ಎನ್. ರವರ ಧರ್ಮಪತ್ನಿಯಾದ ಸುಮಾರು 33 ವರ್ಷ ವಯಸ್ಸಿನ ಶ್ರೀಮತಿ ಜಾನ್ಹವಿ.ಸಿ.ಗೌಡ ರವರಿಗೆ ಸೇರಿದ ಕ್ರಯಪತ್ರ ಸಂಖ್ಯೆ: 2583, ಪುಸ್ತಕ 1, ಪುಟ 32-35, ಕ್ರಮ ಸಂಖ್ಯೆ:110, ದಿನಾಂಕ 05-04-2003 ರ ಕ್ರಯಪತ್ರ ಕಳೆದು ಹೋಗಿರುತ್ತದೆ. ಇದರ ಸಂಬಂಧ ದಿನಾಂಕ 25-07-2024 ರಂದು ಆಲನಹಳ್ಳಿ ಪೊಲೀಸ್ ಠಾಣೆಗೆ ದೂರಿನ ಸಂಖ್ಯೆ : 1161164/2024 ರಂತೆ ದೂರನ್ನು ದಾಖಲಿಸಿರುತ್ತಾರೆ. ಸದರಿ ಕ್ರಯಪತ್ರ ಯಾರಿಗಾದರೂ ದೊರಕಿದಲ್ಲ ಈ ಕೆಳಗೆ ನಮೂದಿಸಿರುವ ವಿಳಾಸಕ್ಕೆ ಸಾರ್ವಜನಿಕ ಪ್ರಕಟಣೆ ದಿನಾಂಕ ದಿಂದ 7 (ಏಳು) ದಿನಗಳ ಒಳಗಾಗಿ ತಲುಪಿಸ ತಕ್ಕದ್ದು, ಒಂದೊಮ್ಮೆ ಯಾವುದೇ ವ್ಯಕ್ತಿ/ವ್ಯಕ್ತಿಗಳು ಸದರಿ ಕ್ರಯ ಪತ್ರವನ್ನು ದುರುಪಯೋಗಪಡಿಸಿಕೊಂಡಲ್ಲಿ ಸದರಿ ವ್ಯಕ್ತಿಗಳೇ ಹೊಣೆಗಾರರಾಗುತ್ತಾರೆ. ಹಾಗೂ ನಮ್ಮ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಸಹಿ/- ಲೋಹಿತ್.ಎನ್. ವಕೀಲರು,
ಶ್ರೀ ಸಾಯಿ ಲಾ-ಅಸೋಸಿಯೇಟ್ಸ್. ವಿಳಾಸ: 2967/2, 14ನೇ ಮೇನ್, 2ನೇ ಕ್ರಾಸ್, ಸರಸ್ವತಿಪುರಂ. ಮೈಸೂರು -570009.
ಮೊ 9611113323
ದಿನಾಂಕ : 30-07-2024, ಸ್ಥಳ: ಮೈಸೂರು

IN THE COURT OF THE I ADDL. PRL. SENIOR CIVIL JUDGE & CJM AT MYSURU
O S NO.444/2023

Plaintiffs :
1.Smt. Madevamma w/o late Rajanna.S aged about 58 years
2. Sri. Ravikumar.R s/o late Rajanna.S aged about 36 years Plaintiffs 1 & 2 are R/at #221, 6th cross, SBI main road, Hebbal 1 stage, Metagalli, Mysuru
3. Smt. Kavitha.R w/o Sri Jaganath.H.C D/o late Rajanna.S aged about 33 years R/at #37G, Vijayanagar 1st stage, Mysuru-17

Vs.

Defendant: Smt.Suma w/o Suresh.V major (definite age is not known) R/at #407, 11th cross, Hebbal 1 stage, Subhashnagar, metagalli post, Mysuru-16

PUBLIC NOTICE UNDER ORDER 5 RULE 20 OF CPC

The plaintiffs have filed above suit against the defendant seeking the recovery of money Rs.9,50,000/- from the defendant based on pronote. The suit is posted to 4.9.2024 and the defendant required to appear before the Hon'ble Court at 11.00 A.M on 4.9.2024 either in person or through their Advocates, failing which the suit will be decided ex-parte.
Given under my hand and the seal of the court this 24th July day of 2024.

Advocate for Plaintiffs
Sd/- Smt.M.S.Savithri, Advocate
#8A, Sheshagiri, J block, Ramanamaharshi road, Kuvempunagar, Mysuru-23

Sd/- By the Order of the court
Chief Ministerial Officer
Court of Senior Civil Judge & CJM., Mysuru

ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣ, ಮೈಸೂರು –570010
ದೂರವಾಣಿ: 0821–2424673/74 ಇಮೇಲ್: commr_amh@yahoo.in

ಟೆಂಡರ್ ಅಧಿಸೂಚನೆ ಸಂಖ್ಯೆ: ಆ.ಪು.ಸಂ.ಪ/ಸಂ.ವಿ:ಸ.ಸೇ.ಟೆ–4/2024–25 ದಿನಾಂಕ: 22.07.2024

ಟೆಂಡರ್ ಪ್ರಕಟಣೆ

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 1999–2000ರನ್ವಯ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ವತಿಯಿಂದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ http://www.kppp.karnataka.gov.in ಮುಖಾಂತರ ಡಿಜಿಟಲ್ ಡೇಟಾವನ್ನು ಬಳಸಿಕೊಂಡು 3D laser Scanning with interactive version and 3D Walk through (Digital data Metaverse Environment with Virtual Reality for 15 Monuments) ಸಿದ್ಧಪಡಿಸುವ ಸಲುವಾಗಿ ಸೇವಾ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ವಿವರ ಇಂತಿವೆ.

ಕಾಮಗಾರಿಗೆ ಸಂಬಂಧಿಸಿದಂತೆ ಸ್ಪಷ್ಟೀಕರಣಕ್ಕೆ ಕೊನೆಯ ದಿನಾಂಕ	30.07.2024, 17.00 ಗಂಟೆಗೆ
ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ	06.08.2024, 16.00 ಗಂಟೆಗೆ
ತಾಂತ್ರಿಕ ಬಿಡ್ ತೆರೆಯುವ ದಿನಾಂಕ	08.08.2024, 16.30 ಗಂಟೆಗೆ
ಆರ್ಥಿಕ ಬಿಡ್ ತೆರೆಯುವ ದಿನಾಂಕ	09.08.2024, 11.00 ಗಂಟೆಗೆ

ಸಹಿ/– ಆಯುಕ್ತರು
ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು
DIPR/MYS/KAVITA/349/2024-25



ತಕ್ಷಣಕ್ಕೆ ಬೇಕಾಗಿದ್ದಾರೆ

ಕುಶಾಲನಗರದಲ್ಲಿರುವ ಪ್ರತಿಷ್ಠಿತ ರೆಸಾರ್ಟ್‌ವೊಂದಕ್ಕೆ ಅನುಭವವುಳ್ಳ ಫ್ರಂಟ್ ಆಫೀಸ್‌ಎಕ್ಸಿಕ್ಯೂಟಿವ್ (ಪುರುಷ), ರೂಮ್ ಬಾಯ್ಸ್, ವೆಯಿಟರ್, ಅಡುಗೆಯವರು, ಕಿಚನ್ ಹೆಲ್ಪರ್ ಬೇಕಾಗಿದ್ದಾರೆ. ಆಸಕ್ತರು ಈ ಕೂಡಲೇ ಸಂಪರ್ಕಿಸಿ
ಮೊ: 8123074189

ಬೇಕಾಗಿದ್ದಾರೆ

ರೈಸನ್ ನ್ಯೂಟ್ರಿಷನ್

ಕೋಳಿ ಫಾರಂನಲ್ಲಿ ಹ್ಯಾಚಾರಿ ಕೆಲಸಕ್ಕಾಗಿ ಪುರುಷರು ಬೇಕಾಗಿದ್ದಾರೆ. ವಿದ್ಯಾರ್ಹತೆ ಪಿಯುಸಿ. ವಯಸ್ಸು 25 ರಿಂದ 35. ಮತ್ತು
ಸೆಕ್ಯೂರಿಟಿ (1) ಕೆಲಸಕ್ಕೆ ಬೇಕಾಗಿದ್ದಾರೆ
ಬೆಣಗಾಲು. ಪಿರಿಯಾಪಟ್ಟಣ ತಾ. ಮೈಸೂರು ಜಿಲ್ಲೆ. ಆಸಕ್ತರು ಸಂಪರ್ಕಿಸಿ.
9480055297 | 9480055298

ಸಾರ್ವಜನಿಕ ನೋಟಿಸು

ನನ್ನ ಪಕ್ಷಗಾರರು ಮೈಸೂರು ಜಿಲ್ಲಾ, ದೇವರಾಜ ಮೊಹಲ್ಲಾದ ಜೋಡಿ ತೆಂಗಿನಮರ ರಸ್ತೆ (ಹೈವೇ ಸರ್ಕಲ್ ದಿಂದ ಜೆ.ಎಸ್. ಹಾಸ್ಟೇಲ್ ರಸ್ತೆ) (ಹಳೇಯ ಮಾರಗೌಡನಹಳ್ಳಿ ಗ್ರಾಮ) ಯಲ್ಲಿರುವ ಕೈಗಾರಿಕಾ ಉದ್ದೇಶದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ವಿಭಜಿತವಾದ ಕೈಗಾರಿಕಾ ನಿವೇಶನ ನಂ.140 & 143/B ಒಟ್ಟೂ ಕ್ಷೇತ್ರ: 23,890.20 ಚ.ಮೀ. (ಉತ್ತರ-ದಕ್ಷಿಣ ಪೂರ್ವದ ಕಡೆಗೆ 143.25 ಮೀ., ಅಂದರೆ 470 ಫೂಟು, ಉತ್ತರ-ದಕ್ಷಿಣ ಪಶ್ಚಿಮದ ಕಡೆಗೆ 111.24 ಮೀ., ಅಂದರೆ 365.00 ಫೂಟು, ಪೂರ್ವ-ಪಶ್ಚಿಮ 187.75 ಮೀ., ಅಂದರೆ 616.00 ಫೂಟು), ಇದರ UPOR No. S24-1829, ಖುಲ್ಲಾ ಜಾಗಾವನ್ನು ಅದರ ಮಾಲೀಕರಾದ 'ಮೆಸರ್ಸ್ ಸ್ಟಾರ್ ಎಲೆಗನ್ಸ್' ಪಾಲುದಾರಿಕಾ ಸಂಸ್ಥೆ, ಇದರ ತರ್ಫೆ ಅದರ ಪಾಲುದಾರರಾದ (1) ಶ್ರೀ ಅಮೀರುಲ್ ಮುರ್ತುಜ ತಂದೆ ಮೊಹಮ್ಮದ ಗೌಸ (2) ಶ್ರೀ. ಅಮೀರುಲ್ ಶೀರಾಜ ತಂದೆ ಮೊಹಮ್ಮದ ಗೌಸ (3) ಶ್ರೀಮತಿ ಶಹನಾಜಖಾತೀಮಾ ಕೋಂ. ಅಮೀರುಲ್ ಶೀರಾಜ (4) ಶ್ರೀಮತಿ ಶಬ್ರೀನಾ ಕೋಂ. ಅಮೀರುಲ್ ಮುರ್ತುಜ ಇವರುಗಳಿಂದ ಖರೀದಿಸುವವರಿದ್ದು, ಕಾರಣ ಸದರ ಮೇಲ್ಕಂಡ ಆಸ್ತಿಯ ಕುರಿತಂತೆ, ಕೆನರಾ ಬ್ಯಾಂಕ ಸಾಲದ ಬೋಜಾ ಹೊರತುಪಡಿಸಿ ಬೇರೆ ಯಾರದಾದರೂ ಹಕ್ಕು, ಹಿತಸಂಬಂಧ, ತಂಟೆ, ತಕರಾರು, ಬೋಜಾ, ಇತ್ಯಾದಿ ಏನಾದರೂ ಇದ್ದಲ್ಲಿ, ಈ ನೋಟಿಸು ಪ್ರಕಟಣೆಯ ಏಳು (7) ದಿನಗಳ ಒಳಗಾಗಿ ಈ ಕೆಳಕಂಡ ವಿಳಾಸಕ್ಕೆ ಸೂಕ್ತ ದಾಖಲೆಗಳೊಂದಿಗೆ ಲಿಖಿತವಾಗಿ ಸಲ್ಲಿಸತಕ್ಕದ್ದು, ಒಂದೊಮ್ಮೆ ಸದರ ಅವಧಿಯಲ್ಲಿ ಯಾವುದೇ ತಕರಾರುಗಳು ಬಾರದೇ ಇದ್ದಲ್ಲಿ, ಮುಂದೆ ನಮ್ಮ ಪಕ್ಷಗಾರರು ಖರೀದಿ ಪತ್ರವನ್ನು ನೋಂದಾಯಿಸಿ ಕೊಳ್ಳುವವರಿದ್ದು ನಂತರ ಬಂದ ತಕರಾರುಗಳು ನನ್ನ ಪಕ್ಷಗಾರರಿಗೆ ಬಾಂಧಾಯಿಸುವುದಿಲ್ಲ ಅಂತಾ ಕೊಟ್ಟ ಸಾರ್ವಜನಿಕ ನೋಟಿಸು.

ಸಹಿ/- **ಮೂರ್ತಿ ಆರ್. ಹೆಗಡೆ**, ವಕೀಲರು,
ನಂ.15 & 16, 2ನೇ ಮಹಡಿ,
ಶ್ರೀಯಾಲಕ್ಷ್ಮೀ ಬ್ಯುಸಿನೆಸ್ ಸೆಂಟರ್, ಕಲ್ಲೂರ ಲೇಔಟ್, ಹುಬ್ಬಳ್ಳಿ
ಮೊಬೈಲ್ ನಂ. 9448560654
ದಿನಾಂಕ: 30.07.2024

14ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಇಂದಿರಾ.ಕೆ

ನೀವು ನಮ್ಮನ್ನಗಲಿ ಇಂದಿಗೆ 14 ವರ್ಷಗಳು ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ ಪತಿ: ನಾಗರಾಜ್ ಮಕ್ಕಳು: ಅಮೃತವರ್ಷಿಣಿ, ವರಮಹಾಲಕ್ಷ್ಮಿ ಮತ್ತು ಕುಟುಂಬವರ್ಗದವರು, ಮೈಸೂರು

VIDYAVARDHAKA COLLEGE OF ENGINEERING

Vidyavardhaka Sangha (Regd), Mysore
Autonomous Institute, Accredited by NBA & NAAC with "A" Grade
Gokulam 3rd Stage, Mysuru-570 002
E-mail: career@vvce.ac.in | Website: www.vvce.ac.in

WALK IN INTERVIEW

For the post of Assistant Professor in Computer Science and Engineering / Information Science and Engineering / CS&E (Artificial Intelligence and Machine Learning) :
Candidates with 1st Class in BE & M.Tech., can appear for interview, along with all original documents, on **Sunday, 4th August 2024** at 10.00 am in the Chambers of Principal.

ನಿಧನ



ಶ್ರೀ ಬೋರಯ್ಯ ರವರು

(ಲೇ|| ಬ್ಯಾಂಕ್ ಬೋರಯ್ಯರವರ ಮಗ)

ಇವರು ದಿನಾಂಕ: 31.07.2024 ಬುಧವಾರ ದೈವಾಧೀನರಾಗಿದ್ದು. ದಿನಾಂಕ 01.08.2024 ಗುರುವಾರ ಬೆಳಗ್ಗೆ 11 ಗಂಟೆಗೆ ಮೃತರ ಅಂತ್ಯಕ್ರಿಯೆಯನ್ನು ಕಾವೇರಿ ಶಾಲೆ ಪಕ್ಕದಲ್ಲಿರುವ ಕೆ.ಜಿ.ಕೊಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು.
ದುಃಖತಪ್ತರು: ಕುಟುಂಬವರ್ಗದವರು